ಬೆಂಗಳೂರು ಗುರುವಾರ, 25 ಜೂನ್ 2026 ಸಂಪುಟ 33, ಸಂಚಿಕೆ 235, ಪುಟಗಳು 14+4 ▸epaper.hosadigantha.com ₹5
■ ಬೆಂಗಳೂರು ■ ಮಂಗಳೂರು ■ ಶಿವಮೊಗ್ಗ ■ ಹುಬ್ಬಳ್ಳಿ RNI: 58231/94 REG No.KA/BG GPO/2532/2021-23 ▸hosadigantha.com

ಹೊಸ ದಿಗಂತ

ರಾಷ್ಟ್ರ ಜಾಗೃತಿಯ ದೈನಿಕ

ಲೋಕಹಿತಂ ಮಮ ಕರಣೀಯಂ

ಕಾಶ್ಮೀರ ಮುಂದೆಯೂ ನಮ್ಮ ಆಂತರಿಕ ವಿಚಾರ

• ಪುಟ ೧೦

ರಾಜ್ಯಕ್ಕೆ ಹೊರೆಯಾದರೂ ಜಾರಿ: ಸಚಿವ ಈಶ್ವರ ಖಂಡ್ರೆ ಹೇಳಿಕೆ

ಜು.1ರಿಂದ ವಿಬಿ ಜಿರಾಮ್‌ಜಿ

• ಬೆಂಗಳೂರು: ಗ್ರಾಮೀಣ ಭಾಗದ ಕುಟುಂಬಗಳಿಗೆ ಉದ್ಯೋಗದ ಖಾತ್ರಿ ನೀಡಿದ್ದ ನರೇಗಾ ಹೊಸ ಸ್ವರೂಪದ ವಿಕಸಿತ ಭಾರತ್ ಜಿ ರಾಮ್‌ಜಿಯಿಂದ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಹೊರೆಯಾದರೂ ಗ್ರಾಮೀಣ ಜನರ, ಮಹಿಳೆಯರ, ವಂಚಿತರ, ದುರ್ಬಲರ ಹಿತದೃಷ್ಟಿಯಿಂದ ಜುಲೈ 1ರಿಂದಲೇ ಜಾರಿಗೆ ತರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಬುಧವಾರ ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಉನ್ನತಾಧಿಕಾರಿಗಳೊಂದಿಗೆ ನಡೆದ ಸಭೆಯ ಬಳಿಕ ಮಾತನಾಡಿದ ಅವರು, ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮನ್‌ರೇಗಾ ಯೋಜನೆಯಲ್ಲಿ ಕೇಂದ್ರ ಸರ್ಕಾರ 90:10 ಅನುಪಾತದಲ್ಲಿ ವೇತನ ಭರಿಸುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಹಣ ನೀಡುತ್ತಿತ್ತು. ಆದರೆ, ಈಗ 60:40ರ ಅನುಪಾತದಲ್ಲಿ ವೆಚ್ಚ ಭರಿಸಬೇಕಾಗಿದ್ದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಆಗುತ್ತಿದೆ. ಕಳೆದ 10 ವರ್ಷಗಳಲ್ಲಿ ಕೇಂದ್ರ ಸರ್ಕಾರ ಮನ್‌ರೇಗಾ ಅಡಿಯಲ್ಲಿ 56,492 ಕೋಟಿ ರೂ. ಭರಿಸಿದ್ದರೆ, ರಾಜ್ಯ ಸರ್ಕಾರ 4,821 ಕೋಟಿ ರೂ. ಮಾತ್ರ ಭರಿಸಿ ಸುಮಾರು 182 ಕೋಟಿ ಮಾನವ ದಿನಗಳ ಉದ್ಯೋಗ ಒದಗಿಸಿತ್ತು.

➡ ಪುಟ ೨

> ವಿಬಿ ಜಿ ರಾಮ್‌ಜಿ ಕಾಯಿದೆ ತರುವ ಮುನ್ನ ಕೇಂದ್ರ ರಾಜ್ಯಗಳ ಸಲಹೆ ಪಡೆಯಬೇಕಾಗಿತ್ತು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳನ್ನು ಬಿಟ್ಟು ಕಾಯಿದೆ ರೂಪಿಸಿದ ಬಗ್ಗೆಯೂ ಕರ್ನಾಟಕದ ವಿರೋಧವಿದೆ. ಇದನ್ನು ಸುಪ್ರೀಂನಲ್ಲಿ ಪ್ರಶ್ನಿಸಲಾಗುತ್ತಿದೆ.
> ■ **ಈಶ್ವರ್ ಖಂಡ್ರೆ**, ಸಚಿವ

ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಿ

ಜೂ.28ರಂದು ದೆಹಲಿಯಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರೊಂದಿಗೆ ಎಲ್ಲ ರಾಜ್ಯಗಳ ಸಚಿವರ ಸಭೆ ಇದ್ದು, ಈ ಸಭೆಯಲ್ಲಿ ಈ ಎಲ್ಲ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು. ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ನಮ್ಮ ರಾಜ್ಯದಲ್ಲಿ 375 ರೂ. ಕೂಲಿ ಇದೆ. ರಾಜ್ಯ ಸರ್ಕಾರ ಕನಿಷ್ಠ ವೇತನ ಹೆಚ್ಚಳ ಮಾಡಿದೆ. ಇದಕ್ಕೆ ಹೊಂದುವಂತೆ ಕೇಂದ್ರವೂ ಕನಿಷ್ಠ ಕೂಲಿ ಹೆಚ್ಚಿಸಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು.

➡ ಪುಟ ೨

ಶೀಘ್ರ ಮನೆ ಹಂಚಿಕೆಗೆ ಡಿ.ಕೆ.ಶಿವಕುಮಾರ್ ಸೂಚನೆ

ವಸತಿ ವಿಳಂಬಕ್ಕೆ ಸಿಎಂ ಸಿಟ್ಟು

• ಬೆಂಗಳೂರು: ಗ್ರಾಮೀಣ ವಸತಿ ಮನೆಗಳ ನಿರ್ಮಾಣ, ನಿವೇಶನಗಳ ಹಂಚಿಕೆಯಲ್ಲಿ ನಿಧಾನಗತಿಗೆ ಅಧಿಕಾರಿಗಳ ವಿರುದ್ಧ ಸಿಟ್ಟಾದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಮನೆಗಾಗಿ ಅರ್ಜಿ ಸಲ್ಲಿಸಿದವರು ಇನ್ನೂ ಎಷ್ಟು ವರ್ಷ ಕಾಯಬೇಕು. ಮೊದಲು ಮನೆ ಹಂಚಿಕೆ ಮಾಡಿ ಎಂದು ಸೂಚನೆ ನೀಡಿದರು.

ವಿಧಾನಸೌಧದಲ್ಲಿ ಬುಧವಾರ ವಸತಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಅವರು, ಹಲವು ವರ್ಷಗಳ ಹಿಂದೆಯೇ ಮನೆಗಾಗಿ ಅರ್ಜಿ ಸಲ್ಲಿಸಿದವರು ಇನ್ನೂ ಕಾಯುತ್ತಿದ್ದಾರೆ. ಅವರೆಲ್ಲ ಠೇವಣಿ ಕಟ್ಟಿದ್ದಾರೆ. ಈ ಅರ್ಜಿಗಳ ಮೇಲೆ ಹಿಂದಿನ ಸರ್ಕಾರದ ವಸತಿ ಸಚಿವ ಸೋಮಣ್ಣ ಅವರ ಫೋಟೋ ಇದೆ. ಅವರಿಗಿನ್ನೂ ಮನೆ ಕೊಟ್ಟಿಲ್ಲ. ಪಾಪ ಅವರೆಲ್ಲಾ ಇನ್ನೂ ಎಷ್ಟು ವರ್ಷ ಕಾಯಬೇಕು ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಫಲಾನುಭವಿಗಳ ಪಟ್ಟಿ ಬೇಗ ಕೊಡಲು ಶಾಸಕರ ಜತೆ ಮಾತನಾಡುವೆ. ನೈಜ ಫಲಾನುಭವಿಗಳಿಗೇ ಸವಲತ್ತು ಸಿಗಬೇಕು.

➡ ಪುಟ ೨

> ಯಾವುದೇ ವಸತಿ ಯೋಜನೆಗೆ ಕೈ ಹಾಕುವ ಮೊದಲೇ ಸ್ಪಷ್ಟ ಯೋಜನೆ ಇಟ್ಟುಕೊಳ್ಳಿ. ಯಾವುದೇ ಪ್ರಮುಖ ತೀರ್ಮಾನಗಳ ಬಗ್ಗೆ ನನ್ನ ಜತೆ ಚರ್ಚೆ ಅಗತ್ಯ. ಮನೆ ನಿರ್ಮಿಸಿದ ನಂತರ ಮಾರಾಟಕ್ಕೆ ಒದ್ದಾಡುವುದು ಬೇಡ. ನೀವು ಗುಣಮಟ್ಟದಲ್ಲಿ ಸ್ಪರ್ಧಾತ್ಮಕವಾಗಿ ಇರಬೇಕು.
> ■ **ಡಿ.ಕೆ.ಶಿವಕುಮಾರ್**, ಮುಖ್ಯಮಂತ್ರಿ

ಕಿರುಸುದ್ದಿ

ಟಿಬಿ ಡ್ಯಾಂ ಗೇಟ್‌ಗೆ ಇಂದು ಚಾಲನೆ

• ಪುಟ ೩

ಭಾರೀ ಮಳೆ: ಮುಂಬೈ, ಅರುಣಾಚಲ ಜನ ತತ್ತರ

• ಪುಟ ೧೦

ಒಂದೇ ಕುಟುಂಬದ ಐವರು ಕಾವೇರಿ ಪಾಲು

• ಪುಟ ೨

ರಾಮಮಂದಿರ ಸ್ಫೋಟಕ್ಕೆ ಶಂಕಿತ ಉಗ್ರ ಸಂಚು

• ಪುಟ ೩

ಗೃಹಲಕ್ಷ್ಮಿ ಹೆಸರಲ್ಲಿ ಲೂಟಿ: ವಿಜಯೇಂದ್ರ

• ಪುಟ ೩

ಬಂಡವಾಳ ಹೂಡಲು ಯುಪಿಗೆ ಬನ್ನಿ: ಯೋಗಿ



• ಬೆಂಗಳೂರು: ಭಾರತದ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ರಾಜ್ಯ ಉತ್ತರ ಪ್ರದೇಶವು ಬಂಡವಾಳ ಹೂಡಲು ಹೇಳಿ ಮಾಡಿಸಿದಂತಿದೆ. ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಪೂರಕ ವಾತಾವರಣವಿದೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಿಳಿಸಿದ್ದಾರೆ. ನಗರದ ಖಾಸಗಿ ಹೋಟೆಲ್‌ನಲ್ಲಿ ಬುಧವಾರ ಆಯೋಜಿಸಿದ್ದ ಉತ್ತರ ಪ್ರದೇಶ ಜಾಗತಿಕ ಬೆಳವಣಿಗೆ ಸಂವಾದ- 2026 ಹೂಡಿಕೆದಾರರ ರೋಡ್ ಶೋ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನವ ಭಾರತದ ನವ ಉತ್ತರ ಪ್ರದೇಶಕ್ಕೆ ಉದ್ಯಮಿಗಳನ್ನು ಆಹ್ವಾನಿಸಲು ನಾನಿಲ್ಲಿಗೆ ಬಂದಿದ್ದೇನೆ. ಉತ್ತರ ಪ್ರದೇಶದಲ್ಲಿ ವಿಪುಲ ಅವಕಾಶಗಳಿವೆ ಎಂದು ಹೇಳಿದರು.

• ವಿವರ ಪುಟ ೨

ರಾಜ್ಯದ 6 ಕಡೆ ಇಡಿ ದಾಳಿ

ಅಬಕಾರಿ ಇಲಾಖೆ ಹೆಚ್ಚುವರಿ ಆಯುಕ್ತ ಮಂಜುನಾಥ ಮನೆ ಸೇರಿ 6 ಕಡೆ ಕಾರ್ಯಾಚರಣೆ

• ಬೆಳಗಾವಿ/ಮೈಸೂರು: ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ ಅವರ ಮನೆ, ಕಚೇರಿ ಸೇರಿದಂತೆ ರಾಜ್ಯದ ಆರು ಕಡೆ ಬುಧವಾರ ಜಾರಿ ನಿರ್ದೇಶನಾಲಯ(ಇಡಿ) ದಾಳಿ ನಡೆಸಿದ್ದು, ಮಂಜುನಾಥ್ ಅವರ ಅತ್ತೆ ಅತ್ತೆ ಯಮುನಾ ಅವರನ್ನು ಮೈಸೂರಿನಲ್ಲಿ ತೀವ್ರ ವಿಚಾರಣೆ ನಡೆಸಿದರು. ಬೆಂಗಳೂರು, ಗೋವಾ ಇಡಿ ಕಚೇರಿ ಅಧಿಕಾರಿಗಳು ಬುಧವಾರ ಬೆಳಗ್ಗೆ ಈ ದಾಳಿ ನಡೆಸಿದ್ದು, ಶೋಧ ಕಾರ್ಯ ಕೈಗೊಂಡಿದ್ದಾರೆ. ಬಳ್ಳಾರಿ ಮಾಜಿ ಸಂಸದ ದೇವೇಂದ್ರಪ್ಪ ಅವರ ಪುತ್ರ ಹಾಗೂ ಸಚಿವ ಸತೀಶ ಜಾರಕಿಹೊಳಿ ಸಹೋದರಿಯ ಪತಿ ಮಂಜುನಾಥ ಅವರ ವಿರುದ್ಧ ಅಕ್ರಮ ಆಸ್ತಿ ಸಂಪಾದನೆ ಆರೋಪ ಕೇಳಿಬಂದಿದ್ದವು.

• ವಿವರ ಪುಟ ೨

SHAKTHI NEET ACADEMY
Best choice for true aspirants
Near Shree Gopalakrishna Temple, Shakthinagar, Mangaluru - 575 016

ADMISSIONS OPEN FOR 2026-27
REPEATERS BATCH 2027 | NEET-UG MEDICAL

SALIENT FEATURES OF
THE NEET LONG TERM PROGRAMME

- Total number of Teaching Hours with experienced inhouse faculty- 1000+ hrs.
- Total Number of Test Planned - 150
  - Unit Tests - 85
  - Part Tests - 15
  - Cumulative Full Length Tests - 20
  - Grand Tests - 30
- Low student teacher ratio per Batch with individual attention
- Guest faculties from reputed institutions across the country for the paper discussion
- High quality study material will be provided with DDP
- High quality hygienic food will be provided.
- 24 hrs in house doctors and health care facility on campus
- Supportive and stress free learning environment
- Personalized doubt solving and counselling sessions
- Separate Hostels for Boys and Girls

Early Bird Offer
FLAT 25% OFF For the July First Batch

Mob: 98450 86790 | 96860 00046 | 73492 44080
Web: shakthi.edu.in Email: info@shakthi.edu.in

SHAKTHI
ADVANCED LEARNING ACADEMY

ಶ್ರೀ ಸಿ. ಆರ್. ಪಾಟೀಲ್
ಸನ್ಮಾನ್ಯ ಕೇಂದ್ರ ಜಲಶಕ್ತಿ ಸಚಿವರು
ಭಾರತ ಸರ್ಕಾರ

ಶ್ರೀ ಡಿ. ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಶ್ರೀ ಎನ್. ಚಂದ್ರಬಾಬು ನಾಯ್ಡು
ಸನ್ಮಾನ್ಯ ಮುಖ್ಯಮಂತ್ರಿಗಳು
ಆಂಧ್ರಪ್ರದೇಶ ಸರ್ಕಾರ

ಶ್ರೀ ಎ. ರೇವಂತ್ ರೆಡ್ಡಿ
ಸನ್ಮಾನ್ಯ ಮುಖ್ಯಮಂತ್ರಿಗಳು
ತೆಲಂಗಾಣ ಸರ್ಕಾರ

ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಶ್ರೀ ರಾಮಲಿಂಗಾ ರೆಡ್ಡಿ
ಮಾನ್ಯ ಸಚಿವರು
ಜಲಸಂಪನ್ಮೂಲ ಇಲಾಖೆ
ಕರ್ನಾಟಕ ಸರ್ಕಾರ

ಜಲಸಂಪನ್ಮೂಲ ಇಲಾಖೆ
ಶ್ರೀ ಡಿ. ಕೆ. ಶಿವಕುಮಾರ್, ಸನ್ಮಾನ್ಯ ಮುಖ್ಯಮಂತ್ರಿರವರಿಂದ
ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ 33 ಸ್ಪಿಲ್‌ವೇ ಗೇಟುಗಳ
ಲೋಕಾರ್ಪಣೆ ಕಾರ್ಯಕ್ರಮ
ದಿನಾಂಕ : 25-06-2026, ಗುರುವಾರ ಸಮಯ : ಬೆಳಿಗ್ಗೆ 11.00 ಗಂಟೆಗೆ
ಸ್ಥಳ : ಸರ್ಕಾರಿ ಹೈಸ್ಕೂಲ್ ಗ್ರೌಂಡ್, ಮುನಿರಾಬಾದ್, ತಾಲ್ಲೂಕು ಮತ್ತು ಜಿಲ್ಲೆ: ಕೊಪ್ಪಳ

ಘನ ಉಪಸ್ಥಿತಿ

ಶ್ರೀ ಸಿ. ಆರ್. ಪಾಟೀಲ್, ಸನ್ಮಾನ್ಯ ಕೇಂದ್ರ ಜಲಶಕ್ತಿ ಸಚಿವರು, ಭಾರತ ಸರ್ಕಾರ
ಶ್ರೀ ಎನ್. ಚಂದ್ರಬಾಬು ನಾಯ್ಡು, ಸನ್ಮಾನ್ಯ ಮುಖ್ಯಮಂತ್ರಿಗಳು, ಆಂಧ್ರಪ್ರದೇಶ ಸರ್ಕಾರ
ಶ್ರೀ ಎ. ರೇವಂತ್ ರೆಡ್ಡಿ, ಸನ್ಮಾನ್ಯ ಮುಖ್ಯಮಂತ್ರಿಗಳು, ತೆಲಂಗಾಣ ಸರ್ಕಾರ
ಡಾ. ಜಿ. ಪರಮೇಶ್ವರ, ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಶ್ರೀ ಕೆ. ಪವನ್ ಕಲ್ಯಾಣ್, ಮಾನ್ಯ ಉಪ ಮುಖ್ಯಮಂತ್ರಿಗಳು, ಆಂಧ್ರಪ್ರದೇಶ ಸರ್ಕಾರ
ಶ್ರೀ ಮಲ್ಲು ಭಟ್ಟಿ ವಿಕ್ರಮಾರ್ಕ, ಮಾನ್ಯ ಉಪ ಮುಖ್ಯಮಂತ್ರಿಗಳು, ತೆಲಂಗಾಣ ಸರ್ಕಾರ
ಶ್ರೀ ವಿ. ಸೋಮಣ್ಣ, ಮಾನ್ಯ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರು, ಭಾರತ ಸರ್ಕಾರ
ಶ್ರೀ ರಾಜ ಭೂಷಣ್ ಚೌಧರಿ, ಮಾನ್ಯ ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವರು, ಭಾರತ ಸರ್ಕಾರ
ಶ್ರೀ ಬಸವರಾಜ ಎಸ್. ಹೊರಟ್ಟಿ, ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್, ಬೆಂಗಳೂರು
ಶ್ರೀ ರಾಮಲಿಂಗಾ ರೆಡ್ಡಿ, ಮಾನ್ಯ ಸಚಿವರು, ಜಲ ಸಂಪನ್ಮೂಲ ಇಲಾಖೆ, ಕರ್ನಾಟಕ ಸರ್ಕಾರ
ಶ್ರೀ ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಹಾಗೂ ಸಂಸದರು, ಹಾವೇರಿ-ಗದಗ ಲೋಕಸಭಾ ಕ್ಷೇತ್ರ
ಡಾ. ನಿಮ್ಮಲ ರಾಮ ನಾಯ್ಡು, ಮಾನ್ಯ ಸಚಿವರು, ಜಲ ಸಂಪನ್ಮೂಲ ಇಲಾಖೆ, ಆಂಧ್ರಪ್ರದೇಶ ಸರ್ಕಾರ
ಶ್ರೀ ಪಯ್ಯಾವುಲ ಕೇಶವ್, ಮಾನ್ಯ ಸಚಿವರು, ಹಣಕಾಸು, ಯೋಜನೆ, ವಾಣಿಜ್ಯ ತೆರಿಗೆ & ಸಂಸದೀಯ ವ್ಯವಹಾರಗಳ ಖಾತೆ, ಆಂಧ್ರಪ್ರದೇಶ ಸರ್ಕಾರ
ಶ್ರೀ ಎನ್. ಉತ್ತಮ್ ಕುಮಾರ್ ರೆಡ್ಡಿ, ಮಾನ್ಯ ಸಚಿವರು, ನೀರಾವರಿ ಇಲಾಖೆ & ಸಿಎಡಿ, ತೆಲಂಗಾಣ ಸರ್ಕಾರ
ಶ್ರೀ ಸಲೀಂ ಅಹಮದ್, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಶಾಸಕರು (ವಿಧಾನ ಪರಿಷತ್)

ಮುಖ್ಯ ಅತಿಥಿಗಳು

ಶ್ರೀ ಕೆ. ರಾಜಶೇಖರ ಹಿಟ್ನಾಳ್, ಮಾನ್ಯ ಸಂಸದರು, ಕೊಪ್ಪಳ ಲೋಕಸಭಾ ಕ್ಷೇತ್ರ
ಶ್ರೀ ಪಿ. ಸಿ. ಗದ್ದಿಗೌಡರ, ಮಾನ್ಯ ಸಂಸದರು, ಬಾಗಲಕೋಟೆ ಲೋಕಸಭಾ ಕ್ಷೇತ್ರ
ಶ್ರೀ ಈ. ತುಕಾರಾಮ್, ಮಾನ್ಯ ಸಂಸದರು, ಬಳ್ಳಾರಿ ಲೋಕಸಭಾ ಕ್ಷೇತ್ರ
ಡಾ. ಪ್ರಭಾ ಮಲ್ಲಿಕಾರ್ಜುನ್, ಮಾನ್ಯ ಸಂಸದರು, ದಾವಣಗೆರೆ ಲೋಕಸಭಾ ಕ್ಷೇತ್ರ
ಶ್ರೀ ಜಿ. ಕುಮಾರ್ ನಾಯಕ್, ಮಾನ್ಯ ಸಂಸದರು, ರಾಯಚೂರು ಲೋಕಸಭಾ ಕ್ಷೇತ್ರ
ಡಾ. ಸೈಯದ್ ನಾಸಿರ್ ಹುಸೇನ್, ಮಾನ್ಯ ರಾಜ್ಯಸಭಾ ಸದಸ್ಯರು, ಬಳ್ಳಾರಿ
ಹಾಗೂ ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು ಮತ್ತು ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ಚುನಾಯಿತ ಜನಪ್ರತಿನಿಧಿಗಳು.

ಅಧ್ಯಕ್ಷತೆ

ಶ್ರೀ ಕೆ. ರಾಘವೇಂದ್ರ ಹಿಟ್ನಾಳ್, ಮಾನ್ಯ ಶಾಸಕರು, ಕೊಪ್ಪಳ ವಿಧಾನಸಭಾ ಕ್ಷೇತ್ರ

ಸ್ವಾಗತ ಕೋರುವವರು

ಶ್ರೀ ಗೌರವ್ ಗುಪ್ತ, ಭಾ.ಆ.ಸೇ., ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಇಂಧನ ಮತ್ತು ಜಲಸಂಪನ್ಮೂಲ ಇಲಾಖೆ
ಶ್ರೀ ರಾಜೇಶ್ ಅಮ್ಮಿನಭಾವಿ, ಕೆ.ಇ.ಎಸ್., ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ
ಶ್ರೀ ಕೃಷ್ಣಮೂರ್ತಿ ಬಿ. ಕುಲಕರ್ಣಿ, ಕೆ.ಇ.ಎಸ್., ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ
ಶ್ರೀ ಎಸ್. ಎನ್. ಪಾಂಡೆ, ಐ.ಇ.ಎಸ್., ಮಾನ್ಯ ಅಧ್ಯಕ್ಷರು, ತುಂಗಭದ್ರಾ ಮಂಡಳಿ

ತಿಂಗಳೊಳಗೆ ಕೆಕೆಆರ್‌ಡಿಬಿ ಕಾರ್ಯದರ್ಶಿ ನೇಮಿಸಿ: ಹೈಕೋರ್ಟ್ ನಿರ್ದೇಶನ



• **ಬೆಂಗಳೂರು:** ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರನ್ನಾಗಿ ಜಿಲ್ಲಾ ಉಸ್ತುವಾರಿ ಸಚಿವರನ್ನು ಮಾತ್ರ ನೇಮಕ ಮಾಡಬೇಕು ಎಂಬುದು ದೋಷಪೂರಿತ ವಾದ ಎಂದು ಕರ್ನಾಟಕ ಹೈಕೋರ್ಟ್ ಬುಧವಾರ ಹೇಳಿದ್ದು, ತಿಂಗಳಲ್ಲಿ ಸರ್ಕಾರದ ಕಾರ್ಯದರ್ಶಿ ಮಟ್ಟದ ಅಧಿಕಾರಿಯನ್ನು ಕೆಕೆಆರ್‌ಡಿಬಿ ಕಾರ್ಯದರ್ಶಿಯನ್ನಾಗಿ ನೇಮಿಸಬೇಕು ಎಂದು ನಿರ್ದೇಶಿಸಿದೆ.

ಕೆಕೆಆರ್‌ಡಿಬಿ ಅಧ್ಯಕ್ಷರಾಗಿರುವ ಡಾ. ಅಜಯ್ ಸಿಂಗ್ ನೇಮಕಾತಿ ಮತ್ತು ಕೊಪ್ಪಳ ಜಿಲ್ಲಾಧಿಕಾರಿ ನಳಿನ ಅತುಲ್ ಅವರನ್ನು ಕಾರ್ಯದರ್ಶಿಯನ್ನಾಗಿ ನೇಮಿಸಿರುವುದು ಹಾಗೂ ಕೆಕೆಆರ್‌ಡಿಬಿಯಲ್ಲಿನ ಅಕ್ರಮದ ತನಿಖೆಗೆ ನಿರ್ದೇಶಿಸುವಂತೆ ಕೋರಿ ಅಖಂಡ ಚಿಂತಕರ ವೇದಿಕೆಯ ಸಾಯಬಣ್ಣ ಜಮಾದಾರ ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಮತ್ತು ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರ ವಿಭಾಗೀಯ ಪೀಠವು ಇತ್ಯರ್ಥಪಡಿಸಿದೆ. ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ 2013 ಆದೇಶಕ್ಕೆ ತಿದ್ದುಪಡಿ ಮಾಡಿ, 2020ರ ಜ. 27ರಂದು ಹೊರಡಿಸಿರುವ ಆದೇಶವನ್ನು ಉಲ್ಲೇಖಿಸಿದರು. ತಿದ್ದುಪಡಿಯಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳ ಪೈಕಿ ಒಂದು ಜಿಲ್ಲಾ ಉಸ್ತುವಾರಿ ಸಚಿವರು ಎಂದಿದ್ದನ್ನು ಕೈಬಿಟ್ಟು, ನಾಮನಿರ್ದೇಶನ ಮಾಡಲ್ಪಟ್ಟ ಸದಸ್ಯರನ್ನು ಅಧ್ಯಕ್ಷರನ್ನಾಗಿ ನೇಮಿಸಬಹುದು ಎಂದು ತಿದ್ದುಪಡಿ ಮಾಡಲಾಗಿದೆ ಎಂದು ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ ಪೀಠದ ಗಮನಕ್ಕೆ ತಂದರು.

ಇದನ್ನು ಒಪ್ಪಿದ ಪೀಠವು ಸಚಿವರನ್ನು ಮಾತ್ರ ಕೆಕೆಆರ್‌ಡಿಬಿ ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂಬ ಅರ್ಜಿದಾರರ ವಾದ ದೋಷಪೂರಿತವಾಗಿದೆ ಎಂದಿತು. ಇನ್ನು ಕಾರ್ಯದರ್ಶಿ ನೇಮಕಕ್ಕೆ ಸಂಬಂಧಿಸಿದಂತೆ 4 ವಾರಗಳಲ್ಲಿ ಅಗತ್ಯವಾದ ಆದೇಶ ಹೊರಡಿಸಲಾಗುವುದು ಎಂದು ಅಡ್ವೊಕೇಟ್ ಜನರಲ್ ತಿಳಿಸಿದರು. ಈ ಹೇಳಿಕೆಯನ್ನು ದಾಖಲಿಸಿಕೊಂಡ ಪೀಠವು 4 ವಾರಗಳಲ್ಲಿ ಕೆಕೆಆರ್‌ಡಿಬಿಗೆ ಸೂಕ್ತ ಅರ್ಹತೆ ಹೊಂದಿರುವ ಅಧಿಕಾರಿಯನ್ನು ಕಾರ್ಯದರ್ಶಿಯನ್ನಾಗಿ ನೇಮಕ ಮಾಡಬೇಕು ಎಂದು ನಿರ್ದೇಶಿಸಿತು.

ರಾಮ ಬಾಣ


ಇನ್ನು ಅವರ ಪಾದರಕ್ಷೆಗಳಾದ ನಾವು ಒಟ್ಟಿಗೆ ಇರುವುದರಲ್ಲಿ ಅರ್ಥವಿಲ್ಲ... ನೀನು ಆ ಕಡೆ ಹೋಗು ! ನಾನು ಈ ಕಡೆ ಹೋಗ್ತೀನಿ !!
ಟಿಎಂಸಿಯಿಂದ ದೀದಿ ಉಚ್ಚಾಟನೆ !?

ಸ್ವಾತಂತ್ರ್ಯ ದಿನಾಚರಣೆಗೆ ಸ್ಪರ್ಧೆ

• **ಬೆಂಗಳೂರು:** ಸ್ವಾತಂತ್ರ್ಯ ದಿನಾಚರಣೆ-2026ರ ಅಂಗವಾಗಿ ವಿದ್ಯಾರ್ಥಿಗಳಲ್ಲಿ ದೇಶಪ್ರೇಮ ಮತ್ತು ರಾಷ್ಟ್ರಭಕ್ತಿಯನ್ನು ಉತ್ತೇಜಿಸುವ ಉದ್ದೇಶದಿಂದ ಸಮಗ್ರ ಶಿಕ್ಷಣ ಕರ್ನಾಟಕವು ರಕ್ಷಣಾ ಸಚಿವಾಲಯ, ಮೈ ಗೌ (ಎಂಜಿ, ಜಿಒಐ) ಹಾಗೂ ಮೈ ಭಾರತ್ ಸಹಯೋಗದೊಂದಿಗೆ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗಾಗಿ ವಿವಿಧ ಆನ್‌ಲೈನ್ ಸ್ಪರ್ಧೆಗಳನ್ನು ಆಯೋಜಿಸಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ಜು.17ರವರೆಗೆ ಅವಕಾಶ ಕಲ್ಪಿಸಲಾಗಿದೆ.

2047ರ ಒಳಗೆ ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣದಲ್ಲಿ ಕೃತಕ ಬುದ್ಧಿಮತ್ತೆ (ಎಐ)ಯ ಪಾತ್ರ ವಿಷಯದ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದೆ. 500 ರಿಂದ 600 ಪದಗಳ ಮಿತಿಯಲ್ಲಿ ಹಿಂದಿ ಹಾಗೂ ಇಂಗ್ಲಿಷ್ ಭಾಷೆಗಳಲ್ಲಿ (ದ್ವಿ ಭಾಷೀಯ) ಪ್ರಬಂಧ ಬರೆಯಬೇಕಿದ್ದು, ಮೊದಲ ಮೂರು ವಿಜೇತರಿಗೆ ತಲಾ 15 ಸಾವಿರ ರೂ. ನಗದು ಬಹುಮಾನ ನೀಡಲಾಗುತ್ತದೆ.

ಇದೇ ವೇಳೆ ಭಾರತ 1947ರಿಂದ ಭಾರತ 2047ರ ವಿಷಯದ ಅಡಿಯಲ್ಲಿ ಚಿತ್ರಕಲೆ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಮೊದಲ ಮೂರು ವಿಜೇತರಿಗೆ ತಲಾ 15 ಸಾವಿರ ರೂ. ಬಹುಮಾನ ಹಾಗೂ 20 ಸಮಾಧಾನಕರ ಬಹುಮಾನಗಳಿಗಾಗಿ ತಲಾ 5 ಸಾವಿರ ರೂ. ನೀಡಲಾಗುತ್ತದೆ. ವಿವಿಧ ಕ್ಷೇತ್ರಗಳ ಸಾಧನೆಗಳ ಕುರಿತು ಆನ್‌ಲೈನ್ ರಸಪ್ರಶ್ನೆ ಸ್ಪರ್ಧೆಯನ್ನೂ ಆಯೋಜಿಸಲಾಗಿದೆ. ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಲಭ್ಯವಿರುವ ಈ ಸ್ಪರ್ಧೆಯಲ್ಲಿ 5 ನಿಮಿಷಗಳ ಅವಧಿಯಲ್ಲಿ 20 ಪ್ರಶ್ನೆಗಳಿಗೆ ಉತ್ತರಿಸಬೇಕಿದೆ. ಮೊದಲ ಮೂರು ವಿಜೇತರಿಗೆ ತಲಾ 15 ಸಾವಿರ ರೂ. ಹಾಗೂ 50 ಸಮಾಧಾನಕರ ಬಹುಮಾನಗಳಿಗಾಗಿ ತಲಾ 5 ಸಾವಿರ ರೂ. ನೀಡಲಾಗುತ್ತದೆ. ಪ್ರಬಂಧ, ಚಿತ್ರಕಲೆ ಮತ್ತು ರಸಪ್ರಶ್ನೆ ಸ್ಪರ್ಧೆಗಳಲ್ಲಿ ಆಯ್ಕೆಯಾಗುವ ತಲಾ 200 ಅಗ್ರ ಸ್ಪರ್ಧಿಗಳಿಗೆ ಅವರೊಬ್ಬ ಸಹಚರರೊಂದಿಗೆ ಆ.15ರಂದು ದಿಲ್ಲಿಯ ಕೆಂಪುಕೋಟೆಯಲ್ಲಿ ನಡೆಯುವ ಸ್ವಾತಂತ್ರ್ಯ ದಿನಾಚರಣೆಯನ್ನು ವೀಕ್ಷಿಸಲು ಇ-ಆಹ್ವಾನ ಪತ್ರಿಕೆ ನೀಡಲಾಗುತ್ತದೆ. ಆದರೆ ಪ್ರಯಾಣ, ವಸತಿ ಮತ್ತು ಆಹಾರ ವೆಚ್ಚವನ್ನು ಸ್ಪರ್ಧಿಗಳೇ ಭರಿಸಬೇಕಾಗುತ್ತದೆ ಎಂದು ಸಮಗ್ರ ಶಿಕ್ಷಣ ಕರ್ನಾಟಕ ಸೂಚನೆ ನೀಡಿದೆ.

ಶುಭ ದಿನ

ಕಲಿಯುಗಾಬ್ದ 5128, ಪರಾಭವ ಸಂವತ್ಸರ,
ದಕ್ಷಿಣಾಯನ, ಗ್ರೀಷ್ಮ ಋತು,
ನಿಜ ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ: ಏಕಾದಶಿ,
ನಕ್ಷತ್ರ: ಸ್ವಾತಿ

ದಿನದ ಮಾತು

ಕೆಡುಕಿನ ಮನೋಭಾವದವನಿಗೆ ಸಂತಸವೆಂಬುದು ಯಾವಾಗಲೂ ಮರೀಚಿಕೆಯೇ.

▲ಗೌತಮ ಬುದ್ಧ

ಕಿಡಿ ನುಡಿ

• **ವಾಸುದೇವರಾವ್ ಕಕ್ಕೆನೇಜೆ**

◈ ಧರ್ಮದ ಬಗ್ಗೆ ಆಳವಾಗಿ ಅಧ್ಯಯನ ನಡೆಸಿ ಇನ್ನೊಬ್ಬರಿಗೆ ಮಾರ್ಗದರ್ಶನ ಮಾಡಬೇಕೇ ಹೊರತು ಅಲ್ಪಜ್ಞಾನಿಗಳು ತಾವು ಹೇಳಿದ್ದೇ ಧರ್ಮ ಅಂತ ಬಿಂಬಿಸಿಕೊಂಡು ಸಮಾಜವನ್ನು ತಪ್ಪು ದಾರಿಗೆ ಎಳೆಯುವುದು ಸರಿಯಲ್ಲ.

- ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ
- **ಧರ್ಮವನ್ನು ವ್ಯಾಪಾರವನ್ನಾಗಿ ಮಾಡಿಕೊಳ್ಳುವ ಮಂದಿಗೆ ಅದೆಲ್ಲ ಬೇಕಿಲ್ಲ, ವ್ಯಾಪಾರವೇ ಅವರ ಧರ್ಮ!**

ದಿನ ಭವಿಷ್ಯ

ಮೇಷ ನಿಮ್ಮ ನಡೆ ಕೆಲವರಿಗೆ ತಪ್ಪರ್ಥ ಮೂಡಿಸಬಹುದು. ಅಸಮಾಧಾನ ತರುವ ಬೆಳವಣಿಗೆ. ಆಪ್ತ ಬಂಧು ಭೇಟಿಯಿಂದ ಸಮಾಧಾನ.

ವೃಷಭ ಕೆಲಸದಲ್ಲಿ ಅಧಿಕ ಒತ್ತಡ. ತಾಳ್ಮೆಯ ವರ್ತನೆ ಅಗತ್ಯ. ಇತರರ ಪ್ರಲೋಭನೆಗೆ ಒಳಗಾಗಿ ವರ್ತಿಸಬೇಡಿ. ಶೀತ, ಜ್ವರದ ಸಮಸ್ಯೆ ಕಾಡಬಹುದು.

ಮಿಥುನ ಕೆಲದಿನಗಳ ಒತ್ತಡ ನಿವಾರಣೆ. ಮನಸ್ಸಿಗೆ ನಿರಾಳತೆ. ಕೆಲವು ಬೆಳವಣಿಗೆ ಅದಕ್ಕೆ ಕಾರಣ. ಆಪ್ತರ ಜತೆ ಮಾತುಕತೆ ನೆಮ್ಮದಿ ತರಲಿದೆ.

ಕಟಕ ಆರ್ಥಿಕ ಪ್ರಗತಿ ಉತ್ತಮ. ಆದರೆ ಆಪ್ತರ ಜತೆ ಭಿನ್ನಾಭಿಪ್ರಾಯ ಉಂಟಾದೀತು. ಸ್ನೇಹಿತ ನಿಮ್ಮ ವಿರೋಧಿಯಾಗಿ ಬದಲಾಗಬಹುದು.

ಸಿಂಹ ಅನ್ಯರ ಮೆಚ್ಚಿಸಲು ಅನವಶ್ಯ ಪ್ರಯತ್ನ ಬೇಡ. ನಿಮ್ಮ ಕಾರ್ಯ ನಿಷ್ಠೆಯಿಂದ ಮಾಡಿ. ಕೌಟುಂಬಿಕ ಬಿಕ್ಕಟ್ಟು ಪರಿಹಾರ ಕಷ್ಟವಾದೀತು.

ಕನ್ಯಾ ಮನಸ್ಸಿಗೆ ನಿರಾಳತೆ ತರುವಂತಹ ಬೆಳವಣಿಗೆ. ಕಾರ್ಯ ಸಾಫಲ್ಯ, ವಿಘ್ನ ಮುಕ್ತಿ. ಅನಿರೀಕ್ಷಿತ ಖರ್ಚು ಬಂದೀತು. ಆತ್ಮೀಯ ಬಂಧು ಭೇಟಿ.

ತುಲಾ ನಡೆನುಡಿಯಲ್ಲಿ ಎಚ್ಚರ ವಹಿಸಿ. ಜಗಳಕ್ಕೆ ಆಸ್ಪದ ಕೊಡಬೇಡಿ. ಗೌರವಕ್ಕೆ ಕುಂದು ತರುವ ಬೆಳವಣಿಗೆ ಸಂಭವಿಸಬಹುದು.

ವೃಶ್ಚಿಕ ಜೀವನದ ಹೊಸ ಪಾಠ ಕಲಿಯುವಂತಹ ಪ್ರಸಂಗ ಸಂಭವ. ಬಿಕ್ಕಟ್ಟು ಎದುರಾದರೂ ಬಳಿಕ ಪರಿಹಾರ ಕಂಡು ನೆಮ್ಮದಿ ಉಂಟಾಗಲಿದೆ.

ಧನು ನಿಮ್ಮ ನಿರ್ಧಾರ ಬೇರೆಯವರ ಮೇಲೆ ಹೇರಬೇಡಿ. ಅದು ವಿರಸಕ್ಕೆ ಹೇತುವಾದೀತು. ಕೌಟುಂಬಿಕ ಶಾಂತಿಗೆ ಭಂಗ. ಆರ್ಥಿಕ ಕೊರತೆ.

ಮಕರ ನಿಮ್ಮ ಪಾಲಿಗೆ ಮಹತ್ವದ ದಿನ. ಬಯಸಿದ ಬೆಳವಣಿಗೆ ಸಂಭವ. ದೊಡ್ಡ ಸಮಸ್ಯೆಯೊಂದು ನಿವಾರಣೆ. ಕೆಲಸ ಸುಲಲಿತ. ಧನಪ್ರಾಪ್ತಿ.

ಕುಂಭ ಪ್ರಮುಖ ವಿಷಯದಲ್ಲಿ ನಿಮ್ಮ ನಿಲುವು ಬದಲಿಸುವ ಸನ್ನಿವೇಶ ಉಂಟಾದೀತು. ದುಡುಕಿನ ನಿರ್ಧಾರ ತಾಳದಿರಿ. ಎಲ್ಲರ ಜತೆ ಸೌಹಾರ್ದತೆ ಇರಲಿ.

ಮೀನ ಈ ದಿನ ಪ್ರಗತಿ ಸಾಧಿಸಿದರೂ ನಿಮಗೆ ಮಾತ್ರ ತೃಪ್ತಿಯಿಲ್ಲ. ನಿಮ್ಮ ಮನಸ್ಸು ಬೇರೇನನ್ನೋ ಬಯಸುತ್ತದೆ. ಮನೆಯಲ್ಲಿ ಕಲಹವಾದೀತು.

ರಾಹುಕಾಲ: 1.30-3.00
ಗುಳಿಕಕಾಲ: 9.00-10.30

ಅದೃಷ್ಟ ಸಂಖ್ಯೆ : 2,7,5,1

ನಾಲ್ವರು ಜಲಸಮಾಧಿ

• **ಮಂಡ್ಯ:** ಕಾವೇರಿ ನದಿಯಲ್ಲಿ ಸೆಲ್ಫಿ ತೆಗೆಯಲು ಹೋದ ಒಂದೇ ಕುಟುಂಬದ ಓರ್ವ ವ್ಯಕ್ತಿ, ನಾಲ್ಕು ಮಹಿಳೆಯರು ಸೇರಿದಂತೆ ಐವರು ಜಲ ಸಮಾಧಿಯಾಗಿರುವ ಘಟನೆ ಮಳವಳ್ಳಿ ತಾಲೂಕಿನ ಮುತ್ತತ್ತಿ ಬಳಿ ನಡೆದಿದೆ. ಚನ್ನಪಟ್ಟಣ ತಾಲೂಕಿನ ಬ್ಯಾಡರಹಳ್ಳಿಯ ಚೈತ್ರಾ (20), ಶ್ವೇತಾ(38), ವಿಜಯಮ್ಮ (50), ಪ್ರಿಯಾಂಕ(28) ಹಾಗೂ ಮಹೇಶ್ (30) ಎಂಬುವರೇ ಮೃತಪಟ್ಟ ದುರ್ದೈವಿಗಳಾಗಿದ್ದಾರೆ. ಮುತ್ತತ್ತಿಯ ಮುತ್ತುರಾಯಸ್ವಾಮಿ ದೇವಾಲಯಕ್ಕೆ ಆಗಮಿಸಿದ್ದ ಮಹೇಶ್ ಇತರರು, ಬುಧವಾರ ಸಂಜೆ ಸುಮಾರು 5 ಗಂಟೆ ಸಮಯದಲ್ಲಿ ಕಾವೇರಿ ನದಿ ಬಳಿ ಸೆಲ್ಫಿ ತೆಗೆದುಕೊಳ್ಳಲು ಹೋಗಿದ್ದಾರೆ. ಕಾಲುಜಾರಿ ನದಿಯಲ್ಲಿ ಬಿದ್ದು ಜಲಸಮಾಧಿಯಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಉ.ಪ್ರ.ಜಾಗತಿಕ ಬೆಳವಣಿಗೆ ಸಂವಾದ: ಹೂಡಿಕೆದಾರರ ರೋಡ್ ಶೋ

ಉ.ಪ್ರ.ಪ್ರಗತಿಗೆ ಯೋಗಿ ಹೆಮ್ಮೆ

• **ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ವಿಕಾಸದ ಹೊಸ ಆಯಾಮ ಸೃಷ್ಟಿಸಿದೆ. ಭಾರತದ ಕುರಿತ ಜಗತ್ತಿನ ದೃಷ್ಟಿಕೋನವನ್ನು ಅವರು ಬದಲಿಸಿದ್ದಾರೆ. ಜಾಗತಿಕ ಹೂಡಿಕೆಯನ್ನು ಭಾರತ ಆಕರ್ಷಿಸುತ್ತಿದೆ. ಉತ್ತರ ಪ್ರದೇಶವು ಕಳೆದ 9 ವರ್ಷಗಳಲ್ಲಿ ಭಾರತದ ಪ್ರಗತಿಯಲ್ಲಿ ಸಹಭಾಗಿಯಾಗಿದೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದರು.

ನಗರದ ಖಾಸಗಿ ಹೋಟೆಲಿನಲ್ಲಿ ಬುಧವಾರ ಆಯೋಜಿಸಿದ ಉತ್ತರ ಪ್ರದೇಶ ಜಾಗತಿಕ ಬೆಳವಣಿಗೆ ಸಂವಾದ- 2026 ಹೂಡಿಕೆದಾರರ ರೋಡ್ ಶೋ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಳೆದ 9 ವರ್ಷಗಳ ಉ.ಪ್ರದೇಶದ ಪ್ರಗತಿಯನ್ನು ಅವಲೋಕನ ಮಾಡಬೇಕು. ಇದಕ್ಕಾಗಿ ಖುದ್ದು ಉ.ಪ್ರದೇಶಕ್ಕೆ ಬಂದು ನಮ್ಮ ರಾಜ್ಯದ ವಿಕಾಸವನ್ನು ಕಣ್ತುಂಬಿಕೊಳ್ಳಬಹುದು. 9 ವರ್ಷಕ್ಕೂ ಮುನ್ನ ಯುಪಿಯಲ್ಲಿ ಸಮರ್ಥ ಆಡಳಿತವಿರಲಿಲ್ಲ, ರಾಜ್ಯದಲ್ಲಿ ಅಭಿವೃದ್ಧಿ ಹೆಸರೇ ಇರಲಿಲ್ಲ. ಉತ್ತರ ಭಾರತದ ರೋಗಗ್ರಸ್ತ ರಾಜ್ಯಗಳಲ್ಲಿ ಉ.ಪ್ರದೇಶವೂ ಒಂದಾಗಿತ್ತು. ಕೆಟ್ಟ ವಾತಾವರಣ ಅಲ್ಲಿತ್ತು. ಈಗಿನ ಉತ್ತರ ಪ್ರದೇಶದ ಬಗ್ಗೆ ಹೇಳಲು ನನಗೆ ಬಹಳ ಸಂತೋಷವಾಗುತ್ತಿದೆ. ಈಗ ಅಲ್ಲಿ ಎಲ್ಲವೂ ಇದೆ, ಅಲ್ಲಿರುವುದು ಬೇರೆ ಕಥೆ ಇಲ್ಲ, ಬೇರೆ ಕಥೆ ಇರುವುದೆಲ್ಲವೂ ಅಲ್ಲಿನ ಯಾವುದಾದರೊಂದು ಕಥೆ ಸಿಗುತ್ತದೆ ಎಂದು ವಿವರಿಸಿದರು.

ಕೇವಲ ಕೈಗಾರಿಕೆಗಳಿಗೆ ಮಾತ್ರವಲ್ಲದೇ ಉತ್ತರ ಪ್ರದೇಶದಲ್ಲಿ ಕೃಷಿಗೂ ಉತ್ತಮ ಅವಕಾಶಗಳಿವೆ. ಐದು ಕೃಷಿ ವಿಶ್ವವಿದ್ಯಾಲಯಗಳಿವೆ. ಕೃಷಿ ಕ್ಷೇತ್ರದಲ್ಲೂ ಪ್ರಗತಿ ಸಾಧಿಸಿದೆ. ಬಂಡವಾಳ ಹೂಡಲು ಉತ್ತರ ಪ್ರದೇಶ ಹೇಳಿ ಮಾಡಿಸಿದಂತಿದೆ. ಭಾರತ, ಉತ್ತರ ಪ್ರದೇಶದ ಪ್ರಗತಿಯಲ್ಲಿ ಉದ್ಯಮಿಗಳ ಪಾತ್ರ ದೊಡ್ಡದು. ಏಕಗವಾಕ್ಷಿ ವ್ಯವಸ್ಥೆಯು ಉದ್ಯಮಿಗಳಿಗೆ ಸಿಗಲಿದೆ, ಉದ್ಯಮಿಗಳಿಗೆ ಭಾರೀ ಸುರಕ್ಷೆ ಒದಗಿಸಲಾಗುತ್ತದೆ. ಆದ್ದರಿಂದ ಉತ್ತರ ಪ್ರದೇಶಕ್ಕೆ ಬನ್ನಿ ಎಂದು ಯೋಗಿ ಆದಿತ್ಯನಾಥ್ ಆಹ್ವಾನಿಸಿದರು.

ಕಾರ್ಯಕ್ರಮದಲ್ಲಿ ಉತ್ತರ ಪ್ರದೇಶದ ವಿತ್ತ ಸಚಿವ ಸುರೇಶ್ ಕುಮಾರ್ ಖನ್ನಾ ಹಾಗೂ ಉ.ಪ್ರದೇಶ ಸರ್ಕಾರದ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

> **ಉತ್ತರ ಪ್ರದೇಶವು ಪ್ರಸಕ್ತ ಸುರಕ್ಷಿತವಾಗಿದೆ. ನಮ್ಮ ಆರ್ಥಿಕ ನೀತಿಗಳಿಂದ ಜಗತ್ತಿಗೆ ನಮ್ಮ ಮೇಲೆ ವಿಶ್ವಾಸ ಬರುತ್ತಿದೆ. ಕಡಿಮೆ ಬೆಲೆ ಭೂಮಿ ಸಿಗುತ್ತಿದೆ. ಉತ್ತಮ ಸಂಪರ್ಕ ವ್ಯವಸ್ಥೆ ಮೂಲ ಸೌಕರ್ಯವಿದೆ. ರಾಜ್ಯದ ಆರ್ಥಿಕತೆಯನ್ನು 1 ಟ್ರಿಲಿಯನ್ ಡಾಲರ್‌ಗೇರಿಸಲು ಗುರಿ ಇಟ್ಟುಕೊಳ್ಳಲಾಗಿದೆ.**
> ■ **ಸುರೇಶ್ ಕುಮಾರ್ ಖನ್ನಾ,**
> ಉತ್ತರ ಪ್ರದೇಶದ ವಿತ್ತ ಸಚಿವ

ಡಬಲ್ ಡೆಕ್ಕರ್ ಸರ್ಕಾರದಿಂದ ಅಭಿವೃದ್ಧಿ

ಕಳೆದ 9 ವರ್ಷಗಳಿಂದ ಉತ್ತರ ಪ್ರದೇಶದಲ್ಲಿ ಡಬಲ್ ಇಂಜಿನ್ ಸರ್ಕಾರ ಸುರಕ್ಷೆ ಹೆಚ್ಚಿಸಿದೆ. ಉತ್ತರ ಪ್ರದೇಶದ ಆರ್ಥಿಕತೆ ಮೂರು ಪಟ್ಟು ಹೆಚ್ಚಾಗಿದೆ, ತಲಾದಾಯ ಮೂರು ಪಟ್ಟು ಜಾಸ್ತಿಯಾಗಿದೆ. ಹೂಡಿಕೆ ಅವಕಾಶಗಳು ಹಿಂದಿಗಿಂತಲೂ ಹೆಚ್ಚಾಗಿದೆ. 75 ಸಾವಿರ ಎಕರೆಗಳಷ್ಟು ಭೂ ಬ್ಯಾಂಕ್ ಉತ್ತರ ಪ್ರದೇಶದಲ್ಲಿದೆ. ದೇಶದ ಅತೀ ದೊಡ್ಡ ಗಂಗಾ ಎಕ್ಸ್‌ಪ್ರೆಸ್‌ವೇ, ದೇಶದ ಮೊದಲ ಒಳನಾಡು ಜಲಮಾರ್ಗ, ಐದು ಅಂತಾರಾಷ್ಟ್ರೀಯ ಮತ್ತು 16 ದೇಶೀಯ ವಿಮಾನ ನಿಲ್ದಾಣಗಳಿವೆ. ಇನ್ನೂ ಐದು ವಿಮಾನ ನಿಲ್ದಾಣಗಳ ನಿರ್ಮಾಣ ನಡೆಯುತ್ತಿದೆ. ಎರಡು ಐಐಟಿಗಳಿವೆ, ಕೌಶಲಯುತ ಮಾನವಶಕ್ತಿ ಇದೆ. ದೇಶದ ಮೊದಲ ಸ್ಪೀಡ್ ರೈಲು ದಿಲ್ಲಿ ಮೀರತ್ ನಡುವೆ ಓಡುತ್ತಿದೆ ಎಂದು ತಿಳಿಸಿದರು.

ಮತ್ತೊಂದು ಗಾಲ್ಫ್ ಕೋರ್ಸ್ ನಿರ್ಮಿಸಿ

• **ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಮತ್ತೊಂದು ಗಾಲ್ಫ್ ಕೋರ್ಸ್ ನಿರ್ಮಿಸಿದರೆ ಕ್ಲಬ್‌ನ 150 ವರ್ಷಗಳ ಸಂಭ್ರಮಕ್ಕೆ ಅರ್ಥ ಬರುತ್ತದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಸ್ಯಾಂಕಿ ರಸ್ತೆಯ ಗಾಲ್ಫ್ ಕ್ಲಬ್ ನಲ್ಲಿ ಬುಧವಾರ ನಡೆದ ಬೆಂಗಳೂರು ಗಾಲ್ಫ್ ಕ್ಲಬ್‌ನ 150ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, 150 ವರ್ಷದ ಇತಿಹಾಸವಿರುವ ಗಾಲ್ಫ್ ಕ್ಲಬ್. ಇಷ್ಟು ಹೊತ್ತಿಗೆ ಬೆಂಗಳೂರಿನಲ್ಲಿ ಮೂರ್ನಾಲ್ಕು ಗಾಲ್ಫ್ ಕೋರ್ಸ್ ನಿರ್ಮಾಣ ಬೇಕಾಗಿತ್ತು ಎಂದು ಅಭಿಪ್ರಾಯಪಟ್ಟರು.

ಬೊಮ್ಮಾಯಿ ಅವರಾಗಿದ್ದ ಕಾರಣಕ್ಕೆ ನಿಮಗೆ ನೀಡಲಾಗಿರುವ ಅನುಮತಿಯನ್ನು ನವೀಕರಿಸಿದ್ದಾರೆ. ನಾನಾಗಿದ್ದರೆ ನವೀಕರಣ ಮಾಡುತ್ತಿರಲಿಲ್ಲ. ನಾನು ಅನುಮತಿ ನವೀಕರಿಸಬೇಕಾದರೆ ಮುಂದಿನ ಪೀಳಿಗೆಗೆ ಒಂದೆರಡು ಗಾಲ್ಫ್ ಕೋರ್ಸ್ ಆರಂಭಿಸಿ ಎಂದು ಷರತ್ತು ಹಾಕುತ್ತಿದ್ದೆ. ನಾನು ಇತಿಹಾಸ ಓದುವುದಕ್ಕಿಂತ ಇತಿಹಾಸ ಬರೆಯುವುದರಲ್ಲಿ ಆಸಕ್ತಿ ಹೊಂದಿದ್ದೇನೆ. ಟೀಕೆಗಳು ಸಾಯುತ್ತವೆ ಕೆಲಸಗಳು ಉಳಿಯುತ್ತವೆ. ಟೀಕೆ ಮಾಡುವವರು ಮಾಡುತ್ತಾರೆ ಎಂದರು.

ಗಾಲ್ಫ್ ಕ್ಲಬ್ 150 ವರ್ಷ ಪೂರ್ಣಗೊಳಿಸಿದೆ. ಈ ಸಂದರ್ಭದಲ್ಲಿ ಎಲ್ಲರಿಗೂ ಅಭಿನಂದನೆಗಳು. ನಾನು ಮುಖ್ಯಮಂತ್ರಿಯಾದ ಬಳಿಕ ನಾನು ಭಾಗವಹಿಸುತ್ತಿರುವ ಮೊದಲ ಖಾಸಗಿ ಕಾರ್ಯಕ್ರಮ. ನಾನು ಸಿಎಂ ಎನ್ನುವುದಕ್ಕಿಂತ ಇಲ್ಲಿನ ಸದಸ್ಯ. ಹೀಗಾಗಿ ಬಂದಿದ್ದೇನೆ. ನನ್ನ ಮಾತು ನಿಮಗೆ ಹಿತವಾಗಿರುವುದಿಲ್ಲ, ನಿಮ್ಮ ಚಪ್ಪಾಳೆ ಬೇಡ. ನಿಮಗೆ ಇಷ್ಟವಾಗುತ್ತದೆಯೋ ಇಲ್ಲವೋ ಆದರೆ ನಾನು ಸತ್ಯ ನುಡಿಯಬೇಕು ಎಂದರು.

angalore Golf

ಪಾರ್ಕ್ ನಿರ್ಮಾಣ

ಬೆಂಗಳೂರಿನಲ್ಲಿ ಹಸಿರು ಹೆಚ್ಚಿಸಲು ನನಗೆ ಆಸಕ್ತಿ ಇದೆ. ಕಬ್ಬನ್ ಪಾರ್ಕ್, ಲಾಲ್ ಬಾಗ್ ಬಿಟ್ಟರೆ ಬೇರೆ ಎಲ್ಲಿದೆ ಜಾಗ, ಹೀಗಾಗಿ ಅರಣ್ಯ ಇಲಾಖೆ ಜೊತೆ ಚರ್ಚೆ ಮಾಡಿ ಬೆಂಗಳೂರಿನ 18 ಕಿ.ಮೀ ಸುತ್ತಮುತ್ತ ಎಲ್ಲೆಲ್ಲಿ ಅರಣ್ಯ ಇಲಾಖೆ ಜಾಗ ಇದೆಯೋ ಅವುಗಳನ್ನು ಖಾಲಿ ಬಿಡುವ ಬದಲು ಉದ್ಯಾನವನ ನಿರ್ಮಿಸಿ ಎಂದು ಸೂಚಿಸಿದ್ದೇನೆ ಎಂದರು.

ಉದ್ಯಮಶೀಲತೆಗೆ ಉತ್ತೇಜನ ಉದ್ದೇಶ

> **ಮಹಿಳಾ ಉದ್ಯಮಿಗಳು ಆತ್ಮವಿಶ್ವಾಸದಿಂದ ಉದ್ಯಮ ಕ್ಷೇತ್ರಕ್ಕೆ ಪ್ರವೇಶಿಸಿ ಜಾಗತಿಕ ಮಟ್ಟದಲ್ಲಿ ತಮ್ಮ ಸ್ಥಾನವನ್ನು ನಿರ್ಮಿಸಿಕೊಳ್ಳಬೇಕು.**
> ■ **ಕುಮಾರಿ ಸಾಕ್ಷಿ ಸ್ವೈಲ್,**
> ಫೆಮಿನಾ ಮಿಸ್ ಇಂಡಿಯಾ 2026ರ ವಿಜೇತೆ

• **ಬೆಂಗಳೂರು:** ಕರ್ನಾಟಕದಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸುವ ಹಾಗೂ ಉದ್ಯೋಗ ಸೃಷ್ಟಿಗೆ ನೆರವಾಗುವ ಸಮಗ್ರ ವ್ಯವಸ್ಥೆಗಳ ಅಗತ್ಯತೆ ಇದೆ ಎಂದು ಕೆಎಸ್‌ಎಂಸಿಎ ಅಧ್ಯಕ್ಷ ಹಾಗೂ ಶಾಸಕ ಸತೀಶ ಕೃಷ್ಣ ಸೈಲ್ ತಿಳಿಸಿದರು.

ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಷನ್ ಆ್ಯಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ (ಕೆಎಸ್‌ಎಂಸಿಎ) ವತಿಯಿಂದ ಸಂಪತ್ತಿ-ದ ಮಂತ್ರ ಫಾರ್ ಅಬಂಡನ್ಸ್ ಎಂಬ ಸಮಗ್ರ ವ್ಯವಹಾರ ಪರಿಸರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಸ್ಟಾರ್ಟ್‌ಅಪ್‌ಗಳು, ಎಂಎಸ್‌ಎಂಇಗಳು, ಮಹಿಳಾ ಉದ್ಯಮಿಗಳು, ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಮಾರ್ಗದರ್ಶಕರು, ಹೂಡಿಕೆದಾರರು ಹಾಗೂ ಕೈಗಾರಿಕಾ ವಲಯವನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

ಕೆಎಸ್‌ಎಂಸಿಎ ವ್ಯವಸ್ಥಾಪಕ ನಿರ್ದೇಶಕ ಬಿ. ಆನಂದ್ ಮಾತನಾಡಿ, ಸರ್ಕಾರದ ಮಾರ್ಗದರ್ಶನ ಮತ್ತು ಬೆಂಬಲದೊಂದಿಗೆ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಉದ್ಯಮಿಗಳ ಬೆಳವಣಿಗೆಗೆ ಅಗತ್ಯವಾದ ಮಾರ್ಗದರ್ಶನ, ಮಾರುಕಟ್ಟೆ ಸಂಪರ್ಕ, ಬ್ರ್ಯಾಂಡಿಂಗ್ ಮತ್ತು ವ್ಯವಹಾರ ವಿಸ್ತರಣೆಗೆ ಕೆಎಸ್‌ಎಂಸಿಎ ಸದಾ ಬದ್ಧವಾಗಿದೆ ಎಂದು ತಿಳಿಸಿದರು.

ಸ್ನೇಹಾ ಪ್ರಭು ಮಾತನಾಡಿ, ಸಂಪತ್ತಿ ಕಾರ್ಯಕ್ರಮದ ಸಮಗ್ರ ಪರಿಚಯವನ್ನು ನೀಡಿದರು. ಸ್ಟಾರ್ಟ್‌ಅಪ್‌ಗಳು, ಎಂಎಸ್‌ಎಂಇಗಳು, ಮಹಿಳಾ ಉದ್ಯಮಿಗಳು ಹಾಗೂ ಶಿಕ್ಷಣ ಸಂಸ್ಥೆಗಳಿಗೆ ಲಭ್ಯವಾಗುವ ಅವಕಾಶಗಳ ಕುರಿತು ವಿವರಿಸಿದರು. ವಿಡಿಯೋ ಸಂದೇಶದ ಮೂಲಕ ಮಾತನಾಡಿದ ಮೆಂಟರ್ ಆನ್ ರೋಡ್ ಆ್ಯಂಡ್ ಗ್ಲೋಬಲ್ ನೆಟ್‌ವರ್ಕ್ ಸಂಸ್ಥಾಪಕ ಡಾ. ಜಗತ್ ಶಾ, ಜಾಗತಿಕ ಮಾರುಕಟ್ಟೆ ಅವಕಾಶಗಳು, ಮಾರ್ಗದರ್ಶನದ ಮಹತ್ವ, ರಫ್ತು ಆಧಾರಿತ ಬೆಳವಣಿಗೆ ಹಾಗೂ ವ್ಯವಹಾರ ಜಾಲತಾಣಗಳ ಅಗತ್ಯತೆಯನ್ನು ವಿವರಿಸಿದರು.

ಸಂಪತ್ತಿ ಭವನ ಸಮಗ್ರ ವ್ಯವಹಾರ ಕೇಂದ್ರ: ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಸಂಪತ್ತಿ ಭವನ ಎಂಬ ಸಮಗ್ರ ವ್ಯವಹಾರ, ನವೀನತೆ ಮತ್ತು ಉದ್ಯಮಶೀಲತಾ ಕೇಂದ್ರ ಘೋಷಿಸಲಾಯಿತು. ಇದು ಉದ್ಯಮಿಗಳು, ಹೂಡಿಕೆದಾರರು, ಮಾರ್ಗದರ್ಶಕರು, ಶಿಕ್ಷಣ ಸಂಸ್ಥೆಗಳು ಮತ್ತು ಕೈಗಾರಿಕಾ ವಲಯವನ್ನು ಸಂಪರ್ಕಿಸುವ ಪ್ರಮುಖ ವೇದಿಕೆಯಾಗಲಿದೆ. ಸಂಪತ್ತಿಯ ಮುಖ್ಯ ಸಲಹೆಗಾರರಾದ ಎಂ.ಕೆ.ಎಸ್.ಎಸ್. ಜಿಲಾನಿ, ಬ್ರಿಕ್ಸ್ ಚೇಂಬರ್ ಆಫ್ ಕಾಮರ್ಸ್ ಆ್ಯಂಡ್ ಇಂಡಸ್ಟ್ರಿಯ ಅಧ್ಯಕ್ಷ ಸಮೀರ್ ಶಾಸ್ತ್ರಿ, ಪೇಯು (PayU) ಸಂಸ್ಥೆಯ ನಿರ್ದೇಶಕ ಪ್ರೀತಂ ಪ್ರಜಾಪತಿ.

ಜು.1ರಿಂದ ವಿಬಿ ಜಿರಾಮ್‌ಜಿ

ಪುಟ ೧➡ ಆದರೆ ಈಗ ಒಂದೇ ವರ್ಷಕ್ಕೆ 3,806ಕೋಟಿ ರೂ. ವೆಚ್ಚ ಭರಿಸುವ ಸ್ಥಿತಿ ಬಂದಿದೆ. ಇದು ರಾಜ್ಯದ ಮೇಲೆ ಆಗುವ ದೊಡ್ಡ ಹೊರೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ವಿಬಿ ಜಿ ರಾಮ್‌ಜಿಯಲ್ಲಿ ರಾಜ್ಯಕ್ಕೆ 5,709 ಕೋಟಿ ರೂ. ಹಂಚಿಕೆ ಮಾಡಿದೆ. ಗ್ರಾಮೀಣ ಜನರಿಗೆ ತೊಂದರೆ ಆಗದಂತೆ ಯೋಜನೆಗೆ ರಾಜ್ಯ ಸರ್ಕಾರದ ಪಾಲಿಯಿಂದ 3,806 ಕೋಟಿ ರೂ. ಭರಿಸಬೇಕಾಗುತ್ತದೆ. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಅವರು ಸಮ್ಮತಿಸಿದ್ದಾರೆ ಎಂದರು. ಜತೆಗೆ ಕೇಂದ್ರ ಸರ್ಕಾರ ಹಂತ ಹಂತವಾಗಿ ಕನಿಷ್ಠ 80:20ರ ಅನುಪಾತದಲ್ಲಾದರೂ ರಾಜ್ಯಗಳ ನೆರವಿಗೆ ನಿಲ್ಲಬೇಕು ಎಂದು ಆಗ್ರಹಿಸಲಾಗುತ್ತಿದೆ ಎಂದರು. ಕೇಂದ್ರ ಸರ್ಕಾರ ಅವೈಜ್ಞಾನಿಕವಾಗಿ ಬೇಸಾಯದ ಸಮಯದಲ್ಲಿ 60 ದಿನ ಕಾಲ ಉದ್ಯೋಗ ನೀಡದಿರುವಂತೆ ಸೂಚಿಸಿದೆ. ಇದು ಗ್ರಾಮೀಣ ಕುಟುಂಬಗಳಿಗೆ ಮಾರಕವಾಗಿದೆ. ಕಾರಣ ಈಗ ಅತ್ಯಾಧುನಿಕ ಕೃಷಿ ಯಂತ್ರೋಪಕರಣ ಬಂದಿದ್ದು, ಗ್ರಾಮೀಣ ಕುಟುಂಬಗಳಿಗೆ ಬೇಸಾಯದ ಸಮಯದಲ್ಲೂ ಕೃಷಿ ಉದ್ಯೋಗ ಲಭಿಸುವುದಿಲ್ಲ. ಹೀಗಾಗಿ ವಿಬಿ ಜಿ ರಾಮ್‌ಜಿ ಅವರ ಅನ್ನವನ್ನು ಕಸಿದುಕೊಂಡಂತೆ ಮಾಡಿದೆ. ಇದರ ವಿರುದ್ಧ ರಾಜ್ಯ ಸರ್ಕಾರ ಆಕ್ಷೇಪಣೆ ವ್ಯಕ್ತಪಡಿಸಿದೆ ಎಂದರು.

ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಿ

ಪುಟ ೧➡ ಜುಲೈ 1ರಿಂದ ಹೊಸ ಸ್ವರೂಪದ ಮನರೇಗಾ (ವಿಬಿ ಜಿ ರಾಮ್‌ಜಿ) ಜಾರಿ ಮಾಡಲಾಗುವುದು. ಇದರನ್ವಯ ಯಾರೇ ಉದ್ಯೋಗ ಕೇಳಿ ಬಂದರೂ ಅರ್ಹರಿಗೆ ಉದ್ಯೋಗ ನೀಡಲು ಸರ್ಕಾರ ಸನ್ನದ್ಧವಾಗಿದೆ ಎಂದರು. ಕಳೆದ 3 ತಿಂಗಳಲ್ಲಿ ರಾಜ್ಯದಲ್ಲಿ 1.40 ಲಕ್ಷ ಮಾನವ ದಿನ ಸೃಷ್ಟಿಸಲಾಗಿದೆ. 9 ಕೋಟಿ ವಾರ್ಷಿಕ ಗುರಿ ಇಟ್ಟುಕೊಂಡಿದೆ. ಪ್ರತಿ ತಿಂಗಳೂ 80 ರಿಂದ 90 ಲಕ್ಷ ಮಾನವ ದಿನ ಸೃಷ್ಟಿ ನಮ್ಮ ಗುರಿಯಾಗಿದೆ ಎಂದರು. ಈಗಾಗಲೇ ನರೇಗಾದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 7000ಕ್ಕೂ ಹೆಚ್ಚು ಸಿಬ್ಬಂದಿಯ ಜೀವನೋಪಾಯಕ್ಕೆ ತೊಂದರೆ ಆಗದ ರೀತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಶಿವಮೊಗ್ಗ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ

• **ಶಿವಮೊಗ್ಗ:** ನಗರದ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯಕ್ಕೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದ ಹಿನ್ನೆಲೆಯಲ್ಲಿ ನ್ಯಾಯಾಲಯ ಆವರಣದಲ್ಲಿ ಭದ್ರತಾ ಸಿಬ್ಬಂದಿ, ಶ್ವಾನದಳ ಹಾಗೂ ಎಎಸ್‌ಸಿ ತಂಡಗಳಿಂದ ಬುಧವಾರ ಬೆಳಗ್ಗೆ ವ್ಯಾಪಕ ತಪಾಸಣೆ ನಡೆಸಲಾಯಿತು. ಬೆದರಿಕೆ ಸಂದೇಶದಿಂದ ನ್ಯಾಯಾಲಯದ ಸಿಬ್ಬಂದಿ, ವಕೀಲರು ಹಾಗೂ ಸಾರ್ವಜನಿಕರಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯ ಕಚೇರಿಯ ಅಧಿಕೃತ ಇ-ಮೇಲ್ ವಿಳಾಸಕ್ಕೆ ಅನಾಮಧೇಯ ವ್ಯಕ್ತಿಯಿಂದ ಬಾಂಬ್ ಸ್ಫೋಟದ ಬೆದರಿಕೆ ಸಂದೇಶ ಬಂದಿತ್ತು. ನಿರ್ದಿಷ್ಟ ಸಮಯದಲ್ಲಿ ನ್ಯಾಯಾಲಯ ಆವರಣದಲ್ಲಿ ಬಾಂಬ್ ಸ್ಫೋಟಗೊಳ್ಳಲಿದೆ ಎಂದು ಇ-ಮೇಲ್‌ನಲ್ಲಿ ಉಲ್ಲೇಖಿಸಲಾಗಿತ್ತು ಎನ್ನಲಾಗಿದೆ. ಶ್ವಾನದಳ ಮತ್ತು ಎಎಸ್‌ಸಿ ತಂಡಗಳನ್ನು ಕರೆಸಿ ನ್ಯಾಯಾಲಯದ ಕಟ್ಟಡ, ನ್ಯಾಯಾಂಗ ಕೊಠಡಿಗಳು, ವಾಹನ ನಿಲುಗಡೆ ಪ್ರದೇಶ ಹಾಗೂ ಸಾರ್ವಜನಿಕರು ಸಂಚರಿಸುವ ಸ್ಥಳಗಳಲ್ಲಿ ಸಮಗ್ರ ತಪಾಸಣೆ ನಡೆಸಲಾಯಿತು. ತಪಾಸಣೆ ವೇಳೆ ಯಾವುದೇ ಅನುಮಾನಾಸ್ಪದ ವಸ್ತು ಅಥವಾ ಸ್ಫೋಟಕ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ನ್ಯಾಯಾಲಯ ಆವರಣದಲ್ಲಿ ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

ಆಯುಕ್ತ ವೈ.ಮಂಜುನಾಥ್‌ಗೆ ಇಡಿ ಶಾಕ್

• **ಬೆಳಗಾವಿ/ಮೈಸೂರು:** ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ ಅವರಿಗೆ ಸಂಬಂಧಿಸಿದ ಬೆಳಗಾವಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಒಟ್ಟು ಆರು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಬುಧವಾರ ಬೆಳಗ್ಗೆ ಏಕಕಾಲದಲ್ಲಿ ದಾಳಿ ನಡೆಸಿ ಶೋಧ ಕಾರ್ಯ ಕೈಗೊಂಡಿದ್ದಾರೆ.

ಬಳ್ಳಾರಿ ಮಾಜಿ ಸಂಸದ ದೇವೇಂದ್ರಪ್ಪ ಅವರ ಪುತ್ರ ಹಾಗೂ ಸಚಿವ ಸತೀಶ ಜಾರಕಿಹೊಳಿ ಅವರ ಸಹೋದರಿಯ ಪತಿಯಾಗಿರುವ ವೈ. ಮಂಜುನಾಥ ಅವರ ವಿರುದ್ಧ ಅಕ್ರಮ ಆಸ್ತಿ ಸಂಪಾದನೆ ಆರೋಪಗಳು ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಬೆಳಗಾವಿಯ ಹನುಮಾನ್ ನಗರದಲ್ಲಿರುವ ವೈ. ಮಂಜುನಾಥ್ ಅವರ ಐಷಾರಾಮಿ ನಿವಾಸದ ಮೇಲೆ ಇಡಿ ಅಧಿಕಾರಿಗಳು ಬೆಳಗ್ಗೆ ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ಆರಂಭಿಸಿದರು. ಇದೇ ವೇಳೆ ಅವರಿಗೆ ಸಂಬಂಧಿಸಿದ ಇನ್ನೂ ಐದು ಕಚೇರಿಗಳು ಮತ್ತು ನಿವಾಸಗಳ ಮೇಲೂ ಅಧಿಕಾರಿಗಳು ಏಕಕಾಲದಲ್ಲಿ ಶೋಧ ಕಾರ್ಯ ನಡೆಸಿದ್ದಾರೆ.

ದಾಳಿಯ ವೇಳೆ ಕಾಗದ ಪತ್ರಗಳು, ಬ್ಯಾಂಕ್ ಖಾತೆಗಳ ವಿವರಗಳು, ಆಸ್ತಿ ದಾಖಲೆಗಳು ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ಮಹತ್ವದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ಬೆಳಗಾವಿ, ಮೈಸೂರು, ಬೆಂಗಳೂರು ಹಾಗೂ ಹಾಸನ ಜಿಲ್ಲೆಯ ಅರಸೀಕೆರೆಯಲ್ಲಿ ಇರುವ ಸ್ಥಳಗಳಲ್ಲಿ ಶೋಧ ಕಾರ್ಯ ನಡೆದಿದ್ದು, ಮಂಜುನಾಥ ಅವರ ಆಪ್ತರು ಮತ್ತು ಸ್ನೇಹಿತರಿಗೆ ಸಂಬಂಧಿಸಿದ ಮನೆಗಳಲ್ಲಿಯೂ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿದ್ದಾರೆ.

ವೈ.ಮಂಜುನಾಥ್ ಆಪ್ತೆ ಯಮುನಾ ವಿಚಾರಣೆ

ಮೈಸೂರು: ಮೈಸೂರಿನ ದಟ್ಟಗಳ್ಳಿ ನಿವಾಸದಲ್ಲಿರುವ ಸಚಿವ ಸತೀಶ್ ಜಾರಕಿಹೊಳಿ ಅವರ ಸಂಬಂಧಿ ವೈ. ಮಂಜುನಾಥ್ ಹಾಗೂ ಅವರ ಆಪ್ತೆ ಯಮುನಾ ಅವರನ್ನು ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ವಿಚಾರಣೆ ನಡೆಸಿದರು. ಬುಧವಾರ ಬೆಳಗ್ಗೆ 6ಕ್ಕೆ ಎರಡು ಕಾರುಗಳಲ್ಲಿ ಬಂದ ಇಡಿ ಅಧಿಕಾರಿಗಳು ವೈ. ಮಂಜುನಾಥ್ ನಿವಾಸಕ್ಕೆ ದಾಳಿ ಮಾಡಿದ್ದು, ಎರಡು ಗಂಟೆಗಳಿಗೂ ಹೆಚ್ಚು ಕಾಲ ನಿರಂತರವಾಗಿ ಶೋಧ ಕಾರ್ಯ ನಡೆಸಿದರು. ದಾಳಿಗೆ ಪಡೆದ ದಾಖಲೆಗಳನ್ನು ಪರಿಶೀಲಿಸಿದರು. ಅಧಿಕಾರಿಗಳ ತಂಡ ಹೆಚ್ಚಿನ ಮಾಹಿತಿಗಾಗಿ ಯಮುನಾ ಅವರನ್ನು ಬ್ಯಾಂಕ್ ಹಾಗೂ ಇನ್ನಿತರ ಸ್ಥಳಗಳಿಗೆ ಕರೆದೊಯ್ದು ವಿಚಾರಣೆ ನಡೆಸಿದರು. ಮತ್ತೆ ದಟ್ಟಗಳ್ಳಿ ನಿವಾಸಕ್ಕೆ ಕರೆತಂದು ವಿಚಾರಣೆ ನಡೆಸಿದರು. ಯಮುನಾ ಅವರು ಈ ಹಿಂದೆ ಅಬಕಾರಿ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಈಚೆಗೆ ವಿಆರ್‌ಎಸ್ ಪಡೆದಿದ್ದರು.

ವಸತಿ ವಿಳಂಬಕ್ಕೆ ಮುಖ್ಯಮಂತ್ರಿ ಸಿಟ್ಟು

ಪುಟ ೧➡ ಈ ಬಗ್ಗೆ ಎಲ್ಲರೂ ಸ್ಪಷ್ಟತೆ ಇಟ್ಟುಕೊಳ್ಳಿ ಎಂದ ಮುಖ್ಯಮಂತ್ರಿಗಳು, ಮನೆ ಕಟ್ಟಿದರೆ ಸಾಲದು. ಮೂಲ ಸೌಲಭ್ಯಗಳು ಮತ್ತು ಸೂಕ್ತ ಸಂಪರ್ಕ ಕಲ್ಪಿಸುವ ಕಡೆಗೂ ಗಮನಹರಿಸಬೇಕು. ಯಾವುದೇ ವಸತಿ ಯೋಜನೆ ಅನುಷ್ಠಾನಕ್ಕೆ ಯೋಜನಾ ವಿಭಾಗಕ್ಕೆ ಮೊದಲು ಹೋಗಲೇಬೇಕು ಎಂದು ಸೂಚಿಸಿದರು. ಬಡವರಿಗೆ ತಲೆ ಮೇಲೊಂದು ಸೂರು ಬೇಕು. ಅವರಿಗೆ ನಿವೇಶನದ ಬದಲು ಮನೆ ಕಟ್ಟಿಕೊಡಲು ಆದ್ಯತೆ ನೀಡಿ. ಮನೆ ಕಟ್ಟಲು ಸರ್ಕಾರದಿಂದ ಕಡಿಮೆ ದರದಲ್ಲಿ ನಿವೇಶನ ಪಡೆದವರು 3 ಅಥವಾ 5 ವರ್ಷದೊಳಗೆ ಮನೆ ನಿರ್ಮಿಸುವ ನಿಯಮ ಪರಿಶೀಲಿಸಿ ಎಂದು ಸಲಹೆ ನೀಡಿದರು. ಕೆಎಚ್‌ಬಿಯಿಂದ 568 ಯೋಜನೆಗಳನ್ನು ಅನುಮೋದಿಸಲಾಗಿದ್ದು, ಇದರಲ್ಲಿ 280 ಅನುಷ್ಠಾನಗೊಂಡಿವೆ. 288 ಬಾಕಿ ಇವೆ. ಈ ಬಾಕಿ ಯೋಜನೆಗಳಿಗೆ ಅಡ್ಡಿ ಆಗಿರುವ ತಾಂತ್ರಿಕ ಅಡಚಣೆಗಳ ನಿವಾರಣೆಗೆ ಕ್ರಮ ವಹಿಸಬೇಕು ಮತ್ತು ದುರುಪಯೋಗ ಆಗದಂತೆ ಜಾಗ್ರತೆ ವಹಿಸಬೇಕು. ಶಿವರಾಮ ಕಾರಂತ ಬಡಾವಣೆಯ ರಾಜೀವ್ ಗಾಂಧಿ ವಸತಿ ಯೋಜನೆಯ ಮನೆಗಳ ನಿರ್ಮಾಣ ಜವಾಬ್ದಾರಿಯನ್ನು ಬಿಡಿಎಗೆ ವಹಿಸಲು ಸೂಚನೆ ನೀಡಿದರು.

ಮುಂಬೈ ಮಾದರಿಯಲ್ಲಿ ಸ್ಲಂ ಅಭಿವೃದ್ಧಿ

ನಿವೇಶನಗಳು ಖಾಲಿ ಬಿದ್ದಷ್ಟೂ ಸ್ಲಂಗಳು ತಲೆ ಎತ್ತುತ್ತವೆ. ಇದಕ್ಕೆ ಅವಕಾಶ ಕೊಡಬೇಡಿ. ಮುಂಬೈ ಮಾದರಿಯಲ್ಲಿ ಸ್ಲಂಗಳ ಮರು ಅಭಿವೃದ್ಧಿಗೆ ಯೋಜನೆ ಸಿದ್ಧಪಡಿಸಿ. ಮುಂಬೈಗಿಂತ ಹೆಚ್ಚು ವಿನ್ಯಾಸದ ಮನೆಗಳನ್ನು ನಿರ್ಮಿಸಿ. ಮುಂಬೈಗೆ ಹೋಗಿ ಅಧ್ಯಯನ ನಡೆಸಿಕೊಂಡು ಬನ್ನಿ. ಅದಕ್ಕಿಂತ ಉತ್ತಮ ಮಾದರಿಯಲ್ಲಿ ನಾವೇನು ಮಾಡಬಹುದು ಎಂಬ ಬಗ್ಗೆ ಮುಂದಿನ ಕ್ಯಾಬಿನೆಟ್ ಒಳಗೆ ವರದಿ ಸಿದ್ಧಪಡಿಸಿ ಎಂದು ಸಿಎಂ ಡಿ.ಕೆ. ಶಿವಕುಮಾರ್ ಆದೇಶಿಸಿದರು.

ಮನೆ ಅರ್ಹರಿಗೋ, ಹಣವಿದ್ದವರಿಗೋ?

ಮನೆ ಹರಾಜು ಹಾಕಿದರೆ ಅರ್ಹರಿಗೆ ಸಿಗುತ್ತದೋ, ಹಣವಿದ್ದವರಿಗೆ ಸಿಗುತ್ತದೋ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದ ಮುಖ್ಯಮಂತ್ರಿಗಳು, ಲಾಟರಿ ಮೂಲಕ ಮನೆ ಹಂಚುತ್ತೀರೋ, ಹರಾಜಿನ ಮೂಲಕ ಹಂಚುತ್ತೀರೋ ಎನ್ನುವುದಕ್ಕಿಂತ ನೈಜ ಅರ್ಹರಿಗೆ ಮನೆ ಸಿಗಬೇಕು. ಇದಕ್ಕೇನು ವ್ಯವಸ್ಥೆ ಮಾಡಿದ್ದೀರಿ ಎನ್ನುವ ವಿವರ ಸಲ್ಲಿಸಿ ಎಂದರು.

ಸಂಪುಟ ಶೀಘ್ರ ವಿಸ್ತರಣೆ: ಪಾಟೀಲ

• **ಕಲಬುರಗಿ:** ಕ್ಯಾಬಿನೆಟ್ ವಿಸ್ತರಣೆ ಬಗ್ಗೆ ಅಧಿಕೃತವಾಗಿ ಘೋಷಿಸಲು ನಾನೇನು ಹೈಕಮಾಂಡ್ ಅಲ್ಲ, ಆದರೆ, ಮುಖ್ಯಮಂತ್ರಿಗಳು, ಮಾಜಿ ಮುಖ್ಯಮಂತ್ರಿಗಳು ಈ ಕುರಿತು ಹೈಕಮಾಂಡ್ ನಾಯಕರ ಜತೆ ಮಾತುಕತೆ ನಡೆಸಲಿದ್ದಾರೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ರಾಜ್ಯ ರಾಜಕಾರಣದ ಬೆಳವಣಿಗೆಗಳ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯಸಭೆ, ವಿಧಾನ ಪರಿಷತ್ ಚುನಾವಣೆಗಳ ಪ್ರಕ್ರಿಯೆ ಮುಗಿದ ಬಳಿಕ ಈ ಕುರಿತು ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಿಎಂ ಅವರೇ ಹೇಳಿದ್ದಾರೆ. ಈಗ ಚುನಾವಣೆ ಮುಗಿದಿದೆ. ಹಾಗಾಗಿ, ಶೀಘ್ರದಲ್ಲೇ ರಾಜ್ಯ ಸಚಿವ ಸಂಪುಟ ವಿಸ್ತರಣೆ ಆಗಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರ ನೇಮಕವೂ ಪ್ರಕಟಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

ರಾಮ ಮಂದಿರ ಸ್ಫೋಟಕ್ಕೆ ಉಗ್ರ ಸಂಚು

• **ದಾವಣಗೆರೆ:** ಜಿಲ್ಲೆಯ ಹರಿಹರ ತಾಲೂಕು ಬನ್ನಿಕೋಡು ಗ್ರಾಮದಲ್ಲಿ ಬಂಧಿತನಾಗಿದ್ದ ಶಂಕಿತ ಉಗ್ರ ಸೊಹೇಲ್, ತಾನು ಅಯೋಧ್ಯೆ ರಾಮ ಮಂದಿರವನ್ನು ಬಾಂಬ್ ಇಟ್ಟು ಸ್ಫೋಟಿಸಲು ಬಯಸುವುದೂ ಸೇರಿದಂತೆ ದೇಶದ ರಕ್ಷಣೆಗೆ ಧಕ್ಕೆ ತರುವಂತಹ ಆಡಿಯೋ, ಸಂದೇಶಗಳನ್ನು ಪಾಕಿಸ್ತಾನ ಮೂಲದ ರಾಣಾ ಎಂಬ ವ್ಯಕ್ತಿಯೊಂದಿಗೆ ವಿನಿಮಯ ಮಾಡಿಕೊಂಡಿದ್ದ ಸಂಗತಿ ಹೊರ ಬಿದ್ದಿದೆ. ಉತ್ತರ ಪ್ರದೇಶದ ಸಹರಾನ್‌ಪುರ ಜಿಲ್ಲೆ ಲಖ್ನೋಟಿ ಗ್ರಾಮದವನಾದ ಶಂಕಿತ ಉಗ್ರ ಸೊಹೇಲ್(20 ವರ್ಷ) ಮೊಬೈಲ್ ಜಾಡು ಹಿಡಿದು ಹೋದ ತನಿಖಾಧಿಕಾರಿ, ಪೊಲೀಸ್ ಅಧಿಕಾರಿಗಳು ಬೆಚ್ಚಿ ಬೀಳುವಂತಹ ಆಘಾತಕಾರಿ ಹಿಂದಿ-ಉರ್ದು ಮಿಶ್ರಿತ ಆಡಿಯೋ, ಮೆಸೇಜ್, ಕೈಗಳಲ್ಲಿ ಶಸ್ತ್ರಾಸ್ತ್ರಗಳನ್ನು ಹಿಡಿದ ಫೋಟೋ, ಉಗ್ರರನ್ನು ಹೋಲುವ ಚಿತ್ರಗಳು ಹಾಗೂ ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಹದಗೆಡಿಸುವ, ಕೋಮು ಸೌಹಾರ್ದಕ್ಕೆ ಧಕ್ಕೆ ತರುವಂತಹ, ಭಯೋತ್ಪಾದನಾ ಕೃತ್ಯ ನಡೆಸಲು ಸಂಚು ರೂಪಿಸುವಂತಹ ವಿಚಾರ ಹೊಂದಿದ್ದ ಬಗ್ಗೆ ಸುಳಿವು ಸಿಕ್ಕಿದೆ ಎನ್ನಲಾಗಿದೆ.

ಸಿಎಂಗೆ ಅಭಿನಂದನೆ

ಸಂಸದ ಬಿ. ವೈ. ರಾಘವೇಂದ್ರ ನೇತೃತ್ವದ ಶಿವಮೊಗ್ಗ ಜನಪ್ರತಿನಿಧಿಗಳು ಹಾಗೂ ವಕೀಲರ ನಿಯೋಗವು ಬುಧವಾರ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಭೇಟಿ ಮಾಡಿ ಅಭಿನಂದಿಸಿ, ಸಂಚಾರಿ ಪೀಠ ಸ್ಥಾಪನೆ ಕುರಿತಂತೆ ಮನವಿ ಸಲ್ಲಿಸಿತು. ಶಾಸಕರಾದ ಚನ್ನಬಸಪ್ಪ, ಬೇಲೂರು ಗೋಪಾಲಕೃಷ್ಣ ಧನರಾಜ್ ಸರ್ಜಿ,ಡಿ.ಎಸ್. ಅರುಣ್, ಶಿವಮೊಗ್ಗ ವಕೀಲರ ಸಂಘದ ಅಧ್ಯಕ್ಷ ರಾಘವೇಂದ್ರ ಸ್ವಾಮಿ, ಬಸಪ್ಪಗೌಡ ಮತ್ತಿತರರು ಜತೆಗಿದ್ದರು.

ವಾರ್ತಾ ಆಯುಕ್ತರಾಗಿ ಅನುಚೇತ್

• **ಬೆಂಗಳೂರು:** ಹಿರಿಯ ಐಪಿಎಸ್ ಅಧಿಕಾರಿ ಎಂ.ಎನ್.ಅನುಚೇತ್ ಅವರನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾಗಿ ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

2009ನೇ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಪಿಎಸ್ ಅಧಿಕಾರಿಯಾಗಿರುವ ಅನುಚೇತ್ ಅವರು ಇದುವರೆಗೆ ಪೊಲೀಸ್ ನೇಮಕಾತಿ ವಿಭಾಗದ ಡಿಐಜಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಇದೀಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಹೇಮಂತ್ ಎಂ. ನಿಂಬಾಳ್ಕರ್ ಅವರ ಸ್ಥಾನಕ್ಕೆ ಅವರನ್ನು ವರ್ಗಾಯಿಸಿ ನಿಯೋಜಿಸಲಾಗಿದೆ. ಇದರೊಂದಿಗೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಹುದ್ದೆಯ ಹೆಚ್ಚುವರಿ ಜವಾಬ್ದಾರಿಯನ್ನು ಅನುಚೇತ್ ಅವರಿಗೆ ವಹಿಸಲಾಗಿದೆ. ಈ ಹುದ್ದೆಯನ್ನು ನಿರ್ವಹಿಸುತ್ತಿದ್ದ ಕುಮಾರ್ ಟಿಎಚ್‌ಎಂ ಅವರ ವರ್ಗಾವಣೆಯ ಹಿನ್ನೆಲೆಯಲ್ಲಿ ಈ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ.

ಹಾವು ಕಚ್ಚಿ ಬಾಲಕ ಸಾವು



• **ಬನವಾಸಿ:** ವಿಷಪೂರಿತ ಹಾವು ಕಚ್ಚಿ 12 ವರ್ಷದ ವಿದ್ಯಾರ್ಥಿಯೊಬ್ಬ ಮೃತಪಟ್ಟ ಘಟನೆ ಸಮೀಪದ ಸಹಸ್ರಳ್ಳಿ ಗ್ರಾಮದಲ್ಲಿ ಬುಧವಾರ ಬೆಳಗ್ಗೆ ನಡೆದಿದೆ. 6ನೇ ತರಗತಿ ವ್ಯಾಸಂಗ ಮಾಡುತ್ತಿದ್ದ ಮಿಥುನ್ ಮಹೇಶ್ವರ ನಾಯ್ಕ (12) ಮೃತ ಬಾಲಕ. ಆತನ ಸಹೋದರಿ ದೀಕ್ಷಾಳಿಗೂ ಹಾವು ಕಚ್ಚಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ಆಕೆಯ ಆರೋಗ್ಯ ಸ್ಥಿರವಾಗಿದೆ ಎಂದು ತಿಳಿದುಬಂದಿದೆ. ಮೃತ ಬಾಲಕ ಮಿಥುನ್ ಮತ್ತು ಸಹೋದರಿ ದೀಕ್ಷಾ ಮಲಗಿದ್ದ ವೇಳೆ ಹಾವು ಕಚ್ಚಿದ್ದು, ಇಬ್ಬರೂ ಏಕಾಏಕಿ ವಾಂತಿ ಮಾಡ ತೊಡಗಿದ್ದಾರೆ. ಇದನ್ನು ಗಮನಿಸಿದ ಪೋಷಕರು ಮಕ್ಕಳ ಆರೋಗ್ಯದಲ್ಲಿ ಏರುಪೇರಾಗಿರುವುದನ್ನು ಗಮನಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ವೇಳೆಗಾಗಲೇ ಬಾಲಕ ಮೃತಪಟ್ಟಿದ್ದಾನೆ.

ಕಿರುಸುದ್ದಿ

ಪಕ್ಷದ ಸಿದ್ಧಾಂತ ವಿರುದ್ಧ ನಡೆದರೆ ಕ್ರಮ: ಹರಿಪ್ರಸಾದ್

• **ಹುಬ್ಬಳ್ಳಿ:** ಕಾಂಗ್ರೆಸ್ ಪಕ್ಷ ಸಿದ್ಧಾಂತಕ್ಕೆ ಬದ್ಧವಾಗಿದೆ. ಅದಕ್ಕೆ ವಿರುದ್ಧವಾಗಿದ್ದರೆ ನಾವು ಹೋರಾಟ ಮಾಡುತ್ತೇವೆ. ಪಕ್ಷದ ಸಿದ್ಧಾಂತ ವಿರುದ್ಧ ನಡೆದುಕೊಳ್ಳುವವರು ಯಾರೇ ಇದ್ದರೂ ಅವರಿಗೆ ಪಕ್ಷದಲ್ಲಿ ಅವಕಾಶವಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ ಹೇಳಿದರು. ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾಂಗ್ರೆಸ್ ಯಾವತ್ತು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಸಿದ್ಧಾಂತ ಒಪ್ಪಲ್ಲ. ದೇಶದ ತ್ರಿವರ್ಣ ಧ್ವಜ, ಜಾತ್ಯತೀತ ಹಾಗೂ ಬಹುತ್ವದ ರಾಷ್ಟ್ರ ವಿರುದ್ಧವಾಗಿ ಅವರು ಇದ್ದಾರೆ. ಆರ್‌ಎಸ್‌ಎಸ್ ಕೋಟ್ಯಾಂತರ ರೂಪಾಯಿ ಸಂಗ್ರಹ ಮಾಡುತ್ತದೆ. ಭಾರತ ಸಂವಿಧಾನದಲ್ಲಿ ಯಾವುದೇ ಸಂಘ, ಸಂಸ್ಥೆಯಾದರೂ ನೋಂದಣಿ ಮಾಡಿಕೊಳ್ಳಬೇಕು. ಆರ್‌ಎಸ್‌ಎಸ್ ಅದಕ್ಕೆ ಹೊರತಾಗಿಲ್ಲ ಎಂದರು. ಬಿಜೆಪಿ ಅವರು 2014ರಲ್ಲಿ ಅಧಿಕಾರಕ್ಕೆ ಬಂದಾಗ ಅಚ್ಛೇ ದಿನ್ ಎಂದು ಹೇಳಿದ್ದರೂ, ಈಗ ರಾಹು ಕಾಲ ದೇಶದಲ್ಲಿ ಬಂದಿದೆ. ಕೇಂದ್ರ ಸರ್ಕಾರದ ಯೋಜನೆಗಳು ಒಂದು ವರ್ಗಕ್ಕೆ ಮಾತ್ರ ಸೀಮಿತವಾಗಿವೆ ಎಂದು ಕಿಡಿಕಾರಿದರು.

ಪ್ರತಿ ಎಕರೆಗೆ 2.70 ಕೋಟಿ ರೂ. ಪರಿಹಾರ ನಿಗದಿ

• **ಬೆಂಗಳೂರು:** ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣ ಹೋಬಳಿಯ ಗೋಕರೆಬಚ್ಚೇನಹಳ್ಳಿ ಮತ್ತು ಹ್ಯಾಡಾಳ ಗ್ರಾಮದಲ್ಲಿ ಕೈಗಾರಿಕಾ ಉದ್ದೇಶಕ್ಕೆ ರೈತರು ಸ್ವಯಂಪ್ರೇರಿತವಾಗಿ ಬಿಟ್ಟುಕೊಡಲು ಒಪ್ಪಿರುವ 120 ಎಕರೆ ಜಮೀನಿಗೆ ಪ್ರತಿ ಎಕರೆಗೆ 2.70 ಕೋಟಿ ರೂ. ಪರಿಹಾರ ಧನದರ ನಿರ್ಧಾರಣಾ ಸಲಹಾ ಸಮಿತಿ ನಿಗದಿಪಡಿಸಿ ಕೆಐಎಡಿಬಿಗೆ ಶಿಫಾರಸು ಮಾಡಿದೆ. ಕೆಐಎಡಿಬಿ ವಿಶೇಷ ಜಿಲ್ಲಾಧಿಕಾರಿ ಎ.ಎನ್.ರಘುನಂದನ್ ಅಧ್ಯಕ್ಷತೆ ಬುಧವಾರ ನಡೆದ ಅಧಿಕಾರಿಗಳು ಹಾಗೂ ಭೂಮಾಲೀಕರ ಜಂಟಿ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ. ಈ ತೀರ್ಮಾನವನ್ನು ಕೆಐಎಡಿಬಿ ಮಂಡಳಿಯ ಅನುಮೋದನೆಗಾಗಿ ಕಳುಹಿಸಿಕೊಡಲಾಗುವುದು. ಪರಿಹಾರವನ್ನು ಹಣದ ರೂಪದಲ್ಲಿ ತೆಗೆದುಕೊಳ್ಳಲು ಇಷ್ಟವಿಲ್ಲದಿದ್ದರೆ ಪ್ರತೀ ಎಕರೆ ಕೃಷಿ ಜಮೀನಿಗೆ ಅಭಿವೃದ್ಧಿ ಪಡಿಸಿದ ಕೈಗಾರಿಕಾ ಬಡಾವಣೆಯಲ್ಲಿ 10,781 ಚದರ ಅಡಿ ಜಾಗವನ್ನು ಪಡೆದುಕೊಳ್ಳುವುದಕ್ಕೂ ಅವಕಾಶ ನೀಡಲಾಗಿದೆ ಎಂದು ರಘುನಂದನ್ ತಿಳಿಸಿದ್ದಾರೆ. ಕೆಐಎಡಿಬಿ ಭೂಸ್ವಾಧೀನಾಧಿಕಾರಿ ಸೂರಜ್ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಇದ್ದರು.

ಕಾರ್ಮಿಕ ಆತ್ಮಹತ್ಯೆ: ಕಲ್ಲು ತೂರಾಟ

• **ಬೆಳಗಾವಿ:** ಇಲ್ಲಿನ ಪ್ರಸಿದ್ಧ ಹಿಂಡಾಲ್ಕೋ ಕಂಪನಿ ಆವರಣದಲ್ಲಿ ಯುವ ಕಾರ್ಮಿಕನೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬುಧವಾರ ಬೆಳಗ್ಗೆ ಬಂದಿದ್ದು, ಈ ಘಟನೆ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ಸಾರ್ವಜನಿಕರು ಕಂಪನಿ ಕಚೇರಿ ಮೇಲೆ ಕಲ್ಲು ತೂರಾಟ ನಡೆಸಿದ ಪರಿಣಾಮ ಪ್ರದೇಶದಲ್ಲಿ ತೀವ್ರ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಮೃತ ಯುವಕನನ್ನು ಶಂಕರ ತಳವಾರ (24) ಎಂದು ಗುರುತಿಸಲಾಗಿದೆ. ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಶಂಕರ್, ಕೆಲ ದಿನಗಳಿಂದ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಕೊನೆಗೆ ಆತ್ಮಹತ್ಯೆಗೆ ಶರಣಾಗಿದ್ದಾನೆ ಎನ್ನಲಾಗಿದೆ.

ವಾಟ್ಸ್ಆ್ಯಪ್ ಸ್ಟೇಟಸ್‌ನಲ್ಲಿ ಡೆತ್‌ನೋಟ್: ಆತ್ಮಹತ್ಯೆಗೂ ಮುನ್ನ ಶಂಕರ ತನ್ನ ವಾಟ್ಸ್ಆ್ಯಪ್ ಸ್ಟೇಟಸ್‌ನಲ್ಲಿ ಡೆತ್ ನೋಟ್ ಮಾದರಿಯ ಸಂದೇಶವೊಂದನ್ನು ಪ್ರಕಟಿಸಿದ್ದಾನೆ ಎಂದು ತಿಳಿದುಬಂದಿದೆ. ಆ ಸಂದೇಶದಲ್ಲಿ ಕಂಪನಿಯಲ್ಲಿ ಹಳೆಯ ಕಾರ್ಮಿಕರನ್ನು ತೆಗೆದು ಹೊಸ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದ್ದು, ಗುತ್ತಿಗೆದಾರ ಸ್ಯಾಮುಯೆಲ್ ನಂದಿ ಅವರಿಂದ ತನಗೆ ತೀವ್ರ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದ್ದಾನೆ ಎನ್ನಲಾಗಿದೆ.

ಇಂದಿನ ಕಾರ್ಯಕ್ರಮದಲ್ಲಿ 3 ರಾಜ್ಯದ ಸಿಎಂ, ಕೇಂದ್ರ ಸಚಿವರು ಭಾಗಿ

ಟಿಬಿ ಡ್ಯಾಂ ಗೇಟ್‌ಗೆ ಚಾಲನೆ

• **ಕೊಪ್ಪಳ:** ಕಲ್ಯಾಣ ಕರ್ನಾಟಕದ ಜೀವನಾಡಿ ತುಂಗಭದ್ರಾ ಜಲಾಶಯದ 33 ಕ್ರಸ್ಟ್‌ಗೇಟ್ ಲೋಕಾರ್ಪಣೆ ಗುರುವಾರ ಜರುಗಲಿದ್ದು, ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯದ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ.

ನೂತನವಾಗಿ ಅಳವಡಿಸಿದ 33 ಸ್ಲಿಪ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಗುರುವಾರ ಬೆಳಗ್ಗೆ 11 ಗಂಟೆಗೆ ನಡೆಯಲಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಸ್ಲಿಪ್ ವೇ ಗೇಟುಗಳನ್ನು ಲೋಕಾರ್ಪಣೆಗೊಳಿಸುವರು.

ಜಲಸಂಪನ್ಮೂಲ ಇಲಾಖೆ ವತಿಯಿಂದ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸರ್ಕಾರಿ ಹೈಸ್ಕೂಲ್ ಗ್ರೌಂಡ್‌ನಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್.ಪಾಟೀಲ, ಆಂಧ್ರಪ್ರದೇಶ ಮುಖ್ಯಮಂತ್ರಿಗಳಾದ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿಗಳಾದ ಎ.ರೇವಂತ್ ರೆಡ್ಡಿ, ಕರ್ನಾಟಕ ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ್, ಆಂಧ್ರಪ್ರದೇಶ ಉಪ ಮುಖ್ಯಮಂತ್ರಿಗಳಾದ ಕೆ.ಪವನ್ ಕಲ್ಯಾಣ್, ತೆಲಂಗಾಣ ಉಪ ಮುಖ್ಯಮಂತ್ರಿಗಳಾದ ಮಲ್ಲು ಭಟ್ಟಿ ವಿಕ್ರಮಾರ್ಕ, ಭಾರತ ಸರ್ಕಾರದ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರಾದ ವಿ.ಸೋಮಣ್ಣ, ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವರಾದ ರಾಜ ಭೂಷಣ್ ಚೌಧರಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮವು ಶಾಂತಿಯುತವಾಗಿ ನಡೆಯುವ ದಿಶೆಯಲ್ಲಿ ಭದ್ರತೆಗಾಗಿ ಅಗತ್ಯ ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಆರು ಜನ ಎಸ್‌ಪಿ, 25 ಜನ ಡಿವೈಎಸ್ಪಿ, 25ಕ್ಕೂ ಹೆಚ್ಚು ಜನ ಸಿಪಿಐ ಮತ್ತು ಪಿಎಸ್‌ಐ ಹಾಗೂ ನೂರಾರು ಸಂಖ್ಯೆಯಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಕೆಎಸ್‌ಆರ್‌ಪಿ ಸೇರಿದಂತೆ ವಿವಿಧ ಪೊಲೀಸ್ ತುಕಡಿಗಳ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ. 150 ಬಸ್‌ಗಳಿಗೆ ಹಾಗೂ 250ಕ್ಕೂ ಹೆಚ್ಚು ಬೇರೆ ಬೇರೆ ವಾಹನಗಳಿಗೆ ಬೇರೆ ಬೇರೆ ಕಡೆಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

ನವಲಿ ಸಮಾನಾಂತರ ಜಲಾಶಯ ಚರ್ಚೆ ಸಾಧ್ಯತೆ

ಇದೇ ಮೊದಲ ಬಾರಿಗೆ ಈ ಮೂರು ಮುಖ್ಯಮಂತ್ರಿಗಳು ಒಂದೆಡೆ ಸೇರಲಿದ್ದು, ನವಲಿ ಸಮಾನಾಂತರ ಜಲಾಶಯ ನಿರ್ಮಾಣ ವಿಷಯ ಸೇರಿ ಹಲವು ನೀರಾವರಿ ಸಮಸ್ಯೆ ಗಳಿಗೆ ಪರಿಹಾರ ಸಿಗುವ ಸಾಧ್ಯತೆ ಇದೆ. ತುಂಗಭದ್ರಾ ಜಲಾಶಯದಲ್ಲಿ 32 ಟಿಎಂಸಿಯಷ್ಟು ಹೂಳು ತುಂಬಿದ್ದು, ಹೂಳೆತ್ತುವ ಬಗ್ಗೆಯೂ ಕೂಡ ಚರ್ಚೆಯಾಗಲಿದೆ.

ಶಾಲಾ -ಕಾಲೇಜಿಗೆ ರಜೆ

ಮುನಿರಾಬಾದ್ ಸರ್ಕಾರಿ ಶಾಲಾ ಮೈದಾನದಲ್ಲಿ ಕಾರ್ಯಕ್ರಮ ಜರುಗಲಿದ್ದು, ಸರ್ಕಾರಿ ಶಾಲಾ, ಕಾಲೇಜಿಗೆ ರಜೆ ಘೋಷಿಸಲಾಗಿದೆ. ಇನ್ನುಳಿದಂತೆ ಮುನಿರಾಬಾದ್‌ನಲ್ಲಿ ಇರುವ ಇತರೆ ಶಾಲೆಗಳಿಗೂ ರಜೆ ಘೋಷಣೆಯಾಗಿದೆ. ಕಾರ್ಯಕ್ರಮಕ್ಕೆ ಹಲವು ಗಣ್ಯರು ಆಗಮಿಸುವುದರಿಂದಾಗಿ ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿದೆ.

ಖಾತೆಯೇ ಇಲ್ಲದೆ ಕೋಟ್ಯಂತರ ಪಾವತಿ: ಆರೋಪ

ಗೃಹಲಕ್ಷ್ಮಿ ಹೆಸರಲ್ಲಿ ಲೂಟಿ: ಬಿವೈವಿ

• **ಬೆಂಗಳೂರು:** ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆ ಈಗ ರಾಜ್ಯದ ಇತಿಹಾಸದಲ್ಲೇ ಅತ್ಯಂತ ದೊಡ್ಡ ಹಗರಣವಾಗಿ ಮಾರ್ಪಟ್ಟಿದೆ.ಬ್ಯಾಂಕ್ ಖಾತೆಯೇ ಇಲ್ಲದ 23,262 ಜನರಿಗೆ ಬರೋಬ್ಬರಿ 46.52 ಕೋಟಿ ರೂ. ಪಾವತಿಯಾಗಿರುವುದು ಮತ್ತು 19,020 ಜನರಿಗೆ ಒಂದೇ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆಯಾಗಿರುವುದನ್ನು ಸ್ವತಃ ಸಿಎಜಿ ವರದಿಯೇ ಬಯಲಿಗೆಳೆದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಅವರು, 10 ಲಕ್ಷಕ್ಕೂ ಅಧಿಕ ಫಲಾನುಭವಿಗಳ ಖಾತೆಗಳು ನಿರಂತರವಾಗಿ ಬದಲಾಗುತ್ತಿರುವುದು ರಾಜ್ಯದ ಬಡ ಮಹಿಳೆಯರ ಹೆಸರಿನಲ್ಲಿ ನಡೆಯುತ್ತಿರುವ ಬೃಹತ್ ಲೂಟಿಗೆ ಸಾಕ್ಷಿಯಲ್ಲವೇ ಮುಖ್ಯಮಂತ್ರಿಗಳೇ ಎಂದು ಪ್ರಶ್ನಿಸಿದ್ದಾರೆ.

ಸ್ವತಃ ಸಿಎಜಿ ಕೇಳಿದರೂ ಬ್ಯಾಂಕ್ ಖಾತೆಗಳ ವಿವರ ನೀಡದೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮುಚ್ಚಿಡುತ್ತಿರುವುದಕ್ಕೆ ಕಾರಣವಾದರೂ ಏನು? ಈ ಹಗರಣದ ಬೇರುಗಳು ಈ ಕಾಂಗ್ರೆಸ್ ಸರ್ಕಾರದಲ್ಲಿ ಬಹಳ ಗಾಢವಾಗಿ ಹರಡಿಕೊಂಡಿರುವ ಸಂಶಯ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಇನ್ನೂ ಉತ್ತರ ನೀಡಿಲ್ಲ, ಬಡತಾಯಂದಿರಿಗೆ ನೀಡಬೇಕಾದ ಈ 5,000 ಕೋಟಿ ರೂ. ಎಲ್ಲಿ ಹೋಯಿತು? ಯಾರ ಜೇಬು ಸೇರಿತು ಎಂದು ಈ ಸರ್ಕಾರ ಉತ್ತರಿಸದ ಹಿನ್ನೆಲೆಯಲ್ಲಿ ಹೈಕೋರ್ಟ್ ಆಕ್ಷೇಪಿಸಿ ನೋಟಿಸ್ ಜಾರಿ ಮಾಡಿದೆ. ಹಗರಣಗಳ ಸರಮಾಲೆಯಾಗಿರುವ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರಕ್ಕೆ ಆಡಳಿತ ನಡೆಸುವ ಯಾವ ನೈತಿಕತೆಯೂ ಉಳಿದಿಲ್ಲ, ಮುಖ್ಯವಾಗಿ ಎಂದು ವಿಜಯೇಂದ್ರ ಟೀಕಿಸಿದ್ದಾರೆ.

ಭ್ರಷ್ಟಾಚಾರದ ಬಗ್ಗೆ ತನಿಖೆಯಾಗಲಿ

ಬಡವರ ಹೆಸರಿನಲ್ಲಿ ಕೋಟ್ಯಂತರ ರೂಪಾಯಿ ಲೂಟಿ ಹೊಡೆದಿರುವ ಗಂಭೀರ ಭ್ರಷ್ಟಾಚಾರದ ಬಗ್ಗೆ ತಕ್ಷಣ ಅತ್ಯಂತ ಪಾರದರ್ಶಕವಾಗಿ, ಉನ್ನತ ಮಟ್ಟದ ತನಿಖೆಯಾಗಬೇಕು ಮತ್ತು ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಲೇಬೇಕು ಎಂದು ಒತ್ತಾಯಿಸಿದ್ದಾರೆ.

ಮಾವು ಬೆಳೆಗಾರರಿಗೆ ನೆರವು: ಚೌಹಾಣ್

• **ಬೆಂಗಳೂರು:** ಹವಾಮಾನ ವೈಪರೀತ್ಯ ಹಾಗೂ ಬೆಲೆ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಗುರಿಯಾಗಿರುವ ರಾಜ್ಯದ ಮಾವು ಬೆಳೆಗಾರರಿಗೆ ಅನುಕೂಲವಾಗುವ ನಿರ್ಧಾರ ಕೈಗೊಳ್ಳುವುದಾಗಿ ಕೇಂದ್ರ ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಭರವಸೆ ನೀಡಿದ್ದಾರೆ.

ದಿಲ್ಲಿಯಲ್ಲಿ ಬುಧವಾರ ಸಂಜೆ ಚೌಹಾಣ್ ಅವರ ನಿವಾಸಕ್ಕೆ ತೆರಳಿ ಮಾವು ಬೆಳೆಗಾರರ ಸಂಕಷ್ಟದ ಬಗ್ಗೆ ಚರ್ಚೆ ನಡೆಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಹಾವೇರಿ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳಲ್ಲಿ ಮಾವು ಬೆಳೆಗಾರರು ಎದುರಿಸುತ್ತಿರುವ ಸಂಕಷ್ಟದ ಬಗ್ಗೆ ಅವರು ಕೃಷಿ ಸಚಿವರಿಗೆ ವಿವರಿಸಿದರು. ಕರ್ನಾಟಕವು ಅತಿ ಹೆಚ್ಚು ಮಾವು ಬೆಳೆಯುವ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯದಲ್ಲಿ ಸುಮಾರು 1.45 ಲಕ್ಷ ಹೆಕ್ಟೇರ್‌ಗಳಲ್ಲಿ ಮಾವು ಕೃಷಿ ಮಾಡಲಾಗುತ್ತಿದ್ದು, ಪ್ರಸಕ್ತ ಋತುವಿನಲ್ಲಿ ಸುಮಾರು 10 ಲಕ್ಷ ಮೆಟ್ರಿಕ್ ಟನ್ ಮಾವು ಬೆಳೆಯಲಾಗಿದೆ. ಆದರೆ, ಬೆಲೆ ಕುಸಿತ ಹಾಗೂ ಪ್ರತಿಕೂಲಕರ ಹವಾಮಾನದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಸಚಿವರು ಕೃಷಿ ಸಚಿವರ ಗಮನ ಸೆಳೆದರು.

> ಕೃಷಿ ಸಚಿವರ ಸಕಾರಾತ್ಮಕ ಸ್ಪಂದನೆಯಿಂದ ನನಗೆ ಬಹಳ ಸಂತೋಷವಾಗಿದೆ. ಅತ್ಯಂತ ಭರಿತವಾಗಿ ರೈತರ ಪರವಾಗಿ ನಿರ್ಧಾರ ಕೈಗೊಳ್ಳುವುದಾಗಿ ಹಾಗೂ ಬೆಂಬಲ ಬೆಲೆ ಘೋಷಣೆ ಮಾಡುವುದಾಗಿ ಭರವಸೆ ನೀಡಿದ್ದು ಸ್ವಾಗತಾರ್ಹ.
>
> ■ **ಎಚ್.ಡಿ.ಕುಮಾರಸ್ವಾಮಿ,** ಕೇಂದ್ರ ಸಚಿವ

ಬಿಡದಿಯಲ್ಲಿ ಜನರನ್ನು ಎದುರಿಸಲು ಭಯವೇ?: ರವಿ

• **ಚಿಕ್ಕಮಗಳೂರು:** ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಸಿಎಂಗೆ ಬಿಡದಿಯಲ್ಲೇ ಜನರನ್ನು ಎದುರಿಸಲು ಭಯವೇ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಪ್ರಶ್ನಿಸಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿ, ಒಬ್ಬ ಸಿಎಂ ಜನರಿಂದ ದೂರ ಉಳಿಯುತ್ತೇನೆ ಎಂದರೆ ಏನರ್ಥ, ಡಿಕೆಶಿ ಅವರಿಗೆ ಜನರ ಭಯವೇ, ಮತ್ತೇಕೆ ಬಿಡದಿಯ ರೈತರಿಂದ ಅವರು ದೂರ ಇದ್ದಾರೆ ಎಂದಿದ್ದಾರೆ. ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ರೈತ ಹೋರಾಟಕ್ಕೆ ನಾವು ರಾಜಕೀಯ ಬೆಂಬಲ ನೀಡುತ್ತಿದ್ದೇವೆ. ಇದು ರಾಜಕೀಯ ಹೋರಾಟವಾಗಿ ಪರಿವರ್ತನೆಗೊಂಡರೆ, ಆಗ ಮೂಲ ಹೋರಾಟಗಾರರು, ಮೂಲ ಸಮಸ್ಯೆ ಬದಿಗೆ ಸರಿಯುವಂತಾಗ ಬಹುದು. ಆ ರೀತಿ ಆಗ ಬಾರದು ಎನ್ನುವ ಕಾರಣದಿಂದ ರೈತರ ಹೋರಾಟಕ್ಕೆ ರಾಜಕೀಯ ಬೆಂಬಲ ನೀಡುತ್ತಿದ್ದೇವೆ ಎಂದರು.

ಇ-ಸ್ವತ್ತು ಕುರಿತ ಸಭೆಯಲ್ಲಿ ಉನ್ನತಾಧಿಕಾರಿಗಳಿಗೆ ಖಂಡ್ರೆ ಸೂಚನೆ

ದಾಖಲೆರಹಿತ ಮನೆಗೆ ನಿಯಮ ಸರಳೀಕರಣ

• **ಬೆಂಗಳೂರು:** ಗ್ರಾಮಠಾಣಾ ವ್ಯಾಪ್ತಿಯಲ್ಲಿ ದಾಖಲೆ ಇಲ್ಲದ ಹಳೆಯ ಮನೆಗಳಿಗೆ ಇ-ಸ್ವತ್ತು ನೀಡುವ ಸಂಬಂಧ ನಿಯಮಗಳಿಗೆ ತಿದ್ದುಪಡಿ ಮಾಡಲು ಸೂಚನೆ ನೀಡಲಾಗಿದೆ ಎಂದು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬುಧವಾರ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಇ-ಸ್ವತ್ತು ಕುರಿತಂತೆ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ರಾಜ್ಯದಲ್ಲಿ ಸುಮಾರು 65 ಲಕ್ಷ ಆಸ್ತಿಗಳು ಗ್ರಾಮಠಾಣಾ ವ್ಯಾಪ್ತಿಯಲ್ಲಿ ಬರುತ್ತವೆ. ಇದು ಅವರಿಗೆ ಪೂರ್ವಜರಿಂದ ಬಂದ ಬಳುವಳಿಯಾಗಿದ್ದು, ಕೆಲವರ ಬಳಿ ತಮ್ಮ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆ ಇಲ್ಲ, ಹೀಗಾಗಿ ಒಂದು ಬಾರಿಯ ಕ್ರಮವಾಗಿ ನಿಯಮಾವಳಿ ಸರಳೀಕರಣ ಮಾಡಿ, ಸಾರ್ವಜನಿಕರ ಆಕ್ಷೇಪಣೆ ಕರೆದು 100 ದಿನಗಳ ಒಳಗಾಗಿ ಗ್ರಾಮಠಾಣಾ ಆಸ್ತಿಗಳಿಗೆ ಸಮರೋಪಾದಿಯಲ್ಲಿ ಇ-ಖಾತಾ ವಿತರಿಸಲು ಕ್ರಮ ಜರುಗಿಸಲು ಸೂಚಿಸಲಾಗಿದೆ ಎಂದರು.

ಹೊಸದಾಗಿ 11ಬಿ ಅರ್ಜಿ ಸಲ್ಲಿಸಲು ಕಾಲಾವಕಾಶ ವಿಸ್ತರಣೆ: ನಮೂನೆ 11 ಬಿ ಯಲ್ಲಿ ಆಸ್ತಿಗಳಿಗೆ ಅರ್ಜಿ ಸಲ್ಲಿಸಲು, ಮುಂದಿನ ಸೆಪ್ಟೆಂಬರ್‌ವರೆಗೆ ಕಾಲಾವಕಾಶ ವಿಸ್ತರಿಸುವ ಬಗ್ಗೆ ಸಭೆಯಲ್ಲಿ ನಿರ್ಧರಿಸಲಾಗಿದ್ದು, ಗ್ರಾಮೀಣರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು. ಈವರೆಗೆ 10.16 ಲಕ್ಷ ಆಸ್ತಿಗಳಿಗೆ ಬಿ-ಖಾತಾ ನೀಡಲಾಗಿದೆ. ಇನ್ನೂ 90 ಲಕ್ಷ ಆಸ್ತಿಗಳಿಗೆ ಎ ಮತ್ತು ಬಿ-ಖಾತಾ ನೀಡಬೇಕಾಗಿದೆ ಎಂದರು.

ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಯಾವುದೇ ವಸತಿ ಬಡಾವಣೆಯಲ್ಲಿ ಸರ್ಕಾರಿ ಎ ಮತ್ತು ಬಿ ಖರಾಬು ಜಮೀನೂ ಬಳಸಿಕೊಂಡು ಲೇಔಟ್ ನಿರ್ಮಾಣ ಮಾಡಿದ್ದಾರೆ. ಅಂತಹ ಆಸ್ತಿಗಳಿಗೆ ಇ-ಸ್ವತ್ತು ನೀಡದಂತೆ ಸೂಚಿಸಲಾಗಿದೆ. ಇಂತಹ ಸ್ವತ್ತುಗಳನ್ನು ದಿಶಾಂಕ್ ಆ್ಯಪ್‌ನಲ್ಲಿ ಖರಾಬು ಇದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಬೇಕಾಗುತ್ತದೆ. ಹೀಗಾಗಿ ಕಂದಾಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅಧಿಕಾರಿಗಳ ಸಭೆ ಕರೆದು ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಒಟ್ಟು 5,928 ಗ್ರಾಮ ಪಂಚಾಯ್ತಿಗಳಿದ್ದು ಒಟ್ಟಾರೆ 1.50 ಕೋಟಿ ಆಸ್ತಿಗಳಿವೆ. ಈ ಪೈಕಿ ಈಗಾಗಲೇ 53.53 ಸ್ವತ್ತುಗಳಿಗೆ ಇ-ಸ್ವತ್ತು ನೀಡಲಾಗಿದೆ. ಉಳಿದ ಆಸ್ತಿಗಳಿಗೆ ಸಮರೋಪಾದಿಯಲ್ಲಿ ಇ-ಸ್ವತ್ತು ನೀಡಲು ಸೂಚಿಸಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ವಿಳಂಬವಾದರೆ ಪಿಡಿಒಗಳಿಗೆ ನೋಟಿಸ್: ಎಚ್ಚರಿಕೆ

ಇ-ಸ್ವತ್ತಿಗೆ ಅರ್ಜಿ ಸಲ್ಲಿಸಿ 15 ದಿನಕ್ಕಿಂತ ಹೆಚ್ಚು ವಿಳಂಬವಾಗಿದ್ದರೆ, ತಾಂತ್ರಿಕ ದೋಷ ಹೊರತುಪಡಿಸಿ, ಉದ್ದೇಶಪೂರ್ವಕವಾಗಿ ವಿಳಂಬ ಮಾಡಿದ್ದರೆ ಅಂತಹ ಪಿಡಿಒಗಳಿಗೆ ಕಾರಣ ಕೇಳಿ ನೋಟಿಸ್ ನೀಡಬೇಕು. ದಾಖಲೆ ಇಲ್ಲದೆ ಕೆಲವು ಪಿಡಿಒಗಳು ಇ-ಸ್ವತ್ತು ನೀಡುತ್ತಿರುವುದು ಕಂಡುಬಂದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಖಂಡ್ರೆ ಸ್ಪಷ್ಟಪಡಿಸಿದರು.

ಕೌಶಲ, ಸೃಜನಶೀಲತೆ, ನವೋದ್ಯಮದತ್ತ ಮುಖ ಮಾಡಿದ ಶಿಕ್ಷಣ ಕ್ಷೇತ್ರ | ನವೀನ ಆವಿಷ್ಕಾರಗಳ ಮೂಲಕ ಕಲಿಕೆ

ಶಿಕ್ಷಣ ಕ್ಷೇತ್ರದಲ್ಲಿ ಹೊಸ ಆಶಾಕಿರಣ ಮೂಡಿಸಿದ ಎಸ್‌ಟಿಇಎಎಂ

• ನಂದಿನಿ ಎನ್.

ದಿಗಂತ ವಿಶೇಷ

• **ಬೆಂಗಳೂರು:** ಬದಲಾಗುತ್ತಿರುವ ಜಾಗತಿಕ ಪರಿಸ್ಥಿತಿಯಲ್ಲಿ ಶಿಕ್ಷಣ ಕ್ಷೇತ್ರವು ಹೊಸ ರೂಪ ಪಡೆದುಕೊಳ್ಳುತ್ತಿದೆ. ಕೇವಲ ಪಠ್ಯಪುಸ್ತಕಗಳ ಜ್ಞಾನ ಮತ್ತು ಪರೀಕ್ಷಾ ಅಂಕಗಳಿಗೆ ಸೀಮಿತವಾಗಿದ್ದ ಶಿಕ್ಷಣ ವ್ಯವಸ್ಥೆ, ಈಗ ಕೌಶಲ ಸೃಜನಶೀಲತೆ ಮತ್ತು ನವೋದ್ಯಮದತ್ತ ಮುಖ ಮಾಡಿದೆ. ಈ ನಿಟ್ಟಿನಲ್ಲಿ ಸ್ಟೀಮ್ (ಎಸ್‌ಟಿಇಎಎಂ) ಶಿಕ್ಷಣ ರಾಜ್ಯದ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಆಶಾಕಿರಣ ಮೂಡಿಸಿದೆ.

ಸಾಂಪ್ರದಾಯಿಕ ಶಿಕ್ಷಣದಲ್ಲಿ ವಿದ್ಯಾರ್ಥಿಗಳು ಪಠ್ಯಪುಸ್ತಕಗಳಲ್ಲಿರುವ ವಿಷಯಗಳನ್ನು ಓದಿ ಪರೀಕ್ಷೆ ಬರೆಯುವ ಮಾದರಿ ಹೆಚ್ಚಾಗಿತ್ತು. ಆದರೆ, ಸ್ಟೀಮ್ ಶಿಕ್ಷಣದಲ್ಲಿ ವಿದ್ಯಾರ್ಥಿಗಳು ಕಲಿತ ವಿಷಯಗಳನ್ನು ನೈಜ ಜೀವನದಲ್ಲಿ ಹೇಗೆ ಬಳಸಬಹುದು ಎಂಬುದಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ವಿಜ್ಞಾನ ಪ್ರಯೋಗಗಳು, ರೋಬೋಟಿಕ್ಸ್, ಕೋಡಿಂಗ್, ವಿನ್ಯಾಸ ಚಿಂತನೆ, ಮಾದರಿ ನಿರ್ಮಾಣ, ಸಮಸ್ಯೆ ಪರಿಹಾರ ಕೌಶಲಗಳು ಹಾಗೂ ನವೀನ ಆವಿಷ್ಕಾರಗಳ ಮೂಲಕ ಕಲಿಕೆಯನ್ನು ಹೆಚ್ಚು ಆಸಕ್ತಿದಾಯಕ, ಪರಿಣಾಮಕಾರಿಯನ್ನಾಗಿ ಮಾಡಲಾಗುತ್ತದೆ.

ಅಲ್ಲದೇ, ಇಂದಿನ ಉದ್ಯೋಗ ಮಾರುಕಟ್ಟೆಯಲ್ಲಿ ಕೇವಲ ತಾಂತ್ರಿಕ ಜ್ಞಾನ ಸಾಕಾಗುವುದಿಲ್ಲ, ಹೊಸ ಆಲೋಚನೆಗಳು, ವಿನ್ಯಾಸ ಕೌಶಲ, ತಂಡದಲ್ಲಿ ಕೆಲಸ ಮಾಡುವ ಸಾಮರ್ಥ್ಯ ಮತ್ತು ಸಂವಹನ ಕೌಶಲಗಳೂ ಅಗತ್ಯ. ಈ ಎಲ್ಲ ಅಂಶಗಳನ್ನು ಸ್ಟೀಮ್ ಶಿಕ್ಷಣ ಸಮಗ್ರವಾಗಿ ಬೆಳೆಸುತ್ತದೆ.

ಪ್ರೌಢಶಾಲೆ ಹಂತದಲ್ಲಿ ಅಗತ್ಯವೇಕೆ?: ಪ್ರೌಢಶಾಲಾ ಹಂತವೇ ವಿದ್ಯಾರ್ಥಿಗಳ ಭವಿಷ್ಯದ ವೃತ್ತಿಜೀವನದ ದಿಕ್ಕು ನಿರ್ಧರಿಸುವ ಮಹತ್ವದ ಘಟ್ಟವಾಗಿದೆ. ಇದೇ ಸಮಯದಲ್ಲಿ ವಿದ್ಯಾರ್ಥಿಗಳು ವಿಜ್ಞಾನ, ವಾಣಿಜ್ಯ ಅಥವಾ ಕಲಾ ವಿಭಾಗಗಳತ್ತ ತಮ್ಮ ಆಸಕ್ತಿಯನ್ನು ಬೆಳೆಸಿಕೊಳ್ಳುತ್ತಾರೆ. ಸ್ಟೀಮ್ ಶಿಕ್ಷಣವು ವಿದ್ಯಾರ್ಥಿಗಳಿಗೆ ವಿವಿಧ ಕ್ಷೇತ್ರಗಳ ಪರಿಚಯ ನೀಡುವುದರ ಜತೆಗೆ ಅವರಲ್ಲಿರುವ ಪ್ರತಿಭೆ ಮತ್ತು ಆಸಕ್ತಿಗಳನ್ನು ಗುರುತಿಸಲು ನೆರವಾಗುತ್ತದೆ. ಇದರಿಂದ ವಿದ್ಯಾರ್ಥಿಗಳು ಕೇವಲ ವೈದ್ಯರು, ಇಂಜಿನಿಯರ್‌ಗಳು ಅಥವಾ ಸರ್ಕಾರಿ ಉದ್ಯೋಗಗಳ ಬಗ್ಗೆ ಮಾತ್ರ ಯೋಚಿಸದೆ ಕೃತಕ ಬುದ್ಧಿಮತ್ತೆ, ಡೇಟಾ ವಿಶ್ಲೇಷಣೆ, ರೋಬೋಟಿಕ್ಸ್, ಅನಿಮೇಷನ್, ಡಿಸೈನ್, ಗೇಮ್ ಡೆವಲಪ್ಮೆಂಟ್ ಹಾಗೂ ಸ್ಟಾರ್ಟ್‌ಅಪ್ ಉದ್ಯಮಗಳಂತಹ ಹೊಸ ಅವಕಾಶಗಳತ್ತ ಮುಖ ಮಾಡುವ ಸಾಧ್ಯತೆ ಹೆಚ್ಚುತ್ತದೆ.

ಭವಿಷ್ಯದ ಉದ್ಯೋಗಗಳಿಗೆ ಸಿದ್ಧತೆ: ಜಾಗತಿಕ ಮಟ್ಟದಲ್ಲಿ ಉದ್ಯೋಗ ಕ್ಷೇತ್ರ ವೇಗವಾಗಿ ಬದಲಾಗುತ್ತಿದೆ. ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ, ಸೈಬರ್ ಭದ್ರತೆ, ಡೇಟಾ ಸೈನ್ಸ್, ಹಸಿರು ತಂತ್ರಜ್ಞಾನ ಹಾಗೂ ಅಂತರಿಕ್ಷ ಸಂಶೋಧನೆ ಮುಂತಾದ ಕ್ಷೇತ್ರಗಳು ಮುಂದಿನ ದಶಕದಲ್ಲಿ ಪ್ರಮುಖ ಉದ್ಯೋಗ ಕ್ಷೇತ್ರಗಳಾಗಲಿವೆ. ಈ ಕ್ಷೇತ್ರಗಳಲ್ಲಿ ಯಶಸ್ಸು ಸಾಧಿಸಲು ಅಗತ್ಯವಾದ ಮೂಲಭೂತ ಕೌಶಲಗಳನ್ನು ಸ್ಟೀಮ್ ಶಿಕ್ಷಣದ ಮೂಲಕ ವಿದ್ಯಾರ್ಥಿಗಳು ಶಾಲಾ ಹಂತದಲ್ಲಿಯೇ ಕಲಿಯುವ ಅವಕಾಶ ಪಡೆಯಲಿದ್ದಾರೆ.

ಮಹತ್ವಾಕಾಂಕ್ಷಿ ಯೋಜನೆ

ವಿದ್ಯಾರ್ಥಿಗಳನ್ನು ಭವಿಷ್ಯದ ಜಾಗತಿಕ ಸ್ಪರ್ಧೆಗೆ ಸಜ್ಜುಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ (ಕೆಪಿಎಸ್) ಸೈನ್ಸ್, ಟೆಕ್ನಾಲಜಿ, ಇಂಜಿನಿಯರಿಂಗ್, ಆರ್ಟ್ಸ್ ಮತ್ತು ಮ್ಯಾಥಮೆಟಿಕ್ಸ್ (ಸ್ಟೀಮ್) ಶಿಕ್ಷಣವನ್ನು ಪರಿಚಯಿಸುತ್ತಿದ್ದು, ಇದು ಸರ್ಕಾರಿ ಶಾಲೆಗಳ ಶಿಕ್ಷಣದ ಗುಣಮಟ್ಟದಲ್ಲಿ ಮಹತ್ವದ ಬದಲಾವಣೆ ತರಲಿರುವ ಮಹತ್ವಾಕಾಂಕ್ಷಿ ಯೋಜನೆಯಾಗಿದೆ.

> ಶಿಕ್ಷಣವನ್ನು ಕೇವಲ ಪಠ್ಯಪುಸ್ತಕಗಳಿಗೆ ಸೀಮಿತಗೊಳಿಸದೆ, ಮಕ್ಕಳಲ್ಲಿ ಕುತೂಹಲ ಬೆಳೆಸುವ ಸ್ಟೀಮ್ ಶಿಕ್ಷಣ ಪದ್ಧತಿಯ ಮೂಲಕ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುತ್ತಿದೆ. ಇದರಿಂದ ಕೆಪಿಎಸ್ ಶಾಲೆಗಳಲ್ಲಿ ವಿದ್ಯಾರ್ಥಿಗಳ ನೋಂದಣಿ ಹೆಚ್ಚಾಗಲಿದ್ದು, ವಿದ್ಯಾರ್ಥಿಗಳಿಗೆ ಭವಿಷ್ಯದ ಉದ್ಯೋಗ ಮಾರುಕಟ್ಟೆಗೆ ಅಗತ್ಯವಾದ ಕೌಶಲಗಳನ್ನು ಬೆಳೆಸಿಕೊಳ್ಳಲು ನೆರವಾಗಲಿದೆ.
>
> ■ **ಸುರಳ್ಕರ್ ವಿಕಾಸ್ ಕಿಶೋರ್,** ಆಯುಕ್ತ, ಶಾಲಾ ಶಿಕ್ಷಣ ಇಲಾಖೆ

ಕುದುರೆ ವ್ಯಾಪಾರ ವಿಫಲ: ನಾಮಪತ್ರ ತಿರಸ್ಕಾರ

• **ಬೆಂಗಳೂರು:** ರಾಜ್ಯಸಭೆ ಚುನಾವಣೆಯಲ್ಲಿ ಕುದುರೆ ವ್ಯಾಪಾರದ ತಂತ್ರ ವಿಫಲವಾದ ಕಾರಣ ಬಿಜೆಪಿಯಿಂದ ನಾಮಪತ್ರ ತಿರಸ್ಕಾರದ ಕುತಂತ್ರ ಮಾಡಿದೆ ಎಂದು ತೆಲಂಗಾಣ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಮೀನಾಕ್ಷಿ ನಟರಾಜನ್ ಆರೋಪಿಸಿದರು.

ಮಧ್ಯಪ್ರದೇಶದ ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ನಾಮಪತ್ರ ತಿರಸ್ಕಾರಗೊಂಡ ಬಗ್ಗೆ ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ಬಿಜೆಪಿ 3ನೇ ಅಭ್ಯರ್ಥಿ ಕಣಕ್ಕಿಳಿಸಿದಾಗಲೇ, ಅವರು ಯಾವ ಹಂತಕ್ಕೆ ಇಳಿದು ಮೂರನೇ ಅಭ್ಯರ್ಥಿ ಗೆಲ್ಲಿಸಿಕೊಳ್ಳುತ್ತಾರೆ ಎಂಬ ಸ್ಪಷ್ಟತೆ ಸಿಕ್ಕಿತ್ತು ಎಂದು ಹೇಳಿದರು.

ನಾಮಪತ್ರ ಪರಿಶೀಲನೆ ಸಂದರ್ಭದಲ್ಲಿ ಆಕ್ಷೇಪಣೆ ವ್ಯಕ್ತಪಡಿಸಿ ತಿರಸ್ಕರಿಸಲಾಯಿತು. ಇದೇ ಸಮಯದಲ್ಲಿ ಜಾರ್ಖಂಡ್‌ನಲ್ಲಿ ರಾಜ್ಯಸಭೆಗೆ ಸ್ಪರ್ಧೆ ಮಾಡಿದ್ದ ಅಂಬಾನಿಗಳಿಗೆ ಆಪ್ತರಾದ ವ್ಯಕ್ತಿಯ ನಾಮಪತ್ರ ಸಲ್ಲಿಕೆ ವೇಳೆ ರಿಟರ್ನಿಂಗ್ ಅಧಿಕಾರಿ ನಾಮಪತ್ರದಲ್ಲಿನ ದೋಷ ಸರಿಪಡಿಸಿಕೊಳ್ಳಲು 24 ಗಂಟೆಗಳ ಕಾಲಾವಕಾಶ ನೀಡಿದ್ದರು. ಆದರೆ ಮಧ್ಯಪ್ರದೇಶದಲ್ಲಿ ಈ ಅವಕಾಶ ನೀಡಲಿಲ್ಲ ಎಂದು ದೂರಿದರು.

IN THE COURT OF ADDL CIVIL JUDGE AND JMFC AT KUNIGAL

FDP No. 04 / 2020

Petitioner: **V.C.Dasappa** S/o. Late Cheluvaiah, Aged about 61 years, R/at. Valagerepura Village, Amruthuru Hobli, Kunigal Taluk, Presently residing at #1042, AGBG Layout, Hesaraghatta Main Road, Near Sapthagiri Hospital, Chikkasandra, Bengaluru.

V/s

Respondent: V.C.Chaluvaiah and others,
1(b) Dasegowda @ Suri S/o. Late. V.C.Chaluvaiah @Gundaiah, Aged about 42 years, **1(c) Chaluvaraju** S/o. Late. V.C.Chaluvaiah @ Gundaiah, Aged about 40 years, R(b) and 1(c) are R/at. Valagerepura Village, Amruthuru Hobli, Kunigal Taluk.

NOTICE

Whereas, the Petitioners have filed the above Petition for passing a Final Decree terms of the Preliminary Judgment and Decree dated 15.06.2020 passed in O.S. No.52/2015 on the file of the Hon'ble Senior Civil Judge & JMFC, Kunigal, and for such other reliefs as this Hon'ble Court deems fit. Whereas, this Hon'ble Court has ordered issuance of summons to Respondents No.1(b) & 1(c) through Court process as well as by Speed Post. However, despite due attempts, the summons could not be served on the said respondents, as they have intentionally avoided service and remained unavailable at their addresses. Hence, by order of this Hon'ble Court, this notice is published by way of paper publication. The case is posted for hearing on 25.07.2026. Therefore, Respondents No.1(b) & 1(c) are hereby called upon to appear before this Hon'ble Court either in person or through their Advocate on 25.07.2026 11.00 A.M. Take notice that, if Respondents No.1(b) & 1(c) fail to appear before this Hon'ble Court on the said date, the matter will be proceeded with ex parte and appropriate orders shall be passed in accordance with law.

SUIT SCHEDULE PROPERTIES

1) Sy No.28/1 C2 measuring 0-01 guntas bounded by: E: Land of Shanaiah, W: Land of C.Dasappa, N: Land C.Dasappa, S: Land of C.Dasappa. (2) Sy No.28/2A2/2B-P1 measuring 0-05 guntas bounded by : E Land of V.A.Shanaiah, W : Land of C Dasappa, N : Land C.Dasappa, S : Land of C.Dasappa. (3) Sy No.28/2A2/3B. 1 measuring 0-05 guntas bounded by :E: Land of V.A.Shanaiah, W: Land of C Dasappa, N : Land C.Dasappa, S : Land of C.Dasappa. (4) Sy No.29/1A1 measuring 2 acre 21 guntas, bounded by : E : Land of V.S.Puttashamaiah, W: Land of V.S.Anantharamaiah, N: Land V.N.Bhadraiah, S: Land of Singaiah. (5) Sy No.29/1B2 measuring 0-03 guntas bounded by : E: Land of Eramma, W : Land of P.Bhojamma, N : Land Channaiah, S: Land of Dasappa. (6) Sy No.29/1A5b measuring 0-19 guntas bounded by : E : Land of Eramma, W: Land of P.Bhojamma, N: Land of Channaiah, S : Land of Dasappa. (7) Sy No.32/1 B measuring 0-04 guntas bounded by : E: Land of Nataraju, W: Land of Gowdaiah, N : Land of Gowdaiah, S : Land of Thippaiah. (8) Sy No.32/2 measuring 0-12 guntas bounded by : E:Land of Nataraju, W: Land of Gowdaiah, N : Land of Gowdaiah, S : Land of Thippaiah. (9) Sy No.71/23D measuring 0-03 guntas bounded by : E: Land of Shanaiah, W: Land of Bheemaiah, N : Land of C.Dasappa, S: Land of Singraiah. (10) Sy No.99/19 measuring 0-11 guntas bounded by : E : Land of doddamariyappa, W: Land of Thippaiah, N: Land of Nanjaiah, S: Land of Bheemaiah. (11) Sy No.101/14 measuring 0-27 guntas bounded by: E: Land of Venkataramaiah, W: Land of Narasamma, N : Land of P.Bhojamma, S: Road. (12) Sy No.102 measuring 0-16 guntas bounded by: E : Land of Sheshagirimurthy, W:Land of Venaktaramaiah, N: Land of Thippaiah, S : Land of Ramadas. (13) Sy No.105/1 measuring 1 acre 01 guntas bounded by:E: Land of Mariyanna, W: Land of C.Dasappa, N: Land of Kullegowda, S : Govt. Land. (14) Sy No. 105/33 measuring 0-18 guntas, bounded by : E: Land of Channaiah, W: Land of Chaluvaiah @ Gundaiah, N: Land of Kullegoda, S : Govt Land. (15) Sy No.105/5B measuring 0-13 guntas bounded by:E: Govt Chanel, W: Land of Channaiah, N: Land of Channaiah, S : Govt Land. (16) Sy No.28/2A3/3A measuring 0-09 guntas bounded by:E: Land of V.A.Shanaiah, W: Land of C.Dasappa, N : Land of C.Dasappa, S: land of C.Dasappa. (17) Sy No.29/2 measuring 0-31 guntas bounded by : E: Eramma, W: Land of Bhojamma, N: Land of Channaiah, S : Land of C. Dasappa. (18) House property bearing Katha No.37, Property No.32 (formed in Sy No.103/2A2 measuring 0-03.08 guntas and 44 x 79 feet respectively) bounded by :E: Land of C.Dasappa, W: Land of Sheshagirimurthy, N: Road and Land of Channaiah, S: Land of V.H.hanumanthaiah.

All are situated at Valagerepura Village, Amruthuru Hobli, Kunigal Taluk, Tumakuru Dist.

Given under my hand and seal of this court on this 24.06.2020

By order of this court: SHERISTEDAR
(ADM) SENOR CIVIL JUDGE
AND JMFC COURT

Advocate for Petitioner: H.B. Yogesha, Advocate, Kunigal

ಜಾಹೀರಾತಿಗಾಗಿ
ಸಂಪರ್ಕಿಸಿ:
9845438807,
9611755391

IN THE COURT OF THE SPECIAL ASSIT-COMMISSINER -3 AT TUMKUR

RA.(KUN) 991/2021

Appellant : K.N.Kambegowda.

V/s

Respondents :
1) The Thasildar and others
2(1) Narayana s/o Late. Naarasigowda R/o Kithnamangala, Kasaba Hobli Kunigal Taluk, **2(2) Kambegowda** s/o Late. Naarasigowda R/o Kithnamangala, KasabaHobli, Kunigal Taluk

PAPER DRAFT FOR PUBLICATION

Whereas the above Appellant has instituted the above Appeal against the Respondents for impugned orders passed by the 1st respondent 14/1995, measuring 05guntas pertining to the land bearing Sy. No, 169/6A1A situated at Kithnamangala, village Kasaba hobli, Kunigal Taluk Tumkur district. Take notice that you have been made Respondents No. 2(1).2(2) , in the above appeal and the same is posted for your appearance on 3-7-2026 at 3-00 P.M. before senior Asstt-commissioner court at Kunigal therefore you are hereby informed to appear on the said date filling with the case shall be heard and determined in your absence.

Given my hand and seal of the Court this the 16th day of June 2026.

by Order of the Court:Special Assistent commisioner-03 Tukur Sub Division

Advocate for Applicant: **Sri VASU.H.G,** B.A., LL.B. ,Advocate, Pvr law Associates ,behind nilcose coffe building, mandipete main road tumku

---

IN THE COURT OF THE SENIOR CIVIL JUDGE AND JMFC AT PAVAGADA

O.S NO. 239/2024

PLAINTIFFS: 1. Smt. Kavitha D/o Late Muddareddy, Aged about 46 years, **2. Shri. K.M NavindraReddy** s/o Late Late MuddaReddy, Aged about 48 years, Both are R/at Kurubarahalli Village, Naliganahalli Mazar, Kasaba Hobli, Pavagada Taluk, Tumakuru, District.

-VS-

DEFENDNATS: 1. Suryanarayana Reddy S/o Late Chikka Narayana Reddy, aged about 65 years, R/at Kurubarahalli Village, Naliganahalli Mazar, Kasaba Hobli, Pavagada Taluk, Tumakuru, District **2. S. Nagendran** S/o Late Subbaramaiah aged about 65 years, R/at 3rd cross, Gowripete, Kolar Town, Kolar Taluk & Dist **3. Smt, Vidya** w/o Agam Rajarao, aged about 60 years, R/at 1st Cross, Munneswara Nagara, Kolar Town, Kolar Talu.l & Dist. **4. Smt, Nagamma** w/o Late Patallappa, aged about 60 years, **5. S.D Siddappa** s/o Late Doddapaiah aged about 65 years R/at Kadu sonnappanahalla village, Kannur Post, Bidarahalli Hobali, Bengaluru uttara Taluk.

PAPER PUBLICATION

WHEREAS, the plaintiffs has filed the above suit against the defenadts for partition and separate possession with respect suit schedule properties. now the matter is set down for issue notice/ suit summons to defendant No.2 & 3 in the above case, and all or any interested persons or legal heirs whoever got any objection over the above said suit may appear in this case either as defendants and may prosecute the same on the date of hearing i.e. 18-07-2026 you are hereby called upon to appear before this Hon'ble court at 11.00 a.m. on the said date of hearing either in person or through your counsel. If you fail to appear this court, the matter will be heard and decided exparte.

Given under my hand and seal of the court this day of 23-06-2026.

SUIT SCHEDULE PROPERTIES

1. The Land bearing Sy.No.77/6 measuring total extent of 11 acres 07 guntas, out which 2 acres, situated at Naliganahalli village, Kasaba Hobali, Pavagada Taluk, Tumakur District which is bounded by East: Land of Thippanna and Gopala, West: Land of A. Anjinappa, North: Land of Mallappa, South: Land of Nagabhushna Reddy

2. The Land bearing old Sy.No.522 measuring total extent of 13 acres 18 guntas, the new SY. No.522/1 measuring 09 actres 16 guntas, and 522/2 measuring 3 acres 20 guntas, situated at Gaganandra village, Kasaba Hobali, Gowribidanur Taluk, Chikkaballapura District which both are common bounded by East: Road, West: Land of Nanjappa and Venkateshappa, North: Halla, South: Remaing land in same survey Number.

By order of court : Shirastedar
Senior Civil Judge and J.M.F.C. Pavagada
Advocate for plaintiffs : C.Vijaya

IN THE COURT OF THE HON'BLE DEPUTY DIRECTOR OF LAND RECORDS AT DODDABALLAPURA

APPEAL. NO. 524/2025-26

Between: Sri, Shivappa, and another,
..APPELLANTS,
And The Thasildar and others,
RESPONDENTS

NOTICE TO THE RESPONDENTS NO 3 TO 5

R3. Sri, Kariyallappa, S/o Late Kariyappa, Aged about 51 years, **R4. Smt, Shanthamma,** W/o Kariyallappa, Aged about 47 years, **R5. Sri, K.H. Ramappa,** S/o Late Huliyappa, Aged about 65 years, The Respondents No 3 to 5 are R/o Kalkunte agrahara Village, Anugondanahalli Hobli, Hosakote Taluk, Bangalore Rural District.

ಸೇನ್ ಹೇಳಿದ ಪಾಠ ಇಂದಿಗೂ ಪ್ರಸ್ತುತ. ಪ್ರಜಾಪ್ರಭುತ್ವ, ಮುಕ್ತ ಪತ್ರಿಕೋದ್ಯಮ ಮತ್ತು ಉತ್ತರದಾಯಿತ್ವ ಇರುವಲ್ಲಿ ಕ್ಷಾಮ ಸಂಭವಿಸುವುದಿಲ್ಲ. ಆದ್ದರಿಂದ ಸಿದ್ಧತೆ ಎಂಬುದು ಬರೀ ಗೋದಾಮಿನ ಲೆಕ್ಕವಲ್ಲ, ಅದು ರಾಜಕೀಯ ಇಚ್ಛಾಶಕ್ತಿ. ಬರಪೀಡಿತ ತಾಲ್ಲೂಕುಗಳ ಶೀಘ್ರ ಘೋಷಣೆ, ಪಡಿತರ ಸಮಯಕ್ಕೆ ಸರಿಯಾಗಿ ತಲುಪುವಂತೆ ನೋಡಿಕೊಳ್ಳುವುದು, ಕುಡಿಯುವ ನೀರಿನ ಟ್ಯಾಂಕರ್ ಜಾಲ, ಜಾನುವಾರು ಶಿಬಿರ, ಉದ್ಯೋಗ ಖಾತರಿಯಡಿ ಕೆಲಸದ ಭರವಸೆ ಹಾಗೂ ರೈತನ ಸಾಲ ಮನ್ನಾ ಇವೆಲ್ಲವೂ ಒಂದು ಸಾವನ್ನು ತಡೆಯುವ ಗೋಡೆಗಳು. ಈ ಗೋಡೆಗಳನ್ನು ಮಳೆ ಕೈಕೊಡುವ ಮೊದಲೇ ಕಟ್ಟಬೇಕು. ನಂತರ ಅಲ್ಲ. ಈಗಿನ ಸರ್ಕಾರಗಳು ಇದನ್ನು ಯಶಸ್ವಿಯಾಗಿ ಮಾಡುವ ಶಕ್ತಿಯನ್ನು ಹೊಂದಿವೆ ಎಂಬುದರಲ್ಲಿ ಅನುಮಾನವಿಲ್ಲ.

ಆದ್ದರಿಂದ 1943 ಬರೀ ಇತಿಹಾಸವಲ್ಲ, ಅದು ಒಂದು ಕನ್ನಡಿಯೂ ಹೌದು. ಜೊತೆಗೆ ಒಂದು ಎಚ್ಚರಿಕೆಯೂ ಹೌದು. ಚರ್ಚಿಲ್‌ರ ಪಾಪವನ್ನು ನೆನಪಿಸಿಕೊಳ್ಳುವುದು ದ್ವೇಷವಲ್ಲ, ಬದಲಿಗೆ ಅಂದು ನಮ್ಮ ಮೇಲೆ ಅವರು ನಡೆಸಿದ ಅಮಾನವೀಯ ಸವಾರಿಯ ಕರಾಳ ನೆನಪಷ್ಟೇ. ಹಾಗೆಯೇ, ತೀರಾ ಈಗ ಮಾನವತೆಯ ವಕ್ತಾರರಂತೆ ಮಾತನಾಡುವ ಈ ಪಾಶ್ಚಿಮಾತ್ಯರಿಗೆ ಆಗಾಗ ನೆನಪಿಸಬೇಕಾದ ಸಂಗತಿಯೂ ಹೌದು.

◆

ಬಂಗಾಳದಲ್ಲಿ ಮತ್ತೊಮ್ಮೆ 'ವಂದೇ ಮಾತರಂ ಕ್ಷಣ!'

ಡಾ. ಮನಮೋಹನ ವೈದ್ಯ,
ಅಖಿಲ ಭಾರತೀಯ ಕಾರ್ಯಕಾರಿಣಿ ಸದಸ್ಯ, ಆರೆಸ್ಸೆಸ್

ನನಗೆ ಡಿಸೆಂಬರ್ 2025 ಮತ್ತು ಫೆಬ್ರವರಿ 2026ರಲ್ಲಿ ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡುವ ಅವಕಾಶ ಲಭಿಸಿತ್ತು. ಅಲ್ಲಿನ ಹೆಚ್ಚಿನ ಜನರು ಆಡಳಿತ ಬದಲಾವಣೆಯನ್ನು ಅಪೇಕ್ಷಿಸುತ್ತಿರುವುದು ಅವರೊಡನೆಯ ಮಾತುಕತೆಯಿಂದ ಅರಿವಾಯಿತು. ಆದರೆ ಇಂತಹ ಬದಲಾವಣೆ ಸಾಧ್ಯವಾದೀತು ಎಂಬುದರ ಬಗ್ಗೆ ಹೆಚ್ಚಿನವರಿಗೆ ವಿಶ್ವಾಸವಿರಲಿಲ್ಲ. ಪರಿಸ್ಥಿತಿ ಹೇಗಿತ್ತೆಂದರೆ ಬದಲಾವಣೆ ನಡೆದರೆ ಅದುವೇ ಪವಾಡ ಎಂಬಂತಿತ್ತು. ಅಲ್ಲಿ ಮುಕ್ತ ಮತ್ತು ನ್ಯಾಯೋಚಿತ ಚುನಾವಣೆ ನಡೆಯಲು ಸೂಕ್ತವಾದ ವಾತಾವರಣ ನಿರ್ಮಿಸುವುದೇ ಅತೀ ದೊಡ್ಡ ಸವಾಲಾಗಿತ್ತು. ಆದರೆ ಚುನಾವಣಾ ಆಯೋಗ, ಸುಪ್ರೀಂಕೋರ್ಟ್, ಕೇಂದ್ರ ಗೃಹ ಸಚಿವಾಲಯ ಹಾಗೂ ಭದ್ರತಾ ಸಿಬ್ಬಂದಿಗಳ ಸಹಕಾರದಿಂದ ಇದು ಸಾಧ್ಯವಾಯಿತು.

ಈ ಬಾರಿ ಬಂಗಾಳದ ಜನತೆ ಭಾರಿ ಪ್ರಮಾಣದಲ್ಲಿ ಮತ ಚಲಾಯಿಸಿದರು. ಕಳೆದ ಐದು ಚುನಾವಣೆಗಳಲ್ಲಿ ಸರಾಸರಿ ಮತದಾನ ಶೇ.79.22 ಆಗಿದ್ದರೆ ಈ ಬಾರಿ ಶೇ. 92.47 ಮತದಾನವಾಯಿತು. ಜನರು ಈ ಚುನಾವಣೆಯು ಒಂದು ನಾಗರಿಕ ಸಮರ ಎಂದು ಪರಿಗಣಿಸಿ ತಮ್ಮ ಮತ ಚಲಾಯಿಸಿದರು. ಫೆಬ್ರವರಿಯಲ್ಲಿ ನಾನು ಹಿರಿಯ ಪತ್ರಕರ್ತೆಯೊಬ್ಬರನ್ನು ಕೋಲ್ಕತ್ತಾದಲ್ಲಿ ಭೇಟಿಯಾಗಿದ್ದೆ. ಆಕೆ ಎಡಪಂಥೀಯ ಧೋರಣೆಯವಳು. ಮೇ 29ರಂದು ಮತ್ತೆ ಆಕೆಯನ್ನು ಭೇಟಿಯಾಗುವ ಅವಕಾಶ ಸಿಕ್ಕಿತು. ತಾನು 18ರ ಹರೆಯದಲ್ಲಿ ಮೊತ್ತ ಮೊದಲಾಗಿ ಮತದಾನ ಮಾಡಿದ್ದಾಗಿಯೂ ಆ ಬಳಿಕ ಎರಡನೆಯದಾಗಿ ಈ ವರ್ಷ ಮತದಾನ ಮಾಡಿದ್ದಾಗಿಯೂ ಆಕೆ ನುಡಿದಳು. ಪ್ರಸ್ತುತ ಆಕೆಗೆ 46 ವರ್ಷ. ಬಂಗಾಳದ ಪರಿಸ್ಥಿತಿಯಿಂದ ರೋಸಿ ದೀರ್ಘ ಕಾಲ ಮತದಾನ ಮಾಡದಿದ್ದ ಆಕೆ ಈಗ ಬದಲಾವಣೆ ಬಯಸಿ ಮತದಾನ ಮಾಡಿದ್ದರು.

ಈ ಚುನಾವಣೆಯು ಕೇವಲ ಬಿಜೆಪಿಯ ಗೆಲುವಲ್ಲ, ಬಂಗಾಳದ ಜನರು ಭಾರತದ ಧಾರ್ಮಿಕ ಪರಂಪರೆ ಮತ್ತು ಹಿಂದುತ್ವದ ಸಿದ್ಧಾಂತವನ್ನು ಗೆಲ್ಲಿಸಿದ್ದಾರೆ. ಪಶ್ಚಿಮ ಬಂಗಾಳದ ಅಸ್ಮಿತೆಯು ಮತ್ತೊಮ್ಮೆ ಜಾಗೃತಗೊಂಡಂತಾಗಿದೆ. ಈ ಗೆಲುವು ಬಂಗಾಳದ ರಾಮಕೃಷ್ಣ ಪರಮಹಂಸ, ಸ್ವಾಮಿ ವಿವೇಕಾನಂದ, ಶ್ರೀ ಅರವಿಂದ, ಬಂಕಿಂಚಂದ್ರ, ರವೀಂದ್ರನಾಥ ಠಾಗೋರ್, ಜಗದೀಶ್‌ಚಂದ್ರ ಬೋಸ್ ಮುಂತಾದ ಮಹನೀಯರೆಲ್ಲರ ವಿಜಯವಾಗಿದೆ.

ಈ ಸಂದರ್ಭದಲ್ಲಿ ನನಗೆ ಬಂಗಾಳ ವಿಭಜನೆಯ ವಿರುದ್ಧ 1905ರಲ್ಲಿ ನಡೆದ ಕ್ರಾಂತಿಯ ನೆನಪಾಗುತ್ತದೆ. ಆ ಸಂದರ್ಭದಲ್ಲಿ ವಂದೇ ಮಾತರಂ ಘೋಷಣೆಯೊಂದಿಗೆ ಬಂಗಾಳದ ಜನರು ಸಿಡಿದೆದ್ದಿದ್ದರು. ಪ್ರತಿಭಟನೆಯ ಕಾವು ಎಷ್ಟಿತ್ತೆಂದರೆ ಬ್ರಿಟಿಷ್ ಆಡಳಿತವು ಬಂಗಾಳದ ವಿಭಜನೆಯನ್ನು 1911ರಲ್ಲಿ ಹಿಂತೆಗೆದುಕೊಳ್ಳಬೇಕಾಯಿತು. ಅದಷ್ಟೇ ಅಲ್ಲದೆ ಬ್ರಿಟಿಷರು ತಮ್ಮ ರಾಜಧಾನಿಯನ್ನು ಕೋಲ್ಕತ್ತಾದಿಂದ ದಿಲ್ಲಿಗೆ ಬದಲಾಯಿಸಿದರು. ಈ ಹಿನ್ನೆಲೆಯಲ್ಲಿ ನೋಡುವಾಗ ಈ ಬಾರಿಯ ಚುನಾವಣೆಯಲ್ಲಿ ಭಾರತದ ಧಾರ್ಮಿಕ ಪರಂಪರೆ ಮತ್ತು ಹಿಂದುತ್ವ ಸಿದ್ಧಾಂತಕ್ಕೆ ದೊರೆತ ವಿಜಯವು ಮತ್ತೊಂದು ''ವಂದೇಮಾತರಂ ಕ್ಷಣ'' ಎಂದು ಬಣ್ಣಿಸಬಹುದು.

ವಂದೇಮಾತರಂ ಗೀತೆಯನ್ನು ಬಂಕಿಮಚಂದ್ರ ಚಟ್ಟೋಪಾಧ್ಯಾಯರು 1875ರಲ್ಲಿ ತಮ್ಮ ಆನಂದಮಠ ಕಾದಂಬರಿಯಲ್ಲಿ ಬರೆದಿದ್ದರು. 1896ರಲ್ಲಿ ಅದನ್ನು ರವೀಂದ್ರನಾಥ ಠಾಗೋರ್ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ ಮೊತ್ತಮೊದಲು ಹಾಡಿದ್ದರು. ಅಲ್ಲಿಂದ ಬಳಿಕ ಬಂಗಾಳದ ವಿಭಜನೆಯ ವಿರುದ್ಧವಾಗಿ ಜನರು ಪ್ರತಿಭಟನೆಯ ಸಂದರ್ಭದಲ್ಲಿ ವಂದೇಮಾತರಂ ಗೀತೆಯನ್ನು ರಣಮಂತ್ರವನ್ನಾಗಿ ಮಾಡಿಕೊಂಡರು. ಇಡೀ ದೇಶವು ಬಂಗಾಳದ ವಿಭಜನೆಯ ವಿರುದ್ಧವಾಗಿ ಏಕತೆಯಿಂದ ಹೋರಾಡಿತು. ವಂದೇಮಾತರಂ ಜನರ ನರನಾಡಿಗಳಲ್ಲಿ ದೇಶಭಕ್ತಿಯ ಸೆಲೆಗಳನ್ನು ಎಬ್ಬಿಸಿತು. ಬಹಳಷ್ಟು ಕ್ರಾಂತಿಕಾರಿಗಳು ವಂದೇಮಾತರಂ ಘೋಷಣೆಯೊಂದಿಗೆ ಗಲ್ಲಿನ ಕುಣಿಕೆಗೆ ಕೊರಳೊಡ್ಡಿದರು.

1905ರ ಅಕ್ಟೋಬರ್ 16ರಂದು ಕಲ್ಕತ್ತಾದಲ್ಲಿ ನಡೆದ ರಕ್ಷಾಬಂಧನ ಕಾರ್ಯಕ್ರಮ ಐತಿಹಾಸಿಕವಾಗಿತ್ತು. ಸಾಧಾರಣವಾಗಿ ರಕ್ಷಾಬಂಧನವು ಶ್ರಾವಣಮಾಸದಲ್ಲಿ ಅಂದರೆ ಆಗಸ್ಟ್‌ನಲ್ಲಿ ಬರುತ್ತದೆ. ಆದರೆ ಬಂಗಾಳದ ವಿಭಜನೆಯನ್ನು ವಿರೋಧಿಸಿ ಅಕ್ಟೋಬರ್ 16ರಂದು ರಕ್ಷಾಬಂಧನ ಆಚರಿಸಲಾಯಿತು. ಅಂದು ಕಲ್ಕತ್ತಾದ ಹಿಂದು-ಮುಸ್ಲಿಂ ಪುರುಷರು ಮತ್ತು ಮಹಿಳೆಯರೆಲ್ಲರೂ ಪವಿತ್ರ ಗಂಗಾನದಿಯಲ್ಲಿ ಮಿಂದು ಪರಸ್ಪರರ ಕೈಗಳಿಗೆ ರಕ್ಷೆಯನ್ನು ಕಟ್ಟಿ ಬಂಗಾಳವನ್ನು ವಿಭಜನೆಯಾಗಲು ಬಿಡಲಾರೆವೆಂಬ ಪಣ ತೊಟ್ಟರು.

ವಂದೇ ಮಾತರಂನ್ನು ಮೊದಲು ಸ್ವಾತಂತ್ರ್ಯ ಘೋಷವನ್ನಾಗಿ ಮಾಡಿದವರು ಶ್ರೀ ಅರವಿಂದರು. ಅವರು 'ವಂದೇಮಾತರಂ' ಹೆಸರಿನ ಪತ್ರಿಕೆಯೊಂದನ್ನು ಕೂಡಾ ಆರಂಭಿಸಿದರು. ಮೇಡಂ ಬಿಕಾಜಿ ಕಾಮಾ ಅವರು ಜರ್ಮನಿಯಲ್ಲಿ ಸ್ವತಂತ್ರ ಭಾರತದ ಧ್ವಜವನ್ನು ಅನಾವರಣ ಮಾಡಿದಾಗ ಅದರಲ್ಲಿ ವಂದೇಮಾತರಂ ಎಂದು ಬರೆದಿತ್ತು. ಅಲ್ಲಿಂದ ಬಳಿಕ ವಂದೇಮಾತರಂ ಸ್ವಾತಂತ್ರ್ಯ ಗೀತೆಯಾಯಿತು. ವಂದೇಮಾತರಂ ಭಾರತೀಯರಲ್ಲಿ ಸ್ವಾತಂತ್ರ್ಯದ ಕಿಚ್ಚು ಹಚ್ಚುತ್ತಿರುವುದನ್ನು ಕಂಡ ಬ್ರಿಟಿಷ್ ಸರಕಾರವು 1906ರಲ್ಲಿ ಆ ಗೀತೆಯನ್ನು ಸಾರ್ವಜನಿಕವಾಗಿ ಹಾಡುವುದನ್ನು ನಿಷೇಧಿಸಿತು. ಆದರೆ ಈ ನಿಷೇಧವು ಬಂಗಾಳದ ಜನತೆಯಲ್ಲಿ ಸ್ವಾತಂತ್ರ್ಯದ ಸ್ಫೂರ್ತಿಯನ್ನು ಇನ್ನಷ್ಟು ಹೆಚ್ಚಿಸಿತೇ ಹೊರತು ಕಡಿಮೆ ಮಾಡಲಿಲ್ಲ.

ಈ ಸ್ವಾತಂತ್ರ್ಯದ ಕಿಚ್ಚು ಬಂಗಾಳಕ್ಕಷ್ಟೇ ಸೀಮಿತವಾಗಲಿಲ್ಲ, ಬಳಿಕ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಪ್ರತಿಯೊಂದು ಸಮ್ಮೇಳನದಲ್ಲೂ ವಂದೇಮಾತರಂ ಗೀತೆಯನ್ನು ಪೂರ್ಣವಾಗಿ ಹಾಡುವುದು ರೂಢಿಯಾಯಿತು. ಕಾಂಗ್ರೆಸ್‌ನ ಎಲ್ಲಾ ಸದಸ್ಯರು, ಮುಸ್ಲಿಮರಾಗಿರಲಿ ಹಿಂದುಗಳಾಗಿರಲಿ, ವಂದೇಮಾತರಂನ್ನು ಹಾಡುತ್ತಿದ್ದರು. ಆದರೆ 1921ರ ಬಳಿಕ ಬ್ರಿಟಿಷರ ಒಡೆದಾಳುವ ನೀತಿಯ ಪರಿಣಾಮವಾಗಿ ಕೋಮುವಾದಿ ಶಕ್ತಿಗಳು ಕಾಂಗ್ರೆಸ್‌ನಲ್ಲೂ ಪ್ರಭಾವ ಹೆಚ್ಚಿಸಿಕೊಳ್ಳತೊಡಗಿದವು. ಅದರಿಂದಾಗಿ ಕಾಂಗ್ರೆಸ್ ಖಿಲಾಫತ್ ಆಂದೋಲನವನ್ನು ಬೆಂಬಲಿಸುವಂತಾಯಿತು. ಅದರ ಜತೆಗೇ ವಂದೇಮಾತರಂನ್ನು ಕೋಮುವಾದಿಯೆಂದು ಬಿಂಬಿಸಿ ಅದನ್ನು ಹಾಡುವುದನ್ನು ವಿರೋಧಿಸಲಾಯಿತು. 1920ರ ತನಕ ಸ್ವಾತಂತ್ರ್ಯ ಹೋರಾಟದ ಜೀವಮಂತ್ರವಾಗಿದ್ದ ವಂದೇಮಾತರಂ 1923ರ ಬಳಿಕ ಕೋಮುವಾದಿ ಎಂದು ಹಣೆಪಟ್ಟಿ ಕಟ್ಟಿಕೊಂಡಿತು. ಅಲ್ಲಿಂದಲೇ ಭಾರತದ ವಿಭಜನೆಗೆ ಬೀಜ ಬಿತ್ತಲಾಯಿತು ಎನ್ನಬಹುದು.

ಭಾರತೀಯ ಚಿಂತನೆಯಲ್ಲಿ ಮನುಷ್ಯನನ್ನು ಕೇವಲ ದೇಹ ಎಂಬುದಾಗಿ ಪರಿಗಣಿಸುವುದಿಲ್ಲ, ಪಂಚಭೂತಗಳ ಸಂಗಮ ಎಂದು ಹೇಳಲಾಗುತ್ತದೆ. ಅದೇರೀತಿಯಲ್ಲಿ ವಂದೇಮಾತರಂ ಕೂಡಾ ಭಾರತದ ಪೂರ್ಣಚಿತ್ರಣ ನೀಡುತ್ತದೆ. ಗೀತೆಯ ಮೊದಲ ಚರಣವು ಭಾರತಭೂಮಿಯನ್ನು ಬಣ್ಣಿಸಿದರೆ, ಎರಡನೇ ಚರಣ ದೇಶದ ಜನರ ವರ್ಣನೆ ನೀಡುತ್ತದೆ. ಮುಂದಿನ ಚರಣಗಳು ಭಾರತದ ಮನಸ್ಸು, ಬುದ್ಧಿವಂತಿಕೆ, ಜೀವಶಕ್ತಿ ಮತ್ತು ಧಾರ್ಮಿಕ ಪ್ರಜ್ಞೆಯ ಪರಿಕಲ್ಪನೆ ಬಿಂಬಿಸುತ್ತದೆ.

ತುಮಿ ವಿದ್ಯಾ ತುಮಿ ಧರ್ಮ ಎಂಬ ವಾಕ್ಯದಲ್ಲಿ ವಿದ್ಯೆ ಎಂಬುದು ದೇಶದ ಧಾರ್ಮಿಕ ಬುದ್ಧಿಮತ್ತೆಯನ್ನು ಬಣ್ಣಿಸಿದರೆ, ಧರ್ಮ ಪದವು 'ನಾನು' ಎಂಬ ವ್ಯಕ್ತಿಗತ ವಿಚಾರ ಬಿಟ್ಟು 'ನಾವು' ಎಂಬ ಸಮಷ್ಟಿಗೆ ಆದ್ಯತೆ ಕೊಡುತ್ತದೆ.

ಸ್ವಾತಂತ್ರ್ಯದ ಬಳಿಕ ದೇಶದ ಮುಂದಾಳುಗಳು ಲೋಕಸಭೆಗೆ 'ಧರ್ಮಚಕ್ರ ಪ್ರವರ್ತನಾಯ' ಎಂದ ಸಂದೇಶವಾಕ್ಯ ನೀಡಿದರೆ, ರಾಜ್ಯಸಭೆಗೆ 'ಸತ್ಯಂ ವದ, ಧರ್ಮಂ ಚರ' ಹಾಗೂ ಸುಪ್ರೀಂ ಕೋರ್ಟಿಗೆ 'ಯತೋ ಧರ್ಮಸ್ತತೋ ಜಯ' ಎಂಬ ಸಂದೇಶ ವಾಕ್ಯ ನೀಡಿದರು. ರಾಷ್ಟ್ರಧ್ವಜದಲ್ಲಿ ಧರ್ಮಚಕ್ರ ಅಳವಡಿಸಲಾಯಿತು. ಈ ಧರ್ಮ ಮತ್ತು ವಿದ್ಯೆಗಳು ಭಾರತ ಮಾತೆಯಲ್ಲಿ ನೆಲೆಸಿವೆ ಎಂಬುದಾಗಿ ನಂಬಲಾಗುತ್ತಿದೆ. ಭಾರತ ಮಾತೆಯು ಶಕ್ತಿ ದೇವತೆ ದುರ್ಗೆ, ಸಂಪತ್ತಿನ ದೇವತೆ ಲಕ್ಷ್ಮೀ ಮತ್ತು ವಿದ್ಯಾದೇವತೆ ಸರಸ್ವತಿ ಎಲ್ಲರನ್ನೊಳಗೊಂಡ ಅವತಾರ ಎಂದು ಪರಿಗಣಿಸಲಾಗಿದೆ. ಹಾಗಾಗಿ 1905ರಿಂದ ಆರಂಭಿಸಿ ರಾಷ್ಟ್ರೀಯ ಕಾಂಗ್ರೆಸಿನ ಪ್ರತೀ ಸಮ್ಮೇಳನದಲ್ಲೂ ವಂದೇಮಾತರಂ ಗೀತೆಯನ್ನು ಪೂರ್ಣವಾಗಿ ಹಾಡಲು ಆರಂಭವಾಯಿತು. ಇಡೀ ಗೀತೆ ಹಾಡಲು 3 ನಿಮಿಷ ತಗಲುತ್ತದೆ. ಇದರಲ್ಲಿ ಕೋಮುವಾದ ಎಲ್ಲಿಂದ ಬಂತು? ಮುಂದಿನ ದಿನಗಳಲ್ಲಿ ವಿಭಜಕ ಮತ್ತು ಕೋಮುವಾದಿ ಶಕ್ತಿಗಳ ಕಾರಣದಿಂದಾಗಿ ವಂದೇಮಾತರಂಗೆ ವಿರೋಧ ಹೆಚ್ಚತೊಡಗಿತು. ಆದರೆ ವಂದೇಮಾತರಂನಲ್ಲಿ ಕೋಮುವಾದವನ್ನು ಕಾಣುವವರು ತಮ್ಮ ಅಜ್ಞಾನವನ್ನು ಪ್ರದರ್ಶಿಸುತ್ತಿದ್ದಾರೆ ಅಥವಾ ಅವರು ದೇಶ ವಿಭಜಕ ಶಕ್ತಿಗಳ ಕೈವಶವಾಗಿ ವರ್ತಿಸುತ್ತಿದ್ದಾರೆ ಎಂದೇ ಅರ್ಥ.

2026ರ ಚುನಾವಣಾ ಫಲಿತಾಂಶವು ಬಂಗಾಳದಲ್ಲಿ 1905ರಿಂದ 1911ರ ಅವಧಿಯಲ್ಲಿ ಕಂಡುಬಂದಂತಹ ಜಾಗೃತಿ, ದೃಢಬದ್ಧತೆ, ರಾಷ್ಟ್ರೀಯ ಪ್ರಜ್ಞೆ, ನಿರ್ಣಾಯಕ ಕರ್ತೃತ್ವಶಕ್ತಿಯ ನೆನಪುಗಳನ್ನು ಮರುಕಳಿಸುವಂತೆ ಮಾಡಿದೆ. 1905ರಲ್ಲಿ ಬ್ರಿಟಿಷರು ಜಿಹಾದಿ ಉಗ್ರರೊಂದಿಗೆ ಸೇರಿಕೊಂಡು ಭಾರತದ ರಾಷ್ಟ್ರೀಯ ಅಸ್ಮಿತೆಯನ್ನು ನಾಶಪಡಿಸಲು ಯತ್ನಿಸಿದಂತೆಯೇ 2026ರಲ್ಲಿ ಕೂಡಾ ವಿದೇಶಪ್ರೇರಿತ ರಾಜಕಾರಣಿಗಳು, ಜಿಹಾದಿ ಉಗ್ರರು ಮತ್ತು ಸಾಂಸ್ಕೃತಿಕ ಮಾರ್ಕ್ಸ್‌ವಾದಿಗಳು ಬಂಗಾಳವು ಭಾರತದೊಂದಿಗಿನ ಸಂಪರ್ಕ ಕಡಿಯುವಂತೆ ಮಾಡಲು ಯತ್ನಿಸಿದ್ದರು.

1905ರಲ್ಲಿ ತಮ್ಮ ಅಸ್ತಿತ್ವಕ್ಕೇ ಸಂಚಕಾರ ಬಂದಾಗ ಒಗ್ಗೂಡಿ ಹೋರಾಡಿದ ಹಿಂದುಗಳು 2026ರಲ್ಲೂ ಅದೇ ರೀತಿಯಲ್ಲಿ ಹೋರಾಟ ನಡೆಸಿದರು. ಇದೀಗ ರಾಮಕೃಷ್ಣ ಪರಮಹಂಸ, ಸ್ವಾಮಿ ವಿವೇಕಾನಂದ, ಶ್ರೀ ಅರವಿಂದ ಮುಂತಾದವರ ಸ್ಫೂರ್ತಿಯು ಮತ್ತೊಮ್ಮೆ ಜಾಗೃತಗೊಂಡಂತಾಗಿದೆ. ಎಲ್ಲರನ್ನು ಒಳಗೊಳ್ಳುವ, ಸಮಗ್ರ, ಆಧ್ಯಾತ್ಮಿಕ ತತ್ವವಾದ ಹಿಂದುತ್ವವು ಮತ್ತೊಮ್ಮೆ ಶಕ್ತಿಶಾಲಿ ಹಾಗೂ ಸ್ಪಷ್ಟ ಅಭಿವ್ಯಕ್ತಿಯನ್ನು ಸಾರಿದೆ.

ಇದನ್ನು ಸಾಧ್ಯಗೊಳಿಸಿದ ಎಲ್ಲರಿಗೂ ಹೃದಯಪೂರ್ವಕ ಅಭಿನಂದನೆಗಳು. ಬಂಗಾಳದ ಜನರು ಪ್ರಜಾತಂತ್ರ ಮತ್ತು ಬದಲಾವಣೆಯೆಡೆಗೆ ವ್ಯಕ್ತಪಡಿಸಿದ ಬದ್ಧತೆಯು ಐತಿಹಾಸಿಕ ಫಲಿತಾಂಶಕ್ಕೆ ಕಾರಣವಾಗಿದೆ.

ಅನುಮಾನವೇ ಇಲ್ಲ, ಇದು ಬಂಗಾಳದ 'ವಂದೇ ಮಾತರಂ ಕ್ಷಣ'

◆

ಜಾಗತಿಕ ಹೆಬ್ಬಾಗಿಲು ತೆರೆದ ಮೋದಿಯವರ ವ್ಯಾಪಾರ ದೃಷ್ಟಿಕೋನ

ಪಿಯೂಷ್ ಗೋಯಲ್,
ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವರು

ಜುಲೈ 15ರಿಂದ ಜಾರಿಗೆ ಬರಲಿರುವ ಬ್ರಿಟನ್ ಜತೆಗಿನ ಐತಿಹಾಸಿಕ ವ್ಯಾಪಾರ ಒಪ್ಪಂದವು ಜಾಗತಿಕ ಅವಕಾಶಗಳನ್ನು ಸೃಷ್ಟಿಸುವುದಲ್ಲದೇ ಭಾರತೀಯ ರೈತರು, ಎಂಎಸ್‌ಎಂಇ, ಮೀನುಗಾರರು, ನವೋದ್ಯಮಗಳು ಮತ್ತು ಕುಶಲಕರ್ಮಿಗಳಿಗೆ ಸಮೃದ್ಧಿ ತರಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ವಿಕಸಿತ ಭಾರತ 2047' ಧ್ಯೇಯವನ್ನು ಮುಂದಕ್ಕೆ ಕೊಂಡೊಯ್ಯಲು ಇದು ಉದ್ಯೋಗಗಳನ್ನು ಸೃಷ್ಟಿಸಿ, ಭಾರತೀಯ ನಾಗರಿಕರಿಗೆ ಸಮಂಜಸ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಸರಕುಗಳನ್ನು ಉತ್ತೇಜಿಸುತ್ತದೆ.

ಭಾರತ ಮತ್ತು ಬ್ರಿಟನ್ ನಡುವಿನ ಪರಿವರ್ತಕ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ (ಸಿ.ಇ.ಟಿ.ಎ), ಬ್ರಿಟನ್‌ನಲ್ಲಿ ಭಾರತೀಯ ಸರಕುಗಳಿಗೆ, ವಿಶೇಷವಾಗಿ ಕಾರ್ಮಿಕ-ತೀವ್ರ ವಲಯಗಳಿಗೆ ಸಮಗ್ರ ಮಾರುಕಟ್ಟೆ ಪ್ರವೇಶವನ್ನು ಉಂಟುಮಾಡಿದೆ. ಈ ಪರಸ್ಪರ ಲಾಭದಾಯಕ ಒಪ್ಪಂದವು ಸುಮಾರು 99% ಸುಂಕದ ಮಾರ್ಗಗಳಲ್ಲಿನ ಸುಂಕಗಳನ್ನು ತಕ್ಷಣವೇ ತೆಗೆದುಹಾಕುತ್ತದೆ. ಇದು ವ್ಯಾಪಾರದ ಮೌಲ್ಯದ 100% ಅನ್ನು ಒಳಗೊಂಡಿರುತ್ತದೆ ಮತ್ತು ಭಾರತೀಯ ರಫ್ತುಗಳಿಗೆ ಅಗಾಧ ಅವಕಾಶಗಳನ್ನು ಸೃಷ್ಟಿಸುತ್ತದೆ. ಸಿ.ಇ.ಟಿ.ಎ ಜನಕೇಂದ್ರಿತ ಒಪ್ಪಂದವಾಗಿದ್ದು ಕಳೆದ ವರ್ಷ ಪ್ರಧಾನಮಂತ್ರಿ ಮೋದಿ ಮತ್ತು ಬ್ರಿಟಿಷ್ ಪ್ರಧಾನಮಂತ್ರಿ ಸರ್ ಕೀರ್ ಸ್ಟಾರ್ಮರ್ ಅವರ ಸಮ್ಮುಖದಲ್ಲಿ ಸಹಿ ಹಾಕಲಾಗಿತ್ತು. ವಿಶಾಲವಾದ ಬ್ರಿಟನ್ ಮಾರುಕಟ್ಟೆಗೆ ಹೆಚ್ಚಿನ ಸಮುದ್ರಾಹಾರ ರಫ್ತುಗಳಿಂದ ಮೀನುಗಾರರು ಪ್ರಯೋಜನ ಪಡೆಯುತ್ತಾರೆ. ಕಾರ್ಮಿಕರಿಗೆ ಹೊಸ ಉದ್ಯೋಗಾವಕಾಶಗಳು ಸಿಗಲಿವೆ. ಮಹಿಳಾ ಉದ್ಯಮಿಗಳು, ಯುವಕರು, ನವೋದ್ಯಮಗಳು ಮತ್ತು ಎಂಎಸ್‌ಎಂಇಗಳಿಗೆ ಜಾಗತಿಕ ಮೌಲ್ಯ ಸರಪಣಿಗಳಿಗೆ ಉತ್ತಮ ಪ್ರವೇಶ ದೊರೆಯಲಿದೆ. ಹೆಚ್ಚಿನ ಪ್ರಯಾಣ ಮತ್ತು ಮಾನ್ಯತೆಯ ಅವಕಾಶಗಳಿಂದ ವೃತ್ತಿಪರರು ಲಾಭ ಪಡೆಯುತ್ತಾರೆ.

ಅರಿಶಿನ, ಕಾಳುಮೆಣಸು, ಏಲಕ್ಕಿ ಮತ್ತು ಮಾವಿನ ತಿರುಳು, ಉಪ್ಪಿನಕಾಯಿ ಮತ್ತು ಬೇಳೆಕಾಳುಗಳಂತಹ ಸಂಸ್ಕರಿಸಿದ ಸರಕುಗಳು ಸುಂಕ-ಮುಕ್ತ ಪ್ರವೇಶವನ್ನು ಪಡೆಯುತ್ತವೆ. ಹೆಚ್ಚಿನ ಕೃಷಿ ರಫ್ತುಗಳು ಕೃಷಿಕರ ಆದಾಯ ಹೆಚ್ಚಿಸುತ್ತವೆ. ಜೊತೆಗೆ ಗುಣಮಟ್ಟ, ಪ್ಯಾಕೇಜಿಂಗ್ ಮತ್ತು ಪ್ರಮಾಣೀಕರಣಕ್ಕಾಗಿ ಹೆಚ್ಚಿನ ಉತ್ತೇಜನ ನೀಡುತ್ತವೆ. ಇದು ಕೃಷಿ ಮೌಲ್ಯ ಸರಪಣಿಯಾದ್ಯಂತ ಹಲವಾರು ಉದ್ಯೋಗಗಳನ್ನು ಸೃಷ್ಟಿಸುತ್ತದೆ. ಇದೇ ವೇಳೆ ದೇಶೀಯ ರೈತರನ್ನು ರಕ್ಷಿಸಲು ಭಾರತದ ಅತ್ಯಂತ ಸೂಕ್ಷ್ಮ ಕೃಷಿ ವಲಯಗಳನ್ನು ಒಪ್ಪಂದದಿಂದ ಹೊರಗಿಡಲಾಗಿದೆ. ವಿಶೇಷವಾಗಿ ಹೈನು ಉತ್ಪನ್ನಗಳು, ಏಕದಳ ಧಾನ್ಯಗಳು, ಸಿರಿಧಾನ್ಯಗಳು, ಸೇಬು, ಓಟ್ಸ್ ಮತ್ತು ಅಡುಗೆ ಎಣ್ಣೆ ಕ್ಷೇತ್ರಗಳನ್ನು ಒಪ್ಪಂದದಿಂದ ಕೈಬಿಡಲಾಗಿದೆ. ಈ ವಿನಾಯಿತಿಯು ಆಹಾರ ಭದ್ರತೆ, ದೇಶೀಯ ಬೆಲೆ ಸ್ಥಿರತೆ ಮತ್ತು ದುರ್ಬಲ ಕೃಷಿ ಸಮುದಾಯಗಳಿಗೆ ಆದ್ಯತೆ ನೀಡುವ ಮೋದಿ ಸರ್ಕಾರದ ಕಾರ್ಯತಂತ್ರವನ್ನು ಪ್ರತಿಬಿಂಬಿಸುತ್ತದೆ.

ಭಾರತಕ್ಕೆ ರಫ್ತು ಆಸಕ್ತಿಯ ಎಲ್ಲಾ ಪ್ರಮುಖ ಸೇವಾ ವಲಯಗಳು ಮತ್ತು 137 ಉಪ-ವಲಯಗಳನ್ನು ಒಳಗೊಂಡಂತೆ ಬ್ರಿಟನ್ ಅತ್ಯಂತ ಸಮಗ್ರ ಸೇವಾ ಬದ್ಧತೆ ಒದಗಿಸಿದೆ. ಹೆಚ್ಚಿನ ಮಾರುಕಟ್ಟೆ ಪ್ರವೇಶ ಮತ್ತು ನಿಯಂತ್ರಕ ನಿಶ್ಚಿತತೆಯಿಂದ ಐಟಿ ಮತ್ತು ಐಟಿ ಆಧಾರಿತ ಸೇವೆಗಳು, ಹಣಕಾಸು ಸೇವೆಗಳು, ವೃತ್ತಿಪರ ಸೇವೆಗಳು, ಆರೋಗ್ಯ ರಕ್ಷಣೆ, ಶಿಕ್ಷಣ, ಎಂಜಿನಿಯರಿಂಗ್, ದೂರಸಂಪರ್ಕ ಮತ್ತು ಸಂಚಾರ ಸೇವೆಗಳಲ್ಲಿ ಭಾರತೀಯ ಸೇವಾ ಪೂರೈಕೆದಾರರು ಪ್ರಯೋಜನ ಪಡೆಯಲಿದ್ದಾರೆ. ಪ್ರಧಾನಮಂತ್ರಿ ಮೋದಿಯವರ ನಾಯಕತ್ವದಲ್ಲಿ, ಮುಕ್ತ ವ್ಯಾಪಾರ ಒಪ್ಪಂದಗಳು (ಎಫ್.ಟಿ.ಎ) ಸರಕುಗಳು ಮತ್ತು ಸೇವೆಗಳನ್ನು ಮೀರಿ ಹೊಸ ಮಾನದಂಡಗಳನ್ನು ಸ್ಥಾಪಿಸುತ್ತವೆ. ಇ.ಎಫ್.ಟಿ.ಎ ದೇಶಗಳಾದ ಸ್ವಿಟ್ಜರ್ಲೆಂಡ್, ನಾರ್ವೆ, ಐಸ್ಲ್ಯಾಂಡ್, ಲಿಕ್ಟೆನ್‌ಸ್ಟೈನ್ ಜೊತೆ ಭಾರತವು 100 ಶತಕೋಟಿ ಡಾಲರ್ ಹೂಡಿಕೆಯ ಬದ್ಧತೆ ಭದ್ರಪಡಿಸಿಕೊಂಡಿದ್ದು ಇದು 1 ದಶಲಕ್ಷ ನೇರ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ. ನ್ಯೂಜಿಲೆಂಡ್‌ನೊಂದಿಗೆ ಮುಕ್ತ ವ್ಯಾಪಾರ ಒಪ್ಪಂದದ ಮೂಲಕ ಭಾರತವು 15 ವರ್ಷಗಳಲ್ಲಿ 20 ಶತಕೋಟಿ ಡಾಲರ್ ಹೂಡಿಕೆಯ ಬದ್ಧತೆ ಭದ್ರಪಡಿಸಿಕೊಂಡಿದೆ. ಇದೇ ವೇಳೆ, ಆಸ್ಟ್ರೇಲಿಯಾ ಜೊತೆಗಿನ ಮುಕ್ತ ವ್ಯಾಪಾರ ಒಪ್ಪಂದವು ಭಾರತೀಯ ಐಟಿ ಕಂಪನಿಗಳಿಗೆ ತೊಡಕಾಗಿದ್ದ ದ್ವಿತೆರಿಗೆ ಸಮಸ್ಯೆಯನ್ನು ಪರಿಹರಿಸಿದೆ.

2014ರಲ್ಲಿ ಭಾರತದ ಆರ್ಥಿಕತೆಯು ಸಂಕಷ್ಟದಲ್ಲಿತ್ತು. ಸಂಭಾವ್ಯ ಹೂಡಿಕೆದಾರರು ಅದರ ಮೇಲೆ ವಿಶ್ವಾಸವನ್ನು ಕಳೆದುಕೊಳ್ಳುತ್ತಿದ್ದರು. ನೀತಿಗಳ ನಿಷ್ಕ್ರಿಯತೆ ಮತ್ತು ಭಾರಿ ಭ್ರಷ್ಟಾಚಾರ ಹಗರಣಗಳಿಂದ ಗುರುತಿಸಲ್ಪಟ್ಟ ಒಂದು ದಶಕದ ನಂತರ ಭಾರತವನ್ನು ದುರ್ಬಲ ಐದು ಆರ್ಥಿಕತೆಗಳಲ್ಲಿ ಒಂದೆಂದು ಪರಿಗಣಿಸಲಾಗಿತ್ತು. ಮೋದಿ ಸರ್ಕಾರವು ಭಾರತೀಯ ಆರ್ಥಿಕತೆಯ ಮೇಲೆ ಜಾಗತಿಕ ವಿಶ್ವಾಸವನ್ನು ಮರುನಿರ್ಮಾಣ ಮಾಡಲು ಮತ್ತು ಹೂಡಿಕೆದಾರರಿಗೆ ಅದನ್ನು ಆಕರ್ಷಕವಾಗಿಸಲು ದೃಢವಾದ ಕಾರ್ಯವಿಧಾನವನ್ನು ಅಳವಡಿಸಿಕೊಂಡಿತು. ಅಭಿವೃದ್ಧಿ ಹೊಂದಿದ ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕುವುದು ಮುಂದಿನ ಹಂತವಾಗಿತ್ತು. ಭಾರತದ ಪ್ರಮುಖ ವ್ಯಾಪಾರ ಪಾಲುದಾರರೊಂದಿಗೆ ನೇರವಾಗಿ ಸ್ಪರ್ಧಿಸದ, ದೊಡ್ಡ ಮಾರುಕಟ್ಟೆಗಳನ್ನು ಒದಗಿಸುವ ಅಭಿವೃದ್ಧಿ ಹೊಂದಿದ ಆರ್ಥಿಕತೆಗಳೊಂದಿಗೆ ಸರ್ಕಾರವು ಮುಕ್ತ ವ್ಯಾಪಾರ ಒಪ್ಪಂದಗಳನ್ನು ಮುಂದುವರಿಸಿದೆ. ಇದು ಅಜಾಗರೂಕತೆಯಿಂದ ಸ್ಪರ್ಧಿಗಳಿಗೆ ಭಾರತದ ಬಾಗಿಲುಗಳನ್ನು ತೆರೆಯುವ ಮೂಲಕ ಭಾರತೀಯ ವ್ಯವಹಾರಗಳಿಗೆ ಅಪಾಯವನ್ನುಂಟುಮಾಡುವ ಹಿಂದಿನ ಸರ್ಕಾರದ ವಿಧಾನಕ್ಕಿಂತ ಭಿನ್ನವಾಗಿ, ಪರಸ್ಪರ ಲಾಭದಾಯಕ ಸ್ವಾವಲಂಬನೆಯನ್ನು ಸೃಷ್ಟಿಸುತ್ತದೆ.

ಇಂದಿನ ಅನಿಶ್ಚಿತ ಜಗತ್ತಿನಲ್ಲಿ, ಪ್ರಧಾನಮಂತ್ರಿ ಮೋದಿಯವರ ನಾಯಕತ್ವದ ಭಾರತವನ್ನು ಚೇತರಿಸಿಕೊಳ್ಳುವ ಆರ್ಥಿಕತೆ ಮತ್ತು ವಿಶ್ವಾಸಾರ್ಹ ಪಾಲುದಾರ ಎಂದು ವ್ಯಾಪಕವಾಗಿ ಗೌರವಿಸಲ್ಪಟ್ಟಿದೆ. ಜೊತೆಗೆ ವಿಶ್ವದ ಅತಿ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಸ್ಥಾನ ಪಡೆದಿದೆ. ಪ್ರಮುಖ ಆರ್ಥಿಕತೆಗಳ ನಡುವಿನ ಸಮಾನ ಮತ್ತು ಮಹತ್ವಾಕಾಂಕ್ಷೆಯ ವ್ಯಾಪಾರ ಒಪ್ಪಂದಗಳಿಗೆ ಸಿ.ಇ.ಟಿ.ಎ ಒಂದು ಮಾನದಂಡವಾಗಿದೆ. ಇದು ಭಾರತದ ಹಿತಾಸಕ್ತಿಗಳಿಗೆ ಧಕ್ಕೆಯಾಗದಂತೆ ಹಿಂದುಳಿದವರಿಗೆ ಆಕರ್ಷಕ ಜಾಗತಿಕ ಅವಕಾಶಗಳನ್ನು ತೆರೆಯುತ್ತದೆ. 'ನವ ಭಾರತ' ಹೇಗೆ ವ್ಯವಹಾರ ಮಾಡುತ್ತದೆ ಎಂಬುದಕ್ಕೆ ಇದೊಂದು ಉಜ್ವಲ ಉದಾಹರಣೆಯಾಗಿದೆ.

◆

ಕಿರುಸುದ್ದಿ

ನೂತನ ಪದಾಧಿಕಾರಿಗಳ ಪದಗ್ರಹಣ

• **ದೇವನಹಳ್ಳಿ:** ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾದೇಶಿಕ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಜೆಡಿಎಸ್‌ನ ನೂತನ ಮಹಿಳಾ ಘಟಕದ ಪದಾಧಿಕಾರಿಗಳ ನೇಮಕಾತಿಯನ್ನು ಅಧಿಕೃತವಾಗಿ ಘೋಷಿಸಲಾಯಿತು. ನೂತನ ಮಹಿಳಾ ಘಟಕದ ಅಧ್ಯಕ್ಷರಾಗಿ ಮೀನಾಕ್ಷಿ ಮುನಿಕೃಷ್ಣಪ್ಪ, ಕಾರ್ಯಾಧ್ಯಕ್ಷರಾಗಿ ಬಿ.ಪಿ. ಭಾಗ್ಯಮ್ಮ ವೀರಪ್ಪ ಹಾಗೂ ಮಹಾಪ್ರಧಾನ ಕಾರ್ಯದರ್ಶಿಯಾಗಿ ಕೆ.ಬಿ. ಶೈಲಜಾ ಮಾರೇಗೌಡ ಅವರು ಅಧಿಕಾರ ವಹಿಸಿಕೊಂಡರು. ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ರವರ ಘನ ಸಮ್ಮುಖದಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಕೆ.ವಿ. ಮಂಜುನಾಥ್ ಹಾಗೂ ದೇವನಹಳ್ಳಿ ತಾಲೂಕು ಅಧ್ಯಕ್ಷ ಮಹೇಶ್ ರವರು ನೂತನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಜೂ.27ರಂದು ಕೆಂಪೇಗೌಡ ಜಯಂತಿ

• **ನೆಲಮಂಗಲ:** ತಾಲೂಕು ಆಡಳಿತ, ವಿವಿಧ ಒಕ್ಕಲಿಗ ಸಂಘಟನೆಗಳು ಹಾಗೂ ಶಾಸಕ ಎನ್. ಶ್ರೀನಿವಾಸ್ ಅವರ ಅಧ್ಯಕ್ಷತೆಯಲ್ಲಿ ಜೂನ್ 27ರ ಶನಿವಾರ ಬೆಳಗ್ಗೆ 9 ಗಂಟೆಗೆ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ನೆಲಮಂಗಲ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ನಾಗರಾಜು ತಿಳಿಸಿದರು. ನಗರದ ಪರೀಕ್ಷಾ ಮಂದಿರದಲ್ಲಿ ವಿವಿಧ ಒಕ್ಕಲಿಗ ಸಂಘಟನೆಗಳ ನೇತೃತ್ವದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ನಾಲ್ಕು ವರ್ಷಗಳಿಂದ ಆಚರಿಸಿಕೊಂಡು ಬರುತ್ತಿರುವ ಜಯಂತಿಯನ್ನು ಈ ಬಾರಿ ಇನ್ನಷ್ಟು ವಿಜೃಂಭಣೆಯಿಂದ ನಡೆಸಲು ತೀರ್ಮಾನಿಸಲಾಗಿದೆ ಎಂದರು. ಈಗಾಗಲೇ ಶಾಸಕ ಎನ್. ಶ್ರೀನಿವಾಸ್ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಸಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು. ಪರೀಕ್ಷಾ ಮಂದಿರದಿಂದ ತಾಲೂಕು ಕಚೇರಿವರೆಗೆ ಮೆರವಣಿಗೆ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನ, ಪ್ರಗತಿಪರ ರೈತರು, ಉದ್ಯಮಿಗಳು ಹಾಗೂ ವೈದ್ಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ನಗರಸಭೆ ಅಧ್ಯಕ್ಷ ಎನ್. ಗಣೇಶ್, ವಕೀಲ ರಘುನಾಥ್, ಮಾಜಿ ಅಧ್ಯಕ್ಷ ಪ್ರದೀಪ್ ಕುಮಾರ್, ಕೆಂಪಣ್ಣ, ಸುಂದರೇಶ್, ಚನ್ನಯ್ಯ, ಲಕ್ಷ್ಮೀವೆಂಕಟೇಶ್, ಕಾಚನಹಳ್ಳಿ ಮನು, ವಿಜಯ್ ಹೊಸಹಳ್ಳಿ, ಬೂದಿಹಾಳ್ ಕಿಟ್ಟಿ, ಭಾನುಪ್ರಕಾಶ್, ಪ್ರಮೋದ್, ಗುರುಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

2035ಕ್ಕೆ 400 ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿ

• **ಹೊಸದಿಲ್ಲಿ:** ಉಕ್ಕು ಉತ್ಪಾದನೆಯಲ್ಲಿ ಮತ್ತಷ್ಟು ದಾಪುಗಾಲು ಇಡುವ ನಿಟ್ಟಿನಲ್ಲಿ 2035 ವರ್ಷದ ಹೊತ್ತಿಗೆ 400 ದಶಲಕ್ಷ ಟನ್ ಉಕ್ಕು ಉತ್ಪಾದಿಸುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಹೇಳಿದರು. ದಿಲ್ಲಿಯ ವಿಜ್ಞಾನ ಭವನದಲ್ಲಿ ನಡೆದ ಉಕ್ಕು ವಲಯದಲ್ಲಿ ಡಿಜಿಟಲೀಕರಣ ಕುರಿತ ಚಿಂತನ ಶಿಬಿರ ಉದ್ದೇಶಿಸಿ ಮಾತನಾಡಿದ ಅವರು, 400 ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಈ ಕ್ಷೇತ್ರವನ್ನು ಮತ್ತಷ್ಟು ಆಧುನೀಕರಣಗೊಳಿಸುವ ಹಾಗೂ ಉಕ್ಕು ಕಾರ್ಖಾನೆಗಳಲ್ಲಿ ಡಿಜಿಟಲೀಕರಣ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ದೊಡ್ಡ ಹೆಜ್ಜೆ ಇಡಲಾಗುತ್ತಿದೆ ಎಂದರು.ಉಕ್ಕಿನ ಉದ್ಯಮದ ಭವಿಷ್ಯವನ್ನು ಕೇವಲ ಉತ್ಪಾದನಾ ಸಾಮರ್ಥ್ಯದಿಂದ ನಿರ್ಧರಿಸಲಾಗುವುದಿಲ್ಲ, ಬದಲಾಗಿ ಬುದ್ಧಿವಂತ, ಸಂಪರ್ಕಿತ ಮತ್ತು ಡೇಟಾ-ಚಾಲಿತ ಉತ್ಪಾದನಾ ಪರಿಸರ ವ್ಯವಸ್ಥೆಗಳನ್ನು ನಿರ್ಮಿಸುವ ಸಾಮರ್ಥ್ಯದಿಂದ ನಿರ್ಧರಿಸಲಾಗುತ್ತದೆ ಎಂದ ಸಚಿವರು, ಉತ್ಪಾದನೆಯಲ್ಲಿ ಕ್ಷಮತೆ, ವೇಗ, ಸುರಕ್ಷತೆ, ಗುರಿಗಳನ್ನು ನಿಗದಿತ ಕಾಲಕ್ಕೆ ಸರಿಯಾಗಿ ಮುಟ್ಟುವ ಉದ್ದೇಶದಿಂದ ಡಿಜಿಟಲ್ ವ್ಯವಸ್ಥೆಗೆ ಒತ್ತು ನೀಡಲಾಗುತ್ತಿದೆ. ಉದ್ಯಮದ ದೀರ್ಘಕಾಲೀನ ಪ್ರಯೋಜನಗಳನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಈ ಉಪಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಉಕ್ಕು ವಲಯದ ದೃಢವಾದ ಬೆಳವಣಿಗೆಯ ಬಗ್ಗೆ ಹೇಳಿದ ಸಚಿವರು, 2021-22ನೇ ಹಣಕಾಸು ವರ್ಷದಿಂದ ಕಚ್ಚಾ ಉಕ್ಕು ಉತ್ಪಾದನೆಯು ಸರಾಸರಿ ಶೇ.8ರಷ್ಟು ವಾರ್ಷಿಕ ದರದಲ್ಲಿ ವೃದ್ಧಿಯಾಗಿದೆ ಎಂದರು.

ಯುವಕರಿಗೆ ಯುವ ಸಬಲೀಕರಣ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಗೀತಾ ಕಿವಿಮಾತು

ನಶಾ ಮುಕ್ತ ಭಾರತಕ್ಕೆ ಮುಂದಾಗಿ

• **ದೊಡ್ಡಬಳ್ಳಾಪುರ:** ನಶಾ ಮುಕ್ತ ಭಾರತ ನಿರ್ಮಾಣಕ್ಕಾಗಿ ಯುವ ಸಮೂಹ ಮುಂದಾಗಬೇಕಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಗೀತಾ ಕಿವಿಮಾತು ಹೇಳಿದರು.

ಕೊನಘಟ್ಟದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಶಾ ಮುಕ್ತ ಭಾರತ ಸಪ್ತಾಹ" ಅಂಗವಾಗಿ ಅಂತಾರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಕಳ್ಳಸಾಗಣೆ ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಯುವಜನತೆ ಸಣ್ಣ ವಯಸ್ಸಿನಲ್ಲೇ ವಿವಿಧ ರೂಪಗಳಲ್ಲಿ ನಶೆಯ ಮೊರೆ ಹೋಗುತ್ತಿದ್ದಾರೆ. ಅವರನ್ನು ಈ ಹಿಡಿತದಿಂದ ರಕ್ಷಿಸಿ, ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು. ಕ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಡಿ.ಹೆಚ್.ಇ.ಓ ಮಹಾದೇವಿ ಮಾತನಾಡಿ, ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು. ಇತ್ತೀಚಿನ ದಿನಗಳಲ್ಲಿ ಹದಿಹರೆಯದವರು ಹೆಚ್ಚು ಮಾದಕ ವ್ಯಸನಕ್ಕೆ ಬಲಿಯಾಗುತ್ತಿರುವುದನ್ನು ನೋಡುತ್ತಿದ್ದೇವೆ. ಇದು ಮೆದುಳಿನ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ವ್ಯಕ್ತಿಯ ಆಲೋಚನಾ ಶಕ್ತಿ ಮತ್ತು ಭಾವನೆಗಳ ಮೇಲೆ ನಕಾರಾತ್ಮಕ ಪ್ರಭಾವ ಬೀರುತ್ತದೆ. ಇದರಿಂದ ದೈಹಿಕ ಆರೋಗ್ಯ ಸಮಸ್ಯೆಗಳ ಜೊತೆಗೆ ಸಾಮಾಜಿಕ ಮತ್ತು ಆರ್ಥಿಕ ಸಂಕಷ್ಟಗಳೂ ಎದುರಾಗುತ್ತವೆ ಎಂದು ಎಚ್ಚರಿಸಿದರು.

ಯುವ ಸಂಚಲನ ತಂಡದ ಅಧ್ಯಕ್ಷ ಚಿದಾನಂದ್ ಮೂರ್ತಿ ಮಾತನಾಡಿ, ಸಂಬಂಧಪಟ್ಟ ಪ್ರಕರಣಗಳನ್ನು ಉಲ್ಲೇಖಿಸುತ್ತಾ, ಯುವಕರು ದೈಹಿಕ ವ್ಯಾಯಾಮ ಹಾಗೂ ಆರೋಗ್ಯಪೂರ್ಣ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ದುಶ್ಚಟಗಳಿಂದ ದೂರವಿರಬಹುದು. ವಿದ್ಯಾರ್ಥಿಗಳು ಇಂತಹ ವ್ಯಸನಗಳಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಕಾರ್ಯಕ್ರಮದ ಮೂಲಕ ಸರ್ಕಾರಿ ಪದವಿ ಪೂರ್ವ ಕಾಲೇಜುಕೊನಘಟ್ಟಹಾಗೂಸರ್ಕಾರಿಪ್ರೌಢಶಾಲೆ,ಕೊನಘಟ್ಟದ 166 ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಮಾದಕ ವ್ಯಸನದ ವಿರುದ್ಧ ಜಾಗೃತಿ ಮೂಡಿಸಲಾಯಿತು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ಯುವ ಸಂಚಲನದ ಸಹಯೋಗದಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು. ಮಾದಕ ವ್ಯಸನದ ಕುರಿತು ಹೆಚ್ಚಿನ ಸಹಾಯಕ್ಕಾಗಿ 14446 ಸಹಾಯವಾಣಿಯನ್ನು ಸಂಪರ್ಕಿಸಲು ಸೂಚಿಸಲಾಯಿತು.

ಕಾರ್ಯಕ್ರಮದಲ್ಲಿ ಮನಶ್ಶಾಸ್ತ್ರಜ್ಞರಾದ ಸದಾನಂದ, ಕೊನಘಟ್ಟ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ವಿನುತಾ ಹಾಗೂ ಪ್ರಾಧ್ಯಾಪಕರು, ಕೊನಘಟ್ಟ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕರಾದ ನಾರಾಯಣಸ್ವಾಮಿ ಎನ್.ವಿ ಹಾಗೂ ಶಿಕ್ಷಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಚಾಲಕರಾದ ವಿಕಾಸ್, ಸಮಾಜ ಕಾರ್ಯಕರ್ತರಾದ ಕೇಶವಮೂರ್ತಿ ರವರು,ಯುವ ಸಂಚಲನ ತಂಡದ ಸ್ವಯಂ ಸೇವಕರಾದ ನವೀನ್ ಉಪಸ್ಥಿತರಿದ್ದರು.

ಆರೋಗ್ಯ ಸಮಸ್ಯೆಗಳೇ ಹೆಚ್ಚು

ಮಾದಕ ವಸ್ತುಗಳ ವ್ಯಸನವು ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಯುವಜನತೆ ಯಾವುದೇ ಕಾರಣಕ್ಕೂ ಮಾದಕ ಪದಾರ್ಥಗಳ ಚಟಕ್ಕೆ ಒಳಗಾಗಬಾರದು. ಡ್ರಗ್ಸ್, ಗಾಂಜಾ ಹಾಗೂ ಇತರ ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಹದಗೆಡುವುದರೊಂದಿಗೆ, ಶಿಕ್ಷಣ, ಉದ್ಯೋಗ ಹಾಗೂ ಸಾಮಾಜಿಕ ಜೀವನದ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ.ಮಾದಕ ವ್ಯಸನಕ್ಕೆ ಒಳಗಾದವರಲ್ಲಿ ನೆನಪಿನ ಶಕ್ತಿ ಕುಗ್ಗುವುದು, ಆತಂಕ, ಖಿನ್ನತೆ, ಆಕ್ರಮಣಕಾರಿ ವರ್ತನೆ ಹಾಗೂ ವಿವಿಧ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಕುಟುಂಬದಲ್ಲಿ ಆರ್ಥಿಕ ಸಂಕಷ್ಟ, ಕಲಹ ಹಾಗೂ ಸಾಮಾಜಿಕ ಗೌರವಕ್ಕೆ ಧಕ್ಕೆಯಾಗುವ ಸಾಧ್ಯತೆಯೂ ಹೆಚ್ಚಿರುತ್ತದೆ ಎಂದು ಗೀತಾ ಕಿವಿಮಾತು.

ಅಧ್ಯಕ್ಷರಾಗಿ ರಾಧಾಕೃಷ್ಣ ಆಯ್ಕೆ

• **ಹೊಸಕೋಟೆ:** 2026-28ರ ಅವಧಿಗೆ ನಡೆದ ತಾಲೂಕು ವಕೀಲರ ಸಂಘದ ಅಧ್ಯಕ್ಷ ಸ್ಥಾನಕ್ಕೆ ರಾಧ ಕೃಷ್ಣ 247 ಮತ ಪಡೆಯುವ ಮೂಲಕ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಬಸವರಾಜ್ ತಿಳಿಸಿದರು.

ನಗರದ ತಾಲೂಕು ವಕೀಲರ ಸಂಘದ ಕಚೇರಿಯಲ್ಲಿ ಬುಧವಾರ ತಾಲೂಕು ವಕೀಲರ ಸಂಘದ ಚುನಾವಣೆ ಹಮ್ಮಿಕೊಳ್ಳಲಾಗಿತ್ತು.

ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿ ಜಯಶೀಲರಾದ ರಾಧಾ ಕೃಷ್ಣ ಮಾತನಾಡಿ ವಕೀಲರ ಸಂಘದ ಸಹೋದ್ಯೋಗಿ ಮಿತ್ರರು ನನ್ನ ಗೆಲುವಿನ ರುವಾರಿಗಳಾಗಿದ್ದು ಮುಂದಿನ ಎರಡು ವರ್ಷಗಳಲ್ಲಿ ನ್ಯಾಯಾಲಯಕ್ಕೆ ಸ್ವಂತ ಜಾಗದ ವ್ಯವಸ್ಥೆ, ಸಂಘದ ಕಚೇರಿಗೆ ನಿವೇಶನ ಹಾಗೂ ಕಟ್ಟಡ ನಿರ್ಮಾಣಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಿ ಎಲ್ಲರ ಸಹಕಾರದಿಂದ ಯಾವುದೇ ಸಮಸ್ಯೆ ಇಲ್ಲದಂತೆ ಆಡಳಿತ ನೀಡಲಾಗುವುದು ಎಂದರು.

ಚುನಾವಣೆಯಲ್ಲಿ ಸ್ಪರ್ಧಿಸಿ ಜಯಶೀಲರಾದ ಅಭ್ಯರ್ಥಿಗಳ ವಿವರ: ಅಧ್ಯಕ್ಷ ವೈ ವಿ ರಾಧ ಕೃಷ್ಣ, ಉಪಾಧ್ಯಕ್ಷ ಹನುಮಂತ ರಾವ್, ಪ್ರಧಾನ ಕಾರ್ಯದರ್ಶಿ ಆರ್ ರಾಜಪ್ಪ, ಜಂಟಿ ಕಾರ್ಯದರ್ಶಿ ಟಿ ಕೆ ಮುನಿರಾಜು, ಖಜಾಂಚಿ ಎಚ್ ಎಂ ನಾಗಜ್ಯೋತಿ, ನಿರ್ದೇಶಕರುಗಳಾಗಿ ಪಿ ಎಲ್ ಅಭಿಷೇಕ್, ಎನ್ ಅಮರ್,

---

ಕರ್ನಾಟಕ ಸಂಘಟನೆಗಳ ಕಾರ್ಮಿಕ ಒಕ್ಕೂಟದ ಅಧ್ಯಕ್ಷ ಮಂಜುನಾಥ್ ಒತ್ತಾಯ

ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಆಗ್ರಹ

• **ಹೊಸಕೋಟೆ:** ತಾಲೂಕಿನ ಕೊರಳೂರು ಗ್ರಾಮದ ಮಧ್ಯೆ ಹಾದುಹೋಗಿರುವ ರೈಲ್ವೆ ಹಳಿಯ ಮೇಲಿನ ಮೇಲ್ಸೇತುವೆ ನಿರ್ಮಾಣಕ್ಕೆ ಎಂದು ಕರ್ನಾಟಕ ಸಂಘಟನೆಗಳ ಕಾರ್ಮಿಕ ಒಕ್ಕೂಟದ ಅಧ್ಯಕ್ಷ ಕನ್ನಡಾಂಬೆ ಮಂಜುನಾಥ್ ಆಗ್ರಹಿಸಿದರು.

ಕೊರಳೂರು ರೈಲ್ವೆ ಗೇಟ್ ಬಳಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮೇಲ್ಸೇತುವೆ ನಿರ್ಮಾಣಕ್ಕೆ ಸರ್ಕಾರ ಈಗಾಗಲೇ ಅನುಮೋದನೆ ನೀಡಿ ಅನುದಾನವೂ ಬಿಡುಗಡೆ ಮಾಡಿದೆ. ಹಲವು ಬಾರಿ ಗುದ್ದಲಿ ಪೂಜೆ ನೆರವೇರಿಸಿದ್ದರೂ ಕಾಮಗಾರಿ ಮಾತ್ರ ಇನ್ನೂ ಆರಂಭವಾಗಿಲ್ಲ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಕರ್ನಾಟಕ ಕಾರ್ಮಿಕ ಘಟಕದ ಅಧ್ಯಕ್ಷ ಎಸ್. ಮಂಜುನಾಥ್ ಮಾತನಾಡಿ, ಈ ರಸ್ತೆಯಲ್ಲಿ ಪ್ರತಿದಿನ ಸಾವಿರಾರು ವಾಹನಗಳು ಸಂಚರಿಸುತ್ತವೆ. ಸುತ್ತಮುತ್ತ ಕೈಗಾರಿಕೆಗಳು, ಶಾಲಾ-ಕಾಲೇಜುಗಳು ಇರುವುದರಿಂದ ರೈಲ್ವೆ ಗೇಟ್ ಮುಚ್ಚಿದಾಗ ಹಲವು ಕಿಲೋಮೀಟರ್‌ವರೆಗೆ ವಾಹನದಟ್ಟಣೆ ಉಂಟಾಗುತ್ತದೆ. ಇದರಿಂದ ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಮಯಕ್ಕೆ ತಮ್ಮ ಗಮ್ಯಸ್ಥಾನ ತಲುಪಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

ಪ್ರತಿಭಟನೆಯ ಬಳಿಕ ಉಪತಹಶೀಲ್ದಾರ್ ಭಾಸ್ಕರ್ ಅವರಿಗೆ ಮನವಿ ಸಲ್ಲಿಸಿ, ಸರ್ಕಾರಕ್ಕೆ ತಕ್ಷಣ ವರದಿ ಕಳುಹಿಸಿ ಕಾಮಗಾರಿ ಆರಂಭಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಯಿತು. ಈ ಪ್ರತಿಭಟನೆಯಲ್ಲಿ ನಟರಾಜ್, ಆನೇಕಲ್ ಮಂಜುನಾಥ್, ಚೈತ್ರಾ ನಟರಾಜ್, ಬುಲೆಟ್ ಬಾಬು, ಮಂಜುಳಾ, ಶ್ರೀನಿವಾಸ್ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಬೈಕ್ ಕಳ್ಳತನ; 42 ದ್ವಿಚಕ್ರ ವಾಹನ ವಶ

• **ವಿಜಯಪುರ :** ಮನೆಗಳ ಮುಂಭಾಗ ಹಾಗೂ ಪಾರ್ಕಿಂಗ್ ಪ್ರದೇಶಗಳಲ್ಲಿ ನಿಲ್ಲಿಸುತ್ತಿದ್ದ ದ್ವಿಚಕ್ರ ವಾಹನಗಳನ್ನು ಕಳವು ಮಾಡುತ್ತಿದ್ದ ಆರೋಪಿ ಖಲೀಲ್ ಅಹ್ಮದ್ (46) ರನ್ನು ವಶಕ್ಕೆ ಪಡೆದು, ಆತನಿಂದ ಒಂದೇ ಕಂಪನಿಯ ಸುಮಾರು 20 ಲಕ್ಷ ಮೌಲ್ಯದ ಒಟ್ಟು 42 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡು ಮಾಲೀಕರಿಗೆ ವಾಹನಗಳನ್ನು ಹಸ್ತಾಂತರಿಸಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ವಿ.ಚಂದ್ರಕಾಂತ್ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬುಧವಾರ ಆಯೋಜಿಸಿದ್ದ ಕಳವಾಗಿದ್ದ ದ್ವಿಚಕ್ರ ವಾಹನಗಳನ್ನು ಮಾಲೀಕರಿಗೆ ಹಸ್ತಾಂತರಿಸುವ ಕಾರ್ಯಕ್ರಮ ಹಾಗೂ ವಾಹನ ಸವಾರರು ಅನುಸರಿಸಬೇಕಾದ ಸುರಕ್ಷತೆಯ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಜಯಪುರ ಟೌನ್ ನ ಮಂಡಿಬಲೆ ರಸ್ತೆಯ ಇಸ್ಲಾಂ ನಗರದ ನಿವಾಸಿ ಖಲೀಲ್ ಅಹ್ಮದ್ ಅವರು ಹಿಂದೆ ಪೆಟ್ರೋಲ್ ಬಂಕ್‌ವೊಂದರಲ್ಲಿ ಕೆಲಸ ಮಾಡುತ್ತಿದ್ದನು. ಜೀವನ ನಿರ್ವಹಿಸಲು ಕಷ್ಟ ಎದುರಾದಾಗ ಸುಲಭವಾಗಿ ಹಣಗಳಿಸುವ ಉದ್ದೇಶದಿಂದ ದ್ವಿಚಕ್ರ ವಾಹನ ಕಳ್ಳತನ ಮಾಡುವ ವೃತ್ತಿಗೆ ಇಳಿದಿದ್ದನು ಎಂದು ಹೇಳಿದರು.

ಖಲೀಲ್ ಸುಮಾರು 20 ರಿಂದ 25 ವಾಹನ ಕೀ ಗಳನ್ನು ಬಳಸಿ ಯಾರಿಗೂ ಅನುಮಾನ ಬಾರದಂತೆ ವಾಹನ ಕಳ್ಳತನ ಮಾಡುತ್ತಿದ್ದ. ಆತನಿಂದ ಖರೀದಿಸುತ್ತಿದ್ದ ಐದಾರೂ ಮಂದಿ ದಲ್ಲಾಳಿಗಳು ವಾಹನಗಳ ಕಳವಿಗೆ ದುಷ್ಪ್ರೇರಣೆ ನೀಡಿರುವುದು ತನಿಖೆಯಿಂದ ಕಂಡು ಬಂದಿದ್ದು, ಅವರನ್ನು ಶೀಘ್ರವಾಗಿ ಪತ್ತೆ ಹಚ್ಚಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಮಾಲೀಕರಿಗೆ ಹಸ್ತಾಂತರ

ಆರೋಪಿಯಿಂದ ವಶಪಡಿಸಿಕೊಂಡಿರುವ ದ್ವಿಚಕ್ರ ವಾಹನಗಳನ್ನು ಮಾಲೀಕರಿಗೆ ಹಸ್ತಾಂತರಿಸಲು ನ್ಯಾಯಾಲಯ ಅನುಮತಿ ನೀಡಿದ್ದು, ದಾಖಲೆಗಳನ್ನು ಪರಿಶೀಲಿಸಿ ಮಾಲೀಕರಿಗೆ ವಾಹನಗಳನ್ನು ಹಸ್ತಾಂತರಿಸಲಾಗುವುದು. ಈ ಪ್ರಕರಣ ಬೇಧಿಸಿದ ವಿಜಯಪುರ ಠಾಣೆಯ ವೃತ್ತ ನಿರೀಕ್ಷಕ ಲಕ್ಷ್ಮಿನಾರಾಯಣ ನೇತೃತ್ವದ ತಂಡ ಒಳ್ಳೆಯ ಕೆಲಸ ಮಾಡಿದ್ದಾರೆ. ಅವರಿಗೆ ಪ್ರಶಂಸನೀಯ ಪತ್ರ ಹಾಗೂ ಬಹುಮಾನ ವಿತರಿಸಲಾಗುವುದು ಎಂದು ತಿಳಿಸಿದರು.

ಮೊದಲ ಪ್ರಕರಣ: ಕಳೆದ ಒಂದೂವರೆ ವರ್ಷದಿಂದ ದ್ವಿಚಕ್ರ ವಾಹನಗಳ ಕಳವು ಮಾಡುತ್ತಿರುವುದಾಗಿ ಖಲೀಲ್ ಒಪ್ಪಿಕೊಂಡಿದ್ದು, ಇದೇ ಮೊದಲ ಬಾರಿಗೆ ಆತನ ವಿರುದ್ಧ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹೆಚ್ಚಾಗಿ ಮೈಲೇಜ್ ಬರುವ ವಾಹನವನ್ನು ಕಡಿಮೆ ಬೆಲೆಗೆ ಸುಲಭವಾಗಿ ಗ್ರಾಹಕರಿಗೆ ಮಾರಾಟ ಮಾಡಬಹುದೆಂದು ಆತ ಬರೀ ಹಿರೋ ಸ್ಪೆಂಡರ್ ಪ್ಲಸ್ ಕಂಪನಿಯ ದ್ವಿಚಕ್ರ ವಾಹನಗಳನ್ನು ಕದ್ದು ಕೇವಲ 2 ರಿಂದ 2.500 ರೂ. ಗಳಿಗೆ ಮಾರಾಟ ಮಾಡುತ್ತಿದ್ದನು. ಆತನಿಂದ ಬಡವರು ಸುಲಭವಾಗಿ ವಾಹನ ಖರೀದಿಸುತ್ತಿದ್ದರು ಎಂದರು.

ಪ್ರಕರಣ ಬೆಳಕಿಗೆ: ಜೂನ್.16 ರಂದು ದೂರುದಾರ ಪಿ.ಮುನಿಕೃಷ್ಣ ಎಂಬ ವ್ಯಕ್ತಿ ಹಿರೋ ಸ್ಪೆಂಡರ್ ಪ್ಲಸ್ ದ್ವಿಚಕ್ರ ವಾಹನವು ವಿಜಯಪುರ ಬಸ್ ನಿಲ್ದಾಣದ ರೇಷ್ಮೆ ಗೂಡಿನ ಮಾರುಕಟ್ಟೆಯ ಎದುರು ನಿಲ್ಲಿಸಿ, ಯಲಹಂಕಕ್ಕೆ ಹೋಗಿ ಸಂಜೆ ವಾಪಸ್ ಬರುವಷ್ಟರಲ್ಲಿ ವಾಹನ ಕಳವು ಆಗಿದೆ. ಈ ಬಗ್ಗೆ ಜೂ.18 ರಂದು ವಿಜಯಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾನೆ.

ವಿಶೇಷ ತಂಡ ರಚನೆ: ಆರೋಪಿ ಪತ್ತೆಗಾಗಿ ವಿಜಯಪುರ ಪೊಲೀಸರು ವಿಶೇಷ ತಂಡ ರಚಿಸಿ, ಕಾರ್ಯಾಚರಣೆಗೆ ಇಳಿದಿದ್ದಾರೆ. ಜೂನ್.19 ರಂದು ಖಲೀಲ್ ಅಹ್ಮದ್ ವಶಕ್ಕೆ ಪಡೆದು, ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, 5 ದಿನ ಕಸ್ಟಡಿಗೆ ಪಡೆದು ಹೆಚ್ಚಿನ ವಿಚಾರಣೆ ನಡೆಸಿದಾಗ, ಜಿಲ್ಲೆಯ ನಂದಗುಡಿ, ಹೊಸಕೋಟೆ, ಸೂಲಿಬೆಲೆ, ಚಿಕ್ಕಬಳ್ಳಾಪುರದ ನಂದಿ, ಶಿಡ್ಲಘಟ್ಟ, ಎಚ್ ಕ್ರಾಸ್, ಮತ್ತು ಕೋಲಾರ ಜಿಲ್ಲೆಯ ಮಾಸ್ತಿ ಮಾಲೂರು ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದ ಒಟ್ಟು 42 ದ್ವಿಚಕ್ರವಾಹನವನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ಅಪರ ಪೊಲೀಸ್ ಅಧೀಕ್ಷಕ ವೆಂಕಟೇಶ್ ಪ್ರಸನ್ನ, ಡಿವೈಎಸ್ಪಿ ಪಾಂಡುರಂಗ, ಸರ್ಕಲ್ ಇನ್ಸ್‌ಪೆಕ್ಟರ್ ಲಕ್ಷ್ಮಿನಾರಾಯಣ್, ಪಿಎಸ್‌ಐ ಸುನೀಲ್ ಕುಮಾರ್, ಠಾಣಾ ಸಿಬ್ಬಂದಿ ಹಾಜರಿದ್ದರು.

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಭಾಗಿ

ನಾಡಪ್ರಭು ಕೆಂಪೇಗೌಡ ಜಯಂತಿಗೆ ಎಲ್ಲರೂ ಬನ್ನಿ

• **ದೇವನಹಳ್ಳಿ:** ಜೂ.27 ರಂದು ಕೆಂಪೇಗೌಡರ 517ನೇ ಜಯಂತಿ ಕಾರ್ಯಕ್ರಮಕ್ಕೆ ಎಲ್ಲರಿಗೂ ಆತ್ಮೀಯ ಆಹ್ವಾನ ನೀಡುತ್ತಿದ್ದು ಎಲ್ಲಾ ಸಮುದಾಯದ ಬಂಧುಗಳು ಆಗಮಿಸಬೇಕು ಎಂದು ಶಾಸಕ ಸಿ.ಎನ್. ಅಶ್ವತ್ಥನಾರಾಯಣ್ ತಿಳಿಸಿದರು.

ಅವರು ದೇವನಹಳ್ಳಿ ಬಳಿಯಿರುವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿರುವ 108 ಅಡಿ ಕೆಂಪೇಗೌಡರ ಪ್ರತಿಮೆಗೆ ಪುಷ್ಪಾರ್ಚನೆ ನಂತರ ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದ ಆಹ್ವಾನ ಪತ್ರಿಕೆ ಬಿಡುಗಡೆಮಾಡಿ ಮಾತನಾಡಿ ಅಂದು ಬೆಳಗ್ಗೆ 7.30 ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕೆಂಪೇಗೌಡ ಪ್ರತಿಮೆ ಬಳಿ ನಿರ್ಮಿಸಿರುವ ಥೀಮ್ ಪಾರ್ಕ್ ಲೋಕಾರ್ಪಣೆಗೊಳ್ಳಲಿದ್ದು 7.30ಕ್ಕೆ ಸಮಾಧಿಸ್ಥಳವಾದ ಕೆಂಪೇಗೌಡ ಗಡಿ ಗೋಪುರ ಉದ್ಯಾನವನದಲ್ಲಿ ವಿಶೇಷ ಕಾರ್ಯಕ್ರಮಗಳು ಜರುಗಲಿವೆ ಎಂದರು. ಕೆಂಪೇಗೌಡ ಬಡಾವಣೆಯಲ್ಲಿ ಸಂಜೆ 4 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಭಾರತದ ಘನತೆವೆತ್ತ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಕೇಂದ್ರ ಸಚಿವರಾದ ಕುಮಾರಸ್ವಾಮಿ, ವಿ.ಸೋಮಣ್ಣ, ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು. ಈ ಸಮಯದಲ್ಲಿ ಬಿಜೆಪಿ ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು, ದೇವನಹಳ್ಳಿ ಮಂಡಲ ಅಧ್ಯಕ್ಷ ಎಸ್.ಎಲ್. ಅಂಬರೀಷ್‌ಗೌಡ, ಜಿಲ್ಲಾ ಪ್ರ.ಕಾರ್ಯದರ್ಶಿ ನಾಗೇಶ, ಕೊಯಿರ ಬಾಬು, ಸಿಹಾಯನಹಳ್ಳಿ ವಿನಯ್‌ಕುಮಾರ್, ವೆಂಕಟೇಗೌಡ, ರವಿಕುಮಾರ್, ಮಧುಸೂಧನ್ ಓ.ಮುನಿಯಪ್ಪ, ಗೋಪಿನಾಥ್ ಸೇರಿದಂತೆ ಅನೇಕ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.

ವಾರ್ಷಿಕ ಮಹಾಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅರವಿಂದ್ ಅಭಿಮತ

ಸಹಕಾರ ಸಂಘಗಳಿಂದ ಗ್ರಾಮೀಣಾಭಿವೃದ್ಧಿ

• **ದೊಡ್ಡಬಳ್ಳಾಪುರ:** ಸಹಕಾರ ಸಂಘಗಳು ಉಳಿದರೆ ಗ್ರಾಮೀಣ ಪ್ರದೇಶದ ಆರ್ಥಿಕ ಪ್ರಗತಿ ಸಾಧ್ಯವೆಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅರವಿಂದ್ ಹೇಳಿದರು.ಅವರು ತಾಲೂಕಿನ ತೂಬಗೆರೆ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಉದ್ದೇಶವನ್ನು ಕುರಿತು ಮಾತನಾಡಿದರು.

ರೈತರು ಕೃಷಿಯೊಂದಿಗೆ ದೊಡ್ಡ ಮಟ್ಟದಲ್ಲಿ ಹೈನುಗಾರಿಕೆ, ಪಶುಪಾಲನೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದು ಆರ್ಥಿಕವಾಗಿ ಸದೃಢರಾಗಲು ನೆರವಾಗಿದೆ. ಹೈನುಗಾರಿಕೆ ಮಾಡುವ ರೈತರು ನಂದಿನಿ ಸಂಸ್ಥೆಯ ಫೀಡ್ಸ್‌ಅನ್ನು ರಾಸುಗಳಿಗೆ ನೀಡಿದರೆ ಉತ್ತಮ ಹಾಲು ದೊರೆಯುತ್ತದೆ ಹಾಗೂ ಸಂಘದ ಅಧ್ಯಕ್ಷರು ನಿರ್ದೇಶಕರು ಸೇರಿ ಸದಸ್ಯರಿಗೆ ಬಿಡಿಸಿಸಿ ಬ್ಯಾಂಕಿನಿಂದ ಸಾಲವನ್ನು ದೊರಕಿಸಿಕೊಟ್ಟರೆ ರೈತರ ಹಸುಗಳನ್ನು ಕಟ್ಟಿ ಹೆಚ್ಚಿಗೆ ಹಾಲನ್ನು ಸರಬರಾಜು ಮಾಡಿ ಸಂಘಕ್ಕೆ ನೀಡುತ್ತಾರೆ ಆಗ ಸಂಘ ಬೆಳೆಯುತ್ತದೆ ಎಂದು ಭರವಸೆ ನೀಡಿದರು, ಬೆಂಗಳೂರು ಹಾಲು ಒಕ್ಕೂಟದ ಉಪ ವ್ಯವಸ್ಥಾಪಕರಾದ ಎಲ್.ಬಿ.ನಾಗರಾಜ್ ಮಾತನಾಡಿ, ತೂಬಗೆರೆ ಹಾಲು ಉತ್ಪಾದಕರ ಸಹಕಾರ ಸಂಘವು ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದು ಸಂಘವು 14 ಲಕ್ಷದ 90 ಸಾವಿರ ಲಾಭ ಬಂದಿದೆ, ರೈತರು ಹೆಚ್ಚು ಹೆಚ್ಚು ಹಸುಗಳನ್ನು ಕಟ್ಟಿ ಸಂಘವನ್ನು ಇನ್ನಷ್ಟು ಬಲಿಷ್ಠ ಗೊಳಿಸಬೇಕಾಗಿದೆ ಹಾಗು ಗ್ರಾಮೀಣ ಹಾಲು ಉತ್ಪಾದಕರಿಗೆ ನ್ಯಾಯಯುತ ಬೆಲೆಯನ್ನು ನೀಡುವುದಲ್ಲದೆ ಪಟ್ಟಣ ಪ್ರದೇಶದ ಗ್ರಾಹಕರ ಬೇಡಿಕೆಗಳಾದ ಶುದ್ಧ ಆರೋಗ್ಯಕರ ಮತ್ತು ಗುಣಮಟ್ಟದ ಹಾಲು, ಬೆಣ್ಣೆ, ತುಪ್ಪ, ಪೇಡಾ, ಬಟರ್ ಪನೀರ್, ಖೋವಾ, ಸುವಾಸನೆಯುಕ್ತ ರುಚಿಕರ ಹಾಲು ಇತ್ಯಾದಿಗಳನ್ನು ಒದಗಿಸುತ್ತಿದೆ ಇದು ರೈತರಿಗೆ ಗ್ರಾಮೀಣ ಹಾಲು ಉತ್ಪಾದಕರಿಗೆ ನಿರಂತರ ಮಾರುಕಟ್ಟೆಯನ್ನು ಒದಗಿಸುವುದು ಹಾಗೂ ಗ್ರಾಹಕರ ಬೇಡಿಕೆಗೆ ಅನುಸಾರ ಉತ್ತಮ ಗುಣಮಟ್ಟದ ಹಾಲಿನ ಉತ್ಪನ್ನಗಳನ್ನು ಸರಬರಾಜು ಮಾಡುತ್ತಿದೆ. ಗ್ರಾಮೀಣ ಪ್ರದೇಶದ ಹಾಲು ಉತ್ಪಾದನೆಯ ಅಭಿವೃದ್ಧಿಗೆ ಒತ್ತು ಕೊಡುವ ಉದ್ದೇಶದಿಂದ ಅವಶ್ಯ ತಾಂತ್ರಿಕ ಸೌಲಭ್ಯಗಳು ಜಾನುವಾರುಗಳಿಗೆ ಸಮತೋಲನ ಪಶು ಆಹಾರ ಒದಗಿಸುತ್ತಿದೆ ಎಂದು ಹೇಳಿದರು,

ತೂಬಗೆರೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ವಿ. ವೆಂಕಟೇಶ್, ಸದಸ್ಯ ಮುನಿಕೃಷ್ಣಪ್ಪ, ದೇವೇಂದ್ರ ಸ್ವಾಮಿ, ಹಾಲು ಉತ್ಪಾದಕರ ಸಹಕಾರದ ಸಂಘದ ಮಾಜಿ ಅಧ್ಯಕ್ಷ ಗಂಗರಾಜು, ನಾರಾಯಣಸ್ವಾಮಿ, ವೆಂಕಟಪ್ಪ, ಹಾಲು ಒಕ್ಕೂಟದ ವಿಸ್ತರಣಾಧಿಕಾರಿ ವಿನಯ್ ಕುಮಾರ್,ಸಂಘದ ಕಾರ್ಯದರ್ಶಿ ಶ್ರೀನಿವಾಸ್ ಹಾಗೂ ಸಂಘದ ನಿರ್ದೇಶಕರು ಸಿಬ್ಬಂದಿ ವರ್ಗದವರು ಹಾಜರಿದ್ದರು.

ಬಸವಣ್ಣ ದೇವರ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ ಕಳವಳ

ವಿದ್ಯಾವಂತರೇ ಸೈಬರ್ ವಂಚನೆಗೆ ಬಲಿ

• **ನೆಲಮಂಗಲ:** ಇತ್ತೀಚಿನ ದಿನಗಳಲ್ಲಿ ವಿದ್ಯಾವಂತರೇ ಹೆಚ್ಚಾಗಿ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವುದು ಮತ್ತು ಸೈಬರ್ ವಂಚನೆಗೆ ಒಳಗಾಗುತ್ತಿರುವುದು ತೀವ್ರ ಆತಂಕಕಾರಿ ವಿಚಾರ ಎಂದು ಬಸವಣ್ಣ ದೇವರ ಮಠದ ಶ್ರೀ ಸಿದ್ದಲಿಂಗಸ್ವಾಮೀಜಿ ಕಳವಳ ವ್ಯಕ್ತಪಡಿಸಿದ್ದಾರೆ.

ನಗರದ ಶ್ರೀ ಬಸವಣ್ಣ ದೇವರ ಮಠದ ಆವರಣದಲ್ಲಿ ಶ್ರೀ ಬಸವೇಶ್ವರ ಬಾಲಕಿಯರ ಪಿ.ಯು. ಕಾಲೇಜು ಹಾಗೂ ಶ್ರೀ ಬಸವೇಶ್ವರ ಸ್ವತಂತ್ರ ಪಿ.ಯು. ಕಾಲೇಜಿನ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸ್ವಾಗತ ಸಮಾರಂಭ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು. ಸಮಾಜದಲ್ಲಿ ಇಂದು ಕೇವಲ ಅಂಕಗಳ ಮೂಲಕ ಪದವಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದೆಯೇ ಹೊರತು, ಕೌಶಲ್ಯವಿರುವವರಲ್ಲ. ಹೀಗಾಗಿ ವಿದ್ಯಾರ್ಥಿಗಳಿಗೆ ಕೌಶಲ್ಯಾಧಾರಿತ ಶಿಕ್ಷಣ ಅತ್ಯಂತ ಮುಖ್ಯವಾಗಿದೆ. ಇಂದಿನ ಯುವ ಸಮುದಾಯ ವಿವಿಧ ಆಮಿಷಗಳಿಗೆ ಒಳಗಾಗಿ ಸೈಬರ್ ಅಪರಾಧಗಳೆಂಬ ಅಪಾಯಕ್ಕೆ ಸಿಲುಕುತ್ತಿದ್ದಾರೆ. ಇದನ್ನು ನಿಯಂತ್ರಿಸುವ ಶಕ್ತಿ ನಮ್ಮ ಕೈಯಲ್ಲೇ ಇದ್ದು, ಪ್ರತಿಯೊಬ್ಬರೂ ಎಚ್ಚರಿಕೆಯ ಹೆಜ್ಜೆ ಇಡಬೇಕು ಎಂದು ಅವರು ಕರೆ ನೀಡಿದರು.

ಡಿವೈಎಸ್ಪಿ ಉಮಾರಾಣಿ ಮಾತನಾಡಿ, ತಂತ್ರಜ್ಞಾನದ ವೇಗ ಹೆಚ್ಚಾದಂತೆ ವಿದ್ಯಾರ್ಥಿನಿಯರು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳನ್ನು ಬಳಸುವಾಗ ತೀವ್ರ ಜಾಗೃತೆ ವಹಿಸಬೇಕು. ಅಪರಿಚಿತರೊಂದಿಗೆ ಮೊಬೈಲ್ ಮೂಲಕ ಸಂವಹನ ನಡೆಸುವುದನ್ನು ಸಂಪೂರ್ಣವಾಗಿ ನಿಲ್ಲಿಸಬೇಕು. ವಿದ್ಯಾರ್ಥಿಗಳು ಸಾಧ್ಯವಾದಷ್ಟು ಮೊಬೈಲ್ ಬಳಕೆಯಿಂದ ದೂರವಿದ್ದರೆ ಒಳ್ಳೆಯದು ಎಂದು ಕಿವಿಮಾತು ಹೇಳಿದರು. ಇದೇ ಸಂದರ್ಭದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು, ಪರ್ವತಾರೋಹಿ ಸಂತೋಷ್ ದೇವರಾಜಪ್ಪ, ಮಿಸ್ ಟೀನ್ ಕರ್ನಾಟಕ ಪ್ರಶಸ್ತಿ ವಿಜೇತೆ ಕುಮಾರಿ ಸುಮೇಕ್ಷಾ ಪ್ರಸಾದ್ ಹಾಗೂ ಡಿವೈಎಸ್ಪಿ ಉಮಾರಾಣಿ ಎಸ್ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಚಲನಚಿತ್ರ ನಟಿ ಪ್ರಿಯಾಂಕಾ ಉಪೇಂದ್ರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮೋಹನ್ ಕುಮಾರ್ .ಎನ್, ಜಾಗತಿಕ ಲಿಂಗಾಯತ ಮಹಾಸಭಾದ ಉಪಾಧ್ಯಕ್ಷ ಸಂಜೀವ್ ಕಡಗದ, ಎನ್‌ಪಿಎ ಮಾಜಿ ಅಧ್ಯಕ್ಷ ಮಲ್ಲಯ್ಯ, ಪ್ರಾಂಶುಪಾಲರಾದ ನೀಲಾ .ಹೆಚ್.ಎಸ್, ದೇವರಾಜು.ಬಿ.ಆರ್ ಸೇರಿದಂತೆ ಕಾಲೇಜಿನ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಿರುಸುದ್ದಿ

ತುಮಕೂರಿನಲ್ಲಿ ದಾವಣಗೆರೆ ಮೂಲದ ವಿದ್ಯಾರ್ಥಿ ಸಾವು

ತುಮಕೂರು: ಶೈಕ್ಷಣಿಕ ನಗರಿ ತುಮಕೂರಿನಲ್ಲಿ ಅತ್ಯಂತ ಕರುಣಾಜನಕ ಘಟನೆಯೊಂದು ಸಂಭವಿಸಿದೆ. ನಗರದ ಪ್ರಸಿದ್ಧ ಕಾಲೇಜೊಂದರಲ್ಲಿ ವ್ಯಾಸಂಗ ಮಾಡುತ್ತಿದ್ದ ಇಂಜಿನಿಯರಿಂಗ್ ವಿದ್ಯಾರ್ಥಿಯೊಬ್ಬ ಹಿಂದುಳಿದ ವರ್ಗಗಳ ವಸತಿ ನಿಲಯದಲ್ಲಿ ಸಾವಿಗೆ ಶರಣಾಗಿದ್ದಾನೆ. ಅದಕ್ಕೂ ಮುನ್ನ ಆತ ಪೋಷಕರಿಗೆ ಬರೆದಿಟ್ಟಿರುವ ಡೆತ್ ನೋಟ್ ದೊರೆತಿದೆ.

ಕೊಠಡಿಯಲ್ಲಿ ಯಾರು ಇಲ್ಲದ ವೇಳೆ ನೇಣಿಗೆ ಶರಣು: ಮೃತರನ್ನು ಮೂಲತಃ ದಾವಣಗೆರೆ ಜಿಲ್ಲೆಯ ದೊಡ್ಡಹಳ್ಳಿ ಗ್ರಾಮದ ಜಿ. ಇ ವೆಂಕಟೇಶ್ (25) ಎಂದು ಗುರುತಿಸಲಾಗಿದೆ. ವೆಂಕಟೇಶ್ ತುಮಕೂರು ನಗರದ ಪ್ರತಿಷ್ಠಿತ ಎಸ್‌ಐಟಿ ಕಾಲೇಜಿನಲ್ಲಿ ಮೂರನೇ ವರ್ಷದ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದರು. ನಗರದ ಉಪ್ಪಾರಹಳ್ಳಿಯಲ್ಲಿರುವ ಬಿಸಿಎಂ ಹಾಸ್ಟೆಲ್‌ನಲ್ಲಿ ಉಳಿದುಕೊಂಡಿದ್ದ ಅವರು, ಕೊಠಡಿಯಲ್ಲಿ ಯಾರೂ ಇಲ್ಲದ ಸಂದರ್ಭವನ್ನು ನೋಡಿಕೊಂಡು ನೇಣು ಬಿಗಿದುಕೊಂಡಿದ್ದಾನೆ. ಬೆಳಿಗ್ಗೆ ಸಹಪಾಠಿಗಳು ಕೊಠಡಿಗೆ ಬಂದು ನೋಡಿದಾಗ ಈ ಭೀಕರ ಘಟನೆ ಬೆಳಕಿಗೆ ಬಂದಿದೆ. ನೀವು ಐದು ಜನ ಒಟ್ಟಿಗೆ ಇರಬೇಕು, ಮನ ಕಲಕುವ ಕೊನೆಯ ಆಸೆ! ವಿದ್ಯಾರ್ಥಿ ವೆಂಕಟೇಶ್ ಆತ್ಮಹತ್ಯೆಗೆ ನಿಖರವಾದ ಕಾರಣವೇನೆಂಬುದು ಸದ್ಯಕ್ಕೆ ತಿಳಿದುಬಂದಿಲ್ಲ. ಆದರೆ, ಸಾವಿಗೂ ಮುನ್ನ ಅವರು ತಮ್ಮ ಹೆತ್ತ ಪೋಷಕರು ಹಾಗೂ ಕುಟುಂಬಸ್ಥರನ್ನು ಉದ್ದೇಶಿಸಿ ಭಾವನಾತ್ಮಕ ಡೆತ್ ನೋಟ್ ಒಂದನ್ನು ಬರೆದಿಟ್ಟಿದ್ದಾರೆ.

ಸ್ವಾಧೀನ ಪ್ರಮಾಣಪತ್ರಕ್ಕೆ ವಿನಾಯಿತಿ

ಮೈಸೂರು: ಹೊಸದಾಗಿ ನಿರ್ಮಿಸಿರುವ ಮನೆಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕವನ್ನು ಪಡೆಯಲು ಸ್ವಾಧೀನ ಪ್ರಮಾಣಪತ್ರ ನೀಡುವುದರಿಂದ ಒಂದು ಬಾರಿಯ ವಿನಾಯಿತಿ ನೀಡಿ ಆದೇಶ ಹೊರಡಿಸಿದೆ. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ವ್ಯಾಪ್ತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ಮತ್ತು ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ 2400 ಚದರ ಅಡಿಗಳವರೆಗೆ (+20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ +4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳು ಪೂರ್ಣಗೊಂಡು, ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ 31.5.2026ರ ಒಳಗಾಗಿ ಅರ್ಜಿ ಸಲ್ಲಿಸಿರುವ ಅಥವಾ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಾಗೂ ಯಾವುದೇ ವಿದ್ಯುತ್ ಸಂಪರ್ಕ ಪಡೆಯದೆ ಕಟ್ಟಡ ಪೂರ್ಣಗೊಂಡಿರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಈ ಆದೇಶ ಹೊರಡಿಸಿದೆ. ಆದೇಶ ಪ್ರಕಟಗೊಂಡ ದಿನದಿಂದ 15 ದಿನಗಳವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿ, ಸ್ವಾಧೀನಾನುಭವ ಪ್ರಮಾಣಪತ್ರ(LA) ಪಡೆಯುವುದರಿಂದ ಒಂದು ಬಾರಿಗೆ ವಿನಾಯಿತಿ ನೀಡಿದೆ. ಗ್ರಾಮೀಣ ಪ್ರದೇಶಗಳಲ್ಲಿ ರೈತರು ವಾಸಿಸುವ ಮನೆ, ತೋಟದ ಮನೆ, ಕೃಷಿ ಉಪಕರಣಗಳನ್ನು ಇಡುವ ಮನೆ, ದನದ ಕೊಟ್ಟಿಗೆ, ರೇಷ್ಮೆ ಗೂಡಿನ ಮನೆ ಇವುಗಳಿಗೆ ವಿದ್ಯುತ್ ಸಂಪರ್ಕಕ್ಕೆ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದಕ್ಕೆ ವಿನಾಯಿತಿ ನೀಡಿ ರಾಜ್ಯ ಸರ್ಕಾರ ಆದೇಶಿಸಿದೆ. ಆದ್ದರಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್)ದ ವ್ಯಾಪ್ತಿಯ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳುವಂತೆ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸೆಸ್ಕ್ ಉಪ ವಿಭಾಗ ಕಚೇರಿಗಳನ್ನು ಸಂಪರ್ಕಿಸುವಂತೆ ಸೆಸ್ಕ್ ಪ್ರಕಟಣೆಯಲ್ಲಿ ತಿಳಿಸಿದೆ.

ಪ್ರಾಧಿಕಾರದ ಹುದ್ದೆ ವೈಯಕ್ತಿಕ ಹುದ್ದೆಯಲ್ಲ: ಹೈಕೋರ್ಟ್

ಬೆಂಗಳೂರು: ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ) ಅಡಿಯಲ್ಲಿ ಮೊದಲ ಮೇಲ್ಮನವಿ ಪ್ರಾಧಿಕಾರದ ಹುದ್ದೆ ಕೇವಲ ವೈಯಕ್ತಿಕ ಹುದ್ದೆಯಲ್ಲ, ಅದು ಶಾಸನಬದ್ಧ ಅಧಿಕಾರವಾಗಿದೆ. ಹೀಗಾಗಿ ಹೊಸದಾಗಿ ಅಧಿಕಾರ ವಹಿಸಿಕೊಳ್ಳುವ ಅಧಿಕಾರಿಗಳಿಗೆ ಹಿಂದಿನಿಂದ ಬಾಕಿ ಉಳಿದಿರುವ ಕರ್ತವ್ಯಗಳು ಸಹ ಅನ್ವಯವಾಗುತ್ತವೆ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ತಮ್ಮ ಹಿಂದಿನ ಅಧಿಕಾರಿಗಳ ನಿರ್ಲಕ್ಷ್ಯದ ನೆಪವೊಡ್ಡಿ ಪ್ರಸ್ತುತ ಅಧಿಕಾರಿಗಳು ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ರಾಜ್ಯ ಮಾಹಿತಿ ಆಯೋಗವು ವಿಧಿಸಿದ್ದ 25 ಸಾವಿರ ರೂ. ದಂಡವನ್ನು ಪ್ರಶ್ನಿಸಿ ಬಿಡಿಎ ಕಾರ್ಯದರ್ಶಿ ಸಿ.ಎಲ್. ಶಿವಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ಪೀಠ ವಜಾಗೊಳಿಸಿ, ಆಯೋಗದ ಆದೇಶವನ್ನು ಎತ್ತಿಹಿಡಿದಿದೆ.

ಅಧಿಕಾರಿಗಳು ವರ್ಗಾವಣೆ ಅಥವಾ ಅಧಿಕಾರ ಬದಲಾವಣೆಯನ್ನು ನೆಪವನ್ನಾಗಿ ಮಾಡಿಕೊಂಡು ತಮ್ಮ ಶಾಸನಬದ್ಧ ಕರ್ತವ್ಯಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡುತ್ತಾ ಹೋದರೆ, ಆಡಳಿತಾತ್ಮಕ ವ್ಯವಸ್ಥೆಯಲ್ಲಿ ವಿಳಂಬ ಮತ್ತು ಅಸಮರ್ಪಕತೆ ಉಂಟಾಗುತ್ತದೆ. ಹಿಂದಿನ ಅಧಿಕಾರಿಗಳ ಅವಧಿಯಲ್ಲಿ ಆರಂಭವಾದ ಪ್ರಕರಣಗಳನ್ನು ಹೊಸದಾಗಿ ಅಧಿಕಾರ ವಹಿಸಿಕೊಂಡವರು ನಿರ್ಲಕ್ಷಿಸಲು ಅವಕಾಶವಿಲ್ಲ, ಇದು ಮಾಹಿತಿ ಹಕ್ಕು ಕಾಯ್ದೆಯ ಉದ್ದೇಶಕ್ಕೆ ವಿರುದ್ಧವಾಗುತ್ತದೆ ಎಂದು ಪೀಠ ಅಭಿಪ್ರಾಯಪಟ್ಟಿದೆ.

ಪ್ರಕರಣದ ಹಿನ್ನೆಲೆ : 2025ರ ಮೇ 8ರಂದು ಬಿಡಿಎ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡಿದ್ದ ಸಿ.ಎಲ್. ಶಿವಕುಮಾರ್ ಅವರು ಮೊದಲ ಮೇಲ್ಮನವಿ ಪ್ರಾಧಿಕಾರವಾಗಿಯೂ ನೇಮಕಗೊಂಡಿದ್ದರು. ಪ್ರಕರಣದ ವಿಚಾರಣೆಗೆ ಬಿಡಿಎ ಪರವಾಗಿ ಯಾರೂ ಹಾಜರಾಗದ ಹಿನ್ನೆಲೆಯಲ್ಲಿ ರಾಜ್ಯ ಮಾಹಿತಿ ಆಯೋಗವು ಕಳೆದ ಜ.1ರಂದು ಶಿವಕುಮಾರ್ ಅವರಿಗೆ 25 ಸಾವಿರ ರೂ. ದಂಡ ವಿಧಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಶಿವಕುಮಾರ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಸಾಲ ಮೇಳ ಕಾರ್ಯಕ್ರಮದಲ್ಲಿ ರೈತರಿಗೆ ಬಮುಲ್ ನಿರ್ದೇಶಕ ಸತೀಶ್ ಕಡತನಮಲೆ ಭರವಸೆ

ರೈತರಿಗೆ 15 ಲಕ್ಷ ರೂ.ವರೆಗೆ ಸಾಲ ಸೌಲಭ್ಯ

ಯಲಹಂಕ: ಹಾಲು ಉತ್ಪಾದಕರ ಆರ್ಥಿಕ ಶಕ್ತಿ ವೃದ್ಧಿಗಾಗಿ 15 ಲಕ್ಷ ರೂ.ವರೆಗೆ ಸಾಲ ನೀಡಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಬಮುಲ್ ನಿರ್ದೇಶಕ ಸತೀಶ್ ಕಡತನಮಲೆ ತಿಳಿಸಿದರು.

ರಾಜನಕುಂಟೆ ಶಿಬಿರ ಕಚೇರಿಯಲ್ಲಿ ಬುಧವಾರ ಆಯೋಜಿಸಿದ್ದ ಸಾಲ ಮೇಳ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯ ಮತ್ತು ಕೇಂದ್ರ ಸರ್ಕಾರದ ವಾರ್ಷಿಕ ಶೇ.3 ರಷ್ಟು ಬಡ್ಡಿದರದ ಸಾಲ ಯೋಜನೆ ಅಡಿಯಲ್ಲಿ ಬೆಂಗಳೂರು ಸಹಕಾರ ಹಾಲು ಒಕ್ಕೂಟ(ಬಮೂಲ್) ಮತ್ತು ಬಿಡಿಸಿಸಿ ಬ್ಯಾಂಕ್ ಸಹಯೋಗದಲ್ಲಿ ಹಾಲು ಉತ್ಪಾದಕರ ಆರ್ಥಿಕ ಶಕ್ತಿ ವೃದ್ಧಿಗಾಗಿ ಸಾಲ ಯೋಜನೆಯನ್ನು ರೂಪಿಸಿದ್ದು, ಸಾಲ ಮೇಳ ಆಯೋಜನೆ ಮೂಲಕ ಸರಳ ದಾಖಲೆಗಳನ್ನು ಪಡೆದು ರೈತರ ಮನೆ ಬಾಗಿಲಿಗೆ ತೆರಳಿ 15 ಲಕ್ಷ ರೂ. ವರೆಗೆ ಸಾಲ ನೀಡುವ ವಿನೂತನ ಯೋಜನೆಗೆ ಚಾಲನೆ ನೀಡಲಾಗಿದ್ದು, ರೈತರು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಬಮೂಲ್ ನಿರ್ದೇಶಕ ಸತೀಶ್ ಕಡತನಮಲೆ ತಿಳಿಸಿದರು.

ಹೈನು ಉತ್ಪಾದನೆಯನ್ನು ಹೆಚ್ಚಿಸಲು ನೆರವಾಗುವ ನಿಟ್ಟಿನಲ್ಲಿ ವಾರ್ಷಿಕ ಶೇ.3 ರಷ್ಟು ಬಡ್ಡಿ ದರದಲ್ಲಿ ಹೈನು ಉತ್ಪಾದಕರಿಗೆ 15 ಲಕ್ಷ ರೂ ವರೆಗೆ ಸಾಲ ನೀಡುವ ಯೋಜನೆ ಇದಾಗಿದ್ದು, ಸಾಲ ಮೇಳಗಳ ಆಯೋಜನೆ ಮೂಲಕ ಪಹಣಿ, ನೋಟೀಸ್, ಆಧಾರ್ ನಂಬರ್, ಬ್ಯಾಂಕ್ ಖಾತೆ ಮುಂತಾದ ಸರಳ ದಾಖಲೆಗಳನ್ನು ಅಧಿಕಾರಿಗಳ ಸಮಕ್ಷಮದಲ್ಲಿ ಸ್ಥಳದಲ್ಲೇ ಪಡೆದು, ಪರಿಶೀಲಿಸಿ ತ್ವರಿತ ಗತಿಯಲ್ಲಿ ಸಾಲ ನೀಡುವುದು ಸಾಲ ಮೇಳದ ಉದ್ದೇಶವಾಗಿದೆ. ಬಮೂಲ್ ಬೆಂಗಳೂರು ಉತ್ತರ ಮತಕ್ಷೇತ್ರದ ವ್ಯಾಪ್ತಿಗೆ ಯಲಹಂಕ, ಯಶವಂತಪುರ ಮತ್ತು ದೊಡ್ಡಬಳ್ಳಾಪುರ ತಾಲೂಕಿನ ಕಸಬಾವಾರು ಸೇರಿದಂತೆ ಬಿಡಿಸಿಸಿ ಬ್ಯಾಂಕ್‌ನ 3 ಶಾಖೆಗಳು ಬರಲಿದ್ದು, ಅವುಗಳ ಮೇಲ್ವಿಚಾರಕರು ಮತ್ತು ನಿರ್ದೇಶಕರೊಂದಿಗೆ ಮಾತನಾಡಿ, ರೈತರಿಗೆ ಸರಳ ವಿಧಾನದ ಮೂಲಕ ಸಾಲ ನೀಡುವುದು ಈ ಸಾಲಮೇಳದ ಉದ್ದೇಶವಾಗಿದೆ, ಹಾಲು ಉತ್ಪಾದಕ ರೈತರು ಮೇಳದ ಸದುಪಯೋಗ ಪಡೆದುಕೊಳ್ಳುವ ಮೂಲಕ ಹೈನು ಉತ್ಪಾದನೆ ಹೆಚ್ಚಿಸಿ ಆರ್ಥಿಕ ಪ್ರಗತಿ ಸಾಧಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಸುಮಾರು 150ಕ್ಕೂ ಹೆಚ್ಚು ಹಾಲು ಉತ್ಪಾದಕ ರೈತರು ಸಾಲಕ್ಕಾಗಿ ಅರ್ಜಿ ಸಲ್ಲಿಸಿದರು.

ವಿಶಿಷ್ಟಚೇತನರಿಗೆ ಸವಲತ್ತು ವಿತರಣೆ

ಪಿರಿಯಾಪಟ್ಟಣ: ವಿಕಸಿತ ಭಾರತದ ಪರಿಕಲ್ಪನೆಯಡಿ ಪ್ರಧಾನಿ ನರೇಂದ್ರ ಮೋದಿ ಯವರು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುತ್ತಿದ್ದು ಈ ಮಹತ್ ಕಾರ್ಯಕ್ಕೆ ವಿಕಲಚೇತನರು ಕೈಜೋಡಿಸಬೇಕು ಎಂದು ಮೈಸೂರು ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ಪಟ್ಟಣದ ಡಿ.ದೇವರಾಜ ಅರಸು ಕಲಾಭವನದಲ್ಲಿ ಸಾಮಾಜಿಕ ಅಧಿಕಾರಿತ ಭಾರತ ಸರ್ಕಾರದ ಅಡಿಪ್ ಯೋಜನೆಯಡಿಯಲ್ಲಿ ವಿಶಿಷ್ಟಚೇತನರಿಗೆ ಸವಲತ್ತು ವಿತರಿಸಿ ಮಾತನಾಡಿದರು.

ಮೋದಿಯವರು ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡಬೇಕೆಂಬ ಗುರಿಯೊಂದಿಗೆ ಗ್ರಾಮೀಣ ಮತ್ತು ನಗರ ಜನರ ಜೀವನ ಮಟ್ಟವನ್ನು ಸುಧಾರಿಸಲು ಬಜೆಟ್‌ನಲ್ಲಿ ವಿಶೇಷ ಚೇತನರ ಸಬಲೀಕರಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ವಿಶಿಷ್ಟಚೇತನರಲ್ಲಿ ಸಾಮಾನ್ಯರಿಗಿಂತ ಹೆಚ್ಚು ಪ್ರತಿಭೆ, ಆತ್ಮಸ್ಥೈರ್ಯ, ಸಂಕಲ್ಪ ಇದೆ. ಅವರಿಗೆ ಸಾಮಾನ್ಯ ಜನರಿಗಿಂತ ಹೆಚ್ಚಿನ ತಂತ್ರಜ್ಞಾನ ತಿಳಿದಿದೆ ನಿಮ್ಮೊಂದಿಗೆ ನಾವಿದ್ದೇವೆ ಎಂಬ ಸಂದೇಶ ನೀಡಲು ಸವಲತ್ತು ವಿತರಿಸಲಾಗುತ್ತಿದೆ. ದೇಶದ ಜನಸಂಖ್ಯೆಯಲ್ಲಿ ಶೇ 5 ರಷ್ಟು ಜನ ವಿಶಿಷ್ಟಚೇತನರು ಇದ್ದಾರೆ. ಸುಮಾರು 6.50 ಕೋಟಿ ಜನ ಅಂಗ ವೈಕಲ್ಯತೆಯಿಂದ ಬಳಲುತ್ತಿದ್ದಾರೆ. ಕೆಲವರಿಗೆ ಹುಟ್ಟಿನಿಂದಲೇ ಅಂಗವೈಕಲ್ಯತೆ ಕಾಣಿಸಿಕೊಳ್ಳುತ್ತದೆ. ಸಮಾಜ ಅವರಿಗೆ ಶಕ್ತಿ, ಆತ್ಮಸ್ಥೈರ್ಯ ನೀಡಿದರೆ ಉತ್ತಮ ಜೀವನ ಕಟ್ಟಿಕೊಳ್ಳುತ್ತಾರೆ ಎಂದರು. ವಿಕಲಚೇತನರು ಸಾಮಾನ್ಯರಂತೆ ಜೀವನ ನಡೆಸಬೇಕು ಎಂಬ ಉದ್ದೇಶದಿಂದ ಪಿರಿಯಾಪಟ್ಟಣ ತಾಲ್ಲೂಕಿನಲ್ಲಿ ವಿಶಿಷ್ಟಚೇತನರಿಗೆ ರೂ. 18 ಲಕ್ಷ ವೆಚ್ಚದಲ್ಲಿ ವೀಲ್ ಚೇರ್, ಟ್ರೈಸೈಕಲ್, ಬ್ಯಾಟರಿ ಚಾಲಿತ ವಾಹನ, ವಾಕರ್, ಸ್ಟಿಕ್‌ಗಳು, ಶ್ರವಣ ಸಾಧನಗಳು ಸೇರಿದಂತೆ ಇನ್ನಿತರ ಉಪಕರಣಗಳು ವಿತರಿಸಲಾಗುತ್ತಿದ್ದು ಆ ಮೂಲಕ ವಿಶೇಷ ಚೇತನರು ಘನತೆಯ ಜೀವನವನ್ನು ರೂಪಿಸಿಕೊಳ್ಳುವ ಅವಕಾಶ ಮಾಡಿಕೊಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಲ್. ನಾಗೇಂದ್ರ, ಮೈಸೂರು ಜಿಲ್ಲಾ ಬಿಜೆಪಿ ಗ್ರಾಮಾಂತರ ಘಟಕದ ಅಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ತಾಲ್ಲೂಕು ಘಟಕದ ಅಧ್ಯಕ್ಷ ಪಿ.ರಾಜೇಂದ್ರ, ಬಿಜೆಪಿ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎಂ.ಎಂ. ರಾಜೇಗೌಡ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಅಣ್ಣಯ್ಯ ಶೆಟ್ಟಿ ಉಪಸ್ಥಿತರಿದ್ದರು.

ಸಮಸ್ಯೆಗಳಿಗೆ ಶೀಘ್ರ ಪರಿಹಾರ

ಆನೇಕಲ್: ತಾಲೂಕಿನ ಶಾಂತಿಪುರ ಗ್ರಾಮದಲ್ಲಿರುವ ಶಾಂತಿಪುರ ಗ್ರಾಮ ಪಂಚಾಯಿತಿ ಕಚೇರಿ ಮುಂಭಾಗದಲ್ಲಿ 2026-27ನೇ ಸಾಲಿನ ಮೊದಲನೇ ಸುತ್ತಿನ ಗ್ರಾಮಸಭೆ ಬುಧವಾರ ನಡೆಯಿತು.

ಗ್ರಾಮಸಭೆಗೆ ಅಧಿಕಾರಿಗಳು ಹಾಗೂ ಚುನಾಯಿತ ಪ್ರತಿನಿಧಿಗಳು ಚಾಲನೆ ನೀಡಿದರು. ಸಭೆಯಲ್ಲಿ ಗ್ರಾಮಸ್ಥರು ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ, ಸ್ವಚ್ಛತೆ ಸೇರಿದಂತೆ ವಿವಿಧ ನಾಗರಿಕ ಸಮಸ್ಯೆಗಳನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದರು. ಸಾರ್ವಜನಿಕರಿಂದ ಸಲ್ಲಿಕೆಯಾಗಿದ್ದ ಅಹವಾಲುಗಳನ್ನು ಅಧಿಕಾರಿಗಳು ಆಲಿಸಿ, ಅವುಗಳನ್ನು ಹಂತ ಹಂತವಾಗಿ ಪರಿಹರಿಸುವ ಭರವಸೆ ನೀಡಿದರು. ಇದೇ ವೇಳೆ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಗಳ ಮೂಲಕ ದೊರೆಯುವ ಸರ್ಕಾರಿ ಯೋಜನೆಗಳು, ಸೌಲಭ್ಯಗಳು ಹಾಗೂ ಅವುಗಳನ್ನು ಪಡೆಯುವ ವಿಧಾನಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಶಾಂತಿಪುರ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಕೆ. ವೆಂಕಟೇಶ್ ಮಾತನಾಡಿ, ಗ್ರಾಮಸಭೆಯಲ್ಲಿ ಸಾರ್ವಜನಿಕರು ಪ್ರಸ್ತಾಪಿಸಿದ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತರಲಾಗಿದ್ದು, ಅವುಗಳ ಶೀಘ್ರ ಪರಿಹಾರಕ್ಕೆ ಪ್ರಾಮಾಣಿಕವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗ್ರಾಮಸಭೆಯಲ್ಲಿ ನೋಡಲ್ ಅಧಿಕಾರಿ ಡಾ. ರವಿ, ಗ್ರಾಮ ಪಂಚಾಯಿತಿ ಪಿಡಿಒ ರೆಹಮಾನ್ ಷರೀಫ್, ಕಾರ್ಯದರ್ಶಿ ಸದಾಶಿವ, ಕರವಸೂಲಿಗಾರ ಬಾಬು, ಮಾಜಿ ಅಧ್ಯಕ್ಷರಾದ ಚೂಡಸಂದ್ರ ಮದನ್, ಚಿಕ್ಕನಾಗಮಂಗಲ ವೆಂಕಟೇಶ್, ರಾಮಸ್ವಾಮಿ, ಚಂದ್ರ ಮೋಹನ್, ಗೋವಿಂದರಾಜ್, ಸಂತೋಷ್, ಚಂದ್ರು, ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು, ಪಂಚಾಯಿತಿ ಸಿಬ್ಬಂದಿ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

ಕೆಂಪೇಗೌಡ ಜಯಂತಿಗೆ ಸಕಲ ಸಿದ್ಧತೆ ಅದ್ದೂರಿ

ದೊಡ್ಡಬಳ್ಳಾಪುರ: ಕೆಂಪೇಗೌಡ ಜಯಂತ್ಯುತ್ಸವ ಆಚರಣಾ ಸಮಿತಿ ವತಿಯಿಂದ ಜೂನ್ 27ರಂದು ನಗರದ ಒಕ್ಕಲಿಗರ ಸಮುದಾಯ ಭವನದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ಆಚರಿಸಲಾಗುತ್ತಿದ್ದು, ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಕೆಂಪೇಗೌಡ ಜಯಂತ್ಯುತ್ಸವ ಆಚರಣಾ ಸಮಿತಿಯ ಅಧ್ಯಕ್ಷ ಟಿ..ಲಕ್ಷ್ಮಿನಾರಾಯಣ್ ತಿಳಿಸಿದರು.

ನಗರದ ಪಿಎಲ್‌ಡಿ ಬ್ಯಾಂಕ್ ಆವರಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಪ್ರಭು ಕೆಂಪೇಗೌಡರು ನಾಡಿಗೆ ನೀಡಿರುವ ಕೊಡುಗೆ ಅಪಾರವಾಗಿದ್ದು, ಜಗದ್ವಿಖ್ಯಾತ ಬೆಂಗಳೂರು ನಗರವನ್ನು ನಿರ್ಮಿಸಿ, ಎಲ್ಲಾ ಜಾತಿ ಪಂಗಡದವರನ್ನು ಸಮಾನವಾಗಿ ಕಂಡಿದ್ದಾರೆ. ಅವರ ಜಯಂತಿ ಆಚರಿಸುವ ಮೂಲಕ ಅವರ ಸಾಧನೆಗಳನ್ನು ಸ್ಮರಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು. ಜೂನ್ 27ರಂದು ಬೆಳಿಗ್ಗೆ 9.30ಗಂಟೆಗೆ ನಗರದ ನೆಲದಾಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಿಂದ ಕೆಂಪೇಗೌಡರ ಪ್ರತಿಮೆಯ ಭವ್ಯ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಲಿದೆ. ಮೆರವಣಿಗೆಯಲ್ಲಿ ಜಾನಪದ ವಿವಿಧ ಕಲಾತಂಡಗಳು ಭಾಗವಹಿಸಲಿವೆ. ಬೆಳಿಗ್ಗೆ 11 ಗಂಟೆಗೆ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆಯಲಿರುವ ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿ, ನಂತರ ಬೆಳಿಗ್ಗೆ 11.30 ಗಂಟೆಗೆ ಒಕ್ಕಲಿಗರ ಸಮುದಾಯ ಭವನದಲ್ಲಿ ಕೆಂಪೇಗೌಡರ ಅದ್ದೂರಿ ಜಯಂತ್ಯುತ್ಸವದ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಪ್ರಗತಿಪರ ರೈತರನ್ನು ಸನ್ಮಾನಿಸಲಾಗುವುದು. ಶಾಸಕ ಧೀರಜ್ ಮುನಿರಾಜು, ಮಾಜಿ ಶಾಸಕರಾದ ಕೃಷ್ಣಪ್ಪ, ಟಿ.ವೆಂಕಟರಮಣಯ್ಯ ಸೇರಿದಂತೆ ಎಲ್ಲಾ ಪಕ್ಷದ ಮುಖಂಡರು ಪಕ್ಷಾತೀತವಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಆರ್. ಸಿ.ಶಿವಕುಮಾರ್ ಮಾತನಾಡಿ ನಾಡಪ್ರಭು ಕೆಂಪೇಗೌಡರು ಕೇವಲ ಒಂದು ಸಮುದಾಯಕ್ಕೆ ಸೀಮಿತರಾಗಿಲ್ಲ, ಅವರು ಸರ್ವ ಸಮುದಾಯಗಳ ಅಭಿವೃದ್ಧಿಗಾಗಿ ಬೆಂಗಳೂರಿನಂತಹ ಮಹಾ ನಗರವನ್ನು ಕಟ್ಟಿದವರು, ಈ ಕಾರ್ಯಕ್ರಮ ಕೇವಲ ಒಂದು ಸಮುದಾಯದ ಕಾರ್ಯಕ್ರಮವಲ್ಲ, ಈ ಕಾರ್ಯಕ್ರಮದಲ್ಲಿ ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಎಲ್ಲಾ ನಾಯಕರು, ಪ್ರಮುಖರು ಒಮ್ಮನಸ್ಸಿನಿಂದ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಿದೆ ಎಂದರು.

ಮುಖಂಡರಾದ ಅಶ್ವತ್ಥನಾರಾಯಣ ಗೌಡ, ಶಶಿಧರ್ , ಜಯರಾಂ, ರಾಜಣ್ಣ, ಮನು, ನಾಗೇಶ್, ಕ್ರಿಸ್ ಹಾಜರಿದ್ದರು.

ಗ್ರಾಮ ಸಭೆಯಲ್ಲಿ ಸಮಸ್ಯೆಗಳ ಮಹಾಪೂರ

ಆನೇಕಲ್: ತಾಲ್ಲೂಕಿನ ಕಾವಲಹೊಸಹಳ್ಳಿ ಜನತಾ ಕಾಲೋನಿಯಲ್ಲಿ ಬ್ಯಾಗಡದೇನಹಳ್ಳಿ ಗ್ರಾಮ ಪಂಚಾಯಿತಿಯ 2026-27ನೇ ಸಾಲಿನ ಮೊದಲ ಸುತ್ತಿನ ಗ್ರಾಮ ಸಭೆ ಬುಧವಾರ ನಡೆಯಿತು.

ಗ್ರಾಮ ಸಭೆಗೆ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಶಿವರಾಮ್ ಪಾಟೀಲ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ನಾಗರಾಜ್ ಹಾಗೂ ಚುನಾಯಿತ ಪ್ರತಿನಿಧಿಗಳು ಚಾಲನೆ ನೀಡಿದರು. ಸಭೆಯಲ್ಲಿ ಗ್ರಾಮಸ್ಥರು ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿದೀಪ, ಸ್ವಚ್ಛತೆ ಸೇರಿದಂತೆ ವಿವಿಧ ನಾಗರಿಕ ಸಮಸ್ಯೆಗಳನ್ನು ಸಂಬಂಧಿತ ಇಲಾಖೆಗಳ ಅಧಿಕಾರಿಗಳ ಗಮನಕ್ಕೆ ತಂದರು. ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ತಮ್ಮ ಇಲಾಖೆಗಳ ಮೂಲಕ ದೊರೆಯುವ ವಿವಿಧ ಸರ್ಕಾರಿ ಯೋಜನೆಗಳು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಆಡಳಿತಾಧಿಕಾರಿ ಶಿವರಾಮ್ ಪಾಟೀಲ್ ಮಾತನಾಡಿ, ಗ್ರಾಮ ಸಭೆಯಲ್ಲಿ ಸ್ವೀಕರಿಸಲಾದ ಎಲ್ಲಾ ಮನವಿಗಳನ್ನು ಸಂಬಂಧಿತ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿ ಆದ್ಯತೆಯ ಮೇರೆಗೆ ಪರಿಹರಿಸಲಾಗುವುದು. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪಂಚಾಯಿತಿ ಬದ್ಧವಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಸದಸ್ಯರಾದ ಹರೀಶ್ ಗೌಡ, ಸತೀಶ್, ತಿಲಕ್ ಗೌಡ, ಶಾಂತಮ್ಮ ಬೈರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ವಾಣಿ, ಪಂಚಾಯಿತಿ ಕಾರ್ಯದರ್ಶಿ ಸುಬ್ರಮಣಿ, ಲೆಕ್ಕ ಸಹಾಯಕ ನಾಗಪ್ಪ, ಮಾಜಿ ಅಧ್ಯಕ್ಷರು, ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

ರಾಜಾರೋಷವಾಗಿ ಡ್ರಗ್ ಪೆಡ್ಲರ್ ಓಡಾಟ: ಅಶೋಕ

ಬೆಂಗಳೂರು: ಡ್ರಗ್‌ಪೆಡ್ಲರ್‌ಗಳು ಬೀದಿಗಳಲ್ಲಿ ರಾಜಾರೋಷವಾಗಿ ಓಡಾಡುತ್ತಿದ್ದು, ನ್ಯೂಸ್ ಪೆಡ್ಲರ್‌ಗಳು ಸರ್ಕಾರ ನಡೆಸುತ್ತಿರುವುದು ಕರ್ನಾಟಕದ ದುರಂತ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಟೀಕಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಅವರು ಸುದೀರ್ಘ ಪೋಸ್ಟ್ ಮಾಡಿದ್ದಾರೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರೇ, ನಿಮ್ಮ ಪ್ರಕಾರ ಎಚ್ ಎಂ ಎಂದರೆ ಹೋಮ್ ಮಿನಿಸ್ಟರೋ ಅಥವಾ ಹೆಡ್ಲೈನ್ ಮಿನಿಸ್ಟರೋ ಎಂದು ಕೇಳಿದ್ದಾರೆ. ಇಂದು ಕರ್ನಾಟಕದ ಯುವಜನತೆ ಎದುರಿಸುತ್ತಿರುವ ಅತಿದೊಡ್ಡ ಅಪಾಯ ಡ್ರಗ್ ಮಾಫಿಯಾ. ಶಾಲೆಗಳು, ಕಾಲೇಜುಗಳು, ಹಾಸ್ಟೆಲ್‌ಗಳು, ಯುವಜನರು ಸೇರುವ ಸ್ಥಳಗಳು, ಎಲ್ಲವೂ ಇಂದು ಡ್ರಗ್ ಪೆಡ್ಲರ್‌ಗಳಿಗೆ ಗುರಿಯಾಗುತ್ತಿವೆ. ಮಾಧ್ಯಮ ವರದಿಗಳು ರಾಜ್ಯದಲ್ಲಿ ಮಾದಕವಸ್ತು ಜಾಲ ಹೇಗೆ ಆಳವಾಗಿ ಬೇರುಬಿಟ್ಟಿದೆ ಎಂಬ ಆತಂಕಕಾರಿ ಚಿತ್ರಣವನ್ನು ಪ್ರತಿದಿನ ಬಿಚ್ಚಿಡುತ್ತಿವೆ. ಆದರೆ, ಮಾದಕವಸ್ತುಗಳ ಜಾಲದ ಹೆಡೆಮುರಿ ಕಟ್ಟಬೇಕಾದ ವಿಶೇಷ ಕಾರ್ಯಪಡೆಯೇ (ಎಎನ್‌ಟಿಎಫ್) ಇಂದು ಖಾಯಂ ಮುಖ್ಯಸ್ಥರಿಲ್ಲದೆ, ಕನಿಷ್ಠ ಸಿಬ್ಬಂದಿಯೂ ಇಲ್ಲದೆ ಹಲ್ಲಿಲ್ಲದ ಹಾವಿನಂತೆ ಕೆಲಸ ಮಾಡುತ್ತಿದೆ! ಈ ಪಡೆಗೆ ಎಫ್ಐಆರ್ ದಾಖಲಿಸುವ ಕನಿಷ್ಠ ಅಧಿಕಾರವನ್ನೂ ನೀಡದೆ ಸರ್ಕಾರ ಇದನ್ನು ಕೇವಲ ಒಂದು ಪ್ರದರ್ಶನದ ವಸ್ತುವನ್ನಾಗಿ ಮಾಡಿಕೊಂಡಿದೆ ಎಂದು ಲೇವಡಿ ಮಾಡಿದ್ದಾರೆ. ಮಾಧ್ಯಮಗಳು ಬಿಚ್ಚಿಟ್ಟಿರುವ ಮತ್ತೊಂದು ಕರಾಳ ಸತ್ಯ ಇನ್ನೂ ಭಯಾನಕವಾಗಿದೆ. ಶಾಲಾ-ಕಾಲೇಜುಗಳ ಸುತ್ತಮುತ್ತಲಿರುವ ಕ್ಯಾಂಟೀನ್ ಹಾಗೂ ಗೂಡಂಗಡಿ (ಪೆಟ್ಟಿಗೆ ಅಂಗಡಿ) ಅಂಗಡಿಗಳೇ ಇಂದು ಡ್ರಗ್ ಪೆಡ್ಲರ್‌ಗಳ ಮುಖ್ಯ ಅಡ್ಡೆಗಳಾಗಿವೆ. ಸಾವಿರಾರು ಯುವಜನರು ಈ ಜಾಲಕ್ಕೆ ಸಿಲುಕುತ್ತಿದ್ದರೂ ನಿಮ್ಮ ಇಲಾಖೆ ಮಾತ್ರ ಕೇವಲ ಬೆರಳೆಣಿಕೆಯಷ್ಟು ಕಿಂಗ್‌ಪಿನ್‌ಗಳನ್ನು ಬಂಧಿಸಿ ಕೈತೊಳೆದುಕೊಂಡಿದೆ. ಆದರೆ, ಈ ಘೋರ ಪರಿಸ್ಥಿತಿಯಲ್ಲಿ ನಮ್ಮ ಗೃಹ ಸಚಿವರು ಏನು ಮಾಡುತ್ತಿದ್ದಾರೆ? ಡ್ರಗ್ ಪೆಡ್ಲರ್‌ಗಳ ವಿರುದ್ಧ ಕಾರ್ಯಾಚರಣೆ ನಡೆಸುತ್ತಿದ್ದಾರೆಯೇ? ಯುವಜನರನ್ನು ರಕ್ಷಿಸುವ ಕೆಲಸ ಮಾಡುತ್ತಿದ್ದಾರೆಯೇ? ಖಂಡಿತ ಇಲ್ಲ ಎಂದಿದ್ದಾರೆ. ನೀವು ಪ್ರತಿದಿನ ಹೊಸ ರಾಜಕೀಯ ವಿವಾದಗಳನ್ನು ಪೆಡಲ್ ಮಾಡುತ್ತಿದ್ದೀರಿ, ಹೊಸ ಆರೋಪಗಳನ್ನು ಪೆಡಲ್ ಮಾಡುತ್ತಿದ್ದೀರಿ, ಹೊಸ ಹೆಡ್ಲೈನ್‌ಗಳನ್ನು ಪೆಡಲ್ ಮಾಡುತ್ತಿದ್ದೀರಿ ಎಂದು ಅಶೋಕ ಎಚ್ಚರಿಸಿದ್ದಾರೆ.

ಕಾರ್ಮಿಕರ ಮುಖಂಡರ ಮೇಲೆ ನಡೆದ ಹಲ್ಲೆ ಖಂಡನೀಯ: ವೆಂಕಟೇಶ್

ನೇಕಾರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಲಿ

ದೊಡ್ಡಬಳ್ಳಾಪುರ: ವಿದ್ಯುತ್ ಖಾಸಗೀಕರಣದ ವಿರುದ್ಧ ಹೋರಾಟ ನಡೆಸುತ್ತಿದ್ದ ರೈತರು, ನೇಕಾರರು ಹಾಗೂ ಕಾರ್ಮಿಕರ ಮುಖಂಡರ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಜ್ಯ ನೇಕಾರರ ಹಿತರಕ್ಷಣಾ ಸಮಿತಿ ಆಗ್ರಹಿಸಿದೆ.

ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಅಧ್ಯಕ್ಷ ವೆಂಕಟೇಶ್ ಮಾತನಾಡಿ, ಮಹಾಲಿಂಗಪುರ ತಾಲೂಕು ಹೋರಾಟ ಸಮಿತಿಯ ನೇತೃತ್ವದಲ್ಲಿ ಹೆಸ್ಕಾಂ ಕಚೇರಿ ಎದುರು ನಡೆದ ಪ್ರತಿಭಟನೆಯ ವೇಳೆ ನೇಕಾರರ ಮುಖಂಡ ಶಿವಲಿಂಗ ಟಿರ್ಕಿ ಅವರ ಮೇಲೆ ಹಲ್ಲೆ ನಡೆಸಿ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಖಂಡನೀಯ. ಈ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕೂಡಲೇ ಕಾನೂನು ಕ್ರಮ ಜರುಗಿಸಿ, ನೇಕಾರರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ನೇಕಾರರು ನೆಯ್ದ ಸೀರೆಗಳನ್ನು ಬಸ್ ಮೂಲಕ ಧರ್ಮಾವರಂಗೆ ಸಾಗಿಸುವ ಪರಿಸ್ಥಿತಿ ಎದುರಾಗಿದೆ. ದೊಡ್ಡಬಳ್ಳಾಪುರದಿಂದ ಧರ್ಮಾವರಂಗೆ ನೇರ ರೈಲು ಸಂಪರ್ಕ ಕಲ್ಪಿಸಿದರೆ ನೇಕಾರರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ದೊಡ್ಡಬಳ್ಳಾಪುರ ಟೆಕ್ಸ್‌ಟೈಲ್ ವೀವರ್ಸ್ ಅಸೋಸಿಯೇಷನ್ ಅಧ್ಯಕ್ಷ ನರಸಿಂಹಮೂರ್ತಿ ಹೇಳಿದರು.

ವಿದ್ಯುತ್ ವಿತರಣಾ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಪ್ರಯತ್ನ ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ. ಟಾಟಾ ಪವರ್ ಸಂಸ್ಥೆ ಸಲ್ಲಿಸಿರುವ ಅರ್ಜಿಯನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ತಿರಸ್ಕರಿಸಬೇಕು ಎಂದು ಅವರು ಆಗ್ರಹಿಸಿದರು. ಸಾರ್ವಜನಿಕ ವಿದ್ಯುತ್ ವ್ಯವಸ್ಥೆ, ಗ್ರಾಮೀಣ ವಿದ್ಯುತೀಕರಣ ಹಾಗೂ ಬಡ ಗ್ರಾಹಕರ ಹಿತರಕ್ಷಣೆಗೆ ಧಕ್ಕೆ ಉಂಟಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಆರ್. ಎಸ್. ಶ್ರೀನಿವಾಸ್, ಸಹ ಕಾರ್ಯದರ್ಶಿ ಎಂ. ಮುನಿರಾಜು, ಮುಖಂಡರಾದ ರಾಮು, ಬಾಬು, ಮಂಜುನಾಥ್, ಚೌಡಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಐದು ಪಾಲಿಕೆಗಳ ವ್ಯಾಪ್ತಿಯ ಸುಮಾರು 2,000 ಕಿ.ಮೀ ಪಾದಚಾರಿ ಮಾರ್ಗ ದುರಸ್ತಿ

70 ಕೋಟಿ ರೂ.ಅನುದಾನ ಮೀಸಲು

ಬೆಂಗಳೂರು: ನಗರದ ಐದು ಪಾಲಿಕೆಗಳ ವ್ಯಾಪ್ತಿಯ ಸುಮಾರು 2,000 ಕಿ.ಮೀ ಪಾದಚಾರಿ ಮಾರ್ಗಗಳಲ್ಲಿ ಕಂಡುಬರುವ ನ್ಯೂನತೆಗಳನ್ನು ಸರಿಪಡಿಸಲು 70 ಕೋಟಿ ಅನುದಾನ ಮೀಸಲಿಡಲಾಗಿದೆ. ಸ್ಲ್ಯಾಬ್‌ಗಳು, ಕರ್ಬ್ ಸ್ಟೋನ್‌ಗಳು, ಲೆವೆಲ್ ವ್ಯತ್ಯಾಸಗಳು ಸೇರಿದಂತೆ ಅಗತ್ಯ ದುರಸ್ತಿ ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಜಿಬಿಎ ಕೇಂದ್ರ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಪ್ರತಿವರ್ಷ ಸುಮಾರು 1,000 ಮಂದಿ ರಸ್ತೆ ಅಪಘಾತಗಳಲ್ಲಿ ಸಾವನ್ನಪ್ಪುತ್ತಿದ್ದು, ಅವರಲ್ಲಿ ಸುಮಾರು ಶೇ.30ರಷ್ಟು ಪಾದಚಾರಿಗಳೇ ಆಗಿದ್ದಾರೆ. ಸುರಕ್ಷಿತ ಹಾಗೂ ಸುಗಮ ಪಾದಚಾರಿ ಮಾರ್ಗಗಳು ಲಭ್ಯವಿದ್ದರೆ ಇಂತಹ ಅನೇಕ ಅಪಘಾತಗಳನ್ನು ತಡೆಯಲು ಸಾಧ್ಯವಾಗುತ್ತದೆ. ಸಾರ್ವಜನಿಕರು ಸಹ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಿಗ್ನಲ್ ಹಾಗೂ ಜಂಕ್ಷನ್‌ಗಳ ದುರಸ್ತಿಗೆ ಆದ್ಯತೆ : ನಗರದ ಪ್ರಮುಖ ಜಂಕ್ಷನ್‌ಗಳು ಹಾಗೂ ಸಿಗ್ನಲ್‌ಗಳಲ್ಲಿ ತುರ್ತು ದುರಸ್ತಿ ಕಾರ್ಯಗಳನ್ನು ಕೈಗೊಳ್ಳಬೇಕು. ರಸ್ತೆ ಗುಂಡಿಗಳು, ರಸ್ತೆ ಮೇಲ್ಮೈ ಹಾನಿ ಸೇರಿದಂತೆ ಇತರ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಸೂಚಿಸಲಾಗಿದೆ. ಸಿಗ್ನಲ್‌ಗಳ ಸಮೀಪ ಅಳವಡಿಸಿರುವ ಅನಗತ್ಯ ಹಂಪ್‌ಗಳನ್ನು ತೆರವುಗೊಳಿಸುವಂತೆಯೂ ಸೂಚಿಸಲಾಗಿದೆ ಎಂದು ಹೇಳಿದರು.

ಸಿಗ್ನಲ್ ಸಮೀಪ ವಾಹನ ನಿಲುಗಡೆಗೆ ನಿರ್ಬಂಧ: ನಗರದ ಸಿಗ್ನಲ್‌ಗಳಿಂದ 75 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ಬಸ್ ಅಥವಾ ಇತರ ವಾಹನಗಳ ನಿಲುಗಡೆಗೆ ಅವಕಾಶ ನೀಡಲಾಗದು. ಈ ಕುರಿತು ಸಂಚಾರ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಅಗತ್ಯ ಆದೇಶ ಹೊರಡಿಸಲು ಸೂಚನೆ ನೀಡಲಾಗಿದೆ. ಜುಲೈ 1ರಿಂದ ಆರ್ಟೀರಿಯಲ್ ಹಾಗೂ ಸಬ್-ಆರ್ಟೀರಿಯಲ್ ರಸ್ತೆಗಳ ಪಾದಚಾರಿ ಮಾರ್ಗಗಳು ಮತ್ತು ಪ್ರಮುಖ ರಸ್ತೆಗಳಲ್ಲಿ ತಳ್ಳುಗಾಡಿಗಳ ಮೂಲಕ ವ್ಯಾಪಾರ ಮಾಡಲು ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

ರಸ್ತೆಗುಂಡಿ ಮುಚ್ಚಿ

ನಗರದ ರಸ್ತೆ ಗುಂಡಿಗಳನ್ನು ವೈಜ್ಞಾನಿಕ ವಿಧಾನದಲ್ಲಿ ಬಾಕ್ಸ್ ಕಟಿಂಗ್ ಮಾಡಿ, ಜಲ್ಲಿ ತುಂಬಿ, ಡಾಂಬರೀಕರಣ ನಡೆಸಿ ರಸ್ತೆ ಮಟ್ಟಕ್ಕೆ ಸಮನಾಗಿ ದುರಸ್ತಿ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಲ್ಲದೆ, ರಸ್ತೆ ಗುಂಡಿ ಮುಚ್ಚುವ ಕಾರ್ಯವನ್ನು ಹೆಚ್ಚು ಪರಿಣಾಮಕಾರಿಯಾಗಿ ನಡೆಸಲು ಮುಂದಿನ ದಿನಗಳಲ್ಲಿ ಆಧುನಿಕ ಯಂತ್ರೋಪಕರಣಗಳ ಬಳಕೆಗೆ ಆದ್ಯತೆ ನೀಡುವಂತೆ ತಿಳಿಸಲಾಗಿದೆ ಎಂದು ಕೃಷ್ಣ ಬೈರೇಗೌಡ ಹೇಳಿದರು.

ಕಿರುಸುದ್ದಿ

ವಂಚನೆ: ದೂರು ದಾಖಲು

• **ಬೆಂಗಳೂರು:** ಅನಧಿಕೃತ ಜಾಲತಾಣಗಳ ಮೂಲಕ ಶವ ಸಂಸ್ಕಾರ ಸ್ಲಾಟ್ ಬುಕ್ಕಿಂಗ್ ಹೆಸರಿನಲ್ಲಿ ವಂಚನೆ ಮಾಡಿದವರ ವಿರುದ್ಧ ಬೆಂಗಳೂರು ಉತ್ತರ ನಗರ ಪಾಲಿಕೆ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದೆ.

ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಸುಗಮ ಹಾಗೂ ಪಾರದರ್ಶಕ ಸೇವೆ ಒದಗಿಸುವ ಉದ್ದೇಶದಿಂದ ಎರಡು ವಿದ್ಯುತ್ ಚಿತಾಗಾರಗಳನ್ನು ನಿರ್ವಹಿಸಲಾಗುತ್ತಿದೆ. ಇತ್ತೀಚೆಗೆ ಕೆಲವು ಅನಧಿಕೃತ ಜಾಲತಾಣಗಳು ಹಾಗೂ ಮಧ್ಯವರ್ತಿಗಳು ವಿದ್ಯುತ್ ಚಿತಾಗಾರಗಳಲ್ಲಿ ಶವ ಸಂಸ್ಕಾರಕ್ಕಾಗಿ ಸ್ಲಾಟ್ ಕಾಯ್ದಿರಿಸುವ ಹೆಸರಿನಲ್ಲಿ ಸಾರ್ವಜನಿಕರಿಂದ ಹೆಚ್ಚುವರಿ ಹಣ ವಸೂಲಿ ಮಾಡುತ್ತಿರುವುದು ಪಾಲಿಕೆಯ ಗಮನಕ್ಕೆ ಬಂದಿತ್ತು ಎಂದು ಪಾಲಿಕೆ ಮಾಹಿತಿ ನೀಡಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರವು ವಿದ್ಯುತ್ ಚಿತಾಗಾರಗಳಲ್ಲಿ ಶವ ಸಂಸ್ಕಾರಕ್ಕಾಗಿ ಅಧಿಕೃತವಾಗಿ 250 ರೂ. ಶುಲ್ಕವನ್ನು ಮಾತ್ರ ನಿಗದಿಪಡಿಸಿದೆ. ಆದರೆ ಕೆಲವು ಅನಧಿಕೃತ ಜಾಲತಾಣಗಳು ಹಾಗೂ ವ್ಯಕ್ತಿಗಳು ಸಾರ್ವಜನಿಕರನ್ನು ದಾರಿ ತಪ್ಪಿಸಿ ಹೆಚ್ಚಿನ ಹಣವನ್ನು ವಸೂಲಿ ಮಾಡುತ್ತಿರುವುದು ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಸೈಬರ್ ಕ್ರೈಂ ಪೊಲೀಸ್ ಠಾಣೆ, ಈಶಾನ್ಯ ವಿಭಾಗ, ಯಲಹಂಕದಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪಾಲಿಕೆ ತಿಳಿಸಿದೆ.

ಸಾರ್ವಜನಿಕರಿಂದ ಹೆಚ್ಚುವರಿ ಹಣ ವಸೂಲಿ ಮಾಡುತ್ತಿರುವ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರು ಯಾವುದೇ ಅನಧಿಕೃತ ಜಾಲತಾಣಗಳು, ಏಜೆಂಟ್‌ಗಳು ಅಥವಾ ಮಧ್ಯವರ್ತಿಗಳನ್ನು ಸಂಪರ್ಕಿಸದೇ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕೃತ ಜಾಲತಾಣಗಳ ಮೂಲಕ ಮಾತ್ರ ಶವ ಸಂಸ್ಕಾರದ ಸ್ಲಾಟ್‌ಗಳನ್ನು ಕಾಯ್ದಿರಿಸುವಂತೆ ಪಾಲಿಕೆ ಮನವಿ ಮಾಡಿದೆ.

ಬಿಜಿಎ ವ್ಯಾಪ್ತಿ ಜುಲೈ 1ರಿಂದ ಕಾನೂನು ಕ್ರಮ: ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಎಚ್ಚರಿಕೆ

ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ಸಲ್ಲ

• **ಬೆಂಗಳೂರು:** ಜುಲೈ 1 ರಿಂದ ಆದ್ಯತಾ ರಸ್ತೆಗಳಾದ ಆರ್ಟೀರಿಯಲ್ ಹಾಗೂ ಸಬ್-ಆರ್ಟೀರಿಯಲ್ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳ ಮೇಲೆ ವ್ಯಾಪಾರಕ್ಕೆ ಅವಕಾಶವಿಲ್ಲ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಹಾಗೂ ದುರಸ್ತಿ ಕಾಮಗಾರಿಗಳ ಕುರಿತು ಜಿಬಿಎ ಕೇಂದ್ರ ಕಚೇರಿಯಲ್ಲಿ ಅಧಿಕಾರಿಗಳ ಸಭೆ ನಡೆಸಿ, ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಿಬಿಎ ವ್ಯಾಪ್ತಿಯ ಪಾದಚಾರಿ ಮಾರ್ಗಗಳಲ್ಲಿ ಉಂಟಾಗಿರುವ ಒತ್ತುವರಿಗಳನ್ನು ಅಂಗಡಿ ಮಾಲೀಕರು ಸ್ವಯಂಪ್ರೇರಿತವಾಗಿ ತೆರವುಗೊಳಿಸಿಕೊಳ್ಳಲು ಜುಲೈ 1 ರವರೆಗೆ ಅವಕಾಶ ನೀಡಲಾಗುವುದು. ಜುಲೈ 1ರ ನಂತರ ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನವನ್ನು ಆರಂಭಿಸಲಾಗುವುದು ಎಂದು ಹೇಳಿದರು.

ಪಾದಚಾರಿ ಮಾರ್ಗದಲ್ಲಿ ನಡೆಯುವುದು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು ಎಂದು ಸರ್ವೋಚ್ಚ ನ್ಯಾಯಾಲಯ ಸ್ಪಷ್ಟಪಡಿಸಿದ್ದು, ಅದನ್ನು ಅನುಷ್ಠಾನಗೊಳಿಸಲು ಎಲ್ಲಾ ರಾಜ್ಯಗಳ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಿದೆ. ಅದರಂತೆ, ರಾಜ್ಯದಲ್ಲೂ ಮುಖ್ಯಮಂತ್ರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ಹಲವು ನಿರ್ದೇಶನಗಳನ್ನು ನೀಡಲಾಗಿದೆ ಎಂದು ತಿಳಿಸಿದರು.

ಪಾದಚಾರಿ ಮಾರ್ಗ ಅಭಿಯಾನ: ನಗರದಲ್ಲಿ ಸುಮಾರು 13 ಸಾವಿರ ಕಿ.ಮೀ ರಸ್ತೆ ಜಾಲವಿದ್ದು, ಆರ್ಟೀರಿಯಲ್ ಹಾಗೂ ಸಬ್-ಆರ್ಟೀರಿಯಲ್ ರಸ್ತೆಗಳಂತಹ ಆದ್ಯತಾ ರಸ್ತೆಗಳಾದ ಸುಮಾರು 2,000 ಕಿ.ಮೀ ವ್ಯಾಪ್ತಿಯಲ್ಲಿ ಪಾದಚಾರಿಗಳ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅಡ್ಡಿಯಾಗಿರುವ ಎಲ್ಲಾ ಅಡೆತಡೆಗಳನ್ನು ತೆರವುಗೊಳಿಸಲು ಆಂದೋಲನ ಮಾದರಿಯಲ್ಲಿ ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನ ಕೈಗೊಳ್ಳಲು ತೀರ್ಮಾನಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸ್ವಯಂಪ್ರೇರಿತವಾಗಿ ತೆರವುಗೊಳಿಸಲು ಅವಕಾಶ: ನಗರದಾದ್ಯಂತ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲಾಗುವುದು. ಅನೇಕ ಅಂಗಡಿಗಳು ತಮ್ಮ ಸಾಮಗ್ರಿಗಳು, ನಾಮಫಲಕಗಳು ಹಾಗೂ ಇತರೆ ವಸ್ತುಗಳನ್ನು ಪಾದಚಾರಿ ಮಾರ್ಗಗಳ ಮೇಲೆ ಇರಿಸುವುದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದೆ. ಆದ್ದರಿಂದ ಅಂಗಡಿ ಮಾಲೀಕರಿಗೆ ಜುಲೈ 1ರವರೆಗೆ ಸ್ವಯಂಪ್ರೇರಿತವಾಗಿ ಒತ್ತುವರಿಗಳನ್ನು ತೆರವುಗೊಳಿಸಿಕೊಳ್ಳಲು ಅವಕಾಶ ನೀಡಲಾಗುತ್ತಿದೆ. ಆ ಬಳಿಕವೂ ಒತ್ತುವರಿ ಮುಂದುವರಿದಲ್ಲಿ ಪಾಲಿಕೆಯಿಂದಲೇ ತೆರವುಗೊಳಿಸಿ, ನಿಯಮಾನುಸಾರ ದುಬಾರಿ ದಂಡ ವಿಧಿಸಲಾಗುವುದು ಎಂದು ತಿಳಿಸಿದರು.

ಪಾದಚಾರಿ ಮಾರ್ಗಗಳಲ್ಲಿ ಪಾರ್ಕಿಂಗ್‌ಗೆ ಅವಕಾಶವಿಲ್ಲ

ಪಾದಚಾರಿ ಮಾರ್ಗಗಳು ಸಾರ್ವಜನಿಕರ ಸಂಚಾರಕ್ಕಾಗಿ ನಿರ್ಮಿಸಲಾಗಿದ್ದು, ವಾಹನ ನಿಲುಗಡೆಗಾಗಿ ಅಲ್ಲ. ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಪಾದಚಾರಿ ಮಾರ್ಗಗಳಲ್ಲಿ ವಾಹನಗಳನ್ನು ನಿಲ್ಲಿಸಿದರೆ ಯಾವುದೇ ಮುಲಾಜಿಲ್ಲದೆ ಟೋಯಿಂಗ್ ಮೂಲಕ ತೆರವುಗೊಳಿಸಲಾಗುವುದು. ಜುಲೈ 1 ರಿಂದ ನಗರದಾದ್ಯಂತ ವಾರಸುದಾರರಿಲ್ಲದೆ ರಸ್ತೆ ಬದಿಯಲ್ಲಿ ನಿಂತಿರುವ ವಾಹನಗಳಿಗೆ ನೋಟಿಸ್ ಸ್ಟಿಕ್ಕರ್ ಅಂಟಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸ್ಟಿಕ್ಕರ್ ಅಂಟಿಸಿದ ಬಳಿಕ 7 ದಿನಗಳ ಕಾಲಾವಕಾಶ ನೀಡಲಾಗುವುದು. ನಂತರವೂ ವಾಹನಗಳನ್ನು ತೆರವುಗೊಳಿಸದಿದ್ದಲ್ಲಿ ಜುಲೈ 10 ರಿಂದ ಟೋಯಿಂಗ್ ಮೂಲಕ ತೆರವುಗೊಳಿಸಿ ಹರಾಜು ಪ್ರಕ್ರಿಯೆ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

> **ಪಾದಚಾರಿ ಮಾರ್ಗ 1.5 ಕೋಟಿ ಜನರ ಆಸ್ತಿಯಾಗಿದೆ. ಸುರಕ್ಷಿತ ಪಾದಚಾರಿ ಮಾರ್ಗಗಳ ನಿರ್ಮಾಣ ಜನರ ಬಹುದಿನಗಳ ಬೇಡಿಕೆ ಯಾಗಿದೆ. ನ್ಯಾಯಾಲಯದ ಆದೇಶವನ್ನು ಗೌರವಿಸಿ ಎಲ್ಲರೂ ಒತ್ತುವರಿಗಳನ್ನು ತೆರವುಗೊಳಿಸಲು ಸಹಕರಿಸಬೇಕು.**
>
> ■ ಕೃಷ್ಣ ಬೈರೇಗೌಡ, ಸಚಿವ

ಸರ್ಕಾರ ಹೆಲ್ಪ್‌ಲೆಸ್ ಅಲ್ಲ: ಸಚಿವ

• **ಬೆಂಗಳೂರು:** ಅಧಿಕಾರಿಗಳು ಹೆಲ್ಪ್‌ಲೆಸ್ ಇರಬಹುದು. ಆದರೆ, ಸರ್ಕಾರ ಹೆಲ್ಪ್‌ಲೆಸ್ ಅಲ್ಲ. ಪಾದಚಾರಿ ಒತ್ತುವರಿ ತೆರವಿಗೆ ಅಧಿಕಾರಿಗಳು ಕಾನೂನು ಪ್ರಕಾರ ಕ್ರಮ ಜರುಗಿಸಿ. ನಿಮಗೆ ಏನೇ ತೊಂದರೆ ಬಂದರೂ ನಿಮ್ಮ ಬೆನ್ನಿಗೆ ನಾನಿದ್ದೇನೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ)ದ ಅಧಿಕಾರಿಗಳಿಗೆ ಭರವಸೆ ನೀಡಿದ್ದಾರೆ. ಪಾದಚಾರಿ ಮಾರ್ಗ ಒತ್ತುವರಿ ತೆರವು, ಅಭಿವೃದ್ಧಿ ವಿಚಾರವಾಗಿ ಜಿಬಿಎ ಅಧಿಕಾರಿಗಳ ಸಭೆ ನಡೆಸಿದ ಅವರು, ನಾನೇನೋ ದೊಡ್ಡ ದೊಡ್ಡ ಕೆಲಸ ಮಾಡಿ ಅಂತ ಕೇಳಿಲ್ಲ, ಕನಿಷ್ಠ ಸರಿಯಾಗಿ ಗುಂಡಿ ಮುಚ್ಚೋಕೂ ಕಷ್ಟ ಅಂದ್ರೆ ಹೇಗೆ? ಯಾರೋ ಗುತ್ತಿಗೆದಾರನ ಯೋಗಕ್ಷೇಮ ವಿಚಾರಿಸಿದ್ದು ಸಾಕು, ಇನ್ನಾದರೂ ಜನಪರವಾಗಿ ಜನರ ಒಳಿತಿಗಾಗಿ ಕೆಲಸ ಮಾಡಿ.ಈ ಬಾರಿಯಂತೂ ಗುಂಡಿ ಮುಚ್ಚುವ ಕೆಲಸ ವೈಜ್ಞಾನಿಕವಾಗಿ ಆಗಲೇಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ. ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಬೇಕು. ಸಾರ್ವಜನಿಕರ ಉಪಯೋಗಕ್ಕೆ ಅವಕಾಶ ಮಾಡಿಕೊಡಬೇಕು ಎಂಬ ಚರ್ಚೆ ಸುಮಾರು 50 ವರ್ಷಗಳಿಂದ ನಡೆಯುತ್ತಿದೆ. ಆದರೂ ಯಾವುದೇ ಉಪಯೋಗವಾಗಿಲ್ಲ. ಇನ್ಮುಂದೆ ಇಂತಹ ಕೆಲಸಗಳೆಲ್ಲ ನಡೆಯಲ್ಲ ಎಂದು ಖಡಕ್ ಸೂಚನೆ ನೀಡಿದ್ದಾರೆ. ಮೊದ್ಲೇ ನಾವು ಮಾಡ್ತಾ ಇರೋದು ಪ್ಯಾಚ್ ಹಾಕೋ ಕೆಲಸ, ಅದ್ರಲ್ಲೂ ಮತ್ತೆ ಪ್ಯಾಚ್ ಹಾಕಂಗೆ ಮಾಡ್ತೀರಿ ನಮ್ಮ ಮರ್ಯಾದೆ ಹೋಗುತ್ತೆ. ಸಬ್ ಸರ್ಫೇಸ್ ರಿಪೇರಿ ಮಾಡದೆ ಮೇಲೆ ಮಾತ್ರ ಟಾರ್ ಹಾಕಿದ್ರೆ, ಗುಂಡಿಗೆ ಹಾಕಿದ ಪ್ಯಾಚ್ ಉಳಿಯುತ್ತಾ? ರಸ್ತೆ ಗುಂಡಿಗೆ ಸುಮ್ಮನೆ ಬೇಕಾಬಿಟ್ಟಿ ಮುಚ್ಚಬಾರದು. ಖರ್ಚು ಜಾಸ್ತಿ ಆದ್ರೂ ಪರ್ವಾಗಿಲ್ಲ, ಬಾಕ್ಸ್ ಕಟ್ ಮಾಡಿ ಜೆಲ್ಲಿ ಹಾಕಿಯೇ ಅದರ ಮೇಲೆ ಟಾರ್ ಹಾಕಬೇಕು ಎಂದು ಸೂಚಿಸಿದ್ದಾರೆ.

ಯುವಕರಿಗೆ ಉದ್ಯೋಗ

• **ಬೆಂಗಳೂರು:** ಮೈಕ್ರೋಸಾಫ್ಟ್ ಹಾಗೂ ಮೈಟಿ ಸ್ಟಾರ್ಟ್‌ಅಪ್ ಹಬ್ ಸಹಯೋಗದಲ್ಲಿ 1ಎಂ1ಬಿ ಸ್ಥಾಪಿಸಿರುವ ಗ್ರೀನ್ ಸ್ಕಿಲ್ಸ್ ಮತ್ತು ಅಪ್ಲೈಡ್ ಎಐ ಫಾರ್ ಕ್ಲೈಮೇಟ್ ಆಕ್ಷನ್ ಸೆಂಟರ್ ಆಫ್ ಎಕ್ಸಲೆನ್ಸ್ (ಸಿಒಇ) ಉದ್ಘಾಟನೆಯಾದ ನಾಲ್ಕು ತಿಂಗಳಲ್ಲೇ 150ಕ್ಕೂ ಹೆಚ್ಚು ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವಲ್ಲಿ ಮಹತ್ವದ ಸಾಧನೆ ಮಾಡಿದೆ.

ಬೆಂಗಳೂರಿನ ಸಿಒಇನಲ್ಲಿ ಆಯೋಜಿಸಿದ್ದ ಉದ್ಯೋಗ ಮೇಳದಲ್ಲಿ ತಂತ್ರಜ್ಞಾನ, ಉತ್ಪಾದನೆ, ಆಟೋಮೋಟಿವ್, ಏರೋಸ್ಪೇಸ್ ಹಾಗೂ ಎಂಜಿನಿಯರಿಂಗ್ ಕ್ಷೇತ್ರಗಳ 10ಕ್ಕೂ ಹೆಚ್ಚು ಪ್ರಮುಖ ಸಂಸ್ಥೆಗಳು ಭಾಗವಹಿಸಿದ್ದವು. ಸಾಫ್ಟ್‌ವೇರ್ ಅಭಿವೃದ್ಧಿ, ಎಐ ಆಧಾರಿತ ಹುದ್ದೆಗಳು, ಎಲೆಕ್ಟ್ರಾನಿಕ್ಸ್, ರಿಟೇಲ್, ಟೆಲಿಕಾಂ ಹಾಗೂ ಬಿಎಫ್‌ಎಸ್‌ಐ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ 200ಕ್ಕೂ ಹೆಚ್ಚು ಉದ್ಯೋಗಾವಕಾಶಗಳನ್ನು ನೀಡಲಾಯಿತು. ಎಂಜಿನಿಯರಿಂಗ್, ಐಟಿಐ, ಡಿಪ್ಲೊಮಾ ಹಾಗೂ ವಿಜ್ಞಾನ ಹಿನ್ನೆಲೆಯ 100ಕ್ಕೂ ಹೆಚ್ಚು ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಹಲವರಿಗೆ ಸ್ಥಳದಲ್ಲೇ ನೇಮಕಾತಿ ಪತ್ರಗಳನ್ನು ನೀಡಲಾಯಿತು. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ, ತೆಲಂಗಾಣ, ಆಂಧ್ರಪ್ರದೇಶ ಮತ್ತು ತಮಿಳುನಾಡಿನ ವಿವಿಧ ಉದ್ಯೋಗಗಳ ಮುಂದಿನ ಹಂತದ ಪ್ರಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ.

I AM PLACED!
I AM PLACED!

ಅಶ್ವತ್ಥ ನಾರಾಯಣಗೆ ಪಿಎಚ್‌ಡಿ ಪ್ರದಾನ

• **ಬೆಂಗಳೂರು :** ಬೆಂಗಳೂರು ವಿಶ್ವವಿದ್ಯಾಲಯದ ವಿದ್ಯುನ್ಮಾನ ಮಾಧ್ಯಮ ವಿಭಾಗದ ಸಂಶೋಧನಾ ವಿದ್ಯಾರ್ಥಿ ಅಶ್ವತ್ಥ ನಾರಾಯಣ ಎಸ್.ಎಲ್. ಅವರಿಗೆ ಪಿಎಚ್‌ಡಿ ಪದವಿ ಪ್ರದಾನ ಮಾಡಲಾಗಿದೆ.

ಅಶ್ವತ್ಥ ನಾರಾಯಣ ಅವರು ವಿದ್ಯುನ್ಮಾನ ಮಾಧ್ಯಮ ವಿಷಯದ ಅಡಿಯಲ್ಲಿ ಮಂಡಿಸಿದ ಉನ್ನತ ಶಿಕ್ಷಣ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ಡಿಜಿಟಲ್ ಸಿದ್ಧತೆ: ಕರ್ನಾಟಕದಲ್ಲಿ ಒಂದು ಅಧ್ಯಯನ ಎಂಬ ಮಹಾಪ್ರಬಂಧಕ್ಕೆ ಪಿಎಚ್‌ಡಿ ಒಲಿದಿದೆ. ಇವರು ಬೆಂಗಳೂರು ವಿಶ್ವವಿದ್ಯಾಲಯದ ವಿದ್ಯುನ್ಮಾನ ಮಾಧ್ಯಮ ವಿಭಾಗದ ಪ್ರಾಧ್ಯಾಪಕರಾದ ಡಾ. ರಾಜೇಶ್ವರಿ ಹಾರೇಸ್ ಅವರ ಮಾರ್ಗದರ್ಶನದಲ್ಲಿ ಈ ಸಂಶೋಧನೆಯನ್ನು ನಡೆಸಿ, ಪ್ರಬಂಧವನ್ನು ಸಲ್ಲಿಸಿದ್ದರು. ಸಂಶೋಧಕ ಅಶ್ವತ್ಥ ನಾರಾಯಣ ಅವರು ವಿಶ್ವವಿದ್ಯಾಲಯ ಧನಸಹಾಯ ಆಯೋಗದ ಪ್ರತಿಷ್ಠಿತ ಜೂನಿಯರ್ ರಿಸರ್ಚ್ ಫೆಲೋಶಿಪ್ ಹಾಗೂ ರಾಷ್ಟ್ರೀಯ ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಸಾಧನೆ ಮಾಡಿದ್ದರು. ಮೂಲತಃ ತುಮಕೂರು ಜಿಲ್ಲೆ, ಮಧುಗಿರಿ ತಾಲ್ಲೂಕಿನ ಸುದ್ದೇಕುಂಟೆ ಗ್ರಾಮದವರಾದ ಇವರು ಲಕ್ಷ್ಮ ಮತ್ತು ದಾಳಮ್ಮ ದಂಪತಿಯ ಪುತ್ರರಾಗಿದ್ದಾರೆ.

ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ನೇರಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ನಡವಳಿ ಆದೇಶ ಸಂಖ್ಯೆ:1572124/DMA/EST3/GRPD/5/2024. ದಿನಾಂಕ: 13-01-2026 ಪ್ರಕಾರ ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್‌ಯು 2022(ಇ), ದಿನಾಂಕ:23.11.2022ರ ಅಧಿಸೂಚನೆ ಅನ್ವಯ ಮತ್ತು ಸರ್ಕಾರದ ಪತ್ರ ಸಂಖ್ಯೆ: ಯುಡಿಡಿ 188 ಎಂಎನ್‌ಯು 2022(ಇ) ದಿನಾಂಕ:20-12-2022 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 02 ಸೇಮಿಮ 2026, ದಿನಾಂಕ:13-05-2026 ರನ್ವಯ ದಾವಣಗೆರೆ ಮಹಾನಗರ ಪಾಲಿಕೆಗಳಲ್ಲಿ ದಿನಾಂಕ:07-08-2017 ಪೂರ್ವದಲ್ಲಿ ನೇಮಕಾತಿ ಹೊಂದಿ ಪ್ರಸ್ತುತ ನೇರಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಮಾತ್ರ ನೇರ ನೇಮಕಾತಿಗೆ ಅರ್ಹರಿರುತ್ತಾರೆ. ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು-2022ರಡಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕ್ರ ಸಂ	ಹುದ್ದೆಯ ಹೆಸರು ಮತ್ತು ವೇತನ ಶ್ರೇಣಿ	ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ	ಅರ್ಹತೆಗಳು
1	ಪೌರಕಾರ್ಮಿಕರು (ವೇತನ ಶ್ರೇಣಿ: ರೂ. 27,000-46,675)	15	(1) ಕನ್ನಡ ಮಾತನಾಡಲು ಗೊತ್ತಿರಬೇಕು. (2) ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ನೇರಪಾವತಿ ಪೌರಕಾರ್ಮಿಕರು, ನೇರಪಾವತಿ ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಅಥವಾ ಗುತ್ತಿಗೆ ಅಥವಾ ಸಮಾನ ಕೆಲಸಕ್ಕೆ ಸಮಾನ ವೇತನ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ಕನಿಷ್ಠ 2 ವರ್ಷಗಳಿಗಿಂತ ಕಡಿಮೆಯಿಲ್ಲದ ಸೇವೆಯನ್ನು ಸಲ್ಲಿಸಿರುವ ಮತ್ತು ದಾವಣಗೆರೆ ಮಹಾನಗರ ಪಾಲಿಕೆಗಳಲ್ಲಿ ದಿನಾಂಕ: 07-08-2017 ರ ಪೂರ್ವದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವ್ಯಕ್ತಿ ಅಥವಾ ವ್ಯಕ್ತಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. (3) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಮಿಮ 2026, ದಿನಾಂಕ:13-05-2026 ರನ್ವಯ ಹುದ್ದೆಗಳ ವರ್ಗೀಕರಣ ಮಾಡಲಾಗಿದೆ. (4) ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ ನಅಇ 171 ಎಂಎನ್‌ಯು 2022(ಇ), ದಿನಾಂಕ: 23.11.2022ರ ಅಧಿಸೂಚನೆ ಜಾರಿಗೆ ಬಂದ ದಿನಾಂಕಕ್ಕೆ ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ.

ಹುದ್ದೆಗಳ ವರ್ಗೀಕರಣ:

ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ 15 ಪೌರಕಾರ್ಮಿಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾದ ವಿವರ

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಯೋ.ನಿ	ಕ.ಮಾ.ಅ	ಅಂ.ವಿ	ತೃ.ಲಿಂ	ಒಟ್ಟು
ಪ.ಜಾ	1	0	0	0	0	0	0	0	1
ಪ.ಪಂ	0	1	0	0	0	0	0	0	1
ಪ್ರ-1	0	0	0	0	0	0	0	0	0
ಪ್ರ-2ಎ	0	0	1	0	1	0	0	0	2
ಪ್ರ-2ಬಿ	0	0	0	1	0	0	0	0	1
ಪ್ರ-3ಎ	0	0	0	1	0	0	0	0	1
ಪ್ರ-3ಬಿ	0	1	0	0	0	0	0	0	1
ಸಾ.ಅ	1	3	3	0	0	0	1	0	8
ಒಟ್ಟು	2	5	4	2	1	0	1	0	15

ಅರ್ಜಿ ವಿವರ	ದಿನಾಂಕ	ಕಛೇರಿ ವಿಳಾಸ
ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ	24-06-2026	ದಾವಣಗೆರೆ ಮಹಾನಗರ ಪಾಲಿಕೆ ಕೇಂದ್ರ ಕಛೇರಿ, ರೈಲ್ವೆ ನಿಲ್ದಾಣ ಎದುರು, ಪಿ.ಬಿ ರಸ್ತೆ, ದಾವಣಗೆರೆ.
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	23-07-2026	

ವಿಶೇಷ ಸೂಚನೆ:

1. ಅಧಿಸೂಚನೆಯನ್ನು ದಾವಣಗೆರೆ ಮಹಾನಗರ ಪಾಲಿಕೆ ವೆಬ್‌ಸೈಟ್ www.davanagerecity.mrc. gov.in ಹಾಗೂ ಕೇಂದ್ರ ಕಛೇರಿ ಸೂಚನಾ ಫಲಕದಲ್ಲಿ ವೀಕ್ಷಿಸಬಹುದು.
2. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲ ಕಾಲಕ್ಕೆ ಹೊರಡಿಸಲಾಗುವ ಆದೇಶ/ ಸುತ್ತೋಲೆ/ಅಧಿಸೂಚನೆಗಳ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿದೆ.

ಸಹಿ/- ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಆಯುಕ್ತರು, ಮಹಾನಗರ ಪಾಲಿಕೆ ದಾವಣಗೆರೆ.

ವಾಸಾಇ/ದಾವಣಗೆರೆ/175/
ಕೆಎಸ್‌ಎಂಸಿಎ/2026-27

ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ
ಜಾಹೀರಾತುಗಳು
ವಿಶ್ವಾಸಾರ್ಹವಾದವು. ಆದರೆ
ಅದರಲ್ಲಿ ಪ್ರತಿಪಾದಿತವಾದ
ವಸ್ತು, ವಿಷಯ ವಿಚಾರಗಳು
ಜಾಹೀರಾತುದಾರರ
ಅಭಿಪ್ರಾಯ ಆಗಿದ್ದವೇ ಹೊರತು ಪತ್ರಿಕೆಯ
ಅಭಿಪ್ರಾಯವಾಗಿರುವುದಿಲ್ಲ.
-ಜಾಹೀರಾತು
ವ್ಯವಸ್ಥಾಪಕರು

AFFIDAVIT

I, Chittibabu @ Babu @ Rafeeq @ Rafiq S/o. Devaraj, aged about 58 years, R/at:No.26, Maduramma Colony, Opp. Madeena Masjid, BTM 1st Stage, Bengaluru - 560 079, I hereby declare that I am known and called by my family members and in the society as **Chittibabu** or **Babu** or **Rafeeq** and also called as **Rafiq** and all the names are represent me only, vide affidavit dated 23/6/2026 sworn to before R S Vijay Advocate and Notary Bangalore.

CHANGE OF NAME

I, **SHEFA BANU**, resident of # 25/5, 5th Cross, Bore Bank Road, Benson Town, Bengaluru-560046, Karnataka, India, do hereby declare that I have changed my name from **SHEFA BANU RAHEEL RAFI & SHIFA BANU** to **SHEFA BANU,** vide affidavit dated 24.06.2026, sworn to before B. Chitra, Advocate & Notary Public, Govt. of India, Bengaluru.

ನಗರಸಭಾ ಕಾರ್ಯಾಲಯ, ಮದ್ದೂರು, ಮಂಡ್ಯ ಜಿಲ್ಲೆ-571428
website : www.maddurtown.gov.in ಸಹಾಯವಾಣಿ ಸಂಖ್ಯೆ: 08232-232105
ನಂ: ನಸಮ/ಸಿವಿಲ್/ಟೆಂಡರ್-09/2026-27 ದಿ:23-06-2026

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಮದ್ದೂರು ನಗರಸಭೆ ವ್ಯಾಪ್ತಿಯ ಈ ಕೆಳಕಂಡ ಕಾಮಗಾರಿಗಳನ್ನು ಮದ್ದೂರು ನಗರಸಭೆಯ 2026-27 ನೇ ಸಾಲಿನ ಶೇಕಡ 24.10 ಮತ್ತು ಶೇಕಡ 7.25 ಹಾಗೂ 2026-27 ರ ಎಸ್.ಎಫ್.ಸಿ. ಎಸ್.ಸಿ./ಎಸ್.ಪಿ ಮತ್ತು ಎಸ್.ಟಿ./ಎಸ್.ಪಿ ಹಾಗೂ 2023-24 ಮತ್ತು 2024-25ನೇ ಸಾಲಿನ 15ನೇ ಹಣಕಾಸಿನ ಎನ್.ಎಂ.ಪಿ.ಸಿ. ಅನುದಾನದಡಿಯಲ್ಲಿ ನಿರ್ವಹಿಸಲು ಆಸಕ್ತಿಯುಳ್ಳ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಿದೆ.

ಕ್ರ ಸಂ	ಕಾಮಗಾರಿ ಹೆಸರು	ಅನುದಾನದ ವಿವರ	ಅಂದಾಜು ಮೊತ್ತ (ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ	ಮೀಸಲಾತಿ
01	Work to connect the borewells of the student dormitories located in the scheduled tribe student hostels by installing motors at CMC Maddur Limits (DMA/2026-27/OW/ WORK_INDENT59925)	SFC/ST/SP GRANTS	1.00	ರೂ.2,100/-	ಇತರೆ
02	Rooms for students studying in hostels belonging to scheduled castes installation of new doors and repairs to toilets and bathrooms (DMA/2026-27/OW/ WORK_INDENT59841)	SFC/ST/SP GRANTS	1.00	ರೂ.2,100/-	ಇತರೆ
03	work to drill a new borewell and install a pipeline for drinking water supply in mallaiah nagar somanahalli village (DMA/2026-27/WS/WORK_INDENT60026)	SFC DRINKING WATER FUNDS	9.32	ರೂ.11,650/-	ಎಸ್.ಸಿ
04	CC DRAIN WORK FROM GORVANHALI KABHARE KRISHNA HOUSE TO GORVANHALI-MALVALLI ROAD (DMA/2026-27/RD/WORK_INDENT60129)	7.25% OTHER BACKWARD CLASS	4.40	ರೂ.9,250/-	ಇತರೆ
05	CC DRAIN AND ROAD WORK FROM KAMBARA CHIKKA THAYAMMA HOUSE ROAD AT GORVANAHALLI (DMA/2026-27/RD/WORK_INDENT60139)	24.10% SCHEDULE CASTE	9.50	ರೂ.20,000/-	ಇತರೆ
06	Construction of a retaining wall at the back of the intermediate water lifting station established in km doddi village construction of a rainwater drain installation of paver blocks around the building and upgradation work of the building. (DMA/2026-27/OW/WORK_INDENT59743)	2023-24 NMPC GRANTS	46.00	ರೂ.39,000/-	ಕ್ಯಾಟಗರಿ-II(A)
07	construction of a retaining wall at the back of the intermediate water lifting station established in k m doddi village construction of a rain water drain installation of paver blocks around the building and upgradation work of the building. (DMA/2026-27/OW/WORK_INDENT59772)	2024-25 NMPC GRANTS	9.00	ರೂ.9,500/-	ಕ್ಯಾಟಗರಿ-II(A)

ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ:07-07-2026 ರ ಸಂಜೆ 17.30 ಗಂಟೆಯೊಳಗೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ. ಟೆಂಡರ್ ತೆರೆಯುವ ದಿನಾಂಕ:09-07-2026ರ ಬೆಳಗ್ಗೆ 11.00 ಗಂಟೆಗೆ ರಂದು ಹೆಚ್ಚಿನ ಮಾಹಿತಿಯನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https:// kppp.karnataka.gov.in ನಲ್ಲಿ ಹಾಗೂ ಕಛೇರಿ ವೇಳೆಯಲ್ಲಿ ತಾಂತ್ರಿಕ ಹಾಗೂ ಆರೋಗ್ಯ ಶಾಖೆಯಲ್ಲಿ ಪಡೆಯಬಹುದಾಗಿದೆ.

[illegible]/238/2025-26

ಸಹಿ/-ಪೌರಾಯುಕ್ತರು, ನಗರಸಭೆ-ಮದ್ದೂರು

ಮಾದಾರ ಚೆನ್ನಯ್ಯ ಸ್ವಾಮಿಗೆ ಕೆಂಪೇಗೌಡ ವಾರ್ಷಿಕ ಪ್ರಶಸ್ತಿ

• **ಬೆಂಗಳೂರು:** ಕೆಂಪೇಗೌಡ ಪ್ರತಿಷ್ಠಾನ ನೀಡುವ ಕೆಂಪೇಗೌಡ ವಾರ್ಷಿಕ ಪ್ರಶಸ್ತಿ 2026ಕ್ಕೆ ಉದ್ಯಮಿ ಟಿ.ವಿ. ಮೋಹನ್‌ದಾಸ್ ಪೈ, ಚಿತ್ರದುರ್ಗದ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿ ಸೇರಿದಂತೆ ಮತ್ತಿತರರು ಭಾಜನರಾಗಿದ್ದಾರೆ ಎಂದು ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.27ರಂದು ನಾಡಪ್ರಭು ಕೆಂಪೇಗೌಡರ ಜನ್ಮದಿನಾಚರಣೆ ಪ್ರಯುಕ್ತ ಜ್ಞಾನಜ್ಯೋತಿ ಆಡಿಟೋರಿಯಂನಲ್ಲಿ ಸಂಜೆ 4 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸೇರಿದಂತೆ ಮತ್ತಿತರ ಗಣ್ಯರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಿಗೆ 2 ಲಕ್ಷ ರೂ. ಹಾಗೂ 200 ಗ್ರಾಂ ಬೆಳ್ಳಿಯ ಸ್ಮರಣಿಕೆ ಮತ್ತು ರಾಜ್ಯಮಟ್ಟದ ಪುರಸ್ಕೃತರಿಗೆ 25 ಸಾವಿರ ನಗದು ನೀಡಿ ಗೌರವಿಸಲಾಗುತ್ತಿದೆ ಎಂದರು. ಇನ್ಫೋಸಿಸ್ ಸಂಸ್ಥೆಯ ಹಣಕಾಸು ವಿಭಾಗದ ಮಾಜಿ ಮುಖ್ಯಸ್ಥರು ಹಾಗೂ ಅಕ್ಷಯ ಪಾತ್ರೆ ಯೋಜನೆಯ ಸಹ-ಸಂಸ್ಥಾಪಕ ಟಿ.ವಿ. ಮೋಹನದಾಸ್ ಪೈ, ಅಸ್ಪೃಶ್ಯತೆ ಆಚರಣೆ ಮತ್ತು ದೇವದಾಸಿ ಪದ್ಧತಿಯ ನಿವಾರಣೆಗೆ ಶ್ರಮಿಸುತ್ತಿರುವ ಚಿತ್ರದುರ್ಗದ ಶಿವಶರಣ ಮಾದಾರ ಚೆನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಮತ್ತು ಎ.ಸಿ. ಲಕ್ಷ್ಮಣ್ ಅವರಿಗೆ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯಪ್ರಶಸ್ತಿ ಪುರಸ್ಕೃತರು: ಎಸ್.ವಿ.ರಂಗನಾಥ್, ಎಚ್.ಎ.ರಂಗನಾಥ್, ಎಂ.ಆರ್. ಶ್ರೀಶಂಕರ್, ಬಿ.ಎಂ. ಕೋಕರೆ, ಡಾ.ವಾಮದೇವಪ್ಪ, ಕೇಶವ ಅಯ್ಯ, ವಿಕ್ರಮ್ ಮುತ್ತಣ್ಣ, ಜಯಪ್ರಕಾಶ ಗೌಡ, ರವಿಕುಮಾರ್, ಯಶಸ್ವಿನಿ ಶರ್ಮ, ಪ್ರೇಮಾ ಗಣೇಶ್, ರಶ್ಮಿ ಸಾವಂತ್, ಕೃಷ್ಣಾ ರಾಮಮೂರ್ತಿ, ಧರ್ಮೇಂದ್ರ ಹಾಗೂ ಮಹೇಶ್ ಗೌಡ ಅವರಿಗೆ ನಾಡಪ್ರಭು ಕೆಂಪೇಗೌಡ ರಾಜ್ಯ ಮಟ್ಟದ ಪ್ರಶಸ್ತಿಗೆ ನೀಡಲಾಗುತ್ತಿದೆ.

ನ್ಯೂನ್ಯತೆ ಸರಿಪಡಿಸಲು ಆಗ್ರಹ

• **ಬೆಂಗಳೂರು:** ದುಡಿಯುವ ವರ್ಗದ ಹಿತ ಕಾಯಲು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನೂತನ ಕಾರ್ಮಿಕ ಸಂಹಿತೆಗಳಲ್ಲಿ ಕೆಲವು ನ್ಯೂನ್ಯತೆಗಳಿದ್ದು, ಅವುಗಳ ಪರಾಮರ್ಶೆ ನಡೆಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಭಾರತೀಯ ಮಜ್ದೂರ್ ಸಂಘ ಆಗ್ರಹಿಸಿದೆ.

ಈ ಕುರಿತು ನಗರದ ಖಾಸಗಿ ಹೋಟೆಲ್‌ನಲ್ಲಿ ಭಾರತೀಯ ಮಜ್ದೂರ್ ಸಂಘದ ಅಖಿಲ ಭಾರತೀಯ ಉಪಾಧ್ಯಕ್ಷ ಪವನ್ ಕುಮಾರ್ ಮಾತನಾಡಿ, ದಶಕಗಳ ಬಳಿಕ ಕೇಂದ್ರ ಸರ್ಕಾರವು ವಿವಿಧ 29 ಕಾರ್ಮಿಕ ಸಂಹಿತೆಗಳನ್ನು ಒಟ್ಟುಗೂಡಿಸಿ ಪರಿಷ್ಕರಣೆ ಮೂಲಕ ಪ್ರತ್ಯೇಕವಾದ ನಾಲ್ಕು ಸಂಹಿತೆಗಳನ್ನು ರೂಪಿಸಿ ಜಾರಿಗೆ ತಂದಿದೆ. ಇವುಗಳಲ್ಲಿ ವೇತನ ಸಂಹಿತೆ ಹಾಗೂ ಸಾಮಾಜಿಕ ಭದ್ರತೆ ಕಲ್ಪಿಸುವ ಕಾಯ್ದೆಗಳು ಸ್ವಾಗತಾರ್ಹ ಆದರೆ, ಉಳಿದಂತೆ ಕೈಗಾರಿಕೆ ಸಂಪರ್ಕ ಸಂಹಿತೆ ಹಾಗೂ ವೃತ್ತಿ ಸುರಕ್ಷತೆ, ಆರೋಗ್ಯ ಮತ್ತು ಉದ್ಯೋಗ ಕುರಿತು ನಿಬಂಧನೆಗಳ ಸಂಹಿತೆಗಳಲ್ಲಿ ಕೆಲವು ಅಸ್ಪಷ್ಟತೆ ಹಾಗೂ ಲೋಪಗಳಿದ್ದು ತ್ರಿಪಕ್ಷೀಯ ಪಾಲುದಾರ ಪ್ರತಿನಿಧಿಗಳನ್ನು ವಿಶ್ವಾಸಕ್ಕೆ ಪಡೆಯುವ ಚರ್ಚೆಗಳ ಬಗೆಹರಿಸಬೇಕಿದೆ ಎಂದರು.

ಕರ್ನಾಟಕವು ಪ್ರಥಮವಾಗಿ ಕನಿಷ್ಠ ವೇತನ ಕಾಯ್ದೆ ಅಧಿಸೂಚನೆ ಹೊರಡಿಸಿ ಜಾರಿಗೊಳಿಸಲು ಮುಂದಾಗಿರುವ ಕ್ರಮ ಶ್ಲಾಘನೀಯ. ಅದರಂತೆ, ಕೇಂದ್ರ ಸರ್ಕಾರವು ಕೂಡ ಅಸಂಘಟಿತ ವಲಯದ ಕಾರ್ಮಿಕರ ವೇತನ ಪರಿಷ್ಕರಣೆ ಮಾಡಬೇಕು. ಕಾರ್ಮಿಕ ಸಚಿವಾಲಯವು ಶೀಘ್ರವಾಗಿ ಭಾರತೀಯ ಕಾರ್ಮಿಕ ಸಮ್ಮೇಳನ ಆಯೋಜಿಸಿ ಕಾರ್ಮಿಕರ ಸಮಸ್ಯೆಗಳ ಕುರಿತು ಸಮಗ್ರವಾಗಿ ಚರ್ಚಿಸಬೇಕು. ಕಾಯ್ದೆಗಳಲ್ಲಿರುವ ನ್ಯೂನ್ಯತೆಗಳನ್ನು ಸರಿಪಡಿಸುವ ತನಕ ಆತುರದಲ್ಲಿ ಕಾರ್ಮಿಕ ಸಂಹಿತೆಗಳನ್ನು ಅನುಷ್ಠಾನಕ್ಕೆ ತರಬಾರದು ಎಂದು ಒತ್ತಾಯಿಸಿದರು.

ಅಭಿನಂದನೆ

ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತರಾದ ಜೆ.ಸತ್ಯವತಿ ಮತ್ತು ಆಯುಕ್ತರ ನಿಯೋಗವು ವಿಧಾನಸೌಧದಲ್ಲಿ ಬುಧವಾರ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿತು.

ಕಿರುಸುದ್ದಿ

ಕೃಷಿ ಮಾಧ್ಯಮ ಪ್ರಶಸ್ತಿಗೆ ಅರ್ಜಿ ಆಹ್ವಾನ

• **ಬೆಂಗಳೂರು:** ಬೆಂಗಳೂರು ಕೃಷಿ ವಿವಿಯ ಹಳೆ ವಿದ್ಯಾರ್ಥಿಗಳ ಸಂಘವು ಹೊಂಬಾಳೆ ಸಂಚಿತ ಹರಿಣಿಕುಮಾರ್ ಕೃಷಿ ಮಾಧ್ಯಮ ಪ್ರಶಸ್ತಿ-2026ಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪತ್ರಕರ್ತರು, ವಿಸ್ತರಣಾ ಕಾರ್ಯಕರ್ತರು, ವರದಿಗಾರರು, ಅಧಿಕಾರಿಗಳು ಪ್ರಶಸ್ತಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಕೃಷಿ ತಂತ್ರಜ್ಞಾನ ಪ್ರಸರಣೆಯ ವೇಗವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೃಷಿ ಮಾಧ್ಯಮ ಪ್ರಶಸ್ತಿಯನ್ನು ಪ್ರಾರಂಭಿಸಿದೆ. ಪ್ರಶಸ್ತಿಯು ಪ್ರಮಾಣ ಪತ್ರ ಹಾಗೂ 10 ಸಾವಿರ ನಗದು ಒಳಗೊಂಡಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ಹಳೆಯ ವಿದ್ಯಾರ್ಥಿಗಳ ಸಂಘ, ಕೃಷಿ ವಿಶ್ವವಿದ್ಯಾನಿಲಯ, ಪಶುವೈದ್ಯಕೀಯ ಕಾಲೇಜು ಆವರಣ, ಹೆಬ್ಬಾಳ, ಬೆಂಗಳೂರು-24 ಇವರಿಗೆ ಜು.31ರೊಳಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ದೂರವಾಣಿ: 080 23410754. ಇಮೇಲ್: alumniuasb83@gmail.com, ಜಾಲತಾಣ: www.alumniuasb.in ಅನ್ನು ಸಂಪರ್ಕಿಸಬಹುದು.

ಜಾಮ್ಕೊ ಇಂಟೀರಿಯರ್ಸ್ ಘಟಕ ಆರಂಭ

• **ಬೆಂಗಳೂರು:** ವಿಮಾನಗಳ ಒಳಾಂಗಣ ಉತ್ಪನ್ನಗಳ ಮಾರುಕಟ್ಟೆಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಜಾಮ್ಕೊ ಇಂಟೀರಿಯರ್ಸ್ ನಗರದಲ್ಲಿ ಉತ್ಪಾದನಾ ಘಟಕವನ್ನು ಆರಂಭಿಸಿದೆ. ಬೆಂಗಳೂರಿನಲ್ಲಿ ಸುಧಾರಿತ ಉತ್ಪನ್ನ ತಯಾರಿಕಾ ಸಾಮರ್ಥ್ಯಗಳನ್ನು ಸ್ಥಾಪಿಸುವ ಮೂಲಕ, ಜಾಮ್ಕೊ ಇಂಟೀರಿಯರ್ಸ್ ಏರೋಸ್ಪೇಸ್ ನಾವೀನ್ಯತೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಕೆಯಲ್ಲಿ ಕರ್ನಾಟಕದ ಮುಂದುವರಿದ ನಾಯಕತ್ವಕ್ಕೆ ಕೊಡುಗೆ ನೀಡುವ ಗುರಿಯನ್ನು ಹೊಂದಿದೆ. ಬೆಂಗಳೂರು ಎಂಜಿನಿಯರಿಂಗ್ ಸೆಂಟರ್ ಆಫ್ ಎಕ್ಸಲೆನ್ಸ್ ಅನ್ನು, ಜಾಮ್ಕೊ ಇಂಟೀರಿಯರ್ಸ್‌ನ ಜಾಗತಿಕ ಎಂಜಿನಿಯರಿಂಗ್ ನೆಟ್‌ವರ್ಕ್‌ನ ಪ್ರಮುಖ ಭಾಗವಾಗಿ ಸ್ಥಾಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ https://jamcointeriors.com ಸಂಪರ್ಕಿಸಬಹುದಾಗಿದೆ.

ಸೇವಾಸಿಂಧು ಪೋರ್ಟಲ್ ಮೂಲಕ ಬಸ್ ಪಾಸ್ ವಿತರಣೆ

• **ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 2026-27ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು ಕರ್ನಾಟಕ ಸರ್ಕಾರದ ಇ-ಡಿಸಿಎಸ್ ಇಲಾಖೆಯ ಸೇವಾಸಿಂಧು ಪೋರ್ಟಲ್ ಮೂಲಕ ವಿತರಿಸಲಾಗುತ್ತಿದೆ ನಿಗಮದ ಪ್ರಕಟಣೆ ತಿಳಿಸಿದೆ. ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಪ್ರಯಾಣಿಸುವ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಸರ್ಕಾರ ಆದೇಶಿಸಿದೆ. ಈಗಾಗಲೇ ಶುಲ್ಕ ಪಾವತಿಸಿ ಬಸ್ ಪಾಸ್ ಪಡೆದಿರುವ ವಿದ್ಯಾರ್ಥಿಗಳಿಗೆ ಪಾವತಿಸಿದ ಮೊತ್ತವನ್ನು ಮರುಪಾವತಿಸಲು ಸರ್ಕಾರ ಅನುಮೋದನೆ ನೀಡಿದೆ. ಈ ಹಿನ್ನೆಲೆಯಲ್ಲಿ ಮೇ 29 ರಿಂದ ಸೇವಾಸಿಂಧು ಪೋರ್ಟಲ್ ಮೂಲಕ ಶುಲ್ಕ ಪಾವತಿಸಿ ಬಸ್ ಪಾಸ್ ಪಡೆದಿರುವ ವಿದ್ಯಾರ್ಥಿಗಳು, ಶುಲ್ಕ ಮರುಪಾವತಿ ಪಡೆಯಲು ಸರ್ಕಾರದ ಸೇವಾಸಿಂಧು ಪೋರ್ಟಲ್‌ನಲ್ಲಿರುವ ಲಿಂಕ್ ಮೂಲಕ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಬಳಸಿ ಅರ್ಜಿ ಸಲ್ಲಿಸಬೇಕು. ಮರುಪಾವತಿಗಾಗಿ ಅನುಸರಿಸಬೇಕಾದ ಕ್ರಮಗಳು. ಆಧಾರ್ ಆಧಾರಿತ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕು.

2400 ಚದರ ಅಡಿ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣಪತ್ರ | ಅರ್ಜಿ ಸಲ್ಲಿಸಲು ಜು. 6ರವರೆಗೆ ಅವಕಾಶ

ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಗಡುವು

• **ಬೆಂಗಳೂರು:** ಒಸಿ ವಿನಾಯಿತಿ ವಿಷಯವಾಗಿ ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಅರ್ಜಿ ಸಲ್ಲಿಸಲು ಜುಲೈ 6ರವರೆಗೆ ಗಡುವು ನೀಡಲಾಗಿದೆ ಎಂದು ಬೆಸ್ಕಾಂ ತಿಳಿಸಿದೆ.

ಈ ಬಗ್ಗೆ ಬೆಸ್ಕಾಂ ಮಾಧ್ಯಮ ಪ್ರಕಟಣೆ ನೀಡಿದ್ದು, ಬೆಸ್ಕಾಂ ವ್ಯಾಪ್ತಿಯಲ್ಲಿ 2400 ಚದರ ಅಡಿವರೆಗಿನ (+ಶೇ. 20ರಷ್ಟು ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಿರುವ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ವಿನಾಯಿತಿ ನೀಡಲಾಗಿದೆ. ಜಿ+3 ಅಥವಾ ಸಿಲ್ಟ್ ಪಾರ್ಕಿಂಗ್ + 4 ಮಹಡಿಗಳಿರುವ ವಸತಿ ಕಟ್ಟಡಗಳ ಮಾಲೀಕರು 2026ಜುಲೈ 6, ರೊಳಗೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಬೆಸ್ಕಾಂ ಮನವಿ ಮಾಡಿದೆ.

2026 ಮೇ 31 ರಂದು ಅಥವಾ ಅದಕ್ಕೂ ಮೊದಲು ಪೂರ್ಣಗೊಂಡಿರುವ ವಸತಿ ಕಟ್ಟಡಗಳಿಗೆ ಮಾತ್ರ ಅನ್ವಯವಾಗುವಂತೆ 2400(+ಶೇ.20ರಷ್ಟು ಹೆಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ಒಸಿ ಇಲ್ಲದೆ ನಿರ್ಮಿಸಿರುವ ಮನೆಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕ ಕಲ್ಪಿಸಲು ಒಂದು ಬಾರಿಯ ವಿನಾಯಿತಿ ನೀಡಲು ಆದೇಶ ಹೊರಡಿಸಿ, 15 ದಿನಗಳೊಳಗೆ ಅರ್ಜಿ ಸಲ್ಲಿಸಲು ಬೆಸ್ಕಾಂ ಸೂಚಿಸಿತ್ತು.

ಜುಲೈ 6ರೊಳಗೆ ಅರ್ಜಿ ಸಲ್ಲಿಸಿ : ರಾಜ್ಯ ಸರ್ಕಾರ ಹೊರಡಿಸಿರುವಮಾರ್ಗಸೂಚಿವ್ಯಾಪ್ತಿಯೊಳಗಿರುವ ವಸತಿ ಕಟ್ಟಡಗಳಿಗೆ ಮಾತ್ರ ಶಾಶ್ವತ ವಿದ್ಯುತ್ ಸಂಪರ್ಕ ಕಲ್ಪಿಸಲು ಬೆಸ್ಕಾಂ ಈಗಾಗಲೇ ಚಾಲನೆ ನೀಡಿದ್ದು, ಸಾರ್ವಜನಿಕರು ಹತ್ತಿರದ ಬೆಸ್ಕಾಂ ಉಪ ವಿಭಾಗ ಕಚೇರಿಗಳಿಗೆ ಭೇಟಿ ನೀಡಿ, ಅಥವಾ ಬೆಸ್ಕಾಂ ಆನ್‌ಲೈನ್ ಜಾಲತಾಣದ ಮೂಲಕ ಜುಲೈ 6ರೊಳಗೆ ಅರ್ಜಿ ಸಲ್ಲಿಸಿ ಯೋಜನೆಯ ಉಪಯೋಗ ಪಡೆಯಲು ಬೆಸ್ಕಾಂ ವಿನಂತಿಸಿದೆ.

ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸಾರ್ವತ್ರಿಕ ರಜೆ ದಿನಗಳಾದ ಜೂನ್ 26 , ಜೂನ್ 27, 28 ಹಾಗೂ ಜುಲೈ 5 ರಂದು ಬೆಸ್ಕಾಂನ ಉಪ ವಿಭಾಗ ಕಚೇರಿಗಳು ಕಾರ್ಯನಿರ್ವಹಿಸುತ್ತವೆ ಎಂದು ಮಾಹಿತಿ ನೀಡಿದೆ.

ವಿದ್ಯುತ್ ಸಂಪರ್ಕಕ್ಕೆ ಮಾರ್ಗಸೂಚಿ

2026 ಮೇ 31 ರೊಳಗೆ ಕಟ್ಟಡ ಪೂರ್ಣಗೊಂಡು, ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಮಾಲೀಕರು ಅರ್ಜಿ ಸಲ್ಲಿಸಿದ್ದರೆ, ಅರ್ಜಿದಾರರು/ ಮಾಲೀಕರು ಸೇವಾ ಸಂಪರ್ಕ ಕಲ್ಪಿಸುವ ಅಧಿಕಾರಿಗಳ ಸಮ್ಮುಖದಲ್ಲಿ ಕಟ್ಟಡದ ಜಿಯೋ ಟ್ಯಾಗ್ ಆಧಾರಿತ ಫೋಟೋವನ್ನು ಸಲ್ಲಿಸಿ ಶಾಶ್ವತ ವಿದ್ಯುತ್ ಸಂಪರ್ಕವನ್ನು ಪಡೆಯಬೇಕು. 2026 ಮೇ 31 ರೊಳಗೆ ಕಟ್ಟಡ ಪೂರ್ಣಗೊಂಡು, ತಾತ್ಕಾಲಿಕ ವಿದ್ಯುತ್ ಸಂಪರ್ಕವಿದ್ದಲ್ಲಿ, ಶಾಶ್ವತ ಸಂಪರ್ಕಕ್ಕೆ ಅರ್ಜಿ ಸಲ್ಲಿಸದಿದ್ದಲ್ಲಿ, ಅರ್ಜಿದಾರರು/ ಮಾಲೀಕರು ಕಟ್ಟಡದ ಸಮ್ಮುಖದಲ್ಲಿ ತೆಗೆದ ಜಿಯೋ ಟ್ಯಾಗ್ ಆಧಾರಿತ ಫೋಟೋವನ್ನು ಸಲ್ಲಿಸಿ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಹತ್ತಿರದ ಬೆಸ್ಕಾಂ ಉಪ ವಿಭಾಗ ಕಚೇರಿಗೆ ಭೇಟಿ ನೀಡಿ ಅಥವಾ ಬೆಸ್ಕಾಂ ಆನ್‌ಲೈನ್ ಜಾಲತಾಣದ ಮೂಲಕ ಅರ್ಜಿ ನೋಂದಣಿ ಮಾಡಿಕೊಳ್ಳಬೇಕೆಂದು ಬೆಸ್ಕಾಂ ತಿಳಿಸಿದೆ. 2026 ಮೇ 31 ರೊಳಗೆ ವಸತಿ ಕಟ್ಟಡ ಪೂರ್ಣಗೊಂಡಿದ್ದರೂ ಯಾವುದೇ ತಾತ್ಕಾಲಿಕ ಅಥವಾ ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಅರ್ಜಿ ಸಲ್ಲಿಸದಿದ್ದರೆ ಅರ್ಜಿದಾರರು/ ಮಾಲೀಕರು ಕಟ್ಟಡದ ಸಮ್ಮುಖದಲ್ಲಿ ತೆಗೆದ ಜಿಯೋ ಟ್ಯಾಗ್ ಆಧಾರಿತ ಫೋಟೋವನ್ನು ಸಲ್ಲಿಸಿ ಹತ್ತಿರದ ಬೆಸ್ಕಾಂ ಉಪ ವಿಭಾಗ ಕಚೇರಿಗೆ ಭೇಟಿ ನೀಡಿ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ನೋಂದಣಿ ಮಾಡಿಕೊಳ್ಳಬೇಕೆಂದು ಬೆಸ್ಕಾಂ ಮಾಹಿತಿ ನೀಡಿದೆ.

ರಸ್ತೆ ಇಕ್ಕೆಲದಲ್ಲಿ ತ್ಯಾಜ್ಯ: ಆಕ್ರೋಶ

• **ಬೆಂಗಳೂರು:** ಉತ್ತರಹಳ್ಳಿ ಹಾಗೂ ಕೆಂಗೇರಿಯನ್ನು ಸಂಪರ್ಕಿಸುವ ಪ್ರಮುಖ ರಸ್ತೆಯ ಇಕ್ಕೆಲಗಳಲ್ಲಿ ರಾಜಾರೋಷವಾಗಿ ತ್ಯಾಜ್ಯ ಹಾಗೂ ಕಟ್ಟಡದ ಅವಶೇಷಗಳನ್ನು (ಡೆಬ್ರಿಸ್) ಸುರಿಯಲಾಗುತ್ತಿದ್ದು, ಪರಿಸರ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಉತ್ತರಹಳ್ಳಿ ಹಾಗೂ ಕೆಂಗೇರಿಯನ್ನು ಸಂಪರ್ಕಿಸುವ ಪ್ರಮುಖ ರಸ್ತೆಯ ಬಿಜಿಎಸ್ ಆಸ್ಪತ್ರೆ ಹಾಗೂ ಸಾವನ್ ದರ್ಬಾರ್ ಆಶ್ರಮ ನಡುವೆ ಜನವಸತಿ ಇಲ್ಲದಿರುವುದರಿಂದ ಕೆಲವರು ನಿರಂತರವಾಗಿ ಕಸದ ರಾಶಿಯನ್ನೇ ಇಲ್ಲಿ ತಂದು ಹಾಕುತ್ತಿದ್ದಾರೆ. ಆದರೆ ಈ ರಸ್ತೆಯಲ್ಲಿ ಸಾವಿರಾರು ಮಂದಿ ಓಡಾಡುತ್ತಾರೆ. ಪ್ಲಾಸ್ಟಿಕ್ ಸೇರಿದಂತೆ ಹಾನಿಕಾರಕ ಘನತ್ಯಾಜ್ಯ ಹಾಗೂ ಕಟ್ಟಡ ಕೆಡವಿದ ಅವಶೇಷಗಳನ್ನು ರಸ್ತೆಯ ಎರಡು ಬದಿಗಳಲ್ಲಿ ಸುರಿಯಲಾಗಿದೆ. ಇದರಿಂದಾಗಿ ದುರ್ವಾಸನೆ ಹರಡಿದ್ದು, ಮಳೆ ಬಂದರೆ ಕಟ್ಟಡ ತ್ಯಾಜ್ಯದ ಮಣ್ಣುಗಳು ರಸ್ತೆಗೆ ಬರುತ್ತವೆ ಎಂದು ಸ್ಥಳೀಯರು ಅಸಮಾಧಾನ ಹೊರಹಾಕಿದ್ದಾರೆ.

ಇದು ಕೇವಲ ಪರಿಸರ ಮಾಲಿನ್ಯಕ್ಕೆ ಸೀಮಿತವಾಗದೆ, ನಿತ್ಯ ಸಂಚರಿಸುವ ವಾಹನ ಸವಾರರ ಪ್ರಾಣಕ್ಕೂ ಕಂಟಕವಾಗಿ ಪರಿಣಮಿಸಿದೆ. ಗ್ಲೋಬಲ್ ವಿಲೇಜ್ ಮುಂತಾದ ಪ್ರಮುಖ ಐಟಿ ತಾಣಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಇದಾಗಿದ್ದು, ನಿತ್ಯ ಸಾವಿರಾರು ಉದ್ಯೋಗಿಗಳು ಹಾಗೂ ಸಾರ್ವಜನಿಕರು ಇಲ್ಲಿ ಸಂಚರಿಸುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಸ ಸುರಿಯುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯ ಉದ್ಯೋಗಿಗಳು ಹಾಗೂ ಸಾರ್ವಜನಿಕರು ಒತ್ತಾಯಿಸಿದ್ದಾರೆ.

> **ಖಾಲಿ ಜಾಗದಲ್ಲಿ ತ್ಯಾಜ್ಯವನ್ನು ತಂದು ಸುರಿಯಲಾಗುತ್ತಿದೆ. ರಸ್ತೆಯ ಪಕ್ಕದಲ್ಲೇ ಕಸದ ರಾಶಿಗಳು ನಿರ್ಮಾಣವಾಗಿರುವುದರಿಂದ, ಮಳೆ ಬಂದಾಗ ಈ ಎಲ್ಲಾ ತ್ಯಾಜ್ಯಗಳು ಮುಖ್ಯ ರಸ್ತೆಯ ಮೇಲೆ ಕೊಚ್ಚಿ ಬರುತ್ತವೆ. ಇದರಿಂದ ವಾಹನ ಸವಾರರಿಗೂ ಸಮಸ್ಯೆಯಾಗಲಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಗಮನಹರಿಸಬೇಕಿದೆ.**
>
> ■ **ನಿತಿನ್ ಅಶೋಕ್ ಕುಮಾರ್, ಸ್ಥಳೀಯರು**

ಸಮಸ್ಯೆಗಳ ಪರಿಶೀಲನೆ

• **ಬೆಂಗಳೂರು:** ಜಯನಗರದ ಗುರಪ್ಪನಪಾಳ್ಯ ವಾರ್ಡ್‌ನ ಸಮಸ್ಯೆಗಳ ಕುರಿತು ಸಮಗ್ರ ಪರಿಶೀಲನೆಯನ್ನು ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ. ಎನ್. ರಮೇಶ್ ನಡೆಸಿದ್ದಾರೆ. ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯುಂಟು ಮಾಡುತ್ತಿದ್ದ ಫುಟ್‌ಪಾತ್‌ಗಳನ್ನು ಅತಿಕ್ರಮಿಸಿ ನಿರ್ಮಿಸಲಾಗಿರುವ ಮನೆಗಳನ್ನು ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಈ ವೇಳೆ ಈ ಮನೆಗಳಲ್ಲಿ ವಾಸಿಸುತ್ತಿರುವ ನಾಗರಿಕರು ಮನೆ ತೆರವುಗೊಳಿಸುವ ಮುನ್ನ ನಮಗೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಿ ಕೊಡುವಂತೆ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ. ಕಡ್ಡಾಯವಾಗಿ ಪ್ರತಿನಿತ್ಯ ಘನತ್ಯಾಜ್ಯ ತೆರವುಗೊಳಿಸಲು ಮತ್ತು ರಸ್ತೆ ಬದಿಗಳಲ್ಲಿ ಬಿದ್ದಿರುವ ಕಟ್ಟಡ ತ್ಯಾಜ್ಯವನ್ನು ತಕ್ಷಣವೇ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಬನ್ನೇರುಘಟ್ಟ ಮುಖ್ಯರಸ್ತೆಯಲ್ಲಿ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಹಾಗೂ ಮಳೆ ನೀರು ಸರಾಗವಾಗಿ ಚರಂಡಿಗೆ ಹರಿದು ಹೋಗುವಂತೆ ವೈಜ್ಞಾನಿಕವಾಗಿ ಕಾಮಗಾರಿ ನಡೆಸಲು ನಿರ್ದೇಶಿಸಿದ್ದಾರೆ. ಹಲವು ರಸ್ತೆಗಳಲ್ಲಿ ಮಳೆ ನೀರು ಅಂಗಡಿಗಳ ಒಳಗೆ ನುಗ್ಗುತ್ತಿರುವುದಾಗಿ ಸ್ಥಳೀಯರು ಆಯುಕ್ತರ ಗಮನಕ್ಕೆ ತಂದಿದ್ದಾರೆ. ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಸೂಚನೆ ನೀಡಿದ್ದಾರೆ.

ಬಯೋಚಾರ್ ಉತ್ಪಾದನೆ ತಂತ್ರಜ್ಞಾನ ವೃದ್ಧಿ

• **ಬೆಂಗಳೂರು:** ದಕ್ಷಿಣ ಕರ್ನಾಟಕದ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಲ್ಲಿ ಮಣ್ಣಿನ ಫಲವತ್ತತೆ ಹಾಗೂ ಬೆಳೆ ಉತ್ಪಾದಕತೆಯನ್ನು ವೃದ್ಧಿಸುವ ಉದ್ದೇಶದಿಂದ, ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಅಡಿಯಲ್ಲಿ ಕೃಷಿ ತ್ಯಾಜ್ಯಗಳಿಂದ ಬಯೋಚಾರ್ ಉತ್ಪಾದನೆ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಲಾಗಿದೆ.

ಕಡಿಮೆ ವೆಚ್ಚದ ಬಯೋಚಾರ್ ಕಿಲ್ನ್ ಅಥವಾ ಡ್ರಮ್‌ಗಳನ್ನು ಬಳಸಿಕೊಂಡು ಕೃಷಿ ತ್ಯಾಜ್ಯವನ್ನು ಅತ್ಯಮೂಲ್ಯ ಜೈವಿಕ ಇದ್ದಿಲಾಗಿ ಪರಿವರ್ತಿಸುವ ಸುಲಭ ವಿಧಾನದ ಪ್ರಾತ್ಯಕ್ಷಿಕೆಯನ್ನು ಆಯೋಜಿಸಲಾಗುತ್ತಿದೆ. ನಮ್ಮ ರಾಜ್ಯ ಒಂದರಲ್ಲೇ ಲಭ್ಯವಿರುವ ಕೃಷಿ ಸಾವಯವ ತ್ಯಾಜ್ಯಗಳನ್ನು ಸಮರ್ಪಕವಾಗಿ ಮರುಬಳಕೆ ಮಾಡುವುದರಿಂದ ಒಟ್ಟು 4.21 ಮಿಲಿಯನ್ ಟನ್ ಬಯೋಚಾರ್ ಉತ್ಪಾದಿಸಬಹುದಾದ ಬೃಹತ್ ಅವಕಾಶವಿದೆ ಎಂದು ಮುಖ್ಯ ವಿಜ್ಞಾನಿ ಡಾ. ಕೃಷ್ಣಮೂರ್ತಿ ಆರ್. ತಿಳಿಸಿದ್ದಾರೆ.

ಪೋಷಕಾಂಶಗಳ ಸಂಯೋಜನೆ: ಪ್ರತಿ 300 ಕೆಜಿ ಬಯೋಚಾರ್‌ನಲ್ಲಿ ಇಂಗಾಲ (ಕಾರ್ಬನ್) ಶೇ. 70 (210 ಕೆಜಿ), ಸಾರಜನಕ ಶೇ. 1 (3 ಕೆಜಿ), ರಂಜಕ ಶೇ. 0.3 (0.9 ಕೆಜಿ), ಪೊಟ್ಯಾಷ್: ಶೇ. 1.5 (4.5 ಕೆಜಿ) ಪೋಷಕಾಂಶಗಳು ಅಡಗಿರುತ್ತವೆ ಕೃಷಿ ತ್ಯಾಜ್ಯವನ್ನು ಸುಟ್ಟು ಪರಿಸರ ಮಾಲಿನ್ಯ ಮಾಡುವುದರ ಬದಲಿಗೆ ನಿಯಂತ್ರಿತ ವಿಧಾನದಲ್ಲಿ ಬಯೋಚಾರ್ ಮಾಡುವುದರಿಂದ ಮಾಲಿನ್ಯ ತಡೆಗಟ್ಟಬಹುದು. ಇದು ಮಣ್ಣಿನ ಭೌತಿಕ ಗುಣಲಕ್ಷಣಗಳನ್ನು ಉತ್ತಮಪಡಿಸಲು ಮತ್ತು ನೀರು-ಪೋಷಕಾಂಶ ಹಿಡಿದಿಟ್ಟುಕೊಳ್ಳುವ ಶಕ್ತಿಯನ್ನು ಹೆಚ್ಚಿಸಲು ರಾಮಬಾಣವಾಗಿದೆ.

ತ್ರಿವಳಿ ಕೊಲೆ ಪ್ರಕರಣ: ಶ್ವೇತಾ ಬಂಧನ

• **ಬೆಂಗಳೂರು:** ನಗರವನ್ನೇ ಬೆಚ್ಚಿಬೀಳಿಸಿದ್ದ ವೈಟ್ ಫೀಲ್ಡ್ ನೆಲ್ಲೂರುಹಳ್ಳಿಯ ತ್ರಿವಳಿ ಕೊಲೆ ಪ್ರಕರಣವನ್ನು ಕೆಆರ್‌ಪುರ ಠಾಣೆ ಪೊಲೀಸರು 24 ಗಂಟೆಯೊಳಗೆ ಬೇಧಿಸಿದ್ದು, ಪ್ರಮುಖ ಆರೋಪಿ ಶ್ವೇತಾ (25) ಅವರನ್ನು ಪುದುಚೇರಿಯಲ್ಲಿ ಬಂಧಿಸಿ ಬೆಂಗಳೂರಿಗೆ ಕರೆತಂದಿದ್ದಾರೆ. ಪ್ರಕರಣದಲ್ಲಿ ಭಾಗಿಯಾಗಿರುವ ಶ್ವೇತಾಳ ಪ್ರಿಯಕರ ಕೆನತ್‌ಗಾಗಿ ಪೊಲೀಸರು ತೀವ್ರ ಶೋಧ ಕಾರ್ಯ ಮುಂದುವರಿಸಿದ್ದಾರೆ. ಜೂ.22ರಂದು ನೆಲ್ಲೂರುಹಳ್ಳಿ ನಿವಾಸಿ ಸೋಮಸುಂದರ್, ಅವರ ಪತ್ನಿ ಲಕ್ಷ್ಮಿ ಹಾಗೂ ಪುತ್ರಿ ಸುಪ್ರಿಯಾ ಅವರನ್ನು ಭೀಕರವಾಗಿ ಹತ್ಯೆಗೈದು ಆರೋಪಿಗಳು ಪರಾರಿಯಾಗಿದ್ದರು. ಕೃತ್ಯದ ಬಳಿಕ ಅಪಾರ್ಟ್‌ಮೆಂಟ್‌ನ ಟೆರೇಸ್ ಮೂಲಕ ಮತ್ತೊಂದು ಕಟ್ಟಡಕ್ಕೆ ಜಿಗಿದು ತಪ್ಪಿಸಿಕೊಂಡು ತಮಿಳುನಾಡು ಮಾರ್ಗವಾಗಿ ಪುದುಚೇರಿ ಕಡೆಗೆ ತೆರಳಿದ್ದರೆ ಎಂದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.



ಕುಟುಂಬದವರ ವಿರುದ್ಧ ಅಸಮಾಧಾನವೇ ಕಾರಣ?

ಪ್ರಾಥಮಿಕ ವಿಚಾರಣೆಯಲ್ಲಿ ಶ್ವೇತಾ, ತಾಯಿ ಲಕ್ಷ್ಮಿ ತನ್ನ ವೈಯಕ್ತಿಕ ಜೀವನ, ಶಿಕ್ಷಣ, ಉದ್ಯೋಗ ಹಾಗೂ ಸಂಬಂಧಗಳ ವಿಚಾರದಲ್ಲಿ ನಿರಂತರ ನಿಯಂತ್ರಣ ಹೇರುತ್ತಿದ್ದರು ಎಂದು ಆರೋಪಿಸಿದ್ದಾಳೆ. ತನ್ನ ನಿರ್ಧಾರಗಳಿಗೆ ಬೆಂಬಲ ಸಿಗದೆ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದೆ ಎಂದು ಹೇಳಿರುವುದಾಗಿ ಪೊಲೀಸ್ ಮೂಲಗಳು ತಿಳಿಸಿವೆ.

ಡೈರಿ ಪತ್ತೆ

ಶ್ವೇತಾ ವಾಸಿಸುತ್ತಿದ್ದ ಮನೆಯಲ್ಲಿ ನಡೆಸಿದ ಶೋಧ ಕಾರ್ಯಾಚರಣೆಯಲ್ಲಿ ಆಕೆ ಬರೆದಿದ್ದ ಡೈರಿಯೊಂದು ಪತ್ತೆಯಾಗಿದೆ. ಅದರಲ್ಲಿ ತಾನು ಒಂಟಿತನ, ದುಃಖ ಮತ್ತು ಮಾನಸಿಕ ಒತ್ತಡ ಅನುಭವಿಸುತ್ತಿದ್ದುದಾಗಿ ಉಲ್ಲೇಖಿಸಿದ್ದು, ತನ್ನ ಪರಿಸ್ಥಿತಿಗೆ ತಾಯಿಯೇ ಕಾರಣ ಎಂದು ಬರೆದುಕೊಂಡಿದ್ದಾಳೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಪರಾರಿಯಾಗಿರುವ ಕೆನತ್ ಬಂಧನಕ್ಕೆ 20 ಮಂದಿಯ ಎರಡು ವಿಶೇಷ ತಂಡಗಳನ್ನು ರಚಿಸಿ ಶೋಧ ಕಾರ್ಯ ನಡೆಸಲಾಗುತ್ತಿದೆ.

» ಪ್ರಿಯಕರ ಕೆನತ್‌ಗಾಗಿ ಪೊಲೀಸರು ತೀವ್ರ ಶೋಧ

ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತ ರಮೇಶ್ ಸೂಚನೆ

ಭೂ ಹಸ್ತಾಂತರ ಪ್ರಕ್ರಿಯೆ ಪೂರ್ಣಗೊಳಿಸಿ

ಗುರುತಿಸಲಾದ ಪ್ರಮುಖ ರಸ್ತೆಗಳು

- ಹೊರ ವರ್ತುಲ ರಸ್ತೆಯಿಂದ ಹೋಪ್ ಫಾರಂ ಜಂಕ್ಷನ್ ವರೆಗೆ
- ವೈಟ್‌ಫೀಲ್ಡ್ ಮುಖ್ಯ ರಸ್ತೆ -ಹೋಪ್ ಫಾರಂ ಜಂಕ್ಷನ್ ವರೆಗೆ
- ಹೊರ್ಬಿಜನ್ ಸ್ಕೂಲ್ ರಸ್ತೆ-ಹೊರ ವರ್ತುಲ ರಸ್ತೆಯಿಂದ ಗೇರ್ ಸ್ಕೂಲ್ ವರೆಗೆ
- ಗೋಶಾಲೆ ರಸ್ತೆ-ಹೊರ ವರ್ತುಲ ರಸ್ತೆಯಿಂದ ಭಾಗಮನೆ ಟೆಕ್ ಪಾರ್ಕ್ - ಎಸ್‌ಎಪಿ ರಸ್ತೆ ಸಂಖ್ಯೆ-07 ಮೂಲಕ ಸತ್ಯಸಾಯಿ ಆಸ್ಪತ್ರೆ ವರೆಗೆ
- ಐಟಿಪಿಎಲ್ ಮುಖ್ಯ ರಸ್ತೆಯಿಂದ ರೈಲ್ವೆ ಟ್ರ್ಯಾಕ್ / ರೈಲ್ವೆ ಕ್ರಾಸಿಂಗ್ ವರೆಗೆ

• **ಬೆಂಗಳೂರು:** ರಸ್ತೆ ಅಗಲೀಕರಣ ಮತ್ತು ಅಂಡರ್‌ಪಾಸ್ ಯೋಜನೆಗಳಿಗೆ ಅಗತ್ಯ ಭೂ ಹಸ್ತಾಂತರ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸುವಂತೆ ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕೆಐಎಡಿಬಿ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ನಗರ ಪಾಲಿಕೆ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಿದ ಅವರು, ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಪ್ರಮುಖ ರಸ್ತೆ ಅಭಿವೃದ್ಧಿ, ರಸ್ತೆ ಅಗಲೀಕರಣ ಹಾಗೂ ಅಂಡರ್‌ಪಾಸ್ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಬೇಕು. ರಸ್ತೆ ಅಗಲೀಕರಣಕ್ಕಾಗಿ ಕಾಯ್ದಿರಿಸಲಾಗಿರುವ ಜಾಗಗಳನ್ನು ಉಚಿತವಾಗಿ ಪರಿತ್ಯಾಜನಾ ಪತ್ರ ಮೂಲಕ ಹಸ್ತಾಂತರಗೊಳ್ಳಬೇಕಿರುವ ಪ್ರದೇಶಗಳು ಹಾಗೂ ಪಾರ್ಕ್ ಮತ್ತು ಮುಕ್ತ ಸ್ಥಳಗಳಿಗಾಗಿ ಮೀಸಲಾದ ಸಿಎ ಸ್ವತ್ತುಗಳನ್ನು ತ್ವರಿತವಾಗಿ ನಗರ ಪಾಲಿಕೆಗೆ ಹಸ್ತಾಂತರಿಸುವ ಕುರಿತು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಪ್ರಮುಖ ರಸ್ತೆಗಳಿಗೆ ಸಂಬಂಧಿಸಿದಂತೆ ರಸ್ತೆ ಅಗಲೀಕರಣಕ್ಕಾಗಿ ಗುರುತಿಸಲಾದ ಸ್ವತ್ತುಗಳ ಭೂ ಹಸ್ತಾಂತರಕ್ಕೆ ಸಂಬಂಧಿಸಿದಂತೆ ಅಪರ ಆಯುಕ್ತ ಲೋಖಂಡೆ ಸ್ನೇಹಲ್ ಸುಧಾಕರ್ ಕೆಐಎಡಿಬಿ ಹಿರಿಯ ಅಧಿಕಾರಿಗಳ ತಂಡದೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ಸರ ಕಳವು: ಆರೋಪಿಗಳ ಸೆರೆ

• **ಬೆಂಗಳೂರು:** ನಗರದ ಮಲ್ಲೇಶ್ವರದಲ್ಲಿ ಮಹಿಳೆಯೊಬ್ಬರ ಕತ್ತಿನಲ್ಲಿದ್ದ ಚಿನ್ನದ ಸರ ಕಸಿದು ಪರಾರಿಯಾಗಿದ್ದ ಮೂವರು ಆರೋಪಿಗಳನ್ನು ಮಲ್ಲೇಶ್ವರ ಪೊಲೀಸರು ಬಂಧಿಸಿದ್ದಾರೆ.

ವಿಜಯನಗರದ ವರುಣ್ (26), ನಂದಿನಿ ಲೇಔಟ್‌ನ ಚಂದ್ರಕಾಂತ್ ರಾಜ್ (23) ಹಾಗೂ ಅಗ್ರಹಾರ ದಾಸರಹಳ್ಳಿಯ ಸುಹಾಸ್ (24) ಬಂಧಿತ ಆರೋಪಿಗಳು. ಬಂಧಿತರಿಂದ ಸುಮಾರು 2.50 ಲಕ್ಷ ರೂ. ಮೌಲ್ಯದ 22 ಗ್ರಾಂ. ತೂಕದ ಚಿನ್ನದ ಸರ ಹಾಗೂ ಕೃತ್ಯಕ್ಕೆ ಬಳಸಿದ್ದ ಎರಡು ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜೂ.8ರಂದು ರಾತ್ರಿ ಮಲ್ಲೇಶ್ವರಂ 6ನೇ ಅಡ್ಡರಸ್ತೆಯಲ್ಲಿ ಸ್ನೇಹಿತರೊಂದಿಗೆ ಊಟ ಮುಗಿಸಿ ಮನೆಗೆ ನಡೆದುಕೊಂಡು ಹೋಗುತ್ತಿದ್ದ ವೇಳೆ, ಮಲ್ಲೇಶ್ವರ 3ನೇ ಅಡ್ಡರಸ್ತೆಯ ನಂದಿನಿ ಬೂತ್ ಸಮೀಪದ ವೃತ್ತದಲ್ಲಿ ದ್ವಿಚಕ್ರ ವಾಹನದಲ್ಲಿ ಬಂದ ಆರೋಪಿಗಳು, ಮಹಿಳೆಯ ಕತ್ತಿನಲ್ಲಿದ್ದ ಚಿನ್ನದ ಸರವನ್ನು ಕಸಿದು ಪರಾರಿಯಾಗಿದ್ದರು. ಈ ಸಂಬಂಧ ದಾಖಲಾದ ದೂರಿನ ಆಧಾರದಲ್ಲಿ ತನಿಖೆ ಆರಂಭಿಸಿದ ಪೊಲೀಸರು, ಜೂ.14ರಂದು ಅಗ್ರಹಾರ ದಾಸರಹಳ್ಳಿಯಲ್ಲಿರುವ ಸುಹಾಸ್‌ನ ಮನೆಯಿಂದ ಆತನನ್ನು ಬಂಧಿಸಿದರು. ವಿಚಾರಣೆ ವೇಳೆ ಆತ ತನ್ನ ಇಬ್ಬರು ಸಹಚರರೊಂದಿಗೆ ಸೇರಿ ಸರಗಳ್ಳತನ ಎಸಗಿರುವುದಾಗಿ ಒಪ್ಪಿಕೊಂಡಿದ್ದಾನೆ. ಅದೇ ದಿನ ನಂದಿನಿ ಲೇಔಟ್‌ನ ಜೈ ಮಾರುತಿ ನಗರದಲ್ಲಿರುವ ಅವರ ನಿವಾಸಗಳಿಂದ ವರುಣ್ ಹಾಗೂ ಚಂದ್ರಕಾಂತ್ ರಾಜ್ ಅವರನ್ನು ಬಂಧಿಸಲಾಯಿತು. ವಿಚಾರಣೆ ವೇಳೆ ಇವರಿಬ್ಬರೂ ಪ್ರಕರಣದಲ್ಲಿ ಭಾಗಿಯಾಗಿರುವುದನ್ನು ಒಪ್ಪಿಕೊಂಡಿದ್ದಾರೆ. ಆರೋಪಿಗಳಿಂದ ಹೆಚ್ಚಿನ ವಿಚಾರಣೆ ನಡೆಸಿದಾಗ, ಕಳವು ಮಾಡಿದ್ದ ಚಿನ್ನದ ಸರವನ್ನು ಬಸವೇಶ್ವರನಗರದಲ್ಲಿರುವ ಗೋಲ್ಡ್ ಲೋನ್ ಸಂಸ್ಥೆಯಲ್ಲಿ ಅಡಮಾನ ಇಟ್ಟಿರುವುದು ಹಾಗೂ ಕೃತ್ಯಕ್ಕೆ ಬಳಸಿದ ಎರಡು ದ್ವಿಚಕ್ರ ವಾಹನಗಳನ್ನು ಜೈ ಮಾರುತಿ ನಗರದಲ್ಲಿರುವ ಮನೆಯ ಸಮೀಪ ನಿಲ್ಲಿಸಿರುವುದಾಗಿ ತಿಳಿದುಬಂದಿದೆ.

ರೌಡಿ ಶಕಿಬ್ ಬಂಧನ

• **ಬೆಂಗಳೂರು :** ನ್ಯಾಯಾಲಯದ ಉದ್ಘೋಷಣೆ ಹಾಗೂ ವಾರೆಂಟ್ ಆದೇಶಗಳನ್ನು ಉಲ್ಲಂಘಿಸಿ ಹಲವು ದಿನಗಳಿಂದ ತಲೆಮರೆಸಿಕೊಂಡಿದ್ದ ರೌಡಿಯನ್ನು ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ವಿದ್ಯಾರಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯ ರೌಡಿ ಶಕಿಬ್ ಅಲಿಯಾಸ್ ಸೈಯದ್ ಅಕಿಬ್ ಪಾಷ (30) ಬಂಧಿತ ಆರೋಪಿ. ನ್ಯಾಯಾಲಯದಲ್ಲಿ ನಡೆಯುತ್ತಿದ್ದ ಪ್ರಕರಣಗಳ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಹಿನ್ನೆಲೆಯಲ್ಲಿ ಆತನ ವಿರುದ್ಧ ಉದ್ಘೋಷಣೆ ಮತ್ತು ವಾರೆಂಟ್ ಜಾರಿಯಾಗಿತ್ತು. ಆರೋಪಿಯ ಕುರಿತು ಖಚಿತ ಮಾಹಿತಿ ಪಡೆದ ಸಿಸಿಬಿ ಸಂಘಟಿತ ಅಪರಾಧ ದಳದ ಅಧಿಕಾರಿಗಳು ಯಲಹಂಕದ ಅಲ್ಲಾಳಸಂದ್ರ ಸಮೀಪದ ಮೋಲ್‌ಕಾನೆ ಬಳಿ ದಾಳಿ ನಡೆಸಿ ಬಂಧಿಸಿದ್ದಾರೆ. ಬಳಿಕ ಆತನನ್ನು ಸಿಸಿಬಿ ಕಚೇರಿಗೆ ಕರೆತಂದು ವಿಚಾರಣೆ ನಡೆಸಿದ ವೇಳೆ, ಬೆಂಗಳೂರು ನಗರದ ವಿವಿಧ ಪೊಲೀಸ್ ಠಾಣೆಗಳು ಹಾಗೂ ಹೊರ ರಾಜ್ಯಗಳಲ್ಲಿ ಸೇರಿ 11ಕ್ಕೂ ಹೆಚ್ಚು ಅಪರಾಧ ಪ್ರಕರಣಗಳು ದಾಖಲಾಗಿರುವುದು ಬೆಳಕಿಗೆ ಬಂದಿದೆ. ದಾಖಲಾದ ಪ್ರಕರಣಗಳಲ್ಲಿ ಮೂರು ಪ್ರಕರಣಗಳ ವಿಚಾರಣೆಗೆ ಸಂಬಂಧಿಸಿದಂತೆ ನ್ಯಾಯಾಲಯ ನಿಗದಿಪಡಿಸಿದ್ದ ದಿನಾಂಕಗಳಲ್ಲಿ ಹಾಜರಾಗದ ಕಾರಣ ನ್ಯಾಯಾಲಯವು ಉದ್ಘೋಷಣೆ ಹಾಗೂ ವಾರೆಂಟ್ ಆದೇಶಗಳನ್ನು ಹೊರಡಿಸಿತ್ತು. ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಇಂದು ನಗರದಲ್ಲಿ...

- ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನ ವತಿಯಿಂದ ಕೆಂಪೇಗೌಡ ಪ್ರತಿಮೆಗೆ ಪುಷ್ಪಾರ್ಚನೆ, ಸ್ಥಳ : ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬಳಿ, ಬೆಳಗ್ಗೆ 10.30
- ಹೆಮಾಲ್ ಶಾಹ್ ರಚಿತ ಕಲಾಪ್ರದರ್ಶನ, ಸ್ಥಳ : ವಾಡಿಯಾ ಸಭಾಂಗಣ, ಬಸವನಗುಡಿ, ಬೆಳಗ್ಗೆ 11
- ಉತ್ತರ ಪ್ರದೇಶ ಗ್ಲೋಬಲ್ ಗ್ರೋತ್ ಡೈಲಾಗ್ -2026ರ ಅಂಗವಾಗಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಅಧ್ಯಕ್ಷತೆಯಲ್ಲಿ ಹೂಡಿಕೆದಾರರ ರೋಡ್ ಶೋ ಮತ್ತು ಭಾಷಣ, ಸ್ಥಳ : ರಾಡಿಸನ್ ಬ್ಲ್ಯೂ ಹೋಟೆಲ್, ಔಟರ್ ರಿಂಗ್ ರೋಡ್, ಸಂಜೆ 4
- ವಿದ್ವಾನ್ [illegible] [illegible] ಅವರಿಂದ ಭಾಗವತದಲ್ಲಿ [illegible] ಉಪನ್ಯಾಸ, ಸ್ಥಳ : ರಾಜಾಜಿನಗರ ಪ್ರಸನ್ನ ಆಂಜನೇಯ ದೇವಾಲಯದ ಸಾಂಸ್ಕೃತಿಕ ಮಂದಿರ, ಸಂಜೆ 6.30

ಕಾಲ್ಚೆಂಡಿನ ಸಮರ

ಫಿಫಾ ವಿಶ್ವಕಪ್ ಯುಎಸ್‌ಎ, ಮೆಕ್ಸಿಕೋ, ಕೆನಡಾ ಜೂನ್ 11-ಜುಲೈ 19

ಗುರುವಾರದ ಪಂದ್ಯಗಳು

ದ.ಆಫ್ರಿಕಾ-ದ.ಕೊರಿಯಾ, (ಬೆಳಗ್ಗೆ 6:30)
ಚೆಕ್-ಮೆಕ್ಸಿಕೊ, (ಬೆಳಗ್ಗೆ 6:30)
ಕುರಾಕಾವೊ-ಐವರಿ ಕೋಸ್ಟ್ (ಮಧ್ಯರಾತ್ರಿ 1:30)
ಎಕ್ವಾಡಾರ್-ಜರ್ಮನಿ, (ಮಧ್ಯರಾತ್ರಿ 1:30)

ಕಿರುಸುದ್ದಿ

ವಂಶಿಕಾ-ಶಿವಗೆ ಬೆಳ್ಳಿ

• **ಹೊಸದಿಲ್ಲಿ:** ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಜೋಡಿ ವಂಶಿಕಾ ಚೌಧರಿ ಮತ್ತು ಶಿವ ನರ್ವಾಲ್ ಅವರು 10 ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದರು. ಭಾರತೀಯ ಜೋಡಿ ಒಟ್ಟು 469.7 ಅಂಕಗಳನ್ನು ಗಳಿಸಿ ಪೋಲೆಂಡ್‌ನ ಮಾಲ್ಗೊರ್ಜಾಟಾ ಮತ್ತು ಇವಾನ್ ಅವರಿಗಿಂತ ಹಿಂದಿದೆ. ಈ ಜೋಡಿ ಒಟ್ಟು 471.9 ಅಂಕಗಳನ್ನು ಗಳಿಸಿತು. ಮಂಗಳವಾರದ ಬೆಳ್ಳಿ ಪದಕದೊಂದಿಗೆ, ಭಾರತ ಚಾಂಪಿಯನ್‌ಶಿಪ್‌ನಲ್ಲಿ ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಒಟ್ಟಾರೆ ಪದಕಗಳ ಸಂಖ್ಯೆ ಐದು ಚಿನ್ನ, ನಾಲ್ಕು ಬೆಳ್ಳಿ ಮತ್ತು ಏಳು ಕಂಚಿನ ಪದಕಗಳನ್ನು ಒಳಗೊಂಡಂತೆ 16 ಪದಕಗಳಿಗೆ ಏರಿದೆ.

ಆಶೀರ್ವಾದ್ ಸೂರ್ಯವಂಶಿ ಮತ್ತೆ ಶತಕ

• **ಜಾರ್ಖಂಡ್:** ಮೊನ್ನೆಯಷ್ಟೇ ಶತಕ ಬಾರಿಸಿ ಗಮನ ಸೆಳೆದಿದ್ದ ವೈಭವ್ ಸೂರ್ಯವಂಶಿ ಸಹೋದರ ಆಶೀರ್ವಾದ್ ಸೂರ್ಯವಂಶಿ ಬುಧವಾರ ಸ್ಥಳೀಯ ಕ್ಲಬ್ ಪಂದ್ಯದಲ್ಲಿ ಮತ್ತೊಂದು ಶತಕ ಬಾರಿಸಿ ಮಿಂಚಿದ್ದಾರೆ. 10 ವರ್ಷದ ಆಶೀರ್ವಾದ್, ರಿಷಬ್ 11 ಎಂಬ ತಂಡವನ್ನು ಪ್ರತಿನಿಧಿಸಿ 119 ಬಾಲ್‌ಗಳಲ್ಲಿ 168 ರನ್ ಬಾರಿಸಿದ್ದಾರೆ. ಈ ಇನ್ನಿಂಗ್ಸ್‌ನಲ್ಲಿ 19 ಬೌಂಡರಿ, 6 ಸಿಕ್ಸರ್ ಸೇರಿವೆ.

ವೈಭವ್‌ಗೆ ಬೇರೆ ಡ್ರೆಸ್ಸಿಂಗ್ ರೂಮ್

• **ಲಂಡನ್:** ಐರ್ಲೆಂಡ್ ಮತ್ತು ಇಂಗ್ಲೆಂಡ್ ಸರಣಿಗಳಿಗೆ ಆಯ್ಕೆಯಾಗಿರುವ 15 ವರ್ಷದ ವೈಭವ್ ಸೂರ್ಯವಂಶಿಗೆ ಬೇರೆ ಡ್ರೆಸ್ಸಿಂಗ್ ರೂಮ್ ಒದಗಿಸಲು ಬಿಸಿಸಿಐ ಮತ್ತು ಸಂಬಂಧಿತ ಸಂಸ್ಥೆಗಳು ನಿರ್ಧರಿಸಿವೆ. ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಆಯ್ಕೆಯಾಗಿರುವ ಅತಿ ಕಿರಿಯ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ವೈಭವ್ ಸೂರ್ಯವಂಶಿ ತಂಡದೊಂದಿಗೆ ಆಡಲಿದ್ದರೂ, ವಾಸ್ತವ್ಯ ತಂಡದೊಂದಿಗೆ ಮಾಡುವಂತಿಲ್ಲ. 16ರಗಿಂತಲೂ ಕಡಿಮೆ ವಯಸ್ಸನ್ನು ಹೊಂದಿರುವ ವೈಭವ್ ವೈಯಕ್ತಿಕ ಡ್ರೆಸ್ಸಿಂಗ್ ರೂಮ್ ಹೊಂದಿರಬೇಕೆಂಬುದು ಇಸಿಬಿ ಮತ್ತು ಐಸಿಸಿ ನಿಯಮವಾಗಿದೆ.

ಪಾಕ್‌ಗೆ ಹೀನಾಯ ಸೋಲು

• **ಬ್ರಿಸ್ಟಲ್:** ಪಾಕಿಸ್ತಾನ ತಂಡವನ್ನು ಹೀನಾಯವಾಗಿ ಸೋಲಿಸಿರುವ ಆಸ್ಟ್ರೇಲಿಯಾ ಮಹಿಳೆಯರ ತಂಡವು ಮಹಿಳೆಯರ ಟಿ20 ವಿಶ್ವಕಪ್ ಪಂದ್ಯಾವಳಿಯ ಸೂಪರ್-8ಕ್ಕೆ ಲಗ್ಗೆ ಹಾಕಿದಂತಿದೆ. ಮಂಗಳವಾರ ತಡರಾತ್ರಿ ನಡೆದ ಪಂದ್ಯದಲ್ಲಿ ಆಸೀಸ್ ಪಾಕ್ ತಂಡವನ್ನು ಬರೋಬ್ಬರಿ 113 ರನ್‌ಗಳಿಂದ ಮಣಿಸಿತು. ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 199 ರನ್ ಗಳಿಸಿತು. ಎಲ್ಲಿಸ್ ಪೆರ್ರಿ 48 ಬಾಲ್‌ಗಳಲ್ಲಿ 71 ರನ್ ಗಳಿಸಿದರು. ಜಾರ್ಜಿಯಾ ವಾಲ್ 39 ರನ್ ಗಳಿಸಿದರು. ಸುದರ್‌ಲೆಂಡ್ 27, ಕ್ಯಾರಿ 26 ರನ್‌ಗಳ ಕೊಡುಗೆ ನೀಡಿದರು. ಪಾಕ್ ಪರ ಸಾದಿಯಾ, ನಶ್ರಾ ಮತ್ತು ರಾಮೀನ್ ತಲಾ 2 ವಿಕೆಟ್ ಕಿತ್ತರು. ಗುರಿ ಬೆನ್ನತ್ತಿದ ಪಾಕಿಸ್ತಾನ 86 ರನ್‌ಗಳಿಗೆ ಆಲೌಟ್ ಆಯಿತು. ಮುನೀಬಾ 32 ರನ್ ಗಳಿಸಿದ್ದೇ ಹೆಚ್ಚಾಗಿತ್ತು. ಆಸ್ಟ್ರೇಲಿಯಾ ಪರ ಪೆರ್ರಿ, ಸುದರ್‌ಲೆಂಡ್, ಸೋಫಿ ತಲಾ ಎರಡು ವಿಕೆಟ್ ಕಿತ್ತರು. ವಾರೆಹಮ್ 1 ವಿಕೆಟ್ ಕಿತ್ತರು.

ರಗ್ಬಿ: ಸೆಮಿಗೆ ಬೆಂಗಳೂರು

• **ಹೈದರಾಬಾದ್:** ಗಚಿಬೌಲಿನ ಗಂಟಿ ಮೋಹನ ಚಂದ್ರ ಬಾಲಯೋಗಿ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಗ್ಬಿ ಪ್ರೀಮಿಯರ್ ಲೀಗ್‌ನಲ್ಲಿ ಬೆಂಗಳೂರು ಬ್ರೇವ್‌ಹಾರ್ಟ್ಸ್ ತಂಡವು ಕೋಲ್ಕತ್ತಾ ಬಂಗಾ ಟೈಗರ್ಸ್ ವಿರುದ್ಧ 26-21 ಅಂತರದ ಜಯ ಸಾಧಿಸಿ ಸೆಮಿಫೈನಲ್‌ಗೆ ಅರ್ಹತೆ ಪಡೆದಿತು. ಬೆಂಗಳೂರು ಬ್ರೇವ್‌ಹಾರ್ಟ್ಸ್ 26-21ರಿಂದ ಕೋಲ್ಕತ್ತಾ ಬಂಗಾ ಟೈಗರ್ಸ್‌ನ್ನು ಮಣಿಸಿತು.

5-0
ಪೋರ್ಚುಗಲ್ ಉಜ್ಬೇಕಿಸ್ತಾನ

ಫಿಫಾ ಸ್ಟಾರ್‌ನಿಂದ ಮೊದಲನೇ ಗೋಲ್! ಪೋರ್ಚುಗಲ್‌ಗೆ 5–0 ಭರ್ಜರಿ ಗೆಲುವು

ರೊನಾಲ್ಡೊ ಕಿಕ್!

• **ಹ್ಯೂಸ್ಟನ್:** ಈಬಾರಿಯ ಫಿಫಾ ವಿಶ್ವಕಪ್‌ನಲ್ಲಿ 41 ವರ್ಷದ ಕ್ರಿಸ್ಟಿಯಾನೋ ರೊನಾಲ್ಡೊ ಮೊದಲ ಗೋಲು ಗಳಿಸಿದ್ದು, ಅವರ ದ್ವಿಗೋಲು ಪ್ರದರ್ಶನದೊಂದಿಗೆ ಪೋರ್ಚುಗಲ್ ತಂಡವು ಉಜ್ಬೇಕಿಸ್ತಾನ ವಿರುದ್ಧದ ಪಂದ್ಯದಲ್ಲಿ 5-0ರಿಂದ ಭರ್ಜರಿ ಗೆಲುವು ಸಾಧಿಸಿದೆ. ವಿಶ್ವಕಪ್‌ನಲ್ಲಿ ಎಂಬಾಪ್ಪೆ ಮೆಸ್ಸಿ ಮ್ಯಾಚ್ ನಡೆಯುತ್ತಿತ್ತು. ಅಭಿಮಾನಿಗಳ ಪೈಸಾ ವಸೂಲ್ ಆವೃತ್ತಿಗಾಗಿ ರೊನಾಲ್ಡೊ ಗೋಲು ಬಾರಿಸಬೇಕಿತ್ತು. ಅದು ಮಂಗಳವಾರ ನಡೆಯಿತು.

41 ವರ್ಷದ ರೊನಾಲ್ಡೊ ಈ ಪಂದ್ಯದಲ್ಲಿ ದಾಖಲಿಸಿದ ಎರಡು ಗೋಲುಗಳ ಮೂಲಕ ಆರು ವಿಭಿನ್ನ ವಿಶ್ವಕಪ್ ಟೂರ್ನಿಗಳಲ್ಲಿ ಗೋಲು ಗಳಿಸಿದ ಮೊದಲ ಆಟಗಾರ ಎಂಬ ಐತಿಹಾಸಿಕ ಸಾಧನೆ ಮಾಡಿದರು. ಅವರ ಅದ್ಭುತ ಪ್ರದರ್ಶನಕ್ಕೆ ಪಂದ್ಯಶ್ರೇಷ್ಠ ಪ್ರಶಸ್ತಿಯೂ ಲಭಿಸಿತು. ಕಾಂಗೊ ವಿರುದ್ಧದ ಮೊದಲ ಪಂದ್ಯದಲ್ಲಿ ನಿರಾಸೆ ಮೂಡಿಸಿದ್ದ ರೊನಾಲ್ಡೊ ಅವರನ್ನು ಆರಂಭಿಕ ತಂಡದಲ್ಲೇ ಮುಂದುವರಿಸಿದ್ದ ಕೋಚ್ ರೋಬರ್ಟೊ ಮಾರ್ಟಿನೆಜ್ ಅವರ ನಿರ್ಧಾರ ಸಾರ್ಥಕವಾಯಿತು. ಪಂದ್ಯ ಆರಂಭವಾಗಿ ಕೇವಲ ಆರನೇ ನಿಮಿಷದಲ್ಲಿ ಜೋವೊ ಕ್ಯಾನ್ಸೆಲೊ ನೀಡಿದ ಕ್ರಾಸ್ ಅನ್ನು ಗೋಲಾಗಿ ಪರಿವರ್ತಿಸಿದ ರೊನಾಲ್ಡೊ ಪೋರ್ಚುಗಲ್‌ಗೆ ಮುನ್ನಡೆ ತಂದುಕೊಟ್ಟರು. 17ನೇ ನಿಮಿಷದಲ್ಲಿ ನುನೊ ಮೆಂಡೆಸ್ ಫ್ರೀ-ಕಿಕ್ ಮೂಲಕ ಮತ್ತೊಂದು ಗೋಲು ದಾಖಲಿಸಿ ಅಂತರವನ್ನು 2-0ಕ್ಕೆ ಏರಿಸಿದರು. 39ನೇ ನಿಮಿಷದಲ್ಲಿ ಬ್ರೂನೊ ಫರ್ನಾಂಡಿಸ್ ಪಾಸ್ ಅನ್ನು ಸದುಪಯೋಗಪಡಿಸಿಕೊಂಡ ರೊನಾಲ್ಡೊ ತಮ್ಮ ಎರಡನೇ ಗೋಲು ಬಾರಿಸಿ ಪೋರ್ಚುಗಲ್‌ಗೆ 3-0 ಮುನ್ನಡೆ ನೀಡಿದರು. ಎರಡನೇ ಅರ್ಧದಲ್ಲಿ ಉಜ್ಬೇಕಿಸ್ತಾನದ ಆತ್ಮಹತ್ಯಾ ಗೋಲಿನಿಂದ ಪೋರ್ಚುಗಲ್ 4-0 ಮುನ್ನಡೆ ಸಾಧಿಸಿತು. 87ನೇ ನಿಮಿಷದಲ್ಲಿ ಬದಲಿ ಆಟಗಾರ ರಫೇಲ್ ಲಿಯೊ ಐದನೇ ಗೋಲು ದಾಖಲಿಸಿ ತಂಡದ ಗೆಲುವಿಗೆ ಮೆರುಗು ನೀಡಿದರು. ಈ ಜಯದೊಂದಿಗೆ ಪೋರ್ಚುಗಲ್ ಕೆ ಗುಂಪಿನಲ್ಲಿ ನಾಲ್ಕು ಅಂಕಗಳನ್ನು ಗಳಿಸಿ ತನ್ನ ನಾಕೌಟ್ ಹಂತದ ಆಸೆಗಳನ್ನು ಬಲಪಡಿಸಿಕೊಂಡಿದೆ.

ಅಂಕಿ-ಅಂಶ

- ರೊನಾಲ್ಡೊ ವಿಶ್ವಕಪ್ ಇತಿಹಾಸದಲ್ಲಿ ಆರು ವಿಭಿನ್ನ ಆವೃತ್ತಿಗಳಲ್ಲಿ ಗೋಲು ಗಳಿಸಿದ ಮೊದಲ ಆಟಗಾರ
- ರೊನಾಲ್ಡೊ ಎರಡು ಗೋಲು, ಪಂದ್ಯಶ್ರೇಷ್ಠ ಪ್ರಶಸ್ತಿ
- ನುನೊ ಮೆಂಡೆಸ್ ಮತ್ತು ರಫೇಲ್ ಲಿಯೊ ತಲಾ ಒಂದು ಗೋಲು

ನಾಕೌಟ್‌ಗೇರಿದ ಕೊಲಂಬಿಯಾ

• **ಗ್ವಾಡಲಜಾರಾ:** ಡ್ಯಾನಿಯಲ್ ಮುನೋಸ್ ದಾಖಲಿಸಿದ ನಿರ್ಣಾಯಕ ಗೋಲಿನ ನೆರವಿನಿಂದ ಕೊಲಂಬಿಯಾ ತಂಡ ಕಾಂಗೊ ವಿರುದ್ಧ 1-0 ಅಂತರದ ಗೆಲುವು ಸಾಧಿಸಿ ಫಿಫಾ ವಿಶ್ವಕಪ್ ನಾಕೌಟ್ ಹಂತಕ್ಕೆ ಅರ್ಹತೆ ಪಡೆದುಕೊಂಡಿದೆ.

ಪಂದ್ಯದ ಬಹುತೇಕ ಅವಧಿಯಲ್ಲಿ ಕಾಂಗೊ ಗೋಲ್‌ಕೀಪರ್ ಲಿಯೋನೆಲ್ ಎಂಪಾಸಿ ಅದ್ಭುತ ಪ್ರದರ್ಶನ ನೀಡಿ ಕೊಲಂಬಿಯಾದ ದಾಳಿಯನ್ನು ತಡೆದಿದ್ದರು. ಆರಂಭದ 20 ನಿಮಿಷಗಳಲ್ಲೇ ಐದು ಕಠಿಣ ಸೇವ್‌ಗಳನ್ನು ಮಾಡಿ ಕೊಲಂಬಿಯಾ ಆಟಗಾರರನ್ನು ನಿರಾಸೆಗೊಳಿಸಿದ್ದರು. ಆದರೆ 76ನೇ ನಿಮಿಷದಲ್ಲಿ ಡ್ಯಾನಿಯಲ್ ಮುನೋಸ್ ಅವಕಾಶವನ್ನು ಕೈಚೆಲ್ಲಲಿಲ್ಲ, ರಕ್ಷಣಾ ಆಟಗಾರನ ಕಾಲಿಗೆ ತಾಗಿ ಬಂದ ಚೆಂಡನ್ನು ಎಡಗಾಲಿನ ಶಾಟ್ ಮೂಲಕ ಗೋಲಾಗಿ ಪರಿವರ್ತಿಸಿ ಕೊಲಂಬಿಯಾಗೆ ಅಮೂಲ್ಯ ಮುನ್ನಡೆ ನೀಡಿದರು. ಈ ಗೋಲನ್ನು ತಡೆಯಲು ಎಂಪಾಸಿಗೆ ಯಾವುದೇ ಅವಕಾಶ ಇರಲಿಲ್ಲ, ಈ ಗೆಲುವಿನೊಂದಿಗೆ ಕೊಲಂಬಿಯಾ ಎರಡು ಪಂದ್ಯಗಳಿಂದ ಆರು ಅಂಕಗಳನ್ನು ಗಳಿಸಿ ಕೆ ಗುಂಪಿನಿಂದ ನಾಕೌಟ್ ಹಂತ ಪ್ರವೇಶಿಸಿದ ಮೊದಲ ತಂಡ ಎನಿಸಿತು. ಈಗ ಕೊನೆಯ ಲೀಗ್ ಪಂದ್ಯದಲ್ಲಿ ಕೊಲಂಬಿಯಾ ಮತ್ತು ಪೋರ್ಚುಗಲ್ ಮುಖಾಮುಖಿಯಾಗಲಿವೆ. ಆ ಪಂದ್ಯದಲ್ಲಿ ಡ್ರಾ ಸಾಧಿಸಿದರೂ ಕೊಲಂಬಿಯಾ ಗುಂಪಿನ ಟಾಪ್ ತಂಡವಾಗಲಿದೆ. ಅದೇ ಫಲಿತಾಂಶ ಪೋರ್ಚುಗಲ್ ತಂಡಕ್ಕೂ ನಾಕೌಟ್ ಹಂತದ ಟಿಕೆಟ್ ನೀಡಲಿದೆ.

- ಡ್ಯಾನಿಯಲ್ ಮುನೋಸ್ (76ನೇ ನಿಮಿಷ) ನಿರ್ಣಾಯಕ ಗೋಲು
- ಗೋಲ್‌ಕೀಪರ್ ಲಿಯೋನೆಲ್ ಎಂಪಾಸಿ ಐದು ಅದ್ಭುತ ಸೇವ್

ಕ್ರೊಯೇಷ್ಯಾ ಆಸೆ ಜೀವಂತ

• **ಟೊರೊಂಟೊ:** ಅನುಭವಿ ನಾಯಕ ಲೂಕಾ ಮೊಡ್ರಿಚ್ ಅವರ 200ನೇ ಅಂತಾರಾಷ್ಟ್ರೀಯ ಪಂದ್ಯದಲ್ಲಿ, ಬದಲಿ ಆಟಗಾರ ಅಂಟೆ ಬುಡಿಮಿರ್ ಗಳಿಸಿದ ಏಕೈಕ ಗೋಲಿನ ನೆರವಿನಿಂದ ಕ್ರೊಯೇಷ್ಯಾ 1-0 ಅಂತರದಲ್ಲಿ ಪನಾಮಾವನ್ನು ಮಣಿಸಿ ಫಿಫಾ ವಿಶ್ವಕಪ್‌ನ ನಾಕೌಟ್ ಹಂತದ ಆಸೆಯನ್ನು ಜೀವಂತವಾಗಿರಿಸಿಕೊಂಡಿತು. ಮೊದಲಾರ್ಧದಲ್ಲಿ ಉಭಯ ತಂಡಗಳು ಎಚ್ಚರಿಕೆಯ ಆಟ ಪ್ರದರ್ಶಿಸಿದವು. ಆದರೆ ದ್ವಿತೀಯಾರ್ಧ ಆರಂಭವಾದ ಕೆಲವೇ ಕ್ಷಣಗಳಲ್ಲಿ ಕ್ರೊಯೇಷ್ಯಾ ಪಂದ್ಯದ ಮೇಲೆ ಹಿಡಿತ ಸಾಧಿಸಿತು. 54ನೇ ನಿಮಿಷದಲ್ಲಿ ಜೋಸಿಪ್ ಸ್ಟ್ಯಾನಿಸಿಕ್ ನೀಡಿದ ನಿಖರ ಕ್ರಾಸ್ ಅನ್ನು ಅಂಟೆ ಬುಡಿಮಿರ್ ಗೋಲಾಗಿ ಪರಿವರ್ತಿಸಿ ತಂಡಕ್ಕೆ ಮುನ್ನಡೆ ತಂದರು. ಅದೇ ಗೋಲಿನ ಬಲದಿಂದ ಕ್ರೊಯೇಷ್ಯಾ ಪಂದ್ಯವನ್ನು ಗೆದ್ದುಕೊಂಡಿತು.

ಇಂಗ್ಲೆಂಡ್–ಘಾನಾ ಪಂದ್ಯ ಡ್ರಾ

• **ಫಾಕ್ಸ್‌ಬರೋ:** ಚೆಂಡಿನ ಮೇಲೆ ಸಂಪೂರ್ಣ ಹಿಡಿತ ಸಾಧಿಸಿ, ಗೋಲು ಅವಕಾಶಗಳ ಸುರಿಮಳೆಯನ್ನೇ ಸೃಷ್ಟಿಸಿದರೂ ಇಂಗ್ಲೆಂಡ್‌ಗೆ ಗೆಲುವು ಸಿಗಲಿಲ್ಲ, ಘಾನಾ ವಿರುದ್ಧದ ವಿಶ್ವಕಪ್ ಎಲ್ ಗುಂಪಿನ ಪಂದ್ಯ 0-0 ಗೋಲುರಹಿತ ಡ್ರಾದಲ್ಲಿ ಅಂತ್ಯಗೊಂಡಿತು. ಪಂದ್ಯದುದ್ದಕ್ಕೂ ಮೇಲುಗೈ ಸಾಧಿಸಿದ ಇಂಗ್ಲೆಂಡ್ 19 ಶಾಟ್‌ಗಳನ್ನು ಪ್ರಯತ್ನಿಸಿದರೆ, ಘಾನಾ ಕೇವಲ ಒಂದು ಪ್ರಯತ್ನಕ್ಕೆ ಸೀಮಿತವಾಯಿತು. ಆದರೆ ಗೋಲು ಮಾತ್ರ ಎರಡೂ ತಂಡಗಳಿಂದ ಬರಲಿಲ್ಲ. ಮೊದಲಾರ್ಧದಲ್ಲಿ 60 ಶೇಕಡಾ ಚೆಂಡಿನ ಹಿಡಿತ ಹೊಂದಿದ್ದ ಇಂಗ್ಲೆಂಡ್ ಹಲವು ದಾಳಿಗಳನ್ನು ನಡೆಸಿದರೂ ಗೋಲು ಖಾತೆ ತೆರೆಯಲಿಲ್ಲ, ದ್ವಿತೀಯಾರ್ಧದಲ್ಲಿ ಘಾನಾ ಹೆಚ್ಚು ಆಕ್ರಮಣಕಾರಿ ಆಟವಾಡಿ ಇಂಗ್ಲೆಂಡ್‌ಗೆ ಸವಾಲೊಡ್ಡಿತು. ಈ ಫಲಿತಾಂಶದೊಂದಿಗೆ ಗುಂಪು ಎಲ್‌ನಲ್ಲಿ ನಾಕೌಟ್ ಪ್ರವೇಶದ ಹೋರಾಟ ಮತ್ತಷ್ಟು ರೋಚಕವಾಗಿದೆ. ಇಂಗ್ಲೆಂಡ್ ಮತ್ತು ಘಾನಾ ಎರಡೂ ತಂಡಗಳು ತಮ್ಮ ಅಂತಿಮ ಗುಂಪು ಪಂದ್ಯಗಳಲ್ಲಿ ಉತ್ತಮ ಫಲಿತಾಂಶಕ್ಕಾಗಿ ಕಾದಿವೆ.

ತ್ರಿಶಾ–ಗಾಯತ್ರಿ ಮುನ್ನಡೆ

• **ಫುಲ್ಲರ್‌ಟನ್ (ಅಮೆರಿಕ):** ಮೂರು ಸುತ್ತುಗಳ ರೋಚಕ ಪಂದ್ಯದಲ್ಲಿ ಗೆಲುವು ಸಾಧಿಸಿರುವ ಭಾರತದ ತ್ರಿಶಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ ಜೋಡಿ ಇಲ್ಲಿ ನಡೆಯುತ್ತಿರುವ ಪ್ರತಿಷ್ಠಿತ ಯುಎಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಎರಡನೇ ಸುತ್ತಿಗೆ ಮುನ್ನಡೆದಿದೆ.

ಬುಧವಾರ ಶುರುವಾಗಿರುವ ಬ್ಯಾಡ್ಮಿಂಟನ್ ಕ್ಷೇತ್ರದ ಉತ್ತುಂಗ ಪಂದ್ಯಾವಳಿಯಲ್ಲಿ ಒಂದಾದ ಯುಎಸ್ ಓಪನ್ ಟೂರ್‌ನಲ್ಲಿ ಸ್ಪೇನ್‌ನ ಪೌಲಾ ಲೋಪೇಜ್ ಮತ್ತು ಲೂಸಿಯಾ ಅವರನ್ನು ಎದುರಿಸಿದ್ದ ಭಾರತ ಜೋಡಿ 21-12, 14-21, 21-13ರಿಂದ ಮೇಲುಗೈ ಸಾಧಿಸಿತು. ಗಾಯದ ಕಾರಣದಿಂದಾಗಿ ಸ್ಪರ್ಧಾತ್ಮಕ ಬ್ಯಾಡ್ಮಿಂಟನ್‌ನಿಂದ ದೂರ ಉಳಿದಿದ್ದ ತ್ರಿಶಾ ಕಂಬ್ಯಾಕ್ ಮಾಡಿದರು. ಅವರಿಗೆ ಗಾಯತ್ರಿ ಸಾಥ್ ಸಿಕ್ಕಿತು. ಇಬ್ಬರೂ ಮೊದಲಿನಿಂದಲೂ ಕರಾರುವಾಕ್ ದಾಳಿ ಸಂಘಟಿಸಿದರು. ಆಕ್ರಮಣಕಾರಿ ಆಟದೊಂದಿಗೆ ಮೊದಲ ಸೆಟ್ ಅನ್ನು 21-12ರಿಂದ ಗೆದ್ದರು. ಎರಡನೇ ಸೆಟ್‌ನಲ್ಲಿ ಹಿನ್ನಡೆಯಾಯಿತು. ಎದುರಾಳಿ ಲೂಸಿಯಾ ಮತ್ತು ಪೌಲಾ ಎರಡನೇ ಸೆಟ್‌ನಲ್ಲಿ ಉತ್ತಮ ಪ್ರದರ್ಶನ ನೀಡಿ 21-14ರಿಂದ ಗೆದ್ದರು. ಮೂರನೇ ಸೆಟ್‌ನಲ್ಲಿ ಮತ್ತೆ ದಾಳಿಗಿಳಿದ ಭಾರತ 21-13ರೊಂದಿಗೆ ಗೆದ್ದು ಎರಡನೇ ಸೆಟ್‌ಗೆ ಲಗ್ಗೆ ಹಾಕಿತು. ಮುಂದಿನ ಸೆಟ್‌ನಲ್ಲಿ ಈ ಜೋಡಿ, ಜಪಾನ್‌ನ ನಹಾಡೆ ಮತ್ತು ಮಿಯು ಅವರನ್ನು ಎದುರಿಸಲಿದೆ.

ಯುಎಸ್ ಓಪನ್ ಬ್ಯಾಡ್ಮಿಂಟನ್

ಮುಖ್ಯ ಡ್ರಾಗೆ ರೌನಕ್: ಭಾರತದ ಉದಯೋನ್ಮುಖ ಆಟಗಾರ ರೌನಕ್ ಚೌಹಾಣ್ ಅರ್ಹತಾ ಸುತ್ತಿನ ಪಂದ್ಯಗಳಲ್ಲಿ ಮಿಂಚುವುದರೊಂದಿಗೆ ಮೊದಲ ಸ್ಥಾನ ಪಡೆದು ಮುಖ್ಯ ಡ್ರಾಗೆ ಅರ್ಹರಾದರು. ಸತತ ಎರಡು ಗೆಲುವು ಸಾಧಿಸಿದ ಅವರು, ಮೊದಲಿಗೆ ಇಪೊಲಿಟ್ ಎರಡನೇ ಸುತ್ತಿನಲ್ಲಿ ಕುವೊ ಕುವಾನ್ ಅವರನ್ನು ಎದುರಿಸಿದ್ದರು. ದಿನದ ಮೊದಲ ಪಂದ್ಯದಲ್ಲಿ ಫ್ರಾನ್ಸ್‌ನ ಇಪೊಲಿಟ್ ರಾಯ್ ಅವರನ್ನು ಎದುರಿಸಿ 21-19, 21-16ರಿಂದ ಗೆದ್ದರು. ಎರಡನೇ ಪಂದ್ಯದಲ್ಲಿ ತೈವಾನ್‌ನ ಕುವಾನ್ ಅವರೊಂದಿಗೆ 13-21 21-14 21-10ರಿಂದ ಗೆದ್ದರು.

ಶುಭಮನ್ ಗಿಲ್‌ಗೆ 2ನೇ ಶ್ರೇಯಾಂಕ

• **ದುಬೈ:** ಟೆಸ್ಟ್ ಹಾಗೂ ಏಕದಿನ ತಂಡಗಳ ನಾಯಕ ಶುಭಮನ್ ಗಿಲ್ ಅವರು ಏಕದಿನ ಮಾದರಿಯಲ್ಲಿ ನಂಬರ್ 1 ಆಗುವತ್ತ ಸಾಗಿದ್ದು, ಪ್ರಕಟಗೊಂಡ ಶ್ರೇಯಾಂಕ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೇರಿದ್ದಾರೆ.

ಅಫ್ಘಾನಿಸ್ತಾನ ವಿರುದ್ಧದ ಪಂದ್ಯಗಳಲ್ಲಿ ಭರ್ಜರಿ ಪ್ರದರ್ಶನ ನೀಡಿರುವ ಅವರು, ತಮ್ಮ ಮೊದಲ ಸ್ಥಾನಕ್ಕೆ ದೂರವೇನಿಲ್ಲ. ಮೊದಲಿನಿಂದಲೂ ಏಕದಿನ ಮಾದರಿಯಲ್ಲಿ ಪರಿಣಾಮಕಾರಿಯಾಗಿ ಪ್ರದರ್ಶನ ನೀಡಿರುವ ಗಿಲ್ ಅಫ್ಘಾನಿಸ್ತಾನ ವಿರುದ್ಧದ ಸರಣಿಯಲ್ಲಿ ಅತಿ ಹೆಚ್ಚು ರನ್ ಗಳಿಸಿದ ಆಟಗಾರ ಆಗಿದ್ದರು. ಈ ಬೆನ್ನಲ್ಲೇ ನ್ಯೂಜಿಲೆಂಡ್‌ನ ಡ್ಯಾರಿಲ್ ಮಿಚೆಲ್ ಅವರ ನಂತರದ ಸ್ಥಾನ ಪಡೆದಿದ್ದಾರೆ.

ತಂಡದ ಪ್ರಮುಖ ಆಟಗಾರ ವಿರಾಟ್ ಕೊಹ್ಲಿ ಅಫ್ಘಾನಿಸ್ತಾನ ಸರಣಿ ಆಡದ ಬೆನ್ನಲ್ಲೇ ಒಂದು ಸ್ಥಾನ ಇಳಿದಿದ್ದಾರೆ. ಇಷ್ಟು ದಿನ ಎರಡನೇ ಸ್ಥಾನದಲ್ಲಿದ್ದ ಅವರು, 768 ಅಂಕಗಳೊಂದಿಗೆ ಮೂರನೇ ಸ್ಥಾನಕ್ಕಿಳಿದಿದ್ದಾರೆ. ರೋಹಿತ್ ಶರ್ಮ ನಾಲ್ಕನೇ ಸ್ಥಾನದಲ್ಲಿರುವ ಬೆನ್ನಲ್ಲೇ ಅಗ್ರ ಐದರಲ್ಲಿ ಮೂವರು ಭಾರತೀಯರಿರುವುದು ಭಾರೀ ಭರವಸೆ ಹೆಚ್ಚಿಸಿದೆ.

ಟೆಸ್ಟ್ ಬೌಲಿಂಗ್: ಬೂಮ್ರಾ ಸರಿಗಟ್ಟಿದ ಹೆನ್ರಿ: ಟೆಸ್ಟ್ ಬೌಲಿಂಗ್ ಶ್ರೇಯಾಂಕದಲ್ಲಿ ಗಮನಾರ್ಹ ಬದಲಾವಣೆಯಾಗಿದೆ. ವರ್ಷಾನುಗಟ್ಟಲೆ ನಂಬರ್ 1 ಆಗಿದ್ದ ಜಸ್‌ಪ್ರೀತ್ ಬೂಮ್ರಾ ಮೊದಲನೇ ಸ್ಥಾನದಲ್ಲಿದ್ದರೂ, ಅವರ ಸನಿಹಕ್ಕೆ ಯಾರೊಬ್ಬರು ಬಂದಿರಲಿಲ್ಲ, ಆದರೆ ಇತ್ತೀಚೆಗಷ್ಟೇ ಇಂಗ್ಲೆಂಡ್‌ನಲ್ಲಿ ನಡೆದಿದ್ದ ಟೆಸ್ಟ್ ಪಂದ್ಯದಲ್ಲಿ 11 ವಿಕೆಟ್ ಪಡೆದು ಗಮನ ಸೆಳೆದಿದ್ದರು. ಈ ಬೆನ್ನಲ್ಲೇ ನಂಬರ್ ಒನ್ ಸ್ಥಾನವನ್ನು ಬೂಮ್ರಾ ಅವರೊಂದಿಗೆ 870 ಅಂಕಗಳೊಂದಿಗೆ ಹಂಚಿಕೊಂಡಿದ್ದಾರೆ.

ಮಹಿಳೆಯರ ವಿಶ್ವಕಪ್ | ಇಂದು ಭಾರತ–ಬಾಂಗ್ಲಾ ಪಂದ್ಯ

ಭಾರತಕ್ಕೆ ಪುಟಿದೇಳುವ ಭರವಸೆ

• **ಬ್ರಿಸ್ಟಲ್ (ಇಂಗ್ಲೆಂಡ್):** ಎರಡು ಪಂದ್ಯಗಳಲ್ಲಿ ಗೆಲುವು ಸಾಧಿಸಿದ್ದರೂ ಕಳೆದ ಪಂದ್ಯದಲ್ಲಿ ಸೋಲಿನೊಂದಿಗೆ ನಿರಾಸೆ ಮೂಡಿಸಿರುವ ಭಾರತ ಮಹಿಳಾ ತಂಡವು ಗುರುವಾರದ ಮಹತ್ವದ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಎದುರಿಸಲಿದೆ.

ಮೊದಲ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ಎರಡನೇ ಪಂದ್ಯದಲ್ಲಿ ನೆದರ್‌ಲೆಂಡ್ಸ್ ತಂಡವನ್ನು ಸೋಲಿಸಿ ವಿಶ್ವಕಪ್‌ನಲ್ಲಿ ದೊಡ್ಡ ಮುನ್ನಡೆ ಸಾಧಿಸಿದ್ದ ಭಾರತ ಮಹಿಳೆಯರ ತಂಡ ಕಳೆದ ಪಂದ್ಯದಲ್ಲಿ ದ.ಆಫ್ರಿಕಾ ವಿರುದ್ಧ ವಿರೋಚಿತ ಸೋಲನುಭವಿಸಿದ್ದು ಗೆಲುವಿನ ಮೂಲಕ ಉತ್ತರಿಸಬೇಕಿದೆ. ಅತ್ತ ಬಾಂಗ್ಲಾದೇಶವು ಉಳಿಗಾಲಕ್ಕಾಗಿ ಹೋರಾಡಬೇಕಿದೆ. ಭಾರತದ ನಾಲ್ಕನೇ ಪಂದ್ಯ ಬ್ರಿಸ್ಟಲ್‌ನಲ್ಲಿ ನಡೆಯಲಿದೆ. ಭಾರತದ ಎಲ್ಲಾ ಪಂದ್ಯಗಳು ಸಂಜೆ ನಡೆಯಲಿವೆ.

ಮಂಧಾನ, ಕೌರ್, ಶೆಫಾಲಿ ಮತ್ತು ರಿಚಾ ಅವರ ಬ್ಯಾಟಿಂಗ್ ಬಲದೊಂದಿಗೆ ಭಾರತ ಕಣಕ್ಕಿಳಿಯುತ್ತಿದೆ. ಕಳೆದ ಪಂದ್ಯಗಳಲ್ಲಿ ಹಿನ್ನಡೆ ಅನುಭವಿಸಿರುವ ಬಾಂಗ್ಲಾದೇಶವು ಸಂಯೋಜಿತ ತಂಡದೊಂದಿಗೆ ಕಣಕ್ಕಿಳಿಯಲಿದೆ. ಗೆದ್ದರೆ ಭಾರತದ ಸೂಪರ್-8 ಬಹುತೇಕ ಖಚಿತವಾಗಲಿದೆ. ಅತ್ತ ಬಾಂಗ್ಲಾ ಗೆದ್ದರೆ ಸಮಾಧಾನ ಸಿಗಲಿದೆ.

ಭಾರತಕ್ಕೆ ಭರವಸೆ: ಮೂರು ಪಂದ್ಯಗಳಲ್ಲಿ ಸ್ಮೃತಿ ಮಂಧಾನ 159 ರನ್ ಗಳಿಸಿದ್ದಾರೆ. ಆ ಮೂಲಕ ಭಾರತದ ಭರವಸೆಯಾಗಿದ್ದು, ರನ್ ಗಳಿಸುವ ದೊಡ್ಡ ಜವಾಬ್ದಾರಿ ನಿಭಾಯಿಸಲು ಸಜ್ಜಾಗಿದ್ದಾರೆ. 92 ರನ್ ಗೂಡಿಸಿರುವ ಶೆಫಾಲಿ ವರ್ಮಾ ಕೂಡ ಪರಿಣಾಮಕಾರಿ ಪ್ರದರ್ಶನ ನೀಡುವುದಕ್ಕೆ ಸಿದ್ಧರಾಗಿದ್ದಾರೆ. ಮಧ್ಯಮ ಕ್ರಮಾಂಕದಲ್ಲಿ ಹರ್ಮನ್‌ಪ್ರೀತ್ ಕೌರ್ ಇನ್ನಷ್ಟು ಸ್ಫೋಟಕ ಬ್ಯಾಟಿಂಗ್ ಮಾಡಬೇಕಿದೆ. 72 ರನ್ ಮಾಡಿರುವ ಅವರು, ದೊಡ್ಡ ಇನ್ನಿಂಗ್ಸ್ ಕಟ್ಟಬೇಕಿದೆ. ಏಕದಿನ ವಿಶ್ವಕಪ್‌ನ ಗೆಲುವಿನ ರೂವಾರಿಯಾಗಿದ್ದ ಜೆಮಿಮಾ ರಾಡ್ರಿಗ್ಸ್ ಬ್ಯಾಟ್‌ನಿಂದ ರನ್ ಬರಬೇಕಿದೆ. ರಿಚಾ ಘೋಷ್ ಕೊನೆಯಲ್ಲಿ ಲಯದಲ್ಲಿದ್ದು, ಕೊನೆಯ ಓವರ್‌ಗಳಲ್ಲಿ ಸ್ಫೋಟಕ ಬ್ಯಾಟಿಂಗ್‌ನೊಂದಿಗೆ ಈ ವರೆಗೂ 69 ರನ್ ಗಳಿಸಿದ್ದಾರೆ.

ಚಾರಣಿ ಬಲ: ಭಾರತಕ್ಕಿರುವ ದೊಡ್ಡ ಬಲವೇ ಶ್ರೀ ಚಾರಣಿ ಅವರ ಅದ್ಭುತ ಪ್ರದರ್ಶನ. ಪಾಕಿಸ್ತಾನ ವಿರುದ್ಧದ ಪಂದ್ಯದಿಂದಲೂ ಕರಾರುವಾಕ್ ದಾಳಿಯೊಂದಿಗೆ ಗೆಲುವಿನಲ್ಲಿ ಮಿಂಚುತ್ತಿರುವ ಅವರು, ಭಾರತದ ದೊಡ್ಡ ಶಕ್ತಿ. ಆಡಿರುವ ಮೂರೇ ಪಂದ್ಯಗಳಲ್ಲಿ ಈಗಾಗಲೇ 10 ವಿಕೆಟ್ ಕಿತ್ತಿದ್ದಾರೆ. ಉಳಿದಂತೆ ದೀಪ್ತಿ ಶರ್ಮ ಮೊದಲನೇ ಪಂದ್ಯದಲ್ಲಿ ಐದು ವಿಕೆಟ್ ಕಿತ್ತಿದ್ದರು. ಪರಿಣಾಮ ಅವರೂ ಭರ್ಜರಿ ಲಯದಲ್ಲಿದ್ದಾರೆ. ಬ್ಯಾಟಿಂಗ್‌ನಲ್ಲಿ ಮಿಂಚುವ ಶೆಫಾಲಿ ವರ್ಮಾ ಬೌಲಿಂಗ್‌ನಲ್ಲೂ ಮಿಂಚಿದ್ದಾರೆ. ಚಾರಣಿ ಅವರ ಬಲದೊಂದಿಗೆ ಭಾರತ ಗೆಲುವಿನ ಹಾದಿಯಲ್ಲಿರುವ ಭರವಸೆಯಲ್ಲಿದೆ.

ಪಿಚ್

ಇಂಗ್ಲೆಂಡ್‌ನ ಬ್ರಿಸ್ಟಲ್ ಕ್ರೀಡಾಂಗಣ ಸಮತೋಲಿತ ಟ್ರ್ಯಾಕ್ ಅನ್ನು ಹೊಂದಿದೆ. ಆಸ್ಟ್ರೇಲಿಯಾ ಅಂಥ ತಂಡಗಳು ಭರ್ಜರಿ ಬ್ಯಾಟಿಂಗ್ ಮಾಡಿದ್ದರೂ ಬೌಲಿಂಗ್ ಮಾಡುವ ವೇಳೆ ಎದುರಾಳಿಗಳು ಪರದಾಡಿದ್ದಾರೆ. ಹಾಗೆಂದರೆ ಬ್ಯಾಟಿಂಗ್ ಮತ್ತು ಬೌಲಿಂಗ್ ಎರಡಕ್ಕೂ ಮಾಡಬಹುದಾದ ಪಿಚ್ ಹೊಂದಿದೆ. ಮೊದಲು ಬೌಲಿಂಗ್ ಮಾಡುವ ತಂಡಕ್ಕೆ ಅಲ್ಪ ಲಾಭ ಸಿಗಲಿದೆ.

ಮೈಸೂರು ವಾರಿಯರ್ಸ್‌ಗೆ ಮೊದಲ ಗೆಲುವು

• **ಮೈಸೂರು/ಬೆಂಗಳೂರು:** ಸತತ ಎರಡು ಸೋಲಿನ ಬಳಿಕ ಕೊನೆಗೂ ಗೆಲುವು ಸಾಧಿಸಿರುವ ಮೈಸೂರು ವಾರಿಯರ್ಸ್ ತಂಡವು ಮಹಾರಾಜ ಟ್ರೋಫಿ ಪಂದ್ಯಾವಳಿಯಲ್ಲಿ ಖಾತೆ ತೆರೆದಿದೆ. ಅತ್ತ ಬೆಂಗಳೂರು ಬ್ಲಾಸ್ಟರ್ಸ್ ಮೊದಲ ಸೋಲು ಕಂಡರೂ ಬುಧವಾರದ ಪಂದ್ಯದಲ್ಲಿ ಮತ್ತೆ ಗೆಲುವು ಸಾಧಿಸಿದೆ.

ಮಂಗಳವಾರ ರಾತ್ರಿ ನಡೆದ ಪಂದ್ಯದಲ್ಲಿ ಮೈಸೂರು ದೊಡ್ಡ ಗೆಲುವು ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿ 203 ರನ್ ಗಳಿಸಿದ ಮೈಸೂರು ಬೆಂಗಳೂರು ತಂಡವನ್ನು 131 ರನ್‌ಗಳಿಗೆ ಆಲೌಟ್ ಮಾಡುವುದಕ್ಕೆ 16 ಓವರ್ ತೆಗೆದುಕೊಂಡಿತು. ಚೇತನ್ ಎಲ್.ಆರ್. ಸ್ಫೋಟಕ ಬ್ಯಾಟಿಂಗ್‌ನೊಂದಿಗೆ ಮಿಂಚಿದರು. 60 ಬಾಲ್‌ಗಳಲ್ಲಿ 9 ಬೌಂಡರಿ, 7 ಸಿಕ್ಸರ್ ಬಾರಿಸಿ 100 ರನ್ ಗಳಿಸಿದರು. ಅತ್ತ ಕೆಪಿ ಕಾರ್ತಿಕ್ ಕೂಡ ಅಬ್ಬರದ ಬ್ಯಾಟಿಂಗ್‌ನೊಂದಿಗೆ ಮಿಂಚಿದರು. 41 ಬಾಲ್ ಎದುರಿಸಿದ ಕಾರ್ತಿಕ್ ಔಟಾಗದೆ 61 ರನ್ ಗಳಿಸಿದರು. ಗುರಿ ಬೆನ್ನತ್ತುವಾಗ ಬೆಂಗಳೂರು ಪರ ಸಮಿತ್ ದ್ರಾವಿಡ್ 30, ಪ್ರವೀಣ್ ದುಬೆ 36 ರನ್ ಗಳಿಸಿದರು. ಮೈಸೂರು ಪರ ಅರ್ವಿಂದ್ ಕುಮಾರ್ 17 ರನ್ ಮಾತ್ರಕ್ಕೆ 4 ವಿಕೆಟ್ ಕಿತ್ತರು.

ಮಂಗಳೂರು-ಬೆಂಗಳೂರು ಪಂದ್ಯದ ವೇಳೆ ಮಿಂಚಿದ ಸೂರಜ್ ಅಹುಜಾ.

ಮಂಗಳೂರು ವಿರುದ್ಧ ಗೆದ್ದ ಬ್ಲಾಸ್ಟರ್ಸ್: ಸಾಂಘಿಕ ಬ್ಯಾಟಿಂಗ್ ಪ್ರದರ್ಶನದೊಂದಿಗೆ ಮಂಗಳೂರು ತಂಡದ ಮೇಲೆ ಒತ್ತಡ ಹೇರಿದ ಬೆಂಗಳೂರು ಬ್ಲಾಸ್ಟರ್ಸ್ ತಂಡವು ಮತ್ತೆ ಗೆಲುವಿನ ನಗೆ ಬೀರಿತು. ಮಂಗಳವಾರ ರಾತ್ರಿಯಷ್ಟೇ ಸೋಲನುಭವಿಸಿದ್ದ ಕಲ್ಯಾಣಿ ತಂಡವು, ಗೆಲುವಿನ ಹಾದಿಗೆ ಮರಳಿಯೇ ಬಿಟ್ಟಿತು.

ಮೈಸೂರಿನ ಶ್ರೀಕಂಠದತ್ತ ಒಡೆಯರ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಬೆಂಗಳೂರು 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 226 ರನ್ ಗಳಿಸಿತು. ರೋಹನ್ ಪಾಟೀಲ್ 30, ಕೃಷ್ಣನ್ ಶ್ರೀಜಿತ್ 59, ಸಮಿತ್ ದ್ರಾವಿಡ್ 39, ಶುಭಾಂಗ್ ಹೆಗ್ಡೆ 34 ಮತ್ತು ಪ್ರವೀಣ್ ದುಬೆ 45 ರನ್ ಗಳಿಸಿದರು. ಮಂಗಳೂರು ಪರ ಕೋದಂಡ ಅಜಿತ್ 3 ವಿಕೆಟ್ ಕಿತ್ತರು.

ಸೂರಜ್ ಹೋರಾಟ ವ್ಯರ್ಥ: ಗುರಿ ಬೆನ್ನತ್ತಿದ ಮಂಗಳೂರು ಕೂಡ ಹೋರಾಟ ನಡೆಸಿತು. 8 ಸಿಕ್ಸರ್ ಹಾಗೂ 5 ಬೌಂಡರಿಗಳನ್ನು ಬಾರಿಸಿದ ಮಂಗಳೂರು ವಿಕೆಟ್ ಕೀಪರ್ ಸೂರಜ್ ಅಹುಜಾ 38 ಬಾಲ್ ಮಾತ್ರದಲ್ಲಿ 96 ರನ್ ಬಾರಿಸಿದರು. ಆರಂಭಿಕರಿಂದ ರನ್ ಬರದಿದ್ದಾಗ ಮಿಂಚಿದ ಅವರು, ಗಮನ ಸೆಳೆದಿದ್ದಂತೂ ಸುಳ್ಳಲ್ಲ. ಅಜಿತ್ ಕೂಡ 27 ಬಾಲ್‌ಗಳಲ್ಲಿ 49 ರನ್ ಬಾರಿಸಿದರು. ಇವರಿಬ್ಬರ ಶತಪ್ರಯತ್ನ ಹೊರತಾಗ್ಯೂ 5 ವಿಕೆಟ್ ಕಳೆದುಕೊಂಡ ಮಂಗಳೂರು 20 ಓವರ್‌ಗಳಲ್ಲಿ 206 ರನ್ ಮಾತ್ರವೇ ಗಳಿಸಿತು.

ಪದಬಂಧ

6025

» ರಾಜಾ ಸಂಗಮೇಶ ಹಿರೇಮಠ



ಎಡದಿಂದ ಬಲಕ್ಕೆ
1.ಮಂಚ-ಪಲ್ಲಂಗದ ಸಮಾನಪದ (3)
4.ಈತ ಸಾಮ್ರಾಜ್ಯಗಳನ್ನು ಮಾಡುವವನು (5)
6.ಜಲದಲ್ಲಿ ಹುಟ್ಟಿದ್ದು-ತಾವರೆ (3)
7.ಎಲ್ಲರ ಕಾಲೆಳೆಯುವ ಸಮಯ (3)
9.ನಕುಲನನ್ನೊಳಗೊಂಡ ಮನುಷ್ಯ ಜಾತಿ (4)
10.ಈಕೆ ದುರ್ಯೋಧನನ ಹೆಂಡತಿ (4)
12.ಗಣಪತಿಯಿಂದ ಹಾಲ್ಕೊಂಡ ಪತಿವ್ರತೆ (3)
14.ಒಂದು ವಿಷಯದಲ್ಲಿ ಪಂಡಿತನಾದ (3)
15.ವಧೂವರರ ನಡುವೆ ಹಿಡಿದ ಬಟ್ಟೆ (5)
17.ಉಗುರು ಮುಂತಾದವುಗಳಿಂದ ಗೆಬರು (3)

ಮೇಲಿನಿಂದ ಕೆಳಕ್ಕೆ
1.ಪರಿಹಾರ ಪಡೆದು ಮಾಡಿದ ಅಗಳ (4)
2.ಎಣಿಸಲ್ಪಟ್ಟದ್ದು-ಲಕ್ಷ್ಯಸಬೇಕಾದುದು (4)
3.ತಂದು-ನೇಗಿಲಿಯ ಸಮಾನಪದ (2)
4.ಇವರು ಒಳ್ಳೆಯ ಮಂದಿ (3)
5.ಕರ ತೀರಿಸುತ್ತಾ ಹೋದದ್ದು ಈ ಸಮುದ್ರದಂಡೆಯವರೆಗೆ (5)
8.ಕೌರವ-ಪಾಂಡವರ ಕಥೆ ಹೇಳುವ ಕಾವ್ಯ (5)
11.ಮಹಾರಾಷ್ಟ್ರ ಗಡಿಯಲ್ಲಿರುವ ವಿಜಯಪುರ ಜಿಲ್ಲೆಯ ತಾಲ್ಲೂಕು (3)
12.ಜೋರು ಮಾಡಿ ಹೆದರಿಸುವುದು (4)
13.ಅನ್ನದೊಂದಿಗೆ ಸೇವಿಸುವ ತಿಳಿಸಾರು ಮೇಲೋಗರ (4)
16.ಸರಕನ್ನು ಹೊರದೇಶಕ್ಕೆ ಕಳಿಸುವುದು (2)

6024 ಉತ್ತರ

ಎಡದಿಂದ ಬಲಕ್ಕೆ:
1.ತೋರಣ
3.ಸುಗಂಧರಾಜ
5.ಸಹಿತ 7.ರಕ್ತ
8.ಗಣತಿಕ್ಷ 9.ರಾಮಾಯಣ
11.ಕಂಸ 13.ನಮ್ಮನ
15.ದಂಡಧಾವನ
16.ಉದಾತ್ತ

ಮೇಲಿನಿಂದ ಕೆಳಕ್ಕೆ:
1.ತೋಟಮಾಲಿ 2.ಕೆಲಸ
3.ಸುವೀಕ 4.ರಾಜದ್ರೋಹ
6.ಹಿರಿತನ 8.ಗದಗುಟ್ಟು
10.ಸಾಲಂಕೃತ
12.ಸಮುಚಿತ 13.ನಮನ
14.ಉದ್ಯಾನ

ನಾಗಬಂಧಂ ಟ್ರೈಲರ್ ಬಿಡುಗಡೆ

ಭಾರತೀಯ ಚಿತ್ರರಂಗದಲ್ಲಿ ದೊಡ್ಡಮಟ್ಟದ ಕುತೂಹಲ ಹುಟ್ಟುಹಾಕಿರುವ ಬಹುನಿರೀಕ್ಷಿತ ಪ್ಯಾನ್-ಇಂಡಿಯಾ ಚಿತ್ರ 'ನಾಗಬಂಧಂ' ಜುಲೈ 3ರಂದು ದೇಶಾದ್ಯಂತ ಬಹುಭಾಷೆಗಳಲ್ಲಿ ಬಿಡುಗಡೆಯಾಗಲಿದೆ. ಪೂರಕ ಪಾರ್ವತಿ ಖ್ಯಾತಿಯ ನಟಿ ನಭಾ ನಟೇಶ್, ವಿರಾಟ್ ಕರ್ಣ ಪ್ರಮುಖ ಪಾತ್ರದಲ್ಲಿ ನಟಿಸಿರುವ ಈ ಚಿತ್ರದ ಕನ್ನಡ ಟ್ರೈಲರ್ ಬಿಡುಗಡೆ ಸಮಾರಂಭ ಈಚೆಗೆ ನಡೆಯಿತು. ಈ ಸಂದರ್ಭದಲ್ಲಿ ಚಿತ್ರದಲ್ಲಿ ನಟಿಸಿರುವ ಕನ್ನಡದ ಪ್ರತಿಭೆಗಳಾದ ಭಜರಂಗಿ ಪ್ರಸನ್ನ, ಗರುಡ ರಾಮ್, ವಿನಯ್ ಬಿದ್ದಪ್ಪ ಹಾಜರಿದ್ದು ಸಿನಿಮಾದ ವಿಶೇಷತೆಗಳ ಕುರಿತು ಮಾತನಾಡಿದರು.

ನಾಯಕಿ ನಭಾನಟೇಶ್ ಮಾತನಾಡಿ 10 ವರ್ಷಗಳ ನಂತರ ಕನ್ನಡ ಸಿನಿಪ್ರೇಕ್ಷಕರ ಮುಂದೆ ಬರ್ತಿದ್ದೇನೆ. ವಜ್ರಕಾಯದಲ್ಲಿ ಪಾರ್ವತಿಯಾಗಿ ಕಾಣಿಸಿಕೊಂಡಿದ್ದೆ. ಇದರಲ್ಲೂ ಸಹ ಪಾರ್ವತಿಯಾಗೇ ನಟಿಸಿದ್ದೇನೆ. ಅದರದು ಕಂಪ್ಲೀಟ್ ಅಪೋಸಿಟ್ ಪಾತ್ರ. ಡಿವೈನ್ ಜತೆಗೆ ತುಂಬಾ ಲೇಯರ್ಸ್ ಇರೋ ಪಾತ್ರ. ವಿರಾಟ್ ಅವರು ಎರಡನೇ ಸಿನಿಮಾದಲ್ಲಿ ತಮ್ಮ ವಿಶ್ವರೂಪವನ್ನೇ ತೋರಿಸಿದ್ದಾರೆ. ಸನಾತನ ಧರ್ಮದ ಜತೆಗೆ ಆಕ್ಷನ್ ಅಡ್ವೆಂಚರಸ್ ಥ್ರಿಲ್ಲರ್ ಕಥಾಹಂದರ ಒಳಗೊಂಡ ಚಿತ್ರವಿದು ಎಂದರು.

ನಿರ್ದೇಶಕ ಅಭಿಷೇಕ್ ನಾಮಾ ಅವರ ಸಾರಥ್ಯದಲ್ಲಿ ಮೂಡಿಬರುತ್ತಿರುವ ಈ ಚಿತ್ರವನ್ನು ಎನ್.ಐ.ಕೆ. ಸ್ಟುಡಿಯೋಸ್ ಬ್ಯಾನರ್ ಅಡಿ ಕಿಶೋರ್ ಅನ್ನಪೂರೆಡ್ಡಿ ಮತ್ತು ನಿಶಿತಾ ನಾಗಿರೆಡ್ಡಿ ನಿರ್ಮಿಸಿದ್ದಾರೆ. ಭಾರತೀಯ ಸಿನಿಮಾ ಇತಿಹಾಸದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸುವ ಗುರಿ ಹೊಂದಿರುವ ಈ ಚಿತ್ರವು, ತನ್ನ ವಿಶಿಷ್ಟ ಕಥಾಹಂದರ ಹಾಗೂ ತಾಂತ್ರಿಕ ಶ್ರೀಮಂತಿಕೆಯಿಂದ ಎಲ್ಲ ವರ್ಗದ ಪ್ರೇಕ್ಷಕರನ್ನು ಸೆಳೆಯಲು ಸಜ್ಜಾಗಿದೆ.

ಈ ಚಿತ್ರದ 'ನಮೋ ರೇ' ಹಾಡು ದಾಖಲೆಯ ವೀಕ್ಷಣೆಯಾಗಿದೆ. ಆಧ್ಯಾತ್ಮಿಕ ಹಿನ್ನೆಲೆಯುಳ್ಳ ಈ ಹಾಡು ಪ್ರೇಕ್ಷಕರಲ್ಲಿ ದೈವಿಕ ಭಾವನೆಯನ್ನು ಮೂಡಿಸಲಿದ್ದು, ಜುನೈದ್‌ಕುಮಾರ್ ಮತ್ತು ಅಭೆ ಅವರು ಈ ಹಾಡಿಗೆ ಭಕ್ತಿ ಮತ್ತು ಆಧ್ಯಾತ್ಮ ಮೇಳೈಸಿದ ಸಂಗೀತ ಸಂಯೋಜನೆ ಮಾಡಿದ್ದಾರೆ. ಮಧುರಿ ಕೇಶಾದ್ರಿ ಅವರು ಬರೆದಿರುವ ಸ್ಫೂರ್ತಿದಾಯಕ ಸಾಹಿತ್ಯವು ಹಾಡಿನ ಆತ್ಮದಂತೆ ಕೆಲಸ ಮಾಡಿದ್ದರೆ, ಗಾಯಕಿ ಸಿಂಧೂಜಾ ಶ್ರೀನಿವಾಸನ್ ತಮ್ಮ ಶಕ್ತಿಯುತ ಕಂಠದಾನದ ಮೂಲಕ ಈ ಗೀತೆಗೆ ಜೀವ ತುಂಬಿದ್ದಾರೆ. ಈ ಹಾಡು ಕೇಳುಗರನ್ನು ಒಂದು ದೈವಿಕ ಲೋಕಕ್ಕೆ ಕರೆದೊಯ್ಯಲಿದೆ.

ತಾಂತ್ರಿಕವಾಗಿಯೂ 'ನಾಗಬಂಧಂ' ಬಲಿಷ್ಠ ತಂಡವನ್ನೇ ಹೊಂದಿದೆ. ಸೌಂದರರಾಜನ್ ಎಸ್. ಅವರ ಛಾಯಾಗ್ರಹಣ ಹಾಗೂ ಆರ್.ಸಿ. ಪ್ರಣವ್ ಅವರ ಚುರುಕಾದ ಸಂಕಲನ ಚಿತ್ರದ ಸಿನಿಮಾಟೋಗ್ರಫಿಗೆ ಹೊಸ ಆಯಾಮ ನೀಡಿದೆ. ಕಲಾನಿರ್ದೇಶಕ ಅಶೋಕ್‌ಕುಮಾರ್ ಅವರು ನಾಗಬಂಧಂ ಚಿತ್ರದ ಕಥೆಗೆ ಪೂರಕವಾದ ಅದ್ಭುತ ಮತ್ತು ಕಲಾತ್ಮಕ ಲೋಕವನ್ನೇ ಸೃಷ್ಟಿಸಿದ್ದಾರೆ.

ಜೂನ್ 26ಕ್ಕೆ ಬಲರಾಮನ ದಿನಗಳು

ಕೆ.ಎಂ.ಚೈತನ್ಯ ಅವರ ನಿರ್ದೇಶನದ ಬಲರಾಮನ ದಿನಗಳು ಚಿತ್ರದ ಟ್ರೈಲರನ್ನು ಧ್ರುವ ಸರ್ಜಾ ಬಿಡುಗಡೆ ಮಾಡಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಿರ್ಮಾಪಕ ಶ್ರೇಯಸ್, ನಿರ್ಮಾಪಕಿ ಪದ್ಮಾವತಿ ಜಯರಾಮ್, ನಾಯಕಿ ಪ್ರಿಯಾ ಆನಂದ್ ಅಲ್ಲದೆ ನಿರ್ದೇಶಕ ಚೈತನ್ಯ ಕೂಡ ಹಾಜರಿದ್ದರು, ಈ ವೇಳೆ ಮಾತನಾಡಿದ ಧ್ರುವ ಸರ್ಜಾ ಟ್ರೈಲರ್ ನೋಡಿದಾಗ ವ್ವಾವ್ ಎನಿಸುತ್ತದೆ. ಚಿತ್ರದ ವಿಂಟೇಜ್ ಮ್ಯೂಸಿಕ್ ಗಮನ ಸೆಳೆಯುತ್ತದೆ, ನಮ್ಮ ತಾತನ ಜತೆ ಪ್ರಭಾಕರ್ ಅಂಕಲ್ 40ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ದರು, ಆ ದಿನಗಳು ಚಿತ್ರ ಬಂದಾಗ ನಾನು ಜಸ್ಟ್ ಪಿಯುಸಿ ಪಾಸಾಗಿದ್ದೆ, ಆ ಚಿತ್ರದ ನಂತರ ಅದೇ ಫ್ಲೇವರ್ ಸಿಕ್ಕಿದ್ದು ಬಲರಾಮನ ದಿನಗಳಿಗೆ. ಚೈತನ್ಯ ಅವರು ನಮ್ಮಣ್ಣನ ಜತೆ ಮೂರ್‍ನಾಲ್ಕು ಸಿನಿಮಾ ಮಾಡಿದ್ದಾರೆ, ಈ ಚಿತ್ರದಲ್ಲಿ ಕೆಲಸ ಮಾಡಿದ ಎಲ್ಲರಿಗೂ ಒಳ್ಳೇದಾಗಲಿ, ಚಿತ್ರ ಸೂಪರ್ ಹಿಟ್ ಆಗಲಿ ಎಂದರು,

ನಿರ್ಮಾಪಕ ಶ್ರೇಯಸ್ ಮಾತನಾಡಿ ಇನ್ನೆರಡು ದಿನಗಳಲ್ಲಿ ಸಿನಿಮಾ ನಿಮ್ಮ ಮುಂದೆ ಬರ್ತಿದೆ. ಚಿತ್ರಕ್ಕಾಗಿ ಕೆಲಸ ಮಾಡಿದ ಎಲ್ಲರಿಗೂ ಧನ್ಯವಾದ, ನಮ್ಮ ಪ್ರಯತ್ನ ಆಗಿದೆ, ಇನ್ನು ನೀವೇ ನಮ್ಮ ಚಿತ್ರವನ್ನು ಗೆಲ್ಲಿಸಿಕೊಡಬೇಕು, ಇದು ರೌಡಿಶೀಟರ್ ಬಲರಾಮನ ಬಯೋಪಿಕ್ ಅಲ್ಲ, ಇದೊಂದು ಫಿಕ್ಷನಲ್ ಸ್ಟೋರಿ ಎಂದರು, ನಂತರ ಮಾತನಾಡಿದ ಪದ್ಮಾವತಿ ಜಯರಾಂ ಇಷ್ಟು ದಿನ ಹೇಗೆ ಕಳೆದವೋ ಗೊತ್ತಾಗಿಲ್ಲ, ಈಗ ಎಲ್ಲರೂ ಅನುಕೂಲವಾಗಿ ನಿಂತಿರುವುದಕ್ಕೆ ಖುಷಿಯಾಗ್ತಿದೆ. ನಮ್ಮೆಲ್ಲರ ಮೇಲೆ ನಿಮ್ಮ ಆಶೀರ್ವಾದ ಇರಲಿ, ಎಲ್ಲರೂ ಥೇಟರಿಗೆ ಬಂದು ಚಿತ್ರನೋಡಿ ನಮ್ಮನ್ನು ಹರಸಿ ಎಂದು ಪ್ರೇಕ್ಷಕರಲ್ಲಿ ಬೇಡಿಕೊಳ್ಳುತ್ತೇನೆ ಎಂದರು,

ನಿರ್ದೇಶಕ ಚೈತನ್ಯ ಮಾತನಾಡಿ ಕಳೆದ 2ವಾರಗಳು ನಮಗೆಲ್ಲ ತುಂಬಾ ಪ್ರಮುಖವಾಗಿತ್ತು. ಧ್ರುವ ಅವರು ಚಿತ್ರದ ಟ್ರೈಲರನ್ನು ಲಾಂಚ್ ಮಾಡಿಕೊಟ್ಟಿದ್ದಾರೆ, ರಾಣಾ ದಗ್ಗುಬಾಟಿ ಅವರು ಡಿಜಿಟಲ್ ಲಾಂಚ್ ಮಾಡುತ್ತಿದ್ದಾರೆ, ವಿನೋದ್ ಅವರು ಆಸ್ಪತ್ರೆಗೆ ಸೇರಿದ್ದಾರೆ ಅಂದಾಗ ನನಗೂ ಆತಂಕವಾಯ್ತು. ಬಿಡುವಿಲ್ಲದ ಪ್ರಚಾರದಲ್ಲಿ ಭಾಗವಹಿಸಿದ್ದರಿಂದ ಅವರಿಗೆ ಸ್ವಲ್ಪ ಸ್ಟ್ರೈನ್ ಆಗಿತ್ತು, ಈಗವರು ಆರಾಮಾಗಿದ್ದಾರೆ, ಇಲ್ಲಿಗೂ ಬರುತ್ತೇನೆ ಅಂದರು, ರೆಸ್ಟ್ ತಗೊಳ್ಳಿ ಅಂತ ನಾವೇ ಬರಬೇಡಿ ಅಂತ ಹೇಳಿದ್ದೇವೆ ಎಂದರು, ವಿತರಕ ಸುಪ್ರೀತ್ ಮಾತನಾಡಿ ವರ್ಷದ ಹಿಂದೆ ಮೇಡಂ ನಮ್ಮನ್ನು ಮೀಟ್ ಮಾಡಿದ್ದರು, ಆಗಲೇ ಈ ಸಿನಿಮಾನ ನಾವೇ ರಿಲೀಸ್ ಮಾಡುತ್ತೇವೆ ಅಂತ ಹೇಳಿದ್ದೆವು, ಚಿತ್ರಕ್ಕೆ ತುಂಬಾ ಬೇಡಿಕೆ ಇದೆ, ಸುಮಾರು 100ರಿಂದ 150 ಥೇಟರ್‌ಗಳಲ್ಲಿ ರಿಲೀಸ್ ಮಾಡುತ್ತಿದ್ದೇವೆ ಎಂದರು, ನಾಯಕಿ ಪ್ರಿಯಾ ಆನಂದ್ ಮಾತನಾಡಿ ನಾನು ಕೂಡ ಸಿನಿಮಾ ನೋಡಲು ಎಕ್ಸೈಟ್ ಆಗಿದ್ದೇನೆ ಎಂದರು.

ಪದ್ಮಾವತಿ ಫಿಲಂಸ್ ಬ್ಯಾನರ್ ಅಡಿಯಲ್ಲಿ ಪದ್ಮಾವತಿ ಜಯರಾಂ ಹಾಗೂ ಶ್ರೇಯಸ್ ಅವರ ನಿರ್ಮಾಣದ ಈ ಚಿತ್ರದಲ್ಲಿ ನಿರ್ಮಾಪಕರಿಬ್ಬರೂ ಬಣ್ಣ ಹಚ್ಚಿರುವುದು ವಿಶೇಷ, ಬಲರಾಮನ ದಿನಗಳು ಎಂಬತ್ತರ ದಶಕದಲ್ಲಿ ನಡೆಯುವ ಫಿಕ್ಷನಲ್ ಸ್ಟೋರಿ. ಇಲ್ಲಿ ನಟ ವಿನೋದ್ ಪ್ರಭಾಕರ್ ಬಲರಾಮನಾಗಿ ಕಾಣಿಸಿಕೊಂಡಿದ್ದಾರೆ. ಪ್ರಿಯಾ ಆನಂದ್ ನಾಯಕಿಯಾಗಿ ನಟಿಸಿದ್ದಾರೆ. ಇದು ವಿನೋದ್ ಪ್ರಭಾಕರ ಅಭಿನಯದ 25ನೇ ಚಿತ್ರವೂ ಹೌದು.

ನಾಳೆಯಿಂದ ಮೋಡ ಕವಿದ ವಾತಾವರಣ

ಪ್ರೀಮಿಯರ್ ಶೋಗೆ ಅದ್ಭುತ ಪ್ರತಿಕ್ರಿಯೆ !

ಹಲವು ಸಿನಿಮಾಗಳಲ್ಲಿ ಸಣ್ಣಪುಟ್ಟ ಪಾತ್ರಗಳನ್ನು ಮಾಡುವ ಮೂಲಕ ಗಮನ ಸೆಳೆದಿದ್ದ ನಟ ಶೀಲಮ್, ಇದೀಗ ಮೋಡ ಕವಿದ ವಾತಾವರಣ ಚಿತ್ರದ ಮೂಲಕ ಪೂರ್ಣ ಪ್ರಮಾಣದ ನಾಯಕನಾಗಿ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ. ಸೈನ್ಸ್ ಫಿಕ್ಷನ್ ಕಥಾಹಂದರ ಹೊಂದಿರುವ ಈ ವಿಭಿನ್ನ ಪ್ರೇಮಕಥೆಯ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಯಿತು. ನಟ ಶೀಲಂ, ಸಾತ್ವಿಕಾ ಹಾಗೂ ಮೋಕ್ಷ ಕುಶಾಲ್ ಈ ಚಿತ್ರದ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಸಿನಿ ತಾರೆಗಳಾದ ವಿನಯ್ ರಾಜಕುಮಾರ್, ನವೀನ್ ಶಂಕರ್ ಹಾಗೂ ನಿರ್ಮಾಪಕ ಉದಯ್ ಮೆಹ್ತಾ ಈ ಕಾರ್ಯಕ್ರಮಕ್ಕೆ ಆಗಮಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ಚಿತ್ರವು ನಾಳೆಯಿಂದ ರಾಜ್ಯಾದ್ಯಂತ ಕನ್ನಡ ಹಾಗೂ ಮಲಯಾಳಂ ಸೇರಿದಂತೆ ಎರಡೂ ಭಾಷೆಗಳಲ್ಲಿ ಏಕಕಾಲಕ್ಕೆ ತೆರೆಕಾಣುತ್ತಿದೆ.

ಈ ವೇಳೆ ನಾಯಕನಟ ಶೀಲಂ ಮಾತನಾಡಿ ನಾನು ಜಗತ್ತಿನಲ್ಲೇ ಅತ್ಯಂತ ಅದೃಷ್ಟವಂತ ವ್ಯಕ್ತಿ. ಈ ಸಿನಿಮಾ ನೋಡಿದ ಮೇಲೆ ಪ್ರೇಕ್ಷಕರು ನಮ್ಮನ್ನು ನೋಡುವ ದೃಷ್ಟಿಯೇ ಬದಲಾಗುತ್ತದೆ. ಇತ್ತೀಚೆಗೆ ಸಿಂಗಾಪುರದಲ್ಲಿ ನಡೆದ ಪೂರ್ವಭಾವಿ ಪ್ರದರ್ಶನದಲ್ಲಿ ನಮಗೆ ನೂರಕ್ಕೆ ನೂರರಷ್ಟು ಪಾಸಿಟಿವ್ ಪ್ರತಿಕ್ರಿಯೆ ಸಿಕ್ಕಿದೆ. ನೀವೆಲ್ಲರೂ ಚಿತ್ರಮಂದಿರಕ್ಕೆ ಬಂದು ಸಿನಿಮಾ ನೋಡಿ, ಖಂಡಿತಾ ನಿಮಗಿಷ್ಟವಾಗುತ್ತದೆ ಎಂದು ಹೇಳಿದರು.

ನಟಿ ಮೋಕ್ಷಾ ಕುಶಾಲ್ ಮಾತನಾಡುತ್ತ ಈ ಸಿನಿಮಾದಿಂದ ನಾನು ತುಂಬಾ ಕಲಿತಿದ್ದೇನೆ. ಚಿತ್ರದಲ್ಲಿ ನನ್ನದು 'ಸೌಪರ್ಣಿಕ' ಎಂಬ ಅತ್ಯಂತ ಮುಗ್ಧ ಮತ್ತು ಹಳ್ಳಿ ಹುಡುಗಿಯ ಪಾತ್ರ. ನೀವು ಟ್ರೇಲರ್‌ನಲ್ಲಿ ನೋಡಿರುವುದು ಕೇವಲ ಶೇ. 5ರಷ್ಟು ಮಾತ್ರ, ಸಿನಿಮಾದಲ್ಲಿ ಇನ್ನೂ ದೊಡ್ಡ ಕಥೆಯಿದೆ. ನಿರ್ದೇಶಕ ಸುನಿ ಹಾಗೂ ಹಿರಿಯ ಸಿನಿಮಾಟೋಗ್ರಾಫರ್ ಜೊತೆ ಕೆಲಸ ಮಾಡಿದ್ದು ನನ್ನ ಭಾಗ್ಯ ಎಂದರು.

ನಟಿ ಸಾತ್ವಿಕಾ ಮಾತನಾಡುತ್ತ ಸಿನಿಮಾ ಬಗ್ಗೆ ನಾನು ದೊಡ್ಡದಾಗಿ ಹೆಚ್ಚೇನೂ ಹೇಳಲ್ಲ, ಆದರೆ ಚಿತ್ರಮಂದಿರದಲ್ಲಿ ನೀವು ಕಳೆಯುವ ಎರಡು ಗಂಟೆ ಪಕ್ಕಾ 'ಪೈಸಾ ವಸೂಲ್' ಎಂಟರ್‌ಟೈನ್ಮೆಂಟ್ ಆಗಿರುತ್ತದೆ. ಶೀಲಂ ಕೂಡ ಅದ್ಭುತವಾಗಿ ನಟಿಸಿದ್ದಾರೆ ಎಂದು ಹೇಳಿದರು.

ಕಥೆ ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಸುನಿ ಮಾತನಾಡಿ ಶೀಲಂ ಈ ಸಿನಿಮಾ ಮೂಲಕ ಚಿತ್ರರಂಗದಲ್ಲಿ ಗಟ್ಟಿಯಾಗಿ ನೆಲೆ ನಿಲ್ಲುತ್ತಾರೆ. ಸಾತ್ವಿಕಾ ಹಾಗೂ ಮೋಕ್ಷಾ ಕುಶಾಲ್ ಇಬ್ಬರೂ ತುಂಬಾ ಚೆನ್ನಾಗಿ ನಟಿಸಿದ್ದಾರೆ. ಸಿಂಗಾಪುರದಲ್ಲೂ ನಮಗೆ ಅದ್ಭುತ ಪ್ರತಿಕ್ರಿಯೆ ಸಿಕ್ಕಿದೆ. ಖಂಡಿತಾ ಈ ಸಿನಿಮಾ ಪ್ರೇಕ್ಷಕರಿಗೆ ಇಷ್ಟವಾಗಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.

ಇತ್ತೀಚೆಗೆ ಒಂದು ಸರಳ ಪ್ರೇಮಕಥೆಯಂತಹ ಯತ್ನಾ ಸಿನಿಮಾ ನಿರ್ಮಿಸಿದ್ದ 'ರಾಮ್ ಮೂವೀಸ್' ಬ್ಯಾನರ್ ಅಡಿಯಲ್ಲಿ ಮೈಸೂರು ರಮೇಶ್, ಶ್ರೀರಂಗರಾಜು, ಲೋಕೇಶ್ ಬೆಳವಾಡಿ ಹಾಗೂ ಗೋವಾ ರಮೇಶ್ ಸೇರಿ ಈ ಚಿತ್ರವನ್ನು ಜಂಟಿಯಾಗಿ ನಿರ್ಮಿಸಿದ್ದಾರೆ. ಇನ್ನು ಈ ಚಿತ್ರಕ್ಕೆ ಸಂತೋಷ್ ರೈ ಪಾತಾಜೆ ಅವರ ಛಾಯಾಗ್ರಹಣವಿದ್ದು, ಜೂಡಾ ಸ್ಯಾಂಡಿ ಅವರ ಮೆಲೋಡಿಯಸ್ ಸಂಗೀತ ಸಂಯೋಜನೆ ಚಿತ್ರಕ್ಕಿದೆ. ವಿಭಿನ್ನ ಕಥೆಯ ಮೂಲಕ ಸದ್ದು ಮಾಡುತ್ತಿರುವ ಮೋಡಕವಿದ ವಾತಾವರಣ ನಾಳೆಯಿಂದ ರಾಜ್ಯದ ಎಲ್ಲಾ ಚಿತ್ರಮಂದಿರಗಳಲ್ಲಿ ಪ್ರದರ್ಶನಗೊಳ್ಳಲಿದೆ.

RAM MOVIES
MODA KAVIDA VAATHAVARANA
FROM TOMORROW
Sathvika | Moksha Kushal
Introducing Sheelam m Swamy
ಮೋಡ ಕವಿದ ವಾತಾವರಣ
ಕಥನ - ರಚನ - ವಚನ - ಗೀತರಚನ - ನಿರ್ದೇಶನ ಸುನಿ
ನಿರ್ಮಾಪಕರು: ಶ್ರೀರಂಗರಾಜು-ರಮೇಶ್ ಮೈಸೂರು – ಲೋಕೇಶ್ ಬೆಳವಾಡಿ-ಗೋವಾ ರಮೇಶ್ ([illegible])
KARNATAKA RELEASE BY KVN PRODUCTIONS

ತ್ರಿವೇಣಿ ಕೆಂಪೇಗೌಡ ಸರ್ಕಲ್ DOLBY DIGITAL 7.1 4K DIGITAL 4ಆಟ
VEERESH CINEMAS
ಬನಶಂಕರಿ : ಕಾಮಾಕ್ಯ
ಉಲ್ಲಾಳ : ವಜ್ರೇಶ್ವರಿ
PVR·INOX
MALL OF ASIA | NEXUS | ORION | VAISHNAVI | REGALIA | MARKET CITY | SPIRIT | UPTOWN | BHARATIYA | REX | GT | VR MALL | GLOBAL | FALCONCITY | SWAGATH | CENTRAL | LIDO | MANTRI | RMZ | GARUDA | YELAHANKA | NEIGHBOURHOOD | SBR | BROOKFIELD
cinépolis
ETA | MEENAKSHI | ORION EAST | LULU | SHANTINIKETAN | SJR
GOPALAN CINEMAS
ARCH | INNOVATION | GRAND | SIGNATURE | LEGACY
ROCKLINE mall & cinemas
MIRAJ SUNKADAKATTE
KINO CINEMAS SEEGEHALLI
MOVIETIME RR NAGAR
AMB CINEMAS KAPALI
ತುಮಕೂರು: 4.ಆಟ PVR·INOX
ಮೈಸೂರು : ಗಾಯತ್ರಿ DRC PVR·INOX GARUDA|FORUM|SATYAM VISION CINEMAS
ಮಂಡ್ಯ : ಗುರುಶ್ರೀ
ಹಾಸನ : ಸಹ್ಯಾದ್ರಿ
ದಾವಣಗೆರೆ : ಅಶೋಕ MOVIETIME
ಚಿತ್ರದುರ್ಗ : ಬಸವೇಶ್ವರ
ಬಳ್ಳಾರಿ : MOVIETIME
ಹುಬ್ಬಳ್ಳಿ : 4.ಆಟ PVR·INOX cinépolis
ಧಾರವಾಡ : 4.ಆಟ PVR·INOX
ಬೆಳಗಾವಿ : 4.ಆಟ PVR·INOX KAPEEL CINEMA
ಕಲಬುರ್ಗಿ : 4.ಆಟ PVR·INOX MIRAJ
ಶಿವಮೊಗ್ಗ : Bharath Cinemas
ಮಂಗಳೂರು : SP CINEMAS PVR·INOX cinépolis Bharath Cinemas BHARATH MALL Cine GALAXY SURATHKAL
ಹಾಗೂ ರಾಜ್ಯಾದ್ಯಂತ
hithic

Hosadigantha Kannada Daily Printed & Published by P.S.Prakash on behalf of Jnanabharathi Prakashana Limited. Printed at M N S Printers No.345/4, Bhattarahalli, Virgo Nagar Post Old Madras Road, K R Puram, Bangalore 560 049 and Published at No. 1/1, 1Floor, 6th cross, 8th Main, Malleshwara, Bengaluru 03 Ph: (080) 23560302, 340 , Editor: P.S.Prakash, Group Editor: Vinayak S. Bhat, Posted at PSO Bengaluru, Bengaluru 26